ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಡಿಸೆಂಬರ್ 9 ಮಂಗಳವಾರ 2025

ಮೈಸೂರು ಮಿತ್ರ 46

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 231 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಅನಗತ್ಯ ಸಿಸೇರಿಯನ್ ಹೆರಿಗೆ ಮಾಡಿಸುವ ಖಾಸಗಿ ಆಸ್ಪತ್ರೆ ವಿರುದ್ಧ ಕ್ರಮ

ಬೆಳಗಾವಿ, ಸುವರ್ಣಸೌಧ ಡಿ. 8(ಕೆಎಂಶಿ)– ರಾಜ್ಯದಲ್ಲಿ ಹಣ ಸುಲಿಗೆಗೆ ಅನಗತ್ಯ ಸಿಸೇರಿಯನ್ ಹೆರಿಗೆ ಮಾಡಿಸುವ ಖಾಸಗಿ ಆಸ್ಪತ್ರೆಗಳ ವಿರುದ್ಧ ಕೆಪಿಎಂಇ ಅಧಿನಿಯಮದಂತೆ ಕ್ರಮ ಕೈಗೊಳ್ಳಲಾಗುವುದು



ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ವಿಧಾನ ಪರಿಷತ್‌ನಲ್ಲಿಂದು ತಿಳಿಸಿದ್ದಾರೆ.

ಪ್ರಶ್ನೋತ್ತರ ವೇಳೆಯಲ್ಲಿ ಗೋವಿಂದ ರಾಜು ಪ್ರಸ್ತಾವಕ್ಕೆ ಉತ್ತರಿಸಿದ ಸಚಿವರು, ಅಗತ್ಯ ಇಲ್ಲದಿದ್ದರೂ ಸಿಸೇರಿಯನ್ ಹೆರಿಗೆ ಮಾಡುವ ಖಾಸಗಿ ಆಸ್ಪತ್ರೆಗಳು ಯಾವುವು ಎಂಬುದಾಗಿ ಗುರುತಿಸಿಲ್ಲ. ಈ ಬಗ್ಗೆ ಸಾರ್ವಜನಿಕರಿಂದ ಜಿಲ್ಲಾ, ಕೆಪಿಎಂಇ ನೋಂದಣಿ ಮತ್ತು ಕುಂದು ಕೊರತೆ ನಿವಾರಣಾ ಪ್ರಾಧಿಕಾರದಲ್ಲಿ ಯಾವುದೇ ದೂರುಗಳು ಸ್ವೀಕೃತವಾಗಿಲ್ಲ ಎಂದರು.

■ 6ನೇ ಪುಟಕ್ಕೆ

ಸೋನಿಯಾ ಗಾಂಧಿ ಮಧ್ಯಪ್ರವೇಶ

ಜನವರಿ ಮಧ್ಯದಲ್ಲಿ ರಾಜ್ಯ ಬಿಕ್ಕಟ್ಟು ಶಮನ



ಸೋನಿಯಾ ಗಾಂಧಿ



ಸಿದ್ದರಾಮಯ್ಯ



ಡಿ.ಕೆ. ಶಿವಕುಮಾರ್

ಬೆಂಗಳೂರು, ಡಿ.8– ರಾಜ್ಯ ರಾಜಕಾರಣದಲ್ಲಿ ಕಳೆದೊಂದು ತಿಂಗಳಿಂದ ಭಾರಿ ಚರ್ಚೆಗೆ ಕಾರಣವಾಗಿರುವ ಅಧಿಕಾರ ಹಸ್ತಾಂತರ ವಿಚಾರದಲ್ಲಿ ಕಾಂಗ್ರೆಸ್ ವರಿಷ್ಠೆ ಸೋನಿಯಾ ಗಾಂಧಿ ಅವರು ಮಧ್ಯಪ್ರವೇಶಿಸಿದ್ದು, ಜನವರಿ ಮಧ್ಯದ ವೇಳೆಗೆ ಬಿಕ್ಕಟ್ಟು ಶಮನಗೊಳ್ಳಲಿದೆ ಎಂದು ಹೇಳಲಾಗುತ್ತಿದೆ.

ಜನವರಿ 15 ರ ನಂತರ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿದೇಶಕ್ಕೆ ತೆರಳಲಿದ್ದು, ಅದಕ್ಕೂ ಮೊದಲು ಈ ಬಿಕ್ಕಟ್ಟನ್ನು ಕೊನೆಗೊಳಿಸುವ ನಿರ್ಧಾರ ತೆಗೆದುಕೊಳ್ಳುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ. ಸೋನಿಯಾ ಗಾಂಧಿಯವರು ನವದೆಹಲಿಯಲ್ಲಿ ಎಐಸಿಸಿ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಮತ್ತು ಪಕ್ಷದ ಪ್ರಧಾನ ಕಾರ್ಯದರ್ಶಿ (ಸಂಘಟನಾ) ಉಸ್ತುವಾರಿ ಕೆ.ಸಿ. ವೇಣುಗೋಪಾಲ್ ಅವರನ್ನು ಶನಿವಾರ ಭೇಟಿ ಮಾಡಿದ್ದು, ರಾಜ್ಯದ ರಾಜಕೀಯ ಪರಿಸ್ಥಿತಿಯನ್ನು ಅವಲೋಕನ ನಡೆಸಿದ್ದಾರೆ.

ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಹೀನಾಯ ಸೋಲಿನ ನಂತರ, 2026 ರಲ್ಲಿ ಅಸ್ಸಾಂ, ಪಶ್ಚಿಮ ಬಂಗಾಳ, ಕೇರಳ, ತಮಿಳುನಾಡು ಮತ್ತು ಪುದುಚೇರಿ ಕೇಂದ್ರಾಡಳಿತ ಪ್ರದೇಶಗಳಿಗೆ ನಡೆಯಲಿರುವ ಚುನಾವಣೆಗೆ ಪಕ್ಷವು ಸಜ್ಜಾಗಬೇಕಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ರಾಜಕೀಯದಲ್ಲಿ ಸೃಷ್ಟಿಯಾಗಿರುವ ಗೊಂದಲವನ್ನು ಸೋನಿಯಾ ಗಾಂಧಿಯವರು ಗಂಭೀರವಾಗಿ ಪರಿಗಣಿಸಿದ್ದಾರೆಂದು ಮೂಲಗಳು ತಿಳಿಸಿವೆ. ಡಿಕೆ.ಶಿವಕುಮಾರ್ ಅವರ ಬಗ್ಗೆ ಸೋನಿಯಾ ಗಾಂಧಿಯವರು ಮೃದುತ್ವ

■ 6ನೇ ಪುಟಕ್ಕೆ

ಡಿಕೆಶಿ ಅವಕಾಶ ಕೇಳಿದ್ರು, ಆದ್ರೆ ಸಿಎಂ ಬದಲಾವಣೆಗೆ ಹೈಕಮಾಂಡ್ ಸಮ್ಮತಿಸಿಲ್ಲ

ಬೆಳಗಾವಿ: ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನಡುವಿನ ಕುರ್ಚಿ



ಕದನ ದಿನದಿಂದ ದಿನಕ್ಕೆ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದೆ. ಆದರೆ ನಾಯಕತ್ವ ಬದಲಾವಣೆಗೆ ಹೈಕಮಾಂಡ್ ಸಮ್ಮತಿಸಿಲ್ಲ ಎಂದು ಸಿಎಂ ಪುತ್ರ, ವಿಧಾನಪರಿಷತ್ ಸದಸ್ಯ ಯತೀಂದ್ರ ಅವರು ಸೋಮವಾರ ಸ್ಫೋಟಕ ಹೇಳಿಕೆ ನೀಡಿದ್ದಾರೆ.

ಕುಂದಾನಗರಿ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಇಂದಿನಿಂದ ವಿಧಾನ ಮಂಡಲದ ಉಭಯ ಸದನಗಳ ಚಳಿಗಾಲದ ಅಧಿವೇಶನ ಆರಂಭವಾಗಿದ್ದು, ಕಾಂಗ್ರೆಸ್ ಎಂಎಲ್ಸಿ ಯತೀಂದ್ರ ಅವರು ಕಲಾಪದಲ್ಲಿ ಭಾಗವಹಿಸುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದರು.

■ 6ನೇ ಪುಟಕ್ಕೆ

ಡಿ.ಕೆ.ಶಿವಕುಮಾರ್ ಸಿಎಂ ಆಗೋ ಪರಿಸ್ಥಿತಿ ಉದ್ಭವವಾಗಲ್ಲ

ಬೆಳಗಾವಿ, ಡಿ.8– ನವೆಂಬರ್ ಕ್ರಾಂತಿಯ ಬಗ್ಗೆ ಬಾಂಬ್ ಸಿಡಿಸಿದ್ದ ಮಾಜಿ ಸಚಿವ ಕೆಎನ್ ರಾಜಣ್ಣ



ಅವರು ಈಗ ಉಪಮುಖ್ಯಮಂತ್ರಿ ಡಿ.ಕೆ. ಶಿವ ಕುಮಾರ್ ಮುಖ್ಯಮಂತ್ರಿ ಆಗುವ ಪರಿಸ್ಥಿತಿ ಉದ್ಭವವಾಗುವುದಿಲ್ಲ ಎಂದು ಹೇಳುವ ಮೂಲಕ ಹೊಸ ಬಾಂಬ್ ಸಿಡಿಸಿದ್ದಾರೆ.

ಬ್ರೇಕ್‌ಫಾಸ್ಟ್ ಪಾಲಿಟಿಕ್ಸ್ ಬಳಿಕ ಹೈಕಮಾಂಡ್ ಆದೇಶದ ಅನ್ವಯ ಕುರ್ಚಿ ಕಿತ್ತಾಟದ ಹೇಳಿಕೆಗಳು ಬಂದ್ ಆಗಿದ್ದವು. ಆದರೆ ಸಿಎಂ ಪುತ್ರ ಯತೀಂದ್ರ ಹೇಳಿಕೆಯ ನಂತರ ರಾಜಣ್ಣ ಡಿಕೆಶಿ ಮುಖ್ಯಮಂತ್ರಿ ಆಗುವ ಪರಿಸ್ಥಿತಿಯೇ ಉದ್ಭವವಾಗುವುದಿಲ್ಲ ಎಂದು ಖಡಕ್ ಆಗಿಯೇ ತಿಳಿಸಿದ್ದಾರೆ.

■ 6ನೇ ಪುಟಕ್ಕೆ

ವರುಣ, ಚಿತ್ತಾಪುರದಲ್ಲಿ ಚುನಾವಣಾ ಅಕ್ರಮ ಅರ್ಜಿ

ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವ ಪ್ರಿಯಾಂಕ್ ಖರ್ಗೆಗೆ ಸುಪ್ರೀಂಕೋರ್ಟ್ ನೋಟಿಸ್



ಸಿದ್ದರಾಮಯ್ಯ



ಪ್ರಿಯಾಂಕ್ ಖರ್ಗೆ

ಬೆಂಗಳೂರು, ಡಿ.8– ಮುಖ್ಯಮಂತ್ರಿ ಕುರ್ಚಿ ಕದನದ ನಡುವಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬಿಗ್ ಶಾಕ್‌ವೊಂದು ಎದುರಾಗಿದೆ. ರಾಜ್ಯ ವಿಧಾನಸಭಾ ಚುನಾವಣೆ ವೇಳೆ ಅಕ್ರಮ ಆರೋಪಕ್ಕೆ ಸಂಬಂಧಿಸಿದಂತೆ ಸಿದ್ದರಾಮಯ್ಯ ಅವರಿಗೆ ಸುಪ್ರೀಂಕೋರ್ಟ್ ನೋಟಿಸ್ ಜಾರಿ ಮಾಡಿದೆ. ಹಾಗೆಯೇ ಚಿತ್ತಾಪುರದಲ್ಲಿ ನಡೆದ ಚುನಾವಣಾ ಅಕ್ರಮ ಸಂಬಂಧ ಸಚಿವ ಪ್ರಿಯಾಂಕ್ ಖರ್ಗೆಗೂ ಸುಪ್ರೀಂಕೋರ್ಟ್ ನೋಟೀಸ್ ನೀಡಿದೆ.

ವರುಣಾ ವಿಧಾನಸಭಾ ಕ್ಷೇತ್ರದಿಂದ ಸಿದ್ದರಾಮಯ್ಯ ಅವರ ಆಯ್ಕೆ ಪ್ರಶ್ನಿಸಿ ಶಂಕರ್ ಎಂಬುವವರು ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿತ್ತು. ಅವರು ಹೈಕೋರ್ಟ್ ಆದೇಶ ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು.

ಅರ್ಜಿಯಲ್ಲಿ ಜನತೆಗೆ ಹಲವಾರು ಗ್ಯಾರಂಟಿಗಳ ಆಮಿಷವನ್ನು ಒಡ್ಡುವ ಮೂಲಕ ಸಿದ್ದರಾಮಯ್ಯನವರು 2023ರ ಚುನಾವಣೆಯಲ್ಲಿ ವರುಣ ಕ್ಷೇತ್ರದಿಂದ ಗೆದ್ದಿದ್ದಾರೆ. ಮತದಾರರಿಗೆ ಆಮಿಷ ನೀಡಿ ಆಕರ್ಷಿಸುವುದು ಚುನಾವಣಾ ನಿಯಮಗಳಿಗೆ ವಿರುದ್ಧವಾದದ್ದು. ಆ ಹಿನ್ನೆಲೆಯಲ್ಲಿ ಅವರ ಆಯ್ಕೆಯನ್ನು ಅಸಿಂಧುಗೊಳಿಸಬೇಕೆಂದು ಮನವಿ ಮಾಡಿದ್ದರು. ಈ ಅರ್ಜಿಯನ್ನು ಸುಪ್ರೀಂ ಕೋರ್ಟ್‌ನಲ್ಲಿ

■ 6ನೇ ಪುಟಕ್ಕೆ

ಇಂದು ಬಿಜೆಪಿಯಿಂದ ಸುವರ್ಣ ಸೌಧಕ್ಕೆ ಮುತ್ತಿಗೆ

ಬೆಳಗಾವಿ, ಡಿ. 8– ರಾಜ್ಯ ಸರ್ಕಾರದ ರೈತ ವಿರೋಧಿ ನೀತಿ ವಿರೋಧಿಸಿ ಬಿಜೆಪಿ ನಾಳೆ (ಡಿ.9) ಬೆಳಗಾವಿಯ ಸುವರ್ಣಸೌಧ ಮುತ್ತಿಗೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.



ಕಬ್ಬು, ಮೆಕ್ಕೆಜೋಳ ಬೆಳೆದ ರೈತರು ಸಂಕಷ್ಟದಲ್ಲಿದ್ದಾರೆ. ಅವರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸಿಲ್ಲ. ಅತಿವೃಷ್ಟಿಯಿಂದ ಬೆಳೆ ಹಾನಿಯಾಗಿದೆ. ಬೆಳೆ ಹಾನಿಗೆ ಒಳಗಾದ ರೈತರಿಗೂ ಪರಿಹಾರ ಸಿಕ್ಕಿಲ್ಲ. ಇದು ರೈತ ವಿರೋಧಿ ಸರ್ಕಾರ ಎಂದು ಆರೋಪಿಸಿರುವ ಬಿಜೆಪಿ ನಾಳೆ ಬೆಳಗಾವಿಯ ಮಾಲಿನಿ ಮೈದಾನದಲ್ಲಿ ರೈತರ ಬೃಹತ್ ಸಮಾವೇಶ ನಡೆಸಿ, ನಂತರ ಸುವರ್ಣಸೌಧ ಮುತ್ತಿಗೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ನಾಳಿನ ರೈತರ ಸಮಾವೇಶ ಹಾಗೂ

■ 6ನೇ ಪುಟಕ್ಕೆ

ಗಾಂಜಾ, ಮದ್ಯದ ಅಮಲಿನಲ್ಲಿ ಪುಂಡರ ಅಟ್ಟಹಾಸ

ಶಾಲಾ ಬಸ್ ತಡೆದು ಅಪ್ರಾಪ್ತ ಬಾಲಕಿ ತಮ್ಮ ವಶಕ್ಕೆ ಒಪ್ಪಿಸಲು ಬೆದರಿಕೆ

- ಬಸ್‌ಗೆ ಕಲ್ಲು ತೂರಿ ಜಖಂ • ಚಾಲಕನೊಂದಿಗೆ ಗಲಾಟೆ • ಒಬ್ಬನ ಬಂಧನ, ಮತ್ತೋರ್ವ ನಾಪತ್ತೆ

ಕೆ.ಆರ್.ಪೇಟೆ, ಡಿ.8– ಗಾಂಜಾ ಮತ್ತು ಮದ್ಯ ಸೇವಿಸಿದ ಅಮಲಿನಲ್ಲಿ ಶಾಲಾ ಬಸ್ ತಡೆದು, ಅಪ್ರಾಪ್ತ ಬಾಲಕಿಯನ್ನು ಕೆಳಗಿಳಿಸಿ, ತಮ್ಮ ವಶಕ್ಕೆ ನೀಡುವಂತೆ ಚಾಲಕನ ಬಳಿ ಇಬ್ಬರು ಪುಂಡರು ಗಲಾಟೆ ಮಾಡಿರುವ ವಿಡಿಯೋ ವೈರಲ್ ಆಗಿದ್ದು, ಕೆ ಆರ್ ಪೇಟೆ ತಾಲೂಕು ಕಿಕ್ಕೇರಿ ಠಾಣೆ ಪೋಲೀಸರು ಓರ್ವನನ್ನು ಬಂಧಿಸಿದ್ದು, ಮತ್ತೋರ್ವನಿಗಾಗಿ ಹುಡುಕಾಟ ನಡೆಸಿದ್ದಾರೆ.

ವಡ್ಡರಹಳ್ಳಿ ಗ್ರಾಮದ ಗಿರೀಶ(21) ಮತ್ತು ಕಿರಣ್(20) ಮದ್ಯ ಹಾಗೂ ಗಾಂಜಾ ಅಮಲಿನಲ್ಲಿ ಬಸ್ ತಡೆದವರಾಗಿದ್ದಾರೆ. ಇವರಿಬ್ಬರೂ ಕಿಕ್ಕೇರಿಯ ಖಾಸಗಿ ಶಾಲೆಯಿಂದ ಮಕ್ಕಳನ್ನು ಎಂದಿನಂತೆ ಅವರವರ ಗ್ರಾಮಗಳಿಗೆ ಸುರಕ್ಷಿತವಾಗಿ ಬಿಡಲು ಬಸವನಹಳ್ಳಿ ಮಾರ್ಗವಾಗಿ ವಡ್ಡರಹಳ್ಳಿಗೆ ಹೋಗುತ್ತಿರುವಾಗ ತಮ್ಮ ಸ್ಕೂಟರ್ ಅನ್ನು ಬಸ್‌ಗೆ ಅಡ್ಡಲಾಗಿ ನಿಲ್ಲಿಸಿ, ಬಸ್‌ನಲ್ಲಿದ್ದ ಒಂಬತ್ತನೇ ತರಗತಿಯ ವಿದ್ಯಾರ್ಥಿನಿಯನ್ನು ಕೆಳಗೆ ಇಳಿಸಿ, ತಮ್ಮ ಜೊತೆ ಕಳಿಸುವಂತೆ ಚಾಲಕನಿಗೆ ದಮ್ಕಿ ಹಾಕಿದ್ದಾರೆ.



ಸ್ಕೂಟರ್‌ನಲ್ಲಿ ಬಂದು ಶಾಲಾ ಬಸ್ ಅನ್ನು ಅಡ್ಡಗಟ್ಟಿರುವ ಪುಂಡರು.

ತಾನು ಮಕ್ಕಳನ್ನು ಮನೆಗೆ ಬಿಡಲು ಹೋಗುತ್ತಿದ್ದೇನೆ. ಮಕ್ಕಳನ್ನು ಸುರಕ್ಷಿತವಾಗಿ ಕರೆದೊಯ್ದು ಬಿಡುವುದು ನನ್ನ ಕೆಲಸ, ನೀವೇನಿದ್ದರೂ ಅವರ ಮನೆಯಲ್ಲಿ ವಿಚಾರಿಸಿಕೊಳ್ಳಿ

■ 6ನೇ ಪುಟಕ್ಕೆ

ಮುಂದಿನ ಶೈಕ್ಷಣಿಕ ವರ್ಷದಿಂದ ಪಂಚಾಯಿತ್ತಿಗೊಂದರಂತೆ ಕೆಪಿಎಸ್

ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ ಪ್ರಕಟ

ಬೆಳಗಾವಿ, ಸುವರ್ಣಸೌಧ, ಡಿ. 8(ಕೆಎಂಶಿ)– ಪಂಚಾಯತ್‌ಗೆ ಒಂದರಂತೆ ಕರ್ನಾಟಕ ಪಬ್ಲಿಕ್ ಶಾಲೆ(ಕೆಪಿಎಸ್)ಗಳನ್ನು ಮುಂಬರುವ ಶೈಕ್ಷಣಿಕ ವರ್ಷದಿಂದಲೇ ಪ್ರಾರಂಭಿಸಲಾಗುವುದು ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಮಧು ಬಂಗಾರಪ್ಪ ವಿಧಾನ ಪರಿಷತ್ತಿನಲ್ಲಿ ಇಂದು ಪ್ರಕಟಿಸಿದ್ದಾರೆ.



ಪ್ರಶ್ನೋತ್ತರ ವೇಳೆಯಲ್ಲಿ ಚಿದಾನಂದಗೌಡ ಪ್ರಸ್ತಾವಕ್ಕೆ ಉತ್ತರಿಸಿದ ಸಚಿವರು, ಯಾವುದೇ ಕನ್ನಡ ಸರ್ಕಾರಿಯನ್ನು ಮುಚ್ಚುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಮುಂಬರುವ ಶೈಕ್ಷಣಿಕ ವರ್ಷದಲ್ಲಿ ಪ್ರಥಮ ಹಂತದಲ್ಲಿ 900 ಕೆಪಿಎಸ್ ಶಾಲೆ ತೆರೆಯಲು ಹಣಕಾಸು ಇಲಾಖೆ ಅನುಮತಿ ನೀಡಿದ್ದು, ಶಾಲೆಗಳ ಸ್ವರೂಪ ಮತ್ತು ಗುಣಮಟ್ಟ ಯಾವ ರೀತಿ ಇರಬೇಕು ಎಂಬುದರ ಬಗ್ಗೆ ಖಾಸಗಿ ಸಂಸ್ಥೆಯಿಂದ ವರದಿ ಪಡೆಯಲಾಗುತ್ತಿದೆ. ನಾವು ಮುಂಗಡಪತ್ರದಲ್ಲಿ 500 ಕೆಪಿಎಸ್ ಶಾಲೆ ಆರಂಭಿಸುವ ಘೋಷಣೆ ಮಾಡಿದ್ದೆವು. ಆದರೆ, ಇದೀಗ ವಿವಿಧ ಮೂಲಗಳಿಂದ ಸಂಪನ್ಮೂಲ ಸಂಗ್ರಹಿಸಿ ದೊಡ್ಡ ಪ್ರಮಾಣದಲ್ಲೇ ಶಾಲೆಗಳನ್ನು ತೆರೆಯುತ್ತಿದ್ದೇವೆ.

ಈಗಾಗಲೇ ಕಾರ್ಯಾಚರಣೆಯಲ್ಲಿ ಇರುವ 309 ಕೆಪಿಎಸ್ ಶಾಲೆಗಳಲ್ಲಿ ಒಟ್ಟು 2.72 ಲಕ್ಷ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಈ ಶಾಲೆಗಳಲ್ಲಿ ಕೊರತೆ ಇರುವ ಶಿಕ್ಷಕರ ಹುದ್ದೆಗಳಿಗೆ

■ 6ನೇ ಪುಟಕ್ಕೆ

ಬಡ ವಿದ್ಯಾರ್ಥಿಗಳಿಗೆ ಹೊರೆ ಆಗದಂತೆ ಪರೀಕ್ಷಾ ಶುಲ್ಕ ನಿಗದಿ

ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ಸ್ಪಷ್ಟನೆ

ಬೆಳಗಾವಿ,ಸುವರ್ಣಸೌಧ, ಡಿ. 8(ಕೆಎಂಶಿ)–ಕರ್ನಾಟಕ ಪರೀಕ್ಷಾ ಪ್ರಾಧಿಕಾರ ವಿವಿಧ ಹುದ್ದೆಗಳ ನೇಮಕಾತಿ ಪರೀಕ್ಷೆ ಸಂದರ್ಭದಲ್ಲಿ ಬಡ ಹಾಗೂ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆರ್ಥಿಕವಾಗಿ ಹೊರೆಯಾಗದಂತೆ ಪರೀಕ್ಷಾ ಶುಲ್ಕ ನಿಗದಿಪಡಿಸಲಾಗುತ್ತದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ ವಿಧಾನ ಪರಿಷತ್ತಿನಲ್ಲಿಂದು ತಿಳಿಸಿದ್ದಾರೆ.



ನಿರಾಣಿ ಹನುಮಂತಪ್ಪ ರುದ್ರಪ್ಪ ಪ್ರಸ್ತಾಪಕ್ಕೆ ಉತ್ತರಿಸಿದ ಸಚಿವರು, 2024ನೇ ಸಾಲಿನಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಸರ್ಕಾರದ ವಿವಿಧ ಹುದ್ದೆಗಳ ನೇಮಕಾತಿಗೆ 17 ಅಧಿಸೂಚನೆ ಪೂರ್ಣಗೊಳಿಸಿಲ್ಲ. 2024ರಲ್ಲಿ ಕೆಲವೇ ಅಧಿಸೂಚನೆಗಳನ್ನು ಹೊರಡಿಸಿ, ಶುಲ್ಕ ಸಂಗ್ರಹಿಸಿದೆ.

ಸ್ಪರ್ಧಾತ್ಮಕ ಪರೀಕ್ಷೆ ನಡೆಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಸರ್ಕಾರದಿಂದ ಅನುದಾನ ನೀಡಲಾಗುವುದಿಲ್ಲ. ಪರೀಕ್ಷಾ ಕೇಂದ್ರಗಳ ಸ್ಥಾಪನೆ, ಪ್ರಶ್ನೆ ಪತ್ರಿಕೆ ಸಿದ್ಧತೆ, ಮುದ್ರಣ, ಬಂಡಲು ಪರೀಕ್ಷಾ ಕೇಂದ್ರಗಳಿಗೆ ರವಾನೆ, ಪರೀಕ್ಷೆ ನಂತರ ಬಂಡಲುಗಳನ್ನು ಪ್ರಾಧಿಕಾರಕ್ಕೆ ತರುವ ವೆಚ್ಚಗಳು. ಪರೀಕ್ಷಾ ಕಾರ್ಯಗಳಲ್ಲಿ ನಿರತರಾಗುವ ಅಧಿಕಾರಿ, ಸಿಬ್ಬಂದಿಗೆ ಗೌರವಧನ ಮುಂತಾದ ವೆಚ್ಚಗಳನ್ನು ಕರ್ನಾಟಕ

■ 6ನೇ ಪುಟಕ್ಕೆ

ಗೃಹ ಆರೋಗ್ಯ ಯೋಜನೆಯಡಿ ಮೈಸೂರು ನಗರ ಹೊರತಾಗಿ ನಡೆದ ತಪಾಸಣೆ

ಮೈಸೂರು ಜಿಲ್ಲೆಯಲ್ಲಿ ಮಧುಮೇಹ, ಬಿಪಿಯದ್ದೇ ಕಾರುಬಾರು

ಶೇ.19.8ರಷ್ಟು ಜನರಲ್ಲಿ ಬಿಪಿ, ಶೇ.13.6ರಷ್ಟು ಮಂದಿಯಲ್ಲಿ ಮಧುಮೇಹ ಪತ್ತೆ

ಮೈಸೂರು, ಡಿ.8(ಪಿಎಂ)– ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಗೃಹ ಆರೋಗ್ಯ ಯೋಜನೆಯು ಮೈಸೂರು ಜಿಲ್ಲೆಯಲ್ಲಿ ಇದೇ ಅಕ್ಟೋಬರ್‌ನಲ್ಲಿ ಅನುಷ್ಠಾನಕ್ಕೆ ಬಂದಿದ್ದು, ಸಾರ್ವಜನಿಕರ ಮನೆ ಬಾಗಿಲಿಗೆ ಆರೋಗ್ಯ ಸೇವೆ ಒದಗಿಸುವ ಈ ಯೋಜನೆಯಡಿ ತಪಾಸಣೆ ವೇಳೆ ಸಹಜವಾಗಿಯೇ ಮಧುಮೇಹ ಹಾಗೂ ಅಧಿಕ ರಕ್ತದೊತ್ತಡ ಪ್ರಕರಣಗಳೇ ಅಗ್ರಸ್ಥಾನ ಪಡೆದಿವೆ.

2025ರ ಅಕ್ಟೋಬರ್‌ನಲ್ಲಿ ಗೃಹ ಆರೋಗ್ಯ ಯೋಜನೆ ಜಿಲ್ಲೆಯಲ್ಲಿ ಅನುಷ್ಠಾನಗೊಂಡಿತು. ಮೈಸೂರು ನಗರ ಹೊರತುಪಡಿಸಿ ಮೈಸೂರು ಗ್ರಾಮಾಂತರ, ಜಿಲ್ಲೆಯ ಪಟ್ಟಣ ಹಾಗೂ ಗ್ರಾಮಾಂತರ ಪ್ರದೇಶಗಳಲ್ಲಿ ಯೋಜನೆಯಡಿ ಮನೆ ಮನೆಗೆ ಆರೋಗ್ಯ ಇಲಾಖೆ ವೈದ್ಯರು ಹಾಗೂ ಸಿಬ್ಬಂದಿ ಭೇಟಿ ನೀಡಿ ಜನರ ಆರೋಗ್ಯ ತಪಾಸಣೆ ನಡೆಸುತ್ತಿದ್ದಾರೆ.

ಸದರಿ ಪ್ರದೇಶಗಳಲ್ಲಿ 14 ಅಸಾಂಕ್ರಾಮಿಕ ಕಾಯಿಲೆಗಳ ಸಂಬಂಧ 30 ವರ್ಷ ಮೇಲ್ಪಟ್ಟ ಒಟ್ಟಾರೆ 8,16,089 ಜನಸಂಖ್ಯೆಯನ್ನು ತಪಾಸಣೆ ನಡೆಸಲು ಗುರಿ ಹೊಂದಲಾಗಿದೆ. ತಪಾಸಣೆ ವೇಳೆ ಈವರೆಗೆ ಅಧಿಕ ರಕ್ತದೊತ್ತಡ (ಬಿಪಿ)ಸಂಬಂಧ 1,89,144 ಜನರ ತಪಾಸಣೆ ನಡೆಸಿದ್ದು, ಈ ಪೈಕಿ 37,510 ಮಂದಿಯಲ್ಲಿ ಬಿಪಿ ಅನಾರೋಗ್ಯ ದೃಢಪಟ್ಟಿದೆ (ಶೇ.19.8). ಅಂತೆಯೇ ಮಧುಮೇಹ ಸಂಬಂಧ 1,90,947 ಮಂದಿ ತಪಾಸಣೆ ನಡೆಸಿದ್ದು, ಈ ಪೈಕಿ 25,925 ಮಂದಿಗೆ ಮಧುಮೇಹ (ಶೇ.13.6)ದೃಢಪಟ್ಟಿದೆ.

ಅಲ್ಲದೆ, ಮಧುಮೇಹದಿಂದ ಪಾದಗಳಲ್ಲಿ ಉಂಟಾಗುವ ಅನಾರೋಗ್ಯ ಮತ್ತು ಕಣ್ಣಿಗೆ ಸಂಬಂಧಿಸಿದ ರೆಟಿನೋಪತಿ ಸಂಬಂಧ 78,832 ಮಂದಿ ತಪಾಸಣೆ ನಡೆಸುವ ಗುರಿ ಹೊಂದಲಾಗಿದೆ. ಅದರಂತೆ ಈವರೆಗೆ ಈ ಎರಡು ಸಮಸ್ಯೆಗಳ ಸಂಬಂಧ 22,576 ಮಂದಿ ತಪಾಸಣೆ ನಡೆಸಲಾಗಿದೆ. ಮಧುಮೇಹ ಪಾದ ಸಂಬಂಧ 11,101 ಮಂದಿ ತಪಾಸಣೆ ನಡೆಸಿದ್ದು, ಈ ಪೈಕಿ 112 ಮಂದಿಗೆ ಈ ಸಮಸ್ಯೆ ದೃಢಪಟ್ಟಿದೆ.

■ 6ನೇ ಪುಟಕ್ಕೆ

ಮೈಸೂರು ನಗರ ಪ್ರದೇಶಗಳಿಗೆ ವಿಸ್ತರಿಸಲು ಸಿದ್ಧತೆ...

ಸದ್ಯಕ್ಕೆ ಗ್ರಾಮಾಂತರ ಪ್ರದೇಶದಲ್ಲಿ ಯೋಜನೆ ಅನುಷ್ಠಾನಗೊಳಿಸಿ ತಪಾಸಣೆ ನಡೆಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಮೈಸೂರು ನಗರ ಪ್ರದೇಶಗಳಿಗೆ ವಿಸ್ತರಣೆ ಮಾಡಲು ಸಿದ್ಧತೆ ನಡೆಸಲಾಗುತ್ತಿದೆ. ಉಚಿತವಾಗಿ ಚಿಕಿತ್ಸೆ ಹಾಗೂ ಔಷಧ ಒದಗಿಸಲು ಈ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ. ಮೊದಲ ಹಂತದಲ್ಲೇ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಆರೋಗ್ಯ ಯೋಜನೆಯ (ಎಬಿಆರ್‌ಕೆ) ಕಾರ್ಡ್ ಮಾಡಿಕೊಡುತ್ತೇವೆ. ಇದರಿಂದ ವಾರ್ಷಿಕ 5 ಲಕ್ಷ ರೂ.ವರೆಗೆ ಸರ್ಕಾರದಿಂದ ಉಚಿತ ಆರೋಗ್ಯ ಸೇವೆ ದೊರೆಯಲಿದೆ. ಬಿಪಿಎಲ್ ಅಥವಾ ಎಪಿಎಲ್ ಕಾರ್ಡ್ ಇಲ್ಲವಾದರೂ ಎಬಿಆರ್‌ಕೆ ಕಾರ್ಡ್ ನಡಿ ಕೆಲ ಸೌಲಭ್ಯ ಪಡೆಯಬಹುದು.



-ಡಾ.ಡಿ.ಜಿ.ನಾಗರಾಜ್



ಮೈಸೂರು ಜಿಲ್ಲೆಯಲ್ಲಿ ಆರೋಗ್ಯ ಇಲಾಖೆ ಸಮುದಾಯ ಆರೋಗ್ಯಾಧಿಕಾರಿ ಹಾಗೂ ಆಶಾ ಕಾರ್ಯಕರ್ತೆಯರು ಗೃಹ ಆರೋಗ್ಯ ಯೋಜನೆಯಡಿ ಗ್ರಾಮಸ್ಥರ ಆರೋಗ್ಯ ತಪಾಸಣೆ ನಡೆಸುತ್ತಿರುವುದನ್ನು ಚಿತ್ರದಲ್ಲಿ ಕಾಣಬಹುದು.

ಅಸಾಂಕ್ರಾಮಿಕ ರೋಗಗಳೇ ಈಗ ಮಾರಣಾಂತಿಕ

'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಗೃಹ ಆರೋಗ್ಯ ಯೋಜನೆಯ ಮೈಸೂರು ಜಿಲ್ಲಾ ನೋಡಲ್ ಅಧಿಕಾರಿ ಡಾ.ಡಿ.ಜಿ.ನಾಗರಾಜ್, ಅಕ್ಟೋಬರ್‌ನಲ್ಲಿ ಗೃಹ ಆರೋಗ್ಯ ಯೋಜನೆ ಮೈಸೂರು ಜಿಲ್ಲೆಯಲ್ಲಿ ಅನುಷ್ಠಾನಗೊಂಡಿತು. ವೈದ್ಯಾಧಿಕಾರಿಗಳು ಮತ್ತು ಆಶಾ ಕಾರ್ಯಕರ್ತೆಯರಿಗೆ ಯೋಜನೆಯಡಿ ತಪಾಸಣೆ ನಡೆಸುವ ಸಂಬಂಧ ತರಬೇತಿ ಸಹ ನೀಡಲಾಗಿದೆ. ಅಲ್ಲದೆ, ಅಗತ್ಯ ವೈದ್ಯಕೀಯ ಸಲಕರಣೆ ಹಾಗೂ ಔಷಧಗಳನ್ನು ಪೂರೈಸಲಾಗಿದೆ ಎಂದು ತಿಳಿಸಿದರು.

ಶೇ.70ರಷ್ಟು ಸಾವು: ದೇಶದಲ್ಲಿ ಮೊದಲು ಸಾಂಕ್ರಾಮಿಕ ರೋಗಗಳು ಆತಂಕ ಸೃಷ್ಟಿಸಿದ್ದವು. ಆದರೆ ಈಗ ಸಾಂಕ್ರಾಮಿಕವಲ್ಲದ ರೋಗಗಳು ಭೀತಿ ಮೂಡಿಸಿವೆ. ಸಕ್ಕರೆ ಕಾಯಿಲೆ, ಅಧಿಕ ರಕ್ತದೊತ್ತಡದಂತಹ ಸಾಂಕ್ರಾಮಿಕವಲ್ಲದ ಕಾಯಿಲೆಗಳು ಆತಂಕಕಾರಿಯಾಗಿ ಕಾಡುವಂತಾಗಿದೆ. ಮಧುಮೇಹಕ್ಕೆ ಸರಿಯಾದ ಚಿಕಿತ್ಸೆ ತೆಗೆದುಕೊಳ್ಳದಿದ್ದರೆ ಭವಿಷ್ಯದಲ್ಲಿ ಅದು ಕಿಡ್ನಿ ವೈಫಲ್ಯಕ್ಕೂ ಕಾರಣವಾಗುತ್ತದೆ. ಇಂತಹ ಜೀವನ ಶೈಲಿಯ ಅನಾರೋಗ್ಯ ಸಮಸ್ಯೆಗಳನ್ನು ಆರಂಭಿಕ ಹಂತದಲ್ಲೇ ಪತ್ತೆ ಮಾಡಿ ಚಿಕಿತ್ಸೆ ಜೊತೆಗೆ ಸೂಕ್ತ ಜೀವನಶೈಲಿ ರೂಢಿಸಿಕೊಂಡರೆ ಆರೋಗ್ಯವಂತ ಜೀವನ ನಡೆಸಬಹುದು. ಈ ಅಸಾಂಕ್ರಾಮಿಕ ರೋಗಗಳಿಂದ ದೇಶದಲ್ಲಿ ಪ್ರಸ್ತುತ ಅಂದಾಜು ಶೇ.70ರಷ್ಟು ಸಾವುಗಳು ಸಂಭವಿಸುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು.

ಮಧುಮೇಹ ಬೇರೆ ಬೇರೆ ಸಂಕೀರ್ಣ ಅನಾರೋಗ್ಯ ಸಮಸ್ಯೆಗಳು ತಂದೊಡ್ಡುತ್ತದೆ. ಕಿಡ್ನಿ ವೈಫಲ್ಯತೆಯಿಂದ ಡಯಾಲಿಸಿಸ್‌ಗೆ ಒಳಗಾಗಬಹುದು. ಇಂತಹ ಅಸಾಂಕ್ರಾಮಿಕ ರೋಗಗಳನ್ನು ಪತ್ತೆ ಹಚ್ಚಿ ಆರಂಭಿಕ ಹಂತದಲ್ಲೇ ಚಿಕಿತ್ಸೆ ನೀಡಲು ಈ ಯೋಜನೆ ಸಹಕಾರಿ. ಅಸಾಂಕ್ರಾಮಿಕ ರೋಗಗಳಿಂದ ಆಗುತ್ತಿರುವ ಅನಾಹುತ ತಡೆಗಟ್ಟುವ ನಿಟ್ಟಿನಲ್ಲಿ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆ ಈ ಯೋಜನೆ ಪ್ರಮುಖ ಪಾತ್ರ ವಹಿಸಲಿದೆ. ಒಟ್ಟು 14 ಅಸಾಂಕ್ರಾಮಿಕ ರೋಗಗಳ ಸಂಬಂಧ ತಪಾಸಣೆ ನಡೆಸಲಾಗುತ್ತದೆ. ಪ್ರಾಥಮಿಕ ಹಂತದಲ್ಲಿ ಶಂಕಿತ ಪ್ರಕರಣಗಳು ಗುರುತಿಸಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಪರೀಕ್ಷೆಗಳನ್ನು ಮಾಡಿಸಲಾಗುತ್ತದೆ. ಅಗತ್ಯತೆ ಕಂಡುಬಂದಲ್ಲಿ ಮುಂದಿನ ಹಂತದ ಚಿಕಿತ್ಸೆಗೆ ವ್ಯವಸ್ಥೆ ಕಲ್ಪಿಸಲಾಗುತ್ತದೆ ಎಂದು ವಿವರಿಸಿದರು.

ಮೈಸೂರಿನಲ್ಲಿ ಕಾಂಚೀಪುರಂ ವರಮಹಾಲಕ್ಷ್ಮಿ ಸಿಲ್ಕ್ಸ್ ಶೋರೂಮ್ ಉದ್ಘಾಟನೆ



ಮೈಸೂರು ಗೋಕುಲಂ ರಸ್ತೆಯಲ್ಲಿ ಕಾಂಚೀಪುರಂ ವರಮಹಾಲಕ್ಷ್ಮಿ ಸಿಲ್ಕ್ಸ್ ಶೋ ರೂಮ್ ಅನ್ನು ಭಾನುವಾರ ಸುತ್ತೂರು ಶ್ರೀಗಳು ಉದ್ಘಾಟಿಸಿದರು.

ಮೈಸೂರು, ಡಿ. 8– ಭಾರತದ ಹೆಸರಾಂತ ಎಥ್ನಿಕ್ ವೇರ್ ರೀಟೈಲರ್ ಸಾಯಿ ಸಿಲ್ಕ್ಸ್ ಕಲಾಮಂದಿರ್ ಲಿಮಿಟೆಡ್ ಮೈಸೂರಿನ ಗೋಕುಲಂ ರಸ್ತೆಯಲ್ಲಿ ವರಮಹಾಲಕ್ಷ್ಮಿ ಸಿಲ್ಕ್ಸ್ ಶೋರೂಮ್ ಪ್ರಾರಂಭಿಸಿದೆ. ಇದು ವರಮಹಾಲಕ್ಷ್ಮಿ ಸಿಲ್ಕ್ಸ್‌ನ 75ನೇ ಶೋರೂಮ್.

ಸುತ್ತೂರು ಮಠದ ಶಿವರಾತ್ರಿ ದೇಶಿ ಕೇಂದ್ರ ಸ್ವಾಮೀಜಿ ಭಾನುವಾರ ಮಳಿಗೆಯ ಲೋಕಾರ್ಪಣೆ ಮಾಡಿದರು. ಕಾಂಚೀಪುರಂ ವರ ಮಹಾಲಕ್ಷ್ಮಿ ಸಿಲ್ಕ್ಸ್ ಕಡಿಮೆ ಬೆಲೆಯಲ್ಲಿ ತನ್ನ ಪ್ರೀಮಿಯಂ–ಗುಣಮಟ್ಟದ ರೇಷ್ಮೆ ಸೀರೆಗಳಿಗೆ ಹೆಸರುವಾಸಿಯಾಗಿದೆ. ತನ್ನದೇ ಆದ ವಿಶೇಷ ಮಗ್ಗ ಮತ್ತು ಡಿಸೈನ್‌ಗಳೊಂದಿಗೆ ಬ್ರ್ಯಾಂಡ್ ಗ್ರಾಹಕರಿಗೆ ಸಾಟಿಯಿಲ್ಲದ ಮೌಲ್ಯವನ್ನು ನೀಡುತ್ತದೆ. ಕಾಂಚೀಪುರಂ ರೇಷ್ಮೆ ಸೀರೆಗಳು, ಬನಾರಸಿ, ಪಟೋಲಾ, ಕೋಟಾ, ಪೈಥಾನಿ, ಆರ್ಗನ್ಜಾ, ಕುಪ್ಪಡಂ, ಇಕ್ಕತ್, ಬಂಧನಿ ಮತ್ತು ಇನ್ನೂ ಅನೇಕ ಸಂಗ್ರಹ ಒಳಗೊಂಡಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಸಾಯಿ ಸಿಲ್ಕ್ಸ್ ಕಲಾಮಂದಿರ್ ಲಿಮಿಟೆಡ್‌ನ ನಿರ್ದೇಶಕ ದುರ್ಗಾರಾವ್ ಛಲವಾದಿ, ನಮ್ಮ 75 ನೇ ಶೋರೂಮ್‌ನೊಂದಿಗೆ ಕಾಂಚೀಪುರಂ ವರಮಹಾಲಕ್ಷ್ಮಿ ಸಿಲ್ಕ್ಸ್‌ನ ಪರಂಪರೆಯನ್ನು ಮೈಸೂರಿಗೆ ತರಲು ನಾವು ಉತ್ಸುಕರಾಗಿದ್ದೇವೆ. ಗ್ರಾಹಕರಿಗೆ ಪ್ರೀಮಿಯಂ ಗುಣಮಟ್ಟ ಮತ್ತು ವಿಶಾಲ ಶ್ರೇಣಿಯ ಸೀರೆಗಳನ್ನು ಅತ್ಯಂತ ಸ್ಪರ್ಧಾತ್ಮಕ ಬೆಲೆಯಲ್ಲಿ ಒದಗಿಸುವುದು ನಮ್ಮ ಬದ್ಧತೆಯಾಗಿದೆ ಎಂದರು.

ನಾಳೆ ಲೋಕಾಯುಕ್ತ ಪೊಲೀಸರಿಂದ ದೂರು ಸ್ವೀಕಾರ

ಮೈಸೂರು, ಡಿ.8– ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗ ಅಧಿಕಾರಿಗಳಿಂದ ಡಿ.10 ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಮೈಸೂರು ಜಿಲ್ಲೆ, ಮೈಸೂರು ತಾಲೂಕಿನ ಕಚೇರಿ ಸಭಾಂಗಣದಲ್ಲಿ ದೂರು ಸ್ವೀಕರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಅಧಿಕೃತ ಕೆಲಸಗಳ ಅನಗತ್ಯ ವಿಳಂಬ, ಲಂಚದ ಹಣದ ಬೇಡಿಕೆ ಇತ್ಯಾದಿ ತೊಂದರೆಗಳನ್ನು ನೀಡುತ್ತಿರುವ ಸಾರ್ವಜನಿಕ, ಸರ್ಕಾರಿ ಅಧಿಕಾರಿ, ನೌಕರರ ವಿರುದ್ಧ ಅಗತ್ಯ ದಾಖಲಾತಿಗಳೊಡನೆ ಸಾರ್ವಜನಿಕರು ದೂರು ನೀಡಬಹುದು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಉದೇಶ ಟಿ.ಜೆ ಪ್ರಕಟಣೆ ತಿಳಿಸಿದೆ.

ಮತ್ತೆ ಬೆಮೆಲ್ ಆವರಣದಲ್ಲಿ ಹುಲಿ ಪ್ರತ್ಯಕ್ಷ...!?

ವದಂತಿಯಿಂದ ಹೈರಣಾಗಿರುವ ಜನ; ಅರಣ್ಯ ಇಲಾಖೆ ಸಿಬ್ಬಂದಿಗೆ ತಲೆನೋವು



ಸಂಗ್ರಹ ಚಿತ್ರ

ಮೈಸೂರು,ಡಿ.8 (ಎಂಟಿವೈ) – ಮೈಸೂರಿನ ಬೆಮೆಲ್ (ಬಿಇಎಂಎಲ್) ಆವರಣದಲ್ಲಿ ಕಾಣಿಸಿಕೊಂಡಿದ್ದ ಹುಲಿ ಬಳಿಕ ಅಜ್ಞಾತವಾಗಿದ್ದು, ಇದೀಗ ಸ್ಥಳೀಯರಲ್ಲಿ ಆತಂಕ ಮನೆ ಮಾಡಿದೆ.

ವಾರದ ಹಿಂದೆ ಹುಲಿಯೊಂದು ಇಲ್ಲಿ ಕಾಣಿಸಿಕೊಂಡಿತ್ತು. ಸ್ಥಳ ಪರಿಶೀಲನೆ ಮಾಡಿದ್ದ ಅರಣ್ಯಾಧಿಕಾರಿಗಳು ಬೆಮೆಲ್ ಆವರಣದಲ್ಲಿ 10 ಕ್ಯಾಮರಾ ಟ್ರ್ಯಾಪ್, ಬೋನ್‌ಗಳ ಅಳವಡಿಸಿ ಕೂಂಬಿಂಗ್ ಕಾರ್ಯಾಚರಣೆ ನಡೆಸಿದ್ದರು. ಈ ನಡುವೆ ಬೆಮೆಲ್ ಕಾಂಪೌಂಡ್ ಹಾರಿ ಹೋಗುತ್ತಿರುವ ವಿಡಿಯೋವೊಂದು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿತ್ತು. ಇತ್ತ ವಾರದಿಂದಲೂ ಹುಲಿ ಸುಳಿವು ಸಿಗದೇ ಇರುವುದು ಅರಣ್ಯ ಇಲಾಖೆಗೆ ತಲೆ ನೋವಾಗಿ ಪರಿಣಮಿಸಿದ್ದರೆ, ಸುತ್ತಮುತ್ತಲಿನ ಗ್ರಾಮ ಹಾಗೂ ಬಡಾವಣೆಗಳ ನಿವಾಸಿಗಳಲ್ಲಿ ಆತಂಕ ಉಂಟು ಮಾಡಿದೆ.

ಬೆಮೆಲ್ ಆವರಣದಲ್ಲಿ ಪತ್ತೆಯಾದ ಹುಲಿ ಏನಾಯ್ತು? ಯಾವ ಕಡೆ ಹೋಗಿದೆ ಎಂಬ ಖಚಿತ ಮಾಹಿತಿಯನ್ನು ಇದುವರೆಗೂ ಯಾರೂ ನೀಡದೇ ಇರುವುದರಿಂದ ಸ್ಥಳೀಯರು ಊಹಾಪೋಹದ ಮಾತುಗಳನ್ನೇ ನಂಬಿ ಭಯಭೀತರಾಗಿದ್ದಾರೆ. ಈ ನಡುವೆ ಅರಣ್ಯ ಪ್ರದೇಶದಲ್ಲಿ ಸಫಾರಿಗಳು ಆರೇಳು ತಿಂಗಳ ಹಿಂದೆ ತೆಗೆದಿರುವ ವಿಡಿಯೋ ವೈರಲ್ ಆಗುತ್ತಿದ್ದು, ಬೆಮೆಲ್ ಆವರಣದಲ್ಲಿ ಮತ್ತೆ ಹುಲಿ ಪ್ರತ್ಯಕ್ಷವಾಗಿದೆ ಎಂದು ಸುಳ್ಳು ಮಾಹಿತಿ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ.

ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಕಾಕನಕೋಟೆ ಸಫಾರಿ ಕೇಂದ್ರ ವ್ಯಾಪ್ತಿಯ ಅಂತರಸಂತೆ ವಲಯದ ಹಳೆ ಎಂಎಂ ರಸ್ತೆಯ ಸೇತುವೆ ಮೇಲೆ ಕುಳಿತಿರುವ ಹುಲಿ ವಿಡಿಯೋ ಬೆಮೆಲ್ ಆವರಣದಲ್ಲಿ ಕಂಡು ಬಂದ ಹುಲಿ ಎಂದು ಬಿಂಬಿಸಲಾಗುತ್ತಿದೆ. ವ್ಯಾಟ್ಸಾಪ್ ಗ್ರೂಪ್‌ಗಳಲ್ಲೂ ಈ ವಿಡಿಯೋ ವೈರಲ್ ಆಗಿ ಎಚ್ಚರಿಕೆಯಿಂದ ಇರುವಂತೆ ಸಂದೇಶ ನೀಡಲಾಗುತ್ತಿದೆ. ಹಾಗಾಗಿ ಸ್ಥಳೀಯರಲ್ಲಿ ಮತ್ತಷ್ಟು ಆತಂಕ ಹೆಚ್ಚಿಸಿದೆ.

ಮಾಹಿತಿ ನೀಡುವವರು ಯಾರು ಇಲ್ಲ...

ಬೆಮೆಲ್ ಆವರಣದಲ್ಲಿ ಇನ್ನು ಹುಲಿ ಇದೆಯೇ, ಇಲ್ಲವೇ ಎಂದು ಸ್ಪಷ್ಟ ಮಾಹಿತಿ ನೀಡುವವರೇ ಇಲ್ಲ. ಸಂಬಂಧಪಟ್ಟ ಅಧಿಕಾರಿಗಳು ಸ್ಥಳೀಯರಲ್ಲಿ ಮನೆ ಮಾಡಿರುವ ಭಯದ ವಾತಾವರಣ ಹೋಗಲಾಡಿಸಲು ಮುಂದಾಗಿಲ್ಲ. ಆರಂಭದಲ್ಲಿ ಅರಣ್ಯ ಸಿಬ್ಬಂದಿ ಹುಲಿ ಕಾಣಿಸಿಕೊಂಡಿರುವ ಹಿನ್ನೆಲೆಯಲ್ಲಿ ಎಚ್ಚರಿಕೆಯಿಂದ ಇರುವಂತೆ ಮುಂಜಾನೆ ಮತ್ತು ರಾತ್ರಿ ವೇಳೆ ಒಬ್ಬೊಬ್ಬರೆ ಓಡಾಡದಂತೆ ಜಾಗೃತಿ ಸಂದೇಶ ನೀಡಿದರು. ಬಳಿಕ ಹುಲಿಯ ಬಗ್ಗೆ ಸ್ಪಷ್ಟನೆ ನೀಡಿಲ್ಲ. ಆದರೆ, ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿರುವ ಹುಲಿ ವಿಡಿಯೋ ನಿಜವೆಂದು ತಿಳಿಯುವಂತಾಗಿದೆ. ಬೆಮೆಲ್ ಅಥವಾ ಅರಣ್ಯ ಇಲಾಖೆ ಅಧಿಕಾರಿಗಳು ಸ್ಪಷ್ಟನೆ ನೀಡಬೇಕು. ಸ್ಥಳೀಯರಲ್ಲಿ ಮನೆ ಮಾಡಿರುವ ಆತಂಕ ನಿವಾರಿಸಬೇಕು ಎಂದು ಸ್ಥಳೀಯರು ಮನವಿ ಮಾಡಿದ್ದಾರೆ.

ಸುಳ್ಳು ಸುದ್ದಿ ಹರಡಿದರೆ ಕ್ರಮ

ಬೆಮೆಲ್ ಆವರಣದಲ್ಲಿ ಕೂಂಬಿಂಗ್ ಕಾರ್ಯಾಚರಣೆ ನಡೆಸಲಾಗಿದೆ. ಇದುವರೆಗೂ ಹುಲಿ ಸುಳಿವು ಪತ್ತೆಯಾಗಿಲ್ಲ. ಕ್ಯಾಮರಾ ಟ್ರ್ಯಾಪ್‌ನಲ್ಲೂ ಹುಲಿ ಚಲನವಲನ ಪತ್ತೆಯಾಗಿಲ್ಲ. ಎರಡು ಬೋನ್ ಇಡಲಾಗಿದ್ದು, ಅದರ ಬಳಿಯೂ ಹುಲಿ ಸುಳಿದಿಲ್ಲ. ಆದರೂ ಸುತ್ತಮುತ್ತಲಿನ ಗ್ರಾಮ ಮತ್ತು ಬಡಾವಣೆಯ ಜನರಿಗೆ ಎಚ್ಚರಿಕೆಯಿಂದ ಇರುವಂತೆ ಸೂಚನೆ ನೀಡಲಾಗಿದೆ. ಕೆಲವರು ಹುಲಿ ಇರುವಿಕೆ ಬಗ್ಗೆ ವದಂತಿ ಹರಡುತ್ತಿರುವುದು ನಮ್ಮ ಗಮನಕ್ಕೆ ಬಂದಿದೆ. ಬೇರೆ ಎಲ್ಲೋ ಚಿತ್ರೀಕರಿಸಿರುವ ಹುಲಿ ವೀಡಿಯೊವನ್ನು ಬೆಮೆಲ್ ಸುತ್ತಮುತ್ತ ಕಂಡು ಬಂದ ಹುಲಿ ಎಂದು ಬಿಂಬಿಸಿ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಮಾಡಿ ಜನರನ್ನು ಭಯಬೀತರಾಗಿಸುತ್ತಿದ್ದಾರೆ. ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲು ನಿರ್ಧರಿಸಲಾಗಿದೆ.

- ಕೆ.ಪರಮೇಶ್, ಡಿಸಿಎಫ್, ಮೈಸೂರು ಪ್ರಾದೇಶಿಕ ವಿಭಾಗ

ಅಬಕಾರಿ ಉಪ ಅಧೀಕ್ಷಕರ ನಿರ್ಗಮನ ಪಥಸಂಚಲನ; ಪ್ರಮಾಣಪತ್ರ ವಿತರಣೆ



ಕರ್ನಾಟಕ ಪೊಲೀಸ್ ಅಕಾಡೆಮಿಯಲ್ಲಿ ಅಬಕಾರಿ ಉಪ ಅಧೀಕ್ಷಕರ 39ನೇ ತಂಡದ ಬುನಾದಿ ತರಬೇತಿ ಪಡೆದ ಕುಂದಾಪುರದ ದಿವ್ಯ ಕೆ.ಶೆಟ್ಟಿ ಅವರಿಗೆ ಪ್ರಮಾಣ ವಚನ ಬೋಧಿಸಿ, ಪ್ರಮಾಣ ಪತ್ರ ವಿತರಣೆ ಮಾಡಲಾಯಿತು. ಕೆಪಿಎ ನಿರ್ದೇಶಕ ಎಸ್.ಎಲ್.ಚೆನ್ನಬಸವಣ್ಣ, ಮೈಸೂರು ವಿಭಾಗದ ಅಬಕಾರಿ ಜಂಟಿ ಆಯುಕ್ತ ಬಸವರಾಜ ಹಡಪದ ಮತ್ತಿತರರಿದ್ದರು.

ಮೈಸೂರು, ಡಿ.8(ಎಂಕೆ)– ಮೈಸೂರು ನಜರ್‌ಬಾದ್‌ನಲ್ಲಿರುವ ಕರ್ನಾಟಕ ಪೊಲೀಸ್ ಅಕಾಡೆಮಿಯಲ್ಲಿ ಅಬಕಾರಿ ಉಪ ಅಧೀಕ್ಷಕರ 39ನೇ ತಂಡದ ಬುನಾದಿ ತರಬೇತಿಯ ನಿರ್ಗಮನ ಪಥಸಂಚಲನ ಮತ್ತು ಪ್ರಮಾಣ ಪತ್ರ ವಿತರಣಾ ಕಾರ್ಯಕ್ರಮ ಸೋಮವಾರ ನಡೆಯಿತು.

ಈ ವೇಳೆ ಮೈಸೂರು ವಿಭಾಗದ ಅಬಕಾರಿ ಜಂಟಿ ಆಯುಕ್ತ ಬಸವರಾಜ ಹಡಪದ, ತರಬೇತಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಕುಂದಾಪುರದ ದಿವ್ಯ ಕೆ.ಶೆಟ್ಟಿ ಅವರಿಗೆ ಪ್ರಮಾಣ ವಚನ ಬೋಧಿಸಿ, ಪ್ರಮಾಣ ಪತ್ರ ವಿತರಣೆ ಮಾಡಿದರು.

ಬಳಿಕ ಮಾತನಾಡಿದ ಅವರು, ಖಾಕಿ ಧರಿಸುವ ಸರ್ಕಾರದ ಜಾರಿ ಇಲಾಖೆಗಳ ಅಧಿಕಾರಿಗಳಿಗೆ ಪೊಲೀಸ್ ಅಕಾಡೆಮಿಯಲ್ಲಿ ತರಬೇತಿಯನ್ನು ನೀಡಲಾಗುತ್ತದೆ. ಪೊಲೀಸ್ ತರಬೇತಿ ಕೇಂದ್ರಗಳಲ್ಲಿ ತರಬೇತಿ ಪಡೆಯುವುದರಿಂದ ಶಿಸ್ತನ್ನು ಮೈಗೂಡಿಸಿಕೊಳ್ಳುವುದಲ್ಲದೇ ಸಮಯ ನಿರ್ವಹಣೆ, ಕೌಶಲ ಹಾಗೂ ಸಮುದಾಯ ಕೇಂದ್ರಿತ ಆಲೋಚನೆ ಮೈಗೂಡಿಸಿಕೊಳ್ಳುವಲ್ಲಿ ಸಹಾಯವಾಗುತ್ತದೆ ಎಂದರು.

ಕರ್ನಾಟಕ ಪೊಲೀಸ್ ಅಕಾಡೆಮಿಯ ನಿರ್ದೇಶಕರ ಮಾರ್ಗದರ್ಶನ ಹಾಗೂ ಇಲ್ಲಿಯ ನುರಿತ ಅಧಿಕಾರಿಗಳಿಂದ ತರಬೇತಿ ಪಡೆದಿರುವ ಪ್ರಶಿಕ್ಷಣಾರ್ಥಿ ದಿವ್ಯ ಕೆ.ಶೆಟ್ಟಿ ತಮ್ಮ ವೃತ್ತಿಯಲ್ಲಿ ಉತ್ತಮ ಅಧಿಕಾರಿಯಾಗುವುದೂ ಅಲ್ಲದೇ ತಮ್ಮ ವೈಯಕ್ತಿಕ ಜೀವನದಲ್ಲಿ ಶ್ರೇಷ್ಠ ವ್ಯಕ್ತಿಯಾಗಿ ರೂಪುಗೊಳ್ಳುತ್ತಾರೆ ಎಂಬ ಆಶಾಭಾವನೆ ಇದೆ ಎಂದರು.

ಕರ್ನಾಟಕ ಪೊಲೀಸ್ ಅಕಾಡೆಮಿ ನಿರ್ದೇಶಕ ಎಸ್.ಎಲ್.ಚೆನ್ನಬಸವಣ್ಣ ಮಾತನಾಡಿ, ದಿವ್ಯಾ ಕೆ.ಶೆಟ್ಟಿ ಅವರು ಈ ಬ್ಯಾಚಿನಲ್ಲಿ ತರಬೇತಿ ಪಡೆಯುತ್ತಿರುವ ಏಕೈಕ ಪ್ರಶಿಕ್ಷಣಾರ್ಥಿ. ಅವರು ಒಂದು ವರ್ಷದ ಕಠಿಣ ಬುನಾದಿ ತರಬೇತಿಯಲ್ಲಿ ಯಾವುದೇ ಆರೋಗ್ಯ ಸಮಸ್ಯೆ ಅಥವಾ ಇತರೆ ಸಮಸ್ಯೆಗಳ ಮುಂದಿಟ್ಟು ಒಮ್ಮೆಯೂ ರಜಾ ಹಾಗೂ ತರಬೇತಿಯ ವಿನಾಯಿತಿ ಕೇಳಲಿಲ್ಲ. ಪೊಲೀಸ್ ಇಲಾಖೆಯ ಪ್ರಶಿಕ್ಷಣಾರ್ಥಿಗಳೊಡನೆ ಅವರೂ ಕೂಡ ತರಬೇತಿ ಪಡೆದು ಯಶಸ್ವಿಯಾಗಿ ಪೂರೈಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಅಬಕಾರಿ ಇಲಾಖೆಯ ಅಧಿಕಾರಿಗಳಾದ ಮಹಾದೇವಿ ಭಾಯಿ, ಬಸವರಾಜಪ್ಪ, ವಿವೇಕ್, ಕರ್ನಾಟಕ ಪೊಲೀಸ್ ಅಕಾಡೆಮಿಯ ಅಧಿಕಾರಿ ವರ್ಗ, ಬೋಧಕರು ಹಾಗೂ ಶ್ರೀಮತಿ ದಿವ್ಯ ಕೆ ಶೆಟ್ಟಿ ಅವರ ಪೋಷಕರು ಮತ್ತು ಕುಟುಂಬ ವರ್ಗದವರು ಉಪಸ್ಥಿತರಿದ್ದರು.

ಜಯಪುರ ಗ್ರಾಮ ಪಂಚಾಯಿತಿಯಲ್ಲಿ 'ಗ್ರಾಮಸಭೆ'



ಜಯಪುರ ಗ್ರಾಮ ಪಂಚಾಯಿತಿ ಆವರಣದಲ್ಲಿ ಗ್ರಾಮಸಭೆ ನಡೆಯಿತು.

ಮೈಸೂರು, ಡಿ.8– ಮೈಸೂರು ತಾಲೂಕು ಜಯಪುರ ಗ್ರಾಮ ಪಂಚಾಯಿತಿ ಆವರಣದಲ್ಲಿ ಗ್ರಾಪಂ ಅಧ್ಯಕ್ಷ ಎಂ.ಮಹದೇವಯ್ಯ ಅಧ್ಯಕ್ಷತೆಯಲ್ಲಿ ಗ್ರಾಮಸಭೆ ನಡೆಯಿತು.

ಪಿಡಿಓ ಬಸವಣ್ಣ ಮಾತನಾಡಿ 2026–27 ನೇ ಸಾಲಿನ ನರೇಗಾ ಯೋಜನೆಯ ವೈಯಕ್ತಿಕ ಕಾಮಗಾರಿ, ಸಮುದಾಯ ಕಾಮಗಾರಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯ ಇನ್ನಿತರೆ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಸಭೆಗೆ ಮಾಹಿತಿ ನೀಡಿದರು.

ಜಯಪುರ ಹೋಬಳಿ ರೈತ ಸಂಪರ್ಕ ಕೇಂದ್ರ ಕೃಷಿ ಅಧಿಕಾರಿ ಕೆ.ಅರುಣಾ, ಪಶು ವೈದ್ಯಾಧಿಕಾರಿ ಡಾ.ರಮಿತ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಮೇಲ್ವಿಚಾರಕಿ ಅನುಪಮ ತಮ್ಮ ತಮ್ಮ ಇಲಾಖೆಗಳ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು.

ಸಾಮಾಜಿಕ ಕಾರ್ಯಕರ್ತ ದಾರಿಪುರ ಡಿ. ಚಂದ್ರಶೇಖರ್ ಮಾತನಾಡಿ, ಕೃಷಿ ಇಲಾಖೆಯಲ್ಲಿ ರೈತರಿಗೆ ನೀಡುವ ಟಾರ್ಪಲಿನ್, ನೇಗಿಲು, ಔಷಧಿ ಕ್ಯಾನ್, ಡ್ರಿಪ್ ಪೈಪ್ ಕಳಪೆ ಗುಣಮಟ್ಟದಿಂದ ಕೂಡಿವೆ. ಆಗ್ರೋ ಕೇಂದ್ರಗಳಲ್ಲಿ ನಿಷೇಧಿತ ಔಷಧಿಗಳ ಮಾರಾಟವಾಗುತ್ತಿದೆ. ಕಳಪೆ ಬಿತ್ತನೆ ಬೀಜ, ಹೆಚ್ಚಿನ ಬೆಲೆಗೆ ರಸಗೊಬ್ಬರ ಮಾರಾಟವಾಗುತ್ತಿದೆ ಎಂದು ಆರೋಪಿಸಿದರು.

ತೋಟಗಾರಿಕೆ ಇಲಾಖೆಯವರು ತೆಂಗು ಬೆಳೆಯುವ ರೈತರಿಗೆ ಉತ್ತೇಜನ ನೀಡಬೇಕು. ತೋಟಗಾರಿಕೆ, ಕೃಷಿ ಇಲಾಖೆ, ಕಂದಾಯ ಇಲಾಖೆಯವರು ಸಮನ್ವಯತೆಯಿಂದ ಕೆಲಸ ಮಾಡಬೇಕು. ಬಡಾವಣೆಗಳಲ್ಲಿ ಬೆಳೆದಿರುವ ಗಿಡಗಂಟೆಗಳನ್ನು ತೆರವುಗೊಳಿಸಬೇಕು. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಡೆಯುವ ಸರ್ಕಾರಿ ಕಾಮಗಾರಿಗಳನ್ನು ಟೆಂಡರ್ ಕರೆದು, ಗುಣಮಟ್ಟದ ಕಾಮಗಾರಿ ಮಾಡಿಸಬೇಕು. ಗುತ್ತಿಗೆದಾರರ ಹೆಸರಿಗೆ ಕೆಲಸ ಹಾಕಿಸಿ, ಜನಪ್ರತಿನಿಧಿಗಳೇ ಕೆಲಸ ಮಾಡಿಸುವ ಪ್ರವೃತ್ತಿ ಬಿಡಬೇಕು. ಕೆರೆಗಳಲ್ಲಿ ಅಕ್ರಮವಾಗಿ ಹೂಳು ತೆಗೆಯುವುದನ್ನು ನಿಲ್ಲಿಸಬೇಕು. ಕೆರೆಗಳನ್ನು ಅಭಿವೃದ್ಧಿ ಪಡಿಸಬೇಕು. ಜಯಪುರ ಸಮುದಾಯ ಆರೋಗ್ಯ ಕೇಂದ್ರಕ್ಕೆ ರಾತ್ರಿ ಪಾಳಿ ವೈದ್ಯರನ್ನು ನೇಮಿಸಿ, ಆಂಬುಲೆನ್ಸ್ ವ್ಯವಸ್ಥೆ ಮಾಡಬೇಕು. ಸರ್ಕಾರಿ ಭೂ ಒತ್ತುವರಿ ತೆರವುಗೊಳಿಸಬೇಕು. ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಮತ್ತು ಬಾಣಂತಿಯರಿಗೆ ನೀಡುವ ಆಹಾರ ಮತ್ತು ಸ್ಟಾಕ್ ಬೋರ್ಡ್ ಅನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕು ಎಂದು ಆಗ್ರಹಿಸಿದರು.

ಗ್ರಾಮ ಪಂಚಾಯಿತಿ ಸದಸ್ಯರಾದ ಮರಿಸಿದ್ದೇಗೌಡ, ಆಶಾ ಕೆಂಪಚಾರಿ, ಬೈರೇಶ್, ಮಹಾದೇವಿ,ಎಂ. ನಾಗರಾಜು, ಬಿ. ರೇಣುಕಾ, ಕಾರ್ಯದರ್ಶಿ ವೈ.ಕೆ ಅನ್ನಪೂರ್ಣ, ಲೆಕ್ಕಸಹಾಯಕ ಆನಂದೇಗೌಡ, ಜಯಪುರ ಸಮುದಾಯ ಆರೋಗ್ಯ ಕೇಂದ್ರ ವೈದ್ಯಾಧಿಕಾರಿ ಡಾ.ಗಾಯಿತ್ರಿ, ಹಿರಿಯ ವೈದ್ಯಾಧಿಕಾರಿ ಡಾ. ಮಹದೇವಪ್ರಸಾದ್, ಅರಣ್ಯ ಪ್ರೇರಕ ಬಸವಣ್ಣ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಹಾಯಕ ಎಂಜಿನಿಯರ್ ರವಿಕುಮಾರ್, ಗ್ರಂಥಾಲಯ ಮೇಲ್ವಿಚಾರಕ ಎಸ್.ಸೋಮೇಗೌಡ, ಡಿಇಒ ಭಾರತಿ, ರಾಣಿ, ಮುರುಡಪ್ಪ, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಭಾಗವಹಿಸಿದ್ದರು.

ಮಕ್ಕಳಿಗೆ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ಕ್ರೀಡಾಕೂಟ

ಮೈಸೂರು, ಡಿ.8(ಎಂಟಿವೈ)– ಮೈಸೂರಿನ ನಜ್ಜರ್‌ಬಾದ್‌ನಲ್ಲಿರುವ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಡಿ.21ರಂದು ಬೆಳಗ್ಗೆ 8 ಗಂಟೆಯಿಂದ 4ರಿಂದ 18 ವರ್ಷದೊಳಗಿನ ಮಕ್ಕಳಿಗಾಗಿ ನಾಲ್ಕನೇ ಆವೃತ್ತಿಯ 'ಮಕ್ಕಳ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್' ಕ್ರೀಡಾಕೂಟ ಆಯೋಜಿಸಲಾಗಿದೆ ಎಂದು ರೋಟರಿ ಕ್ಲಬ್ ಆಫ್ ಹೆರಿಟೇಜ್ ಸಂಸ್ಥೆಯ ಅಧ್ಯಕ್ಷ ಎಂ.ಎಸ್.ರಾಜು ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಸದರ ಕ್ರೀಡಾ ಮಹೋತ್ಸವ ಅಂಗವಾಗಿ ಕಿಡ್ಸ್ ಅಥ್ಲೆಟಿಕ್ಸ್ ಚಾಂಪಿಯನ್‌ಷಿಪ್ ಆಯೋಜಿಸಲಾಗಿದೆ. 4 ರಿಂದ 6 ವರ್ಷದೊಳಗಿನವರಿಗೆ 40 ಮೀಟರ್ ಓಟ, ಚೆಂಡು ಎಸೆತ, 7 ರಿಂದ 9 ವರ್ಷದೊಳಗಿನವರಿಗೆ 60 ಮೀಟರ್ ಓಟ, ಚೆಂಡು ಎಸೆತ, ಜಿಗಿತ, 10 ರಿಂದ 12 ವರ್ಷ ವಯಸ್ಸಿನವರಿಗೆ 80 ಮೀಟರ್ ಓಟ, ಜಾವೆಲಿನ್, ದೂರ ಜಿಗಿತ, 4x100 ಮೀಟರ್ ರಿಲೇ, 13 ರಿಂದ 15 ವರ್ಷದೊಳಗಿನವರಿಗೆ 100 ಮೀಟರ್ ಓಟ, 600 ಮೀಟರ್ ಓಟ, ದೂರ ಜಿಗಿತ, ಶಾಟ್‌ಪುಟ್, 4x100 ಮೀಟರ್ ರಿಲೇ, 16 ರಿಂದ 18 ವರ್ಷದೊಳಗಿನವರಿಗೆ 100 ಮೀಟರ್ ಓಟ, 400 ಮೀಟರ್ ಓಟ, 1000 ಮೀಟರ್ ಓಟ, ದೂರ ಜಿಗಿತ, ಶಾಟ್ ಪುಟ್, 4x100 ಮೀಟರ್ ರಿಲೇ ಸ್ಪರ್ಧೆ ಏರ್ಪಡಿಸಲಾಗಿದೆ ಎಂದು ತಿಳಿಸಿದರು.

ಇದೇ ವೇಳೆ ಕಲಿಸು ಫೌಂಡೇಷನ್ ಸಂಸ್ಥಾಪಕ ನಿಖಿಲೇಶ್ ಮಾತನಾಡಿ, ಕೇಂದ್ರ ಸರ್ಕಾರದ ಫಿಟ್ ಇಂಡಿಯಾ ಕಾರ್ಯಕ್ರಮದ ಅಂಗವಾಗಿ ಸಂಸದರ ಕ್ರೀಡಾ ಮಹೋತ್ಸವ ನಡೆಸಲಾಗುತ್ತಿದೆ. ಕಿಡ್ಸ್ ಅಥ್ಲೆಟಿಕ್ಸ್ ಕ್ರೀಡಾಕೂಟವನ್ನು ಉತ್ತಮ ಗುಣಮಟ್ಟದ ವ್ಯವಸ್ಥೆಯೊಂದಿಗೆ ಆಯೋಜಿಸುವುದಕ್ಕಾಗಿ ಕ್ರೀಡಾಪಟುಗಳಿಂದ 299 ರೂ. ಪ್ರವೇಶ ಶುಲ್ಕ ಸಂಗ್ರಹಿಸಲಾಗುತ್ತಿದೆ. ಸಂಗ್ರಹವಾದ ಶುಲ್ಕದಿಂದ ಕ್ರೀಡಾಪಟು ಹಾಗೂ ಅವರೊಂದಿಗೆ ಬರುವ ಪೋಷಕರಿಗೆ ಊಟದ ವ್ಯವಸ್ಥೆ ಕಲ್ಪಿಸಲಾಗಿದೆ. ಪ್ರವೇಶ ಶುಲ್ಕ ಪಾವತಿಸಲು ಸಾಧ್ಯವಾಗದ ಸರ್ಕಾರಿ ಶಾಲೆ ಹಾಗೂ ಗ್ರಾಮೀಣ ಪ್ರದೇಶದ ಮಕ್ಕಳಿಗೆ ಸಂಘ ಸಂಸ್ಥೆಗಳ ನೆರವು ಪಡೆದು ಕ್ರೀಡೆಯಲ್ಲಿ ಪಾಲ್ಗೊಳ್ಳಲು ಅವಕಾಶ ನೀಡಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಕ್ರೀಡಾಕೂಟದ ಆಯೋಜನ ಸಮಿತಿಯ ಮಂಜುನಾಥ್, ಸಾಗರ್, ಬಾಲಸುಬ್ರಹ್ಮಣ್ಯ ಇದ್ದರು.

ವಾರ್ಷಿಕ ಕ್ರೀಡಾಕೂಟ



ಮೈಸೂರಿನ ರಾಮಕೃಷ್ಣ ವಿದ್ಯಾಕೇಂದ್ರ ಪದವಿ ಪೂರ್ವ ಕಾಲೇಜಿನಲ್ಲಿ 2025–26ನೇ ಸಾಲಿನ ವಾರ್ಷಿಕ ಕ್ರೀಡಾಕೂಟ ಏರ್ಪಡಿಸಲಾಗಿತ್ತು. ವಿದ್ಯಾರ್ಥಿಗಳಿಗೆ ವಾಲಿಬಾಲ್ ಮತ್ತು ಕಬಡ್ಡಿ ಪಂದ್ಯಗಳಿದ್ದರೆ, ವಿದ್ಯಾರ್ಥಿನಿಯರಿಗೆ ವಾಲಿಬಾಲ್ ಮತ್ತು ಥ್ರೋಬಾಲ್ ಪಂದ್ಯಗಳಿದ್ದವು. ಕ್ರೀಡಾಕೂಟವನ್ನು ಅಧ್ಯಕ್ಷ ಎಂ. ಪಾಪೇಗೌಡ ಉದ್ಘಾಟಿಸಿದರು. ಕಾರ್ಯನಿರ್ವಾಹಕ ಅಧಿಕಾರಿ ಪ್ರೊ.ಜಿ.ಚಂದ್ರಶೇಖರ್, ಪ್ರಾಂಶುಪಾಲ ಸಿ.ಶಿವಪ್ಪ ಮತ್ತು ಬೋಧಕ–ಬೋಧಕೇತರರು ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

9.12.2025 ಮಂಗಳವಾರ, ಮಳೆ ನಕ್ಷತ್ರ: ಜ್ಯೇಷ್ಠ 03.12.2025ರಿಂದ 15.12.2025 ವಿಶ್ವಾವಸು ನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಮಾರ್ಗಶಿರ ಮಾಸ, ಶುಕ್ಲ ಪಕ್ಷ, ತಿಥಿ: ಪಂಚಮಿ, ನಕ್ಷತ್ರ: ಪುಷ್ಯ, ರಾಹುಕಾಲ: ಮಧ್ಯಾಹ್ನ 3ರಿಂದ 4.30ರವರೆಗೆ

- **ಕಾವೇರಿ ಆಯುರ್ವೇದ ಆಸ್ಪತ್ರೆ:** ಹುಟ್ಟಿನಿಂದ 16 ವರ್ಷ ವಯಸ್ಸಿನ ಮಕ್ಕಳಲ್ಲಿ ರೋಗ ನಿರೋಧಕ ಶಕ್ತಿ ವೃದ್ಧಿಗಾಗಿ ಮಕ್ಕಳಿಗೆ ಸ್ವರ್ಣಪ್ರಾಶನ ಕಾರ್ಯಕ್ರಮ. ಕಿಟಿಬ ಕುಷ್ಠ (Psoriasis). ಋತು ಚಕ್ರದ ಸಮಸ್ಯೆ ಕುರಿತು ತಪಾಸಣೆ ಮತ್ತು ಚಿಕಿತ್ಸಾ ಶಿಬಿರ. ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್ ಬೆಳಗ್ಗೆ 9.30ರಿಂದ.
- **ರಾಮ್‌ಸನ್ಸ್ ಬೊಂಬೆ ಮನೆ:** ದಸರೆಯ ಬೊಂಬೆ ಪ್ರದರ್ಶನದ 21ನೇ ಅವತರಣಿಕೆ. ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ. ಬೆಳಗ್ಗೆ 10 ರಿಂದ.
- **ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ, ಬೆಂಗಳೂರು :** ಸೌಹಾರ್ದ ಸಹಕಾರಿಗಳ ಸಿಬ್ಬಂದಿಯವರಿಗಾಗಿ ಹತ್ತು ದಿನಗಳ ವ್ಯಕ್ತಿತ್ವ ವಿಕಸನ ವಿಶೇಷ ತರಬೇತಿ, ಉದ್ಘಾಟನೆ : ಶ್ರೀ ರಾಮಕೃಷ್ಣ ಆಶ್ರಮದ ಅಧ್ಯಕ್ಷರಾದ ಶ್ರೀ ಮುಕ್ತಿದಾನಂದಜಿ, ಅಧ್ಯಕ್ಷತೆ : ಸಹಕಾರಿ ಸಂಘದ ಅಧ್ಯಕ್ಷ ಜಿ. ನಂಜನಗೌಡ, ಮುಖ್ಯ ಅತಿಥಿಗಳು : ಸಿ.ಎನ್. ಪರಶಿವಮೂರ್ತಿ, ಪ್ರಸಾದ ರೆಡ್ಡಿ, ಮಹಾ ಮೇದಾನಂದ ಸ್ವಾಮೀಜಿ, ಹೆಚ್.ವಿ. ರಾಜೀವ್, ಎಸ್.ಕೆ. ಮಂಜುನಾಥ್, ಶ್ರೀಮತಿ ಭಾರತಿ ಜಿ. ಭಟ್, ಮಹದೇವಸ್ವಾಮಿ, ಸ್ಥಳ: ರಾಮಕೃಷ್ಣ ನೈತಿಕ ಮತ್ತು ಆಧ್ಯಾತ್ಮಿಕ ಶಿಕ್ಷಣ ಸಂಸ್ಥೆ, ಯಾದವಗಿರಿ, ಬೆಳಗ್ಗೆ 10 ರಿಂದ.
- **ಶ್ರೀ ನಟರಾಜ ಪಬ್ಲಿಕ್ ಸ್ಕೂಲ್ :** ವಾರ್ಷಿಕ ಕ್ರೀಡಾಕೂಟ, ಸಾನ್ನಿಧ್ಯ : ಶ್ರೀ ನಟರಾಜ ಪ್ರತಿಷ್ಠಾನ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಮುಖ್ಯ ಅತಿಥಿಗಳು : ವಿಶೇಷಾಧಿಕಾರಿ ಪ್ರೊ. ಎಸ್. ಶಿವರಾಜಪ್ಪ, ಶಾಲೆ ಪ್ರಿನ್ಸಿಪಾಲ್ ಎಂ.ಆರ್. ಪವಿತ್ರ, ಸ್ಥಳ: ಶ್ರೀ ನಟರಾಜ ಪಬ್ಲಿಕ್ ಸ್ಕೂಲ್ ಆವರಣ, ಬೆಳಗ್ಗೆ 10 ರಿಂದ.
- **ಶ್ರೀ ಪಂಚಮುಖಿ ಆಂಜನೇಯಸ್ವಾಮಿ ದೇವಸ್ಥಾನ:** 25ನೇ ವರ್ಷದ ಹನುಮ ಜಯಂತಿ ಮಹೋತ್ಸವ. ಬೆಳಗ್ಗೆಯಿಂದ ವಿಶೇಷ ಪೂಜೆ, ಅಲಂಕಾರ, ಅಭಿಷೇಕ, ಪ್ರಸಾದ ಸೇವೆ, ಧಾರ್ಮಿಕ ಪೂಜಾ ಕಾರ್ಯಕ್ರಮಗಳು. ಸ್ಥಳ: ದೇವಸ್ಥಾನದ ಪ್ರಾಂಗಣ. ಇರ್ವಿನ್ ರಸ್ತೆ.
- **ಅರಮನೆ ಕೋಟೆ ಉತ್ತರ ಬಾಗಿಲು ಶ್ರೀ ಆಂಜನೇಯಸ್ವಾಮಿ ದೇವಸ್ಥಾನ:** ಶ್ರೀ ಹನುಮ ಜಯಂತಿ ಮಹೋತ್ಸವ. ಸಾಂಸ್ಕೃತಿಕ ಕಾರ್ಯಕ್ರಮ. ಸಂಜೆ 5.30ರಿಂದ ಶ್ರೀ ಹನುಮ ಪರಂಪರೆಯ ಸುಮಧುರ ಗಾನ ಕಲಾ ಟ್ರಸ್ಟ್ ಕಲಾವಿದರಿಂದ ದೇವರನಾಮ, ಸಂಜೆ 7 ರಿಂದ ಲಾಸ್ಯ ರಂಜನ ನೃತ್ಯ ಶಾಲೆಯವರಿಂದ ಭರತನಾಟ್ಯ, ಸ್ಥಳ: ಅರಮನೆ ಕೋಟೆ ಉತ್ತರ ಬಾಗಿಲು ಆಂಜನೇಯ ಸ್ವಾಮಿ ದೇವಸ್ಥಾನ.
- **ಶ್ರೀ ರಾಘವೇಂದ್ರ ಸೇವಾ ಸಮಿತಿ:** ಶ್ರೀಮತ್ ಭಾಗವತ ಮುಂದುವರೆದ ಭಾಗ ಪ್ರವಚನ: ಪಂಡಿತ ಬಾದರಾಯಣಾಚಾರ್ಯ ಅವರಿಂದ. ಸ್ಥಳ: ಮಠದ ಆವರಣ, ಜಯಲಕ್ಷ್ಮೀಪುರಂ. ಸಂಜೆ 5 ಗಂಟೆಗೆ.
- **ಸಾಧನಾ ಮಂದಿರ, ಮೈಸೂರು:** ಸರಸ್ವತಿ ಪೂಜೆ ಮಾಡುವ ಬಗ್ಗೆ ವಿಶೇಷ ತರಬೇತಿ. ಸ್ವಾಮಿ ಹಂಸಾನಂದ ಅವರಿಂದ. ಸಂಜೆ 6.30 ರಿಂದ ಶ್ರೀರಾಮಪುರ 2ನೇ ಹಂತದಲ್ಲಿರುವ ಶ್ರೀ ಸಂಕಷ್ಟಹರ ಗಣಪತಿ ದೇವಸ್ಥಾನ. ಸಂಜೆ 7 ರಿಂದ ವಿವೇಕಾನಂದ ನಗರ ಎಸ್‌ಬಿಎಂ ಲೇಔಟ್‌ನಲ್ಲಿರುವ ಮೈಸೂರು ಯೋಗಾಲಯದಲ್ಲಿ.
- **ಶ್ರೀ ನಾಗಾನಂದ ದತ್ತಾತ್ರೇಯ ಮಠ :** ಶ್ರೀ ವಿಶ್ವವಸುನಾಮ ಸಂವತ್ಸರದ ಭಗವಾನ್ ಶ್ರೀ ದತ್ತಾತ್ರೇಯ ಸ್ವಾಮಿಯವರ 49ನೇ ವರ್ಷದ ಸಪ್ತಾಹ, ಶ್ರೀ ಗುರು ದತ್ತಾತ್ರೇಯ ಉತ್ಸವ, ಹೋಮ, ಪೂರ್ಣಾಹುತಿ, ಔದಂಬರ ಪೂಜೆ, ಮಹಾಮಂಗಳಾರತಿ, ಬೆಳಗ್ಗೆ 9ಕ್ಕೆ ಗುರುಪಾದುಕೆ ಉತ್ಸವ, ಬೆ. 11ಕ್ಕೆ ಭಜನೆ, ಮಧ್ಯಾಹ್ನ 1.30ಕ್ಕೆ ಉತ್ಸವ, ಮಹಾಮಂಗಳಾರತಿ, ಅನ್ನಸಂತರ್ಪಣೆ, ಸ್ಥಳ: ಶ್ರೀ ನಾಗಾನಂದ ದತ್ತಾತ್ರೇಯ ಮಠ, ಬೆಲವತ್ತ ಗ್ರಾಮ.
- **ಮೈಸೂರು ವಿಶ್ವವಿದ್ಯಾನಿಲಯ :** ಪ್ರಬಂಧ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣಾ ಸಮಾರಂಭ, ಅಧ್ಯಕ್ಷತೆ : ಮೈಸೂರು ವಿವಿ ಕುಲಸಚಿವೆ ಶ್ರೀಮತಿ ಎಂ.ಕೆ. ಸವಿತಾ, ಗೌರವ ಅತಿಥಿಗಳು : ನಿವೃತ್ತ ಗ್ರಂಥಪಾಲಕ ಡಾ. ಸಿ.ಪಿ. ರಾಮಶೇಷ್, ಡಾ. ಎಂ.ವಿ. ಸುನೀಲ್, ಡಾ. ಪಿ. ಸರಸ್ವತಿ, ಪ್ರೊ. ಎಂ. ಚಂದ್ರಶೇಖರ, ಪ್ರೊ. ಆದಿತ್ಯಾ ಕುಮಾರಿ, ಡಾ. ವೆಂಕಟೇಶ್, ಸ್ಥಳ: ಮಾನಸಗಂಗೋತ್ರಿ ಲೈಬ್ರರಿ ಕಾನ್ಫರೆನ್ಸ್ ಹಾಲ್, ಮೈಸೂರು ವಿವಿ, ಮಧ್ಯಾಹ್ನ 3ಕ್ಕೆ.
- **ಜನ ಚೈತನ್ಯ ಫೌಂಡೇಷನ್ :** ಪದನಿಸ ವಿಶೇಷ ಹಾಡುಗಳ ವಿಭಿನ್ನ ಸಂಗೀತ ಕಾರ್ಯಕ್ರಮ, ಸ್ಥಳ: ನಾದಬ್ರಹ್ಮ ಸಭಾಂಗಣ, ಜೆಎಲ್‌ಬಿ ರಸ್ತೆ, ಸಂಜೆ 4.30 ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಸಾಧಕರ ಸೋಪಾನ– ಲೇಖನ ಮತ್ತು ಪ್ರಸ್ತುತಿ: ಟಿ. ಎಸ್. ಗೋಪಾಲ್, ಪ್ರಾಯೋಜಕರು: ಸಹಬಾಳ್ವೆ, ಬೆಂಗಳೂರು, 6.40 ಅರಿವಿನ ಶಿಖರ –ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ : ಶಾಂತಲಾವಟ್ಟಂ, ವ್ಯಾಖ್ಯಾನ:ಮೊರಬದ ಮಲ್ಲಿಕಾರ್ಜುನ, 6.50 ರೈತರಿಗೆ ಸಲಹೆ, 7.15 ಮತ್ತು ಸಂಜೆ 5.40 ಪ್ರಾಯೋಜಿತ ಕಾರ್ಯಕ್ರಮ ಕೆ.ಎಸ್.ಓ.ಯು. ಮುಕ್ತವಾಣಿ, ಪ್ರಾಯೋಜಕರು–ಪ್ರಸಾರಂಗ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಡೀನ್ ಅಕಾಡೆಮಿಕ್ಸ್ ಪ್ರೊ. ಎಂ. ರಾಮನಾಥನ್ ನಾಯ್ಡು ಅವರೊಂದಿಗೆ ನಡೆಸಿದ ಸಂವಾದದ ಎರಡನೇ ಭಾಗ. ಪ್ರಸ್ತುತಿ: ಎನ್.ಕೇಶವಮೂರ್ತಿ, 8.30 ವಿಶೇಷ ಕಾರ್ಯಕ್ರಮ ಸರಣಿ ಆಕಾಶವಾಣಿ 90–ನೆನಪುಗಳ ಹೊತ್ತು – ವಿಶೇಷ ಕಾರ್ಯಕ್ರಮ ಸರಣಿ, ಭಾಗವಹಿಸುವ ಅತಿಥಿಗಳು ಮೈಸೂರು ಆಕಾಶವಾಣಿ ಕೇಳುಗರಾದ ಕೆ.ವಿ. ಶಿವಕುಮಾರ್ ಅವರೊಂದಿಗೆ ಸಂದರ್ಶನ ಸಂದರ್ಶಕರು– ದಿಗ್ವಿಜಯ್ ಬಿ., 9.00 ಕರೆಗೊಂದು ಗೀತೆ–ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರಫೋನ್ ಇನ್ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಟಿ.ಎನ್.ಎಸ್. ಕೃಷ್ಣ –ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಹೊಂಗಿರಣ–ವಿಕಸಿತ ಹಾದಿಗೊಂದು ಸೋಪಾನ, ಪ್ರಸ್ತುತಿ–ಎಸ್. ಲಕ್ಷ್ಮೀನಾರಾಯಣ, ಆರ್. ಲೋಕೇಶ್ವರಿ ಹಾಗೂ ಬಿ. ಜಿ. ಕವಿತಾ

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಕನ್ನಡದಲ್ಲಿ ಭಾಷಣ, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಭಾವಗೀತೆಗಳು, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಎನ್. ರವಿಕಿರಣ್ – ಚಿತ್ರವೀಣಾ, 4.00 ಕಥಾಕಾಲಕ್ಷೇಪ –ನಲ್ಲ ತಂಗಾದೇವಿ, ಪ್ರಸ್ತುತಿ–ಆರ್. ಗುರುರಾಜಲುನಾಯ್ಡು, 5.00 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಕಿಸಾನ್‌ವಾಣಿ, ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ಮತ್ಸ್ಯ ತರಂಗ ಮೀನು ಸಾಕಾಣಿಕೆ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ ಕೆರೆ ಹಾಗೂ ಜಲಾಶಯದಲ್ಲಿ ಮೀನು ಸಾಕಾಣಿಕೆ ಕುರಿತು ನೇರ ಫೋನ್–ಇನ್ ಕಾರ್ಯಕ್ರಮ, ಭಾಗವಹಿಸುತ್ತಾರೆ–ಮೈಸೂರು ಜಿಲ್ಲಾ ಮೀನುಗಾರಿಕಾ ಇಲಾಖೆಯ ಉಪನಿರ್ದೇಶಕರಾದ ಜಿ. ಹೆಚ್.ಮಂಜುನಾಥ್, ಪ್ರಸ್ತುತಿ : ಎನ್. ಕೇಶವಮೂರ್ತಿ, 7.45 ಮೈಸೂರು ಜಂಕ್ಷನ್–ಸಾಪ್ತಾಹಿಕ ಸಂಚಿಕೆ, ಪ್ರಸ್ತುತಿ–ಬಿ. ದಿಗ್ವಿಜಯ್, 8.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, ಭಜನ್ ಸೊಪೊರಿ–ಸಂತೂರ್ ವಾದನ, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ, ಗೀತಾ ವೈ ಪುಟ್ಟಿ – ಹಾಡುಗಾರಿಕೆ, 10.00 ಚೈತ್ರವನ–ಲಕ್ಷ್ಮೀಶನ ಜೈಮಿನಿ ಭಾರತದ ಸಮಗ್ರ ವಾಚನ ಹಾಗೂ ವ್ಯಾಖ್ಯಾನ, ಪ್ರಸ್ತುತಿ–ಡಾ. ಎ.ಎಸ್. ಶಂಕರನಾರಾಯಣ, 10.30 ಸವಿನೆನಪು

ದಲಿತ ಸಮುದಾಯದವರ ನಿಂದಿಸಿದ ಯೂಟ್ಯೂಬರ್ ರಾಘವೇಂದ್ರಗೆ ಜಾಮೀನು ನೀಡಬಾರದು

ಮೈಸೂರು,ಡಿ.8(ಎಂಟಿವೈ)– ದಲಿತ ಸಮುದಾಯವನ್ನು ನಿಂದಿಸಿ, ಬಂಧನ ಕೊಳ್ಳಗಾಗಿರುವ ಯೂಟ್ಯೂಬರ್ ರಾಘವೇಂದ್ರನಿಗೆ ನ್ಯಾಯಾಲಯ ಜಾಮೀನು ನೀಡಬಾರದು. ಪೊಲೀಸರು ಚಾರ್ಜ್‌ಶೀಟ್‌ನಲ್ಲಿ ಪ್ರಬಲವಾದ ಅಂಶ ಸೇರಿಸಿ ಮುಂದಿನ ದಿನಗಳಲ್ಲಿ ದಲಿತ ಸಮುದಾಯ ನಿಂದಿಸು ವವರಿಗೆ ತಕ್ಕ ಸಂದೇಶ ರವಾನಿಸಬೇಕು ಎಂದು ಮಾಜಿ ಮೇಯರ್ ಪುರುಷೋತ್ತಮ್ ಒತ್ತಾಯಿಸಿದ್ದಾರೆ.



ಪುರುಷೋತ್ತಮ್

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯೂ ಟ್ಯೂಬ್ ಚಾನೆಲ್‌ವೊಂದನ್ನು ನಡೆಸುತ್ತಿರುವ ರಾಘವೇಂದ್ರ ಎಂಬಾತ ನರ್ಸಿಂಗ್ ತರಬೇತಿ ಕೇಂದ್ರ ನಡೆಸುವ ಮಹಿಳೆಯೊಬ್ಬರನ್ನು ಬ್ಲ್ಯಾಕ್ ಮೇಲ್ ಮಾಡಿ ಹಣಕ್ಕೆ ಬೇಡಿಕೆ ಇಟ್ಟಿದ್ದ. ಅಲ್ಲದೆ, ದಲಿತ ಸಮುದಾಯದವರನ್ನು ಅವಹೇಳನ ಮಾಡಿದ್ದ. ಈ ಸಂಬಂಧ ದೂರು ದಾಖಲಿಸಲಾಗಿತ್ತು. ಕಳೆದ ಎರಡು ದಿನದ ಹಿಂದೆಯೇ ಯೂ ಟ್ಯೂಬರ್ ರಾಘವೇಂದ್ರನನ್ನು ಪೊಲೀಸರು ಬಂಧಿಸಿದ್ದಾರೆ. ಆದರೆ, ನ್ಯಾಯಾಲಯ ಆತನಿಗೆ ಜಾಮೀನು ನೀಡಬಾರದು. ಪೊಲೀಸರು ಆರೋಪ ಪಟ್ಟಿ ಸಲ್ಲಿಸುವಾಗ ಯಾವುದೆ ಒತ್ತಡಕ್ಕೆ ಒಳಗಾಗದೇ ನಿಜಾಂಶವುಳ್ಳ ಪ್ರಬಲ ಅಂಶವನ್ನು ವರದಿಯಲ್ಲಿ ಸೇರಿಸಬೇಕು. ಆತನ ಚಾನೆಲ್ ಬಂದ್ ಮಾಡಿಸಬೇಕು ಎಂದು ಆಗ್ರಹಿಸಿದರು.

ಆರೋಪಿಯನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರು ಪಡಿಸಲು ಕರೆತಂದಿದ್ದಾಗ ಪೊಲೀಸರ ಸಮ್ಮುಖದಲ್ಲಿ ಆರೋಪಿ ರಾಘವೇಂದ್ರ ದೂರುದಾರರಿಗೆ ಕೈ ಸಂಜ್ಞೆ ಮಾಡುವ ಮೂಲಕ ಉದ್ಧಟತನ ಪ್ರದರ್ಶಿಸಿದ್ದಾನೆ. ಇದಕ್ಕೆ ಪೊಲೀಸರು ಅವಕಾಶ ಮಾಡಿಕೊಡಬಾರದಿತ್ತು ಎಂದು ಕಿಡಿಕಾರಿದರು.

ಇದೇ ವೇಳೆ ನರ್ಸಿಂಗ್ ತರಬೇತಿ ಕೇಂದ್ರದಲ್ಲಿ ಕೆಲಸ ಮಾಡುವ ಯುವತಿಯೊಬ್ಬಳು ಮಾತನಾಡಿ, ಸ್ವಯಂ ಪ್ರೇರಣೆಯಿಂದ ಕೆಲಸ ಮಾಡಲು ನರ್ಸಿಂಗ್ ತರಬೇತಿ ಕೇಂದ್ರಕ್ಕೆ ಬಂದಿದ್ದೇನೆ. ಆದರೆ, ಯೂ ಟ್ಯೂಬರ್ ರಾಘವೇಂದ್ರ, ನನ್ನ ತಾಯಿ ಮತ್ತು ಸಹೋದರಿಯನ್ನು ಸ್ಟುಡಿಯೋದಲ್ಲಿ ಕೂರಿಸಿಕೊಂಡು ಇಲ್ಲ ಸಲ್ಲದ ಆರೋಪ ಮಾಡಿ ಸುದ್ದಿ ಮಾಡಿಸಿದ್ದಾರೆ. ಅಲ್ಲದೆ, ನನ್ನ ಫೋಟೊ ಬಳಸಿ ತೇಜೋವಧೆ ಮಾಡಿದ್ದಾರೆ ಎಂದು ಆರೋಪಿಸಿದರು.

ನರ್ಸಿಂಗ್ ಕೇಂದ್ರ ಮಾಜಿ ಉದ್ಯೋಗಿ ಯುವತಿಯೊಬ್ಬರು ಮಾತನಾಡಿ, ಯೂಟ್ಯೂಬರ್ ರಾಘವೇಂದ್ರ ಈ ಹಿಂದೆಯೂ ನರ್ಸಿಂಗ್ ತರಬೇತಿ ಕೇಂದ್ರಕ್ಕೆ ಬಂದು ಜಾತಿ ನಿಂದನೆ ಮಾಡಿದ್ದರು. ನಾನು ಆಗಲೇ ವಿರೋಧಿಸಿದ್ದೆ ಎಂದರು.

ಬೀಡಿ ಕಾರ್ಮಿಕರಿಗೆ ತಿಂಗಳೊಳಗೆ ಕನಿಷ್ಠ ವೇತನ ನಿಗದಿ: ಸಂತೋಷ್ ಲಾಡ್

ಬೆಳಗಾವಿ, ಡಿ.8– ಮುಂದಿನ ಒಂದು ತಿಂಗಳ ಒಳಗೆ ಬೀಡಿ ಕಾರ್ಮಿಕರಿಗೆ ಕನಿಷ್ಠ ವೇತನ ನಿಗದಿ ಮಾಡುವುದಾಗಿ ಕಾರ್ಮಿಕ ಸಚಿವ ಸಂತೋಷ್ ಲಾಡ್ ಭರವಸೆ ನೀಡಿದ್ದಾರೆ.



ಬೆಳಗಾವಿ ಸುವರ್ಣ ಸೌಧದಲ್ಲಿ ಸೋಮವಾರ ವಿಧಾನ ಪರಿಷತ್ತಿನ ಕಲಾಪದ ಶೂನ್ಯ ವೇಳೆಯಲ್ಲಿ ಸದಸ್ಯ ಐವನ್ ಡಿಸೋಜ ಮಾತನಾಡಿ, ರಾಜ್ಯ ಸರ್ಕಾರ 2018ರ ಏ.1ರಂದು ಬೀಡಿ ಕಾರ್ಮಿಕರ ಕೂಲಿಯ ಅಧಿಸೂಚನೆ ಪ್ರಕಟಿಸಿತ್ತು. ಸಾವಿರ ಬೀಡಿಗೆ 210 ರೂ.ನಂತೆ ಹಾಗೂ ಬೆಲೆ ಏರಿಕೆ ಸೂಚ್ಯಂಕದ ಪಾಯಿಂಟ್‌ಗೆ 0.04 ಪೈಸೆಯಂತೆ ತುಟ್ಟಿ ಭತ್ಯೆ ಸೇರಿ ಕನಿಷ್ಠ ಕೂಲಿಯನ್ನು ಬೀಡಿ ಕಾರ್ಮಿಕರಿಗೆ ನೀಡಬೇಕಿತ್ತು. ಆದರೆ ಬೀಡಿ ಮಾಲೀಕರು ಹೈಕೋರ್ಟ್‌ನಿಂದ ತಡೆಯಾಜ್ಞೆ ತಂದು ಕಳೆದ 6 ವರ್ಷಗಳಿಂದ ಬೀಡಿ ಕಾರ್ಮಿಕರಿಗೆ ಕಾನೂನು ಬದ್ಧ ಕೂಲಿ ನೀಡದೆ ಸತಾಯಿಸಿದ್ದಾರೆ ಎಂದು ಪ್ರಸ್ತಾಪಿಸಿದ್ದರು.

ಇದಕ್ಕೆ ಉತ್ತರಿಸಿದ ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು, ಒಂದು ತಿಂಗಳ ಒಳಗೆ ಕನಿಷ್ಠ ವೇತನ ನಿಗದಿ ಮಾಡುವುದಾಗಿ ಭರವಸೆ ನೀಡಿದರು. ಒಂದೊಮ್ಮೆ ಸಚಿವರ ಭರವಸೆಯಂತೆ ಕನಿಷ್ಠ ಕೂಲಿ ನಿಯಮ ಜಾರಿಗೆ ಬಂದಲ್ಲಿ ಬೀಡಿ ಕಾರ್ಮಿಕರಿಗೆ ಸಾವಿರ ಬೀಡಿಗೆ ಸುಮಾರು 17 ರೂ.ನಷ್ಟು ಹೆಚ್ಚುವರಿ ಮಜೂರಿ ದೊರೆಯಲಿದೆ.

ಸಾಹಿತ್ಯ ದಿಗ್ಗಜ ಎಸ್.ಎಲ್. ಭೈರಪ್ಪ, ಸಾಲು ಮರದ ತಿಮ್ಮಕ್ಕ, ಹೆಚ್.ವೈ. ಮೇಟಿ ಸೇರಿ

ಅಗಲಿದ ಗಣ್ಯರಿಗೆ ವಿಧಾನ ಮಂಡಲ ಸಂತಾಪ

ಬೆಳಗಾವಿ,ಸುವರ್ಣಸೌಧ, ಡಿ. 8(ಕೆಎಂಶಿ)– ಸಾಹಿತ್ಯ ದಿಗ್ಗಜ ಎಸ್.ಎಲ್. ಭೈರಪ್ಪ, ಸಾಲು ಮರದ ತಿಮ್ಮಕ್ಕ, ವಿಧಾನಸಭೆಯ ಹಾಲಿ ಸದಸ್ಯ ಹಾಗೂ ಮಾಜಿ ಸಚಿವ ಹೆಚ್.ವೈ.ಮೇಟಿ, ಮಾಜಿ ಶಾಸಕ ಆರ್.ವಿ.ದೇವರಾಜ್ ಸೇರಿದಂತೆ ಇತ್ತೀಚೆಗೆ ಅಗಲಿದ ಗಣ್ಯರಿಗೆ ವಿಧಾನಮಂಡಲದ ಉಭಯ ಸದನಗಳಲ್ಲಿ ಇಂದು ಸಂತಾಪ ಸೂಚಿಸಲಾಯಿತು.



ಸಭಾಧ್ಯಕ್ಷ ಯು.ಟಿ.ಖಾದರ್ ಮಂಡಿಸಿದ ಸಂತಾಪ ನಿರ್ಣಯ ಬೆಂಬಲಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಾರ್ವಜನಿಕ ಬದುಕಿನಲ್ಲಿದ್ದ ಮೇಟಿ ಜನಪರ ಹಾಗೂ ಕ್ಷೇತ್ರದ ಅಭಿವೃದ್ಧಿ ಬಗ್ಗೆಯಷ್ಟೇ ಚಿಂತಿಸುತ್ತಿದ್ದ ಮುತ್ಸದ್ದಿ ನಾಯಕ, ನನ್ನ ಅನುಯಾಯಿಗಳಲ್ಲಿ ಅಗ್ರಗಣ್ಯರು ಎಂದು ಬಣ್ಣಿಸಿದರು.

ವೃತ್ತಿಯಿಂದ ಕೃಷಿಕರಾಗಿದ್ದ ಮೇಟಿ, ಬಿಲ್‌ಕೆರೂರು ಮಂಡಲ ಪಂಚಾಯತ್ ಅಧ್ಯಕ್ಷರಾಗುವ ಮೂಲಕ ರಾಜಕೀಯ ಪ್ರವೇಶಿಸಿದರು. ಬಾಗಲಕೋಟೆ ತಾಲೂಕು ಕೃಷಿ ಹುಟ್ಟುವಳಿ ಮಾರಾಟ ಸಮಿತಿ, ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರ, ಮತ್ತು ಎಂಎಸ್‌ಐಎಲ್ ಅಧ್ಯಕ್ಷರಾಗಿ, ಡಿಸಿಸಿ ಬ್ಯಾಂಕ್ ನಿರ್ದೇಶಕರಾಗಿ ಸೇವೆ ಸಲ್ಲಿಸಿದ್ದರು.

ಅವರೊಂದಿಗೆ 1983 ರಿಂದ ಒಡನಾಟವಿತ್ತು, ಜನತಾ ಪಕ್ಷ, ಜನತಾ ದಳ ಹಾಗೂ ಕಾಂಗ್ರೆಸ್‌ನಲ್ಲಿದ್ದರೂ ನಾನು ಕೈಗೊಳ್ಳುವ ತೀರ್ಮಾನಗಳಿಗೆ ಬದ್ಧರಾಗಿದ್ದರು, ಅಹಿಂದ ಸಂಘಟನೆಯಲ್ಲಿ ನನ್ನೊಂದಿಗೆ ಹೆಗಲು ಕೊಟ್ಟು ದುಡಿದವರು.

ಶಾಸಕರಾಗಿ, ಸಂಸದರಾಗಿ, ಸಚಿವರಾಗಿ, ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ ಮೇಟಿ, ಸಜ್ಜನ ರಾಜಕಾರಣಿ. ರಾಜಕೀಯ ತತ್ವಗಳನ್ನು ತಪ್ಪದೇ ಪಾಲಿಸುತ್ತಿದ್ದ, ಜನರೊಂದಿಗೆ ಬೆರೆಯುವ ಗುಣವಿದ್ದ, ಜಾತ್ಯತೀತ ತತ್ವ ಪಾಲಕರಾಗಿದ್ದರು. ಎಲ್ಲ ಜಾತಿ–ಧರ್ಮಗಳನ್ನು ಪ್ರೀತಿಯಿಂದ ಕಾಣುವ ಸ್ವಭಾವದವರು ಎಂದು ಸ್ಮರಿಸಿದರು.

ಇತ್ತೀಚೆಗೆ ನಿಧನರಾದ ಆರ್.ವಿ.ದೇವರಾಜ್ ಬಗ್ಗೆ ಮಾತನಾಡುತ್ತಾ, ವೃತ್ತಿಯಲ್ಲಿ ವ್ಯಾಪಾರಸ್ಥರಾಗಿದ್ದ, ಉತ್ತಮ ಸಂಘಟಕರಾಗಿ ಸಾಮಾಜಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುತ್ತಿದ್ದರು.

ಕಾಂಗ್ರೆಸ್‌ನ ನಿಷ್ಠಾವಂತ ಕಾರ್ಯಕರ್ತರಾಗಿದ್ದರು. 1989ರ ಚುನಾವಣೆಯಲ್ಲಿ ಮೊದಲ ಬಾರಿಗೆ ಮತ್ತು 1999 ಹಾಗೂ 2013ರಲ್ಲಿ ಚಾಮರಾಜಪೇಟೆ ವಿಧಾನಸಭಾ ಕ್ಷೇತ್ರದ ಶಾಸಕರಾಗಿ ಆಯ್ಕೆಯಾಗಿದ್ದರು.

2004 ರಿಂದ 2010ರವರೆಗೆ ವಿಧಾನ ಪರಿಷತ್ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದರು. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಹಾಗೂ ಕೊಳೆಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು.

ಮೈಸೂರಿನ ಚಾಮುಂಡಿಬೆಟ್ಟಕ್ಕೆ ಹೋಗಿದ್ದ ಸಂದರ್ಭದಲ್ಲಿ ಹೃದಯಾಘಾತದಿಂದ ನಿಧನರಾಗಿರುವುದು ಅತ್ಯಂತ ನೋವಿನ ಸಂಗತಿಯಾಗಿದೆ.

ನನ್ನನ್ನು ಇತ್ತೀಚೆಗೆ ಭೇಟಿಯಾಗಿದ್ದ ದೇವರಾಜ್, ಕೆಲವು ವಿಚಾರಗಳ ಬಗ್ಗೆ ಚರ್ಚಿಸಿದ್ದರು. ಅವರ ಅಗಲಿಕೆ ಕಾಂಗ್ರೆಸ್ ಪಕ್ಷಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಸಂತಾಪ ಸೂಚಿಸಿದರು.

ಮಾಜಿ ಶಾಸಕ ಶಿವಶರಣಪ್ಪಗೌಡ ಪಾಟೀಲ್, ವಿವಿಧ ಸಂಘ–ಸಂಸ್ಥೆಗಳ ಕಾರ್ಯಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುತ್ತಿದ್ದರು. ತಾಲೂಕು ಬೋರ್ಡ್ ಅಧ್ಯಕ್ಷರಾಗಿ, ತುಂಗಭದ್ರಾ ಅಣೆಕಟ್ಟು ಮಂಡಳಿ ಹಾಗೂ ಹಟ್ಟಿ ಚಿನ್ನದ ಗಣಿ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದರು.

ನಟ ಉಮೇಶ್: ಹಾಸ್ಯ ನಟ ಎಂ.ಎಸ್. ಉಮೇಶ್ ಕನ್ನಡ ವೃತ್ತಿ ರಂಗಭೂಮಿ ಮತ್ತು ಚಲನ ಚಿತ್ರರಂಗದ ಜನಪ್ರಿಯ ಹಾಸ್ಯ ಕಲಾವಿದರಾಗಿದ್ದರು. ತಮ್ಮ ವಿಶಿಷ್ಟ ಸಂಭಾಷಣೆ, ಅಭಿನಯ, ಅಭಿವ್ಯಕ್ತಿಗಳಿಂದ ಕನ್ನಡ ಚಿತ್ರರಸಿಕರ ಮನ ಗೆದ್ದವರು ಎಂದು ಸ್ಮರಿಸಿದರು.

ಅಗಲಿದ ಎಲ್ಲರ ಆತ್ಮಕ್ಕೆ ಚಿರಶಾಂತಿ ಕೋರಿ, ಅವರ ಕುಟುಂಬದವರಿಗೆ ದುಃಖ ಭರಿಸುವ ಶಕ್ತಿಯನ್ನು ದೇವರು ನೀಡಲಿ ಎಂದು ಪ್ರಾರ್ಥಿಸಿ, ವಿಧಾನ ಮಂಡಲದ ಪೀಠಾಸೀನಾಧಿಕಾರಿಗಳು ಮಂಡಿಸಿದ ಸಂತಾಪ ಸೂಚನಾ ನಿರ್ಣಯವನ್ನು ಸದನಗಳು ಅನುಮೋದಿಸಿ, ಒಂದು ನಿಮಿಷ ಮೌನ ಆಚರಿಸಿದವು.

ತಿಮ್ಮಕ್ಕರಿಗೆ ಮರಗಳೇ ಮಕ್ಕಳಾಗಿದ್ದವು!

ಪದ್ಮಶ್ರೀ ಶತಾಯುಷಿ ಸಾಲುಮರದ ತಿಮ್ಮಕ್ಕ 114 ವರ್ಷಗಳ ಕಾಲ ಬದುಕಿ ದೈವಾಧೀನರಾಗಿದ್ದಾರೆ. ಮಕ್ಕಳಿಲ್ಲದ ಅವರು ಮರಗಿಡಗಳನ್ನೇ ತಮ್ಮ ಮಕ್ಕಳಂತೆ ಸಾಕುತ್ತಿದ್ದು. ಅವರು ನೆಟ್ಟಿರುವ ಮರಗಳು ಇವತ್ತು ಹೆಮ್ಮರವಾಗಿ ಬೆಳೆದು ನಿಂತು ಜನರಿಗೆ ನೆರಳು ನೀಡುತ್ತಿವೆ. ಸುಮಾರು 4,000ಕ್ಕೂ ಹೆಚ್ಚು ಮರಗಳನ್ನು ಬೆಳೆಸುವ ಮೂಲಕ ಸಾಲುಮರದ ತಿಮ್ಮಕ್ಕ ಎಂದೇ ಹೆಸರು ವಾಸಿಯಾಗಿದ್ದರು.




ಪರಿಸರವಾದಿಯಾಗಿದ್ದ ತಿಮ್ಮಕ್ಕನವರ ಸೇವೆ ಪರಿಗಣಿಸಿ ಕೇಂದ್ರ ಸರ್ಕಾರ ಪದ್ಮಶ್ರೀ ಪ್ರಶಸ್ತಿ ನೀಡಿ ಗೌರವಿಸಿತ್ತು.

ಬೇಲೂರಿನಲ್ಲಿ ವಸ್ತು ಸಂಗ್ರಹಾಲಯ ಮಾಡಬೇಕೆಂಬ ತಮ್ಮ ಕೊನೆಯ ಆಸೆಯನ್ನು ತಿಮ್ಮಕ್ಕ ಪತ್ರ ಮುಖೇನ ತಿಳಿಸಿದ್ದು, ಈ ಬಗ್ಗೆ ಸರ್ಕಾರ ಪರಿಶೀಲಿಸಲಿದೆ.

ಗಿಡಗಳನ್ನು ಮಕ್ಕಳಂತೆ ಕಂಡು ಪೋಷಿಸಿ ಬೆಳೆಸಿದ್ದ ತಿಮ್ಮಕ್ಕ ಸಾಧನೆಗೆ 1995ರಲ್ಲಿ ರಾಷ್ಟ್ರೀಯ ಪೌರ ಪ್ರಶಸ್ತಿ, 1997ರಲ್ಲಿ ಇಂದಿರಾ ಪ್ರಿಯದರ್ಶಿನಿ ವೃಕ್ಷಮಿತ್ರ ಪ್ರಶಸ್ತಿ, ಕರ್ನಾಟಕ ರಾಜ್ಯೋತ್ಸವ ಹಾಗೂ ನಾಡೋಜ ಪ್ರಶಸ್ತಿಯೂ ದೊರೆತಿದೆ ಎಂದರು.

ಸಾಹಿತ್ಯ ದಿಗ್ಗಜ ಎಸ್.ಎಲ್. ಭೈರಪ್ಪ



ಹಿರಿಯ ಸಾಹಿತಿ ಎಸ್.ಎಲ್.ಭೈರಪ್ಪ ಕನ್ನಡ ಸಾಹಿತ್ಯ ಲೋಕದ ದಿಗ್ಗಜರಲ್ಲಿ ಒಬ್ಬರಾಗಿದ್ದರು. ಇವರು ಬರೆದ ಹಲವು ಕಾದಂಬರಿಗಳು ಇಂಗ್ಲೀಷ್ ಸೇರಿದಂತೆ ಭಾರತದ ವಿವಿಧ ಭಾಷೆಗಳಿಗೆ ಅನುವಾದಗೊಂಡಿವೆ. ಕಿತ್ತು ತಿನ್ನುವ ಬಡತನದ ನಡುವೆಯೂ ಅತಿ ಎತ್ತರಕ್ಕೆ ಬೆಳೆದ ವ್ಯಕ್ತಿತ್ವ ಭೈರಪ್ಪ ಅವರದು, ಹುಬ್ಬಳ್ಳಿಯ ಕಾಡಸಿದ್ಧೇಶ್ವರ ಕಾಲೇಜು, ಗುಜರಾತ್‌ನ ಸರ್ದಾರ್ ವಲ್ಲಭಭಾಯಿ ಪಟೇಲ್ ವಿಶ್ವವಿದ್ಯಾಲಯ, ದೆಹಲಿಯ ಎನ್‌ಸಿಇಆರ್‌ಟಿ ಮತ್ತು ಮೈಸೂರಿನ ಪ್ರಾದೇಶಿಕ ಶಿಕ್ಷಣ ಕಾಲೇಜಿನಲ್ಲಿ ತರ್ಕ ಮತ್ತು ಮನೋವಿಜ್ಞಾನ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ್ದರು.

ಇಂಗ್ಲೀಷ್‌ನಲ್ಲಿ ರಚಿಸಿದ 'ಸತ್ಯ ಮತ್ತು ಸೌಂದರ್ಯ' ಎಂಬ ಮಹಾ ಪ್ರಬಂಧಕ್ಕೆ ಬರೋಡಾದ ಮಹಾರಾಜ ಸಯ್ಯಾಜಿರಾವ್ ವಿಶ್ವವಿದ್ಯಾಲಯದಿಂದ ಡಾಕ್ಟರೇಟ್ ಪದವಿ ಗಳಿಸಿದ್ದರು.

ಪರ್ವ, ಗೃಹಭಂಗ, ವಂಶವೃಕ್ಷ, ನೆಲೆ, ಸಾಕ್ಷಿ, ನಾಯಿ ನೆರಳು, ತಬ್ಬಲಿಯು ನೀನಾದೆ ಮಗನೆ, ದಾಟು, ಧರ್ಮಶ್ರೀ, ಭಿತ್ತಿ ಸೇರಿದಂತೆ ಹಲವು ಕಾದಂಬರಿಗಳು ಮರಾಠಿ ಓದುಗರ ಮೆಚ್ಚುಗೆಗೂ ಪಾತ್ರವಾಗಿದ್ದವು. ಪದ್ಮಶ್ರೀ, ಪದ್ಮಭೂಷಣ, ಸರಸ್ವತಿ ಸಮ್ಮಾನ್, ಕನ್ನಡ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಪಂಪ ಪ್ರಶಸ್ತಿ, ಎನ್‌ಟಿಆರ್ ರಾಷ್ಟ್ರೀಯ ಪ್ರಶಸ್ತಿ, ಡಾ:ಬೆಟಗೇರಿ ಕೃಷ್ಣಶರ್ಮ ಪ್ರಶಸ್ತಿ ಸೇರಿದಂತೆ ಹಲವು ಪ್ರಶಸ್ತಿಗಳಿಗೆ ಭಾಜನರಾಗಿದ್ದರು ಎಂದರು.

ಚೆಸ್ಕಾಂನ ಜನ ಸಂಪರ್ಕ ಸಭೆ

ಮೈಸೂರು,ಡಿ.8– ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ವತಿಯಿಂದ ನರಾ ಮೊಹಲ್ಲಾ ವಿಭಾಗದ ವ್ಯಾಪ್ತಿಯ ಕೇಂದ್ರ ಚಾಮುಂಡಿಪುರಂ, ನ.ರಾ ಮೊಹಲ್ಲಾ, ಜ್ಯೋತಿನಗರ ಹಾಗೂ ವರುಣ ಉಪ ವಿಭಾಗ ಕಚೇರಿಗಳಲ್ಲಿ ಡಿ.16, 22 ಮತ್ತು 26 ರಂದು 3ನೇ ತ್ರೈಮಾಸಿಕ ಜನಸಂಪರ್ಕ ಸಭೆಯನ್ನು ಏರ್ಪಡಿಸಲಾಗಿದೆ.

ಡಿ.16 ರಂದು ಬೆಳಗ್ಗೆ 11 ಗಂಟೆಗೆ ವರುಣ ಉಪವಿಭಾಗ ಕಚೇರಿಯಲ್ಲಿ, ಡಿ.22 ರಂದು ಬೆಳಗ್ಗೆ 11 ಗಂಟೆಗೆ ಕೇಂದ್ರ ಉಪವಿಭಾಗ ಕಚೇರಿಯಲ್ಲಿ, ಮಧ್ಯಾಹ್ನ 3 ಗಂಟೆಗೆ ನ.ರಾ ಮೊಹಲ್ಲಾ ಉಪವಿಭಾಗ ಕಚೇರಿಯಲ್ಲಿ , ಡಿ.26 ರಂದು ಬೆಳಗ್ಗೆ ಚಾಮುಂಡಿ ಪುರಂ ಉಪ ವಿಭಾಗ ಕಚೇರಿಯಲ್ಲಿ, ಮಧ್ಯಾಹ್ನ 3 ಗಂಟೆಗೆ ಜ್ಯೋತಿ ನಗರ ಉಪವಿಭಾಗ ಕಚೇರಿಯಲ್ಲಿ ಆಯೋಜಿಸಲಾಗಿದ್ದು, ಗ್ರಾಹಕರು ವಿದ್ಯುತ್ ಇಲಾಖೆಗೆ ಸಂಬಂಧಿಸಿದ ಸಮಸ್ಯೆಗಳೇನಾದರೂ ಇದ್ದಲ್ಲಿ ಜನಸಂಪರ್ಕ ಸಭೆಯಲ್ಲಿ ಲಿಖಿತ ಅರ್ಜಿ ಸಲ್ಲಿಸಿ ತಮ್ಮ ಸಮಸ್ಯೆಯನ್ನು ಬಗೆಹರಿಸಿಕೊಳ್ಳಬಹುದು ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ಸಂತಾಪ




ಮೈಸೂರು, ಡಿ. 8– ಮೈಸೂರಿನ ಅಶೋಕಪುರಂನಲ್ಲಿರುವ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಆಫೀಸರ್ಸ್ ಅಸೋಸಿಯೇಷನ್ ಅಧ್ಯಕ್ಷರಾಗಿದ್ದ ಬಿ. ವಸಂತಕುಮಾರ್ ಅವರು ಡಿ. 1ರಂದು ನಿಧನರಾಗಿದ್ದು, ಅವರ ನಿಧನಕ್ಕೆ ಅಸೋಸಿಯೇಷನ್ ಪದಾಧಿಕಾರಿಗಳು ಸಂತಾಪ ಸೂಚಿಸಿದ್ದಾರೆ. ಶ್ರೀಯುತರು ಅಶೋಕಪುರಂನ ಡಾ. ಬಿ.ಆರ್. ಅಂಬೇಡ್ಕರ್ ಉದ್ಯಾನವನದಲ್ಲಿ ನಗರ ಪಾಲಿಕೆ, ಸಾರ್ವಜನಿಕರ ಸಹಕಾರದಿಂದ ಅಂದಿನ ಮುಖ್ಯಮಂತ್ರಿ ರಾಮಕೃಷ್ಣ ಹೆಗಡೆ ಅವರ ಸಮ್ಮುಖದಲ್ಲಿ ಅಂಬೇಡ್ಕರ್ ಪ್ರತಿಮೆಯನ್ನು 1984ರಲ್ಲಿ ಸ್ಥಾಪಿಸುವುದರಲ್ಲಿ ಪ್ರಮುಖ ಪಾತ್ರ ವಹಿಸಿದ್ದರು ಎಂದು ಅಸೋಸಿಯೇಷನ್ ಪ್ರಕಟಣೆ ತಿಳಿಸಿದೆ.


ಎಪಿಎಂಸಿ ಆಸ್ತಿಗಳಿಗೆ ಇ-ಸ್ವತ್ತು

ಮಂಜೇಗೌಡರಿಗೆ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಭರವಸೆ





ಶಿವಾನಂದ ಪಾಟೀಲ್



ಸಿ.ಎನ್.ಮಂಜೇಗೌಡ

ಬೆಳಗಾವಿ, ಡಿ. 8– ಕೃಷಿ ಉತ್ಪನ್ನ ಮಾರುಕಟ್ಟೆಗಳು (ಎಪಿಎಂಸಿ) ಹಾಗೂ ಎಪಿಎಂಸಿಯಿಂದ ಹಂಚಿಕೆ ಮಾಡಲಾದ ವರ್ತಕರ ಆಸ್ತಿಗಳಿಗೆ ಇ–ಖಾತೆ ಮಾಡಲು ಅವಕಾಶ ಮಾಡಿಕೊಡಲು ಆದಷ್ಟು ಶೀಘ್ರ ಸಚಿವ ಸಂಪುಟದ ಮುಂದೆ ಮಂಡಿಸಿ, ತೀರ್ಮಾನ ಕೈಗೊಳ್ಳಲಾಗುತ್ತದೆ ಎಂದು ಸಕ್ಕರೆ ಹಾಗೂ ಕೃಷಿ ಉತ್ಪನ್ನ ಮಾರುಕಟ್ಟೆ ಸಚಿವ ಶಿವಾನಂದ ಎಸ್. ಪಾಟೀಲ್ ಅವರು ವಿಧಾನ ಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ ಅವರಿಗೆ ತಿಳಿಸಿದ್ದಾರೆ.

ಮೈಸೂರಿನ ಬಂಡೀಪಾಳ್ಯ ಎಪಿಎಂಸಿ ಮಾರುಕಟ್ಟೆಯ ಆಸ್ತಿಗಳಿಗೆ ಇ–ಖಾತೆ ಮಾಡಿಕೊಡದ ಕಾರಣ ವರ್ತಕರು ಸಂಕಷ್ಟಕ್ಕೀಡಾಗಿರುವ ಬಗ್ಗೆ 'ಮೈಸೂರು ಮಿತ್ರ' ಸೋಮವಾರದ ಸಂಚಿಕೆಯಲ್ಲಿ ವರದಿ ಪ್ರಕಟವಾಗಿತ್ತು. ಈ ಹಿನ್ನೆಲೆಯಲ್ಲಿ ವಿಧಾನಪರಿಷತ್ ಕಲಾಪದ ಶೂನ್ಯ ವೇಳೆಯಲ್ಲಿ ಸಿ.ಎನ್. ಮಂಜೇಗೌಡ ಅವರು ವಿಷಯ ಪ್ರಸ್ತಾಪಿಸಿದರು.

ಮೈಸೂರಿನ ಬಂಡೀಪಾಳ್ಯ ಎಪಿಎಂಸಿ ಮಾರುಕಟ್ಟೆ ಪ್ರಾಂಗಣದಲ್ಲಿ ಸುಮಾರು 2 ಸಾವಿರಕ್ಕೂ ಹೆಚ್ಚು ವರ್ತಕರಿಗೆ ನಿವೇಶನ ಹಾಗೂ ಕಟ್ಟಡಗಳನ್ನು ಹಂಚಿಕೆ ಮಾಡಿದ್ದು, ಅಲ್ಲಿ ಯಶಸ್ವಿ ವಹಿವಾಟು ನಡೆಯುತ್ತಿದೆ. ಎಪಿಎಂಸಿ ವತಿಯಿಂದ ರೈತರು ಮತ್ತು ವರ್ತಕರಿಗೆ ಅಗತ್ಯ ಮೂಲ ಸೌಕರ್ಯಗಳನ್ನು ಒದಗಿಸಲಾಗಿದ್ದು, ಎಪಿಎಂಸಿ ಸ್ಥಳೀಯ ಪ್ರಾಧಿಕಾರವಾಗಿದ್ದರೂ ಅದನ್ನು ಕಡೆಗಣಿಸಿ ಈ ಸಮಿತಿಯು ನಗರಾಭಿವೃದ್ಧಿ ಯೋಜನಾ ಪ್ರಾಧಿಕಾರದ ವ್ಯಾಪ್ತಿಗೆ ಬರುತ್ತದೆ ಎಂದು ಅನಗತ್ಯ ಕಾರಣಗಳನ್ನು ನೀಡಿ ಯೋಜನಾ ಪ್ರಾಧಿಕಾರದಿಂದಲೇ ನಕ್ಷೆಗೆ ಅನುಮೋದನೆ ಪಡೆದುಕೊಳ್ಳುವಂತೆ ಹೇಳುತ್ತಿರುವುದರಿಂದಾಗಿ ಎಪಿಎಂಸಿಯಿಂದ ವರ್ತಕರಿಗೆ ಹಂಚಿಕೆಯಾಗಿರುವ ನಿವೇಶನ ಹಾಗೂ ಮಳಿಗೆಗಳಿಗೆ ಇ–ಖಾತೆ ಪಡೆಯುವುದು ಸಾಧ್ಯವಾಗುತ್ತಿಲ್ಲ ಎಂದು ಹೇಳಿದರು.


ವರ್ತಕರಿಗೆ ಹಂಚಿಕೆಯಾಗಿರುವ ನಿವೇಶನದಲ್ಲಿ ಕಟ್ಟಡ ನಿರ್ಮಿಸಲು ಹಣಕಾಸಿನ ಅವಶ್ಯಕತೆ ಇದ್ದು, ಬ್ಯಾಂಕ್‌ನಿಂದ ಸಾಲ ಪಡೆಯಲು ಇ–ಖಾತೆ ಕಡ್ಡಾಯ ಮಾಡಿರುವುದರಿಂದಾಗಿ ವರ್ತಕರು ಬ್ಯಾಂಕ್‌ನಿಂದ ಸಾಲ ಪಡೆಯಲು ಸಾಧ್ಯವಾಗುತ್ತಿಲ್ಲ. ಅಲ್ಲದೇ, ಹೊಸದಾಗಿ ಹಂಚಿಕೆಯಾದ ನಿವೇಶನಗಳಿಗೆ ಸಂಬಂಧಿಸಿದಂತೆ ಲೀಸ್–ಕಂ–ಸೇಲ್ ಕರಾರು ಪತ್ರ ನೋಂದಣಿ ಮಾಡಿಸಲು ಕೂಡ ಇ–ಖಾತೆ ಅಗತ್ಯವಾಗಿದ್ದು, ಎಪಿಎಂಸಿ ಹಂಚಿಕೆ ಮಾಡಿದ ನಿವೇಶನ ಹಾಗೂ ಮಳಿಗೆಗಳ ನೋಂದಣಿಯೂ ಸಾಧ್ಯವಾಗದೇ ವರ್ತಕರು ಹಾಗೂ ರೈತರು ತೀವ್ರ ಸಂಕಷ್ಟಕ್ಕೀಡಾಗಿದ್ದಾರೆ.

ಈ ಪರಿಸ್ಥಿತಿ ಹೀಗೇ ಮುಂದುವರಿದರೆ ಎಪಿಎಂಸಿಯಲ್ಲಿ ಮಾರುಕಟ್ಟೆ ಚಟುವಟಿಕೆಗಳು ಸ್ಥಗಿತಗೊಳ್ಳುವ ಅಪಾಯವಿದೆ. ಹೀಗಾಗಿ ಸರ್ಕಾರ ಕೂಡಲೇ ಗಮನ ಹರಿಸಿ ಬಂಡೀಪಾಳ್ಯ ಎಪಿಎಂಸಿ ಆಸ್ತಿಗಳಿಗೆ ಇ–ಖಾತೆ ಮಾಡಿಕೊಡುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಬೇಕು ಎಂದು ಒತ್ತಾಯಿಸಿದರು.

> ಪ್ರಸ್ತುತ ಸರ್ಕಾರವು ಇ–ಖಾತೆ ನಿರ್ವಹಣೆಯನ್ನು ಕಡ್ಡಾಯಗೊಳಿಸಿದ್ದು, ಎಪಿಎಂಸಿಯ ಆಸ್ತಿ ಹಾಗೂ ವರ್ತಕರಿಗೆ ಹಂಚಿಕೆ ಮಾಡಲಾಗಿರುವ ಆಸ್ತಿಗಳಿಗೆ ಇ–ಸ್ವತ್ತು ನಿರ್ವಹಣೆಗೆ ಅವಕಾಶ ನೀಡಬೇಕು ಎಂದು ಮಂಜೇಗೌಡರು ಕೋರಿರುವುದು ಸಮರ್ಪಕವಾಗಿದೆ ಎಂದರು. ಹಾಲಿ ಎಪಿಎಂಸಿ ನಿರ್ದೇಶಕರು ಮಾರುಕಟ್ಟೆ ಕಾಯ್ದೆಯಲ್ಲಿನ ಅವಕಾಶದ ಮೇರೆಗೆ ಎಪಿಎಂಸಿ ಪ್ರಾಂಗಣದಲ್ಲಿರುವ ಆಸ್ತಿಗಳ ನಕಾಶೆಗೆ ಅನುಮೋದನೆ ನೀಡುತ್ತಿರುವ ವ್ಯವಸ್ಥೆಯನ್ನು ಮಾನ್ಯ ಮಾಡಬೇಕು ಹಾಗೂ ಇಂತಹ ಕಟ್ಟಡಗಳಿಗೆ ಕರ್ನಾಟಕ ಗೃಹ ಮಂಡಳಿಯು ಒಂದು ಬಾರಿಯ ಕ್ರಮವಾಗಿ ಘಟನೋತ್ತರ ಅನುಮೋದನೆ ನೀಡುವಂತೆ ತೀರ್ಮಾನಿಸಲಾಗಿದೆ.

ಮಂಜೇಗೌಡರ ಸುದೀರ್ಘ ಮಾಹಿತಿಪೂರ್ಣ ಭಾಷಣಕ್ಕೆ ಉತ್ತರಿಸಿದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಸಚಿವರಾದ ಶಿವಾನಂದ ಎಸ್. ಪಾಟೀಲ್ ಅವರು, ಸರ್ಕಾರವು ಎಪಿಎಂಸಿಯಲ್ಲಿ ಇಂಜಿನಿಯರಿಂಗ್ ಕೋಶವನ್ನು ಸ್ಥಾಪಿಸಿದೆ. ಈ ಇಂಜಿನಿಯರಿಂಗ್ ಕೋಶ ನಕ್ಷೆಗಳನ್ನು ಅಂಗೀಕರಿಸಿ ಎಪಿಎಂಸಿ ನಿರ್ದೇಶಕರಿಗೆ ಅನುಮೋದನೆಗೆ ಸಲ್ಲಿಸುತ್ತಿದೆ. ಎಪಿಎಂಸಿ ಕಾಯ್ದೆಯಡಿ ನಕಾಶೆಗೆ ಅನುಮೋದನೆ ಪಡೆದ ನಂತರ ವ್ಯವಹರಿಸುವುದಕ್ಕೆ ವರ್ತಕರು ಹಾಗೂ ಕಮಿಷನ್ ಏಜೆಂಟರುಗಳಿಗೆ ಲೈಸೆನ್ಸ್ ನೀಡಲಾಗುತ್ತದೆ. ಎಪಿಎಂಸಿಯಿಂದ ಅಂಗಡಿ ಅಥವಾ ಗೋದಾಮು ಪಡೆದವರು ಅಂಗೀಕೃತವಾದ ನಕಾಶೆಯಂತೆ ಅಂಗಡಿ ನಿರ್ಮಿಸಿ ವಹಿವಾಟು ನಡೆಸಬೇಕಾಗುತ್ತದೆ. ಎಪಿಎಂಸಿ ಅಧೀನದಲ್ಲಿರುವ ಆಸ್ತಿಗಳನ್ನು ಯಾವುದೇ ಸ್ಥಳೀಯ ಸಂಸ್ಥೆಗಳಿಗೆ ವರ್ಗಾವಣೆ ಮಾಡುವುದಿಲ್ಲ ಎಂದರು.

ಇನ್ನು ಮುಂದೆ ಸ್ಥಳೀಯ ಯೋಜನಾ ಪ್ರಾಧಿಕಾರಗಳಿಂದ ವಿನ್ಯಾಸ ನಕ್ಷೆಗೆ ಅನುಮೋದನೆ ಪಡೆಯಲು ಸಚಿವ ಸಂಪುಟದ ಅನುಮತಿಗಾಗಿ ಇಲಾಖೆಯು ಪ್ರಸ್ತಾವನೆ ಸ್ವೀಕರಿಸಿದ್ದು, ಅದು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ. ಆದಷ್ಟು ಶೀಘ್ರವೇ ಸಚಿವ ಸಂಪುಟದ ಮುಂದೆ ಈ ವಿಚಾರವನ್ನು ಮಂಡಿಸಿ ಸೂಕ್ತ ಕ್ರಮ ಕೈಗೊಂಡು ಎಪಿಎಂಸಿಗಳ ಹಾಗೂ ಹಂಚಿಕೆಯಿಂದ ವರ್ತಕರು ಪಡೆದಿರುವ ಆಸ್ತಿಗಳಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ನಿರ್ವಹಣೆಗೆ ಅವಕಾಶ ಮಾಡಿಕೊಡಲಾಗುತ್ತದೆ ಎಂದು ಭರವಸೆ ನೀಡಿದರು.





ಮೈಸೂರಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಆಡಳಿತ ಕಛೇರಿ

ನಕ್ಕರೆ ಅದೇ ಸ್ವರ್ಗ

ಶಿಕ್ಷಕರು ವಿದ್ಯಾರ್ಥಿಯನ್ನು ಕೇಳಿದರು. ಒಂದು ವರ್ಷದಲ್ಲಿ ಎಷ್ಟು ರಾತ್ರಿಗಳಿವೆ?
ವಿದ್ಯಾರ್ಥಿ : ಹತ್ತು ರಾತ್ರಿ
ಶಿಕ್ಷಕರು : ಅದ್ಹೇಗೆ ಹತ್ತು?
ವಿದ್ಯಾರ್ಥಿ : ಒಂಬತ್ತು ನವರಾತ್ರಿ ಮತ್ತೆ ಒಂದು ಶಿವರಾತ್ರಿ ಅಷ್ಟೆ.

ಮೈಸೂರು ಮಿತ್ರ

ಮಂಗಳವಾರ, 9 ಡಿಸೆಂಬರ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ..........

ಸಿಗದ ನಿನ್ನೆಯ, ಸಿಗುವ ನಾಳೆಯ ಮಧ್ಯೆ
ಸಿಕ್ಕಿರುವ ಈ ಕ್ಷಣ ಸುಂದರವಾಗಿಸಿಕೊಳ್ಳಿ...

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹುಚ್ಚರ ಮದುವೆಯಲ್ಲಿ ಉಂಡವರೇ ಜಾಣರು !

ನಿಮ್ಮ ಪತ್ರಗಳು

ಮೈಸೂರು ಹೆಬ್ಬಾಳು ಕೈಗಾರಿಕಾ ಪ್ರದೇಶದ ಗಂಭೀರ ಸಮಸ್ಯೆ

ಮಾನ್ಯರೆ,



ಹಲವು ಕೈಗಾರಿಕೆಗಳು ಮೈಸೂರನ್ನು ತೊರೆದು ಹೋಗುತ್ತಿವೆ ಇಲ್ಲ ಬಂದ್ ಆಗುತ್ತಿವೆ. ಪರಿಸ್ಥಿತಿ ಹೀಗಿರುವಾಗ ಹೊಸ ಕೈಗಾರಿಕೆಗಳು ಮೈಸೂರಿಗೆ ಏಕೆ ಬರಬೇಕು?

ಮೈಸೂರು ಹೆಬ್ಬಾಳು ಕೈಗಾರಿಕಾ ಪ್ರದೇಶ ಈಗ ನಿಧಾನವಾಗಿ ಒಂದು ಹಳ್ಳಿಯಂತಾಗಿದೆ. ಕೈಗಾರಿಕಾ ಪ್ರದೇಶದಲ್ಲಿ ಎತ್ತಿನ ಗಾಡಿಗಳ ಸಂಚಾರವೂ ದುಸ್ತರವಾಗಿದೆ. ರಸ್ತೆಗಳು ಸರಿಯಾದ ನಿರ್ವಹಣೆ ಇಲ್ಲದ ಕಾರಣ ಅಪಘಾತ ವಲಯಗಳಾಗಿವೆ. ಈ ದುಸ್ಥಿತಿಯ ಮೂಲ ಸೌಕರ್ಯಗಳಿಂದಾಗಿ ಇನ್ನು ಹಲವು ಕೈಗಾರಿಕೆಗಳು ಮೈಸೂರನ್ನು ಬಿಡುವ ನಿರ್ಧಾರ ಕೈಗೊಂಡರೆ ಅಚ್ಚರಿ ಇಲ್ಲ.

ವರ್ಷಗಳಿಂದ ಈ ರಸ್ತೆಗಳ ಸ್ಥಿತಿಯನ್ನು ನಾನು ನೋಡುತ್ತಿದ್ದೇನೆ. ಕೈಗಾರಿಕೋದ್ಯಮಿಗಳು, ಉದ್ಯೋಗಿಗಳು ಮಾತ್ರವಲ್ಲ ಜನರು ಈ ಸಮಸ್ಯೆಯಿಂದ ತೀವ್ರ ಬೇಸತ್ತಿದ್ದಾರೆ. ಕೆಲವು ರಸ್ತೆಗಳ ಸ್ಥಿತಿಯಂತೂ ಅತ್ಯಂತ ಕಳಪೆಯಾಗಿದೆ: **ಜೆಕೆ ಟೈರ್ ಮತ್ತು ಇಂಡಸ್ಟ್ರೀಸ್ ಹತ್ತಿರದ ರೈಲ್ವೆ ಕ್ರಾಸಿಂಗ್‌ನಿಂದ ರಿಂಗ್ ರಸ್ತೆ, ಟ್ರಕ್ ರೇಡಿಯಲ್ ಪ್ಲಾಂಟ್–2 ರಸ್ತೆ, ಪಟಾಕಿ ಅಂಗಡಿಗಳು ಇರುವ RPG ಟೆಲಿಕೇಬಲ್ ರಸ್ತೆ–** ಈ ಎಲ್ಲಾ ರಸ್ತೆಗಳಲ್ಲಿ ತಕ್ಷಣ ದುರಸ್ತಿ ಹಾಗೂ ಅಭಿವೃದ್ಧಿ ಅವಶ್ಯವಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಮೈಸೂರಿನ ಕೈಗಾರಿಕಾ ಪ್ರದೇಶದ ಸಮರ್ಪಕ ಅಭಿವೃದ್ಧಿಗೆ ಗಮನ ಹರಿಸಿ, ಇರುವ ಕೈಗಾರಿಕೆಗಳನ್ನು ಉಳಿಸಿ ಮತ್ತು ಹೊಸ ಕೈಗಾರಿಕೆಗಳು ಬರುವಂತೆ ಪರಿಸರವನ್ನು ನಿರ್ಮಿಸಿ. ಮೈಸೂರು ಸ್ವಚ್ಛ, ಸುರಕ್ಷಿತ ಮತ್ತು ಅಭಿವೃದ್ಧಿ ಹೊಂದಿದ ಕೈಗಾರಿಕಾ ನಗರವಾಗಬೇಕಾಗಿದೆ.

–ಇಷ್ತಿಯಾಕ್ ಅಹ್ಮದ್, ಮೈಸೂರು.

ಕನ್ನಡ ಭವನ ನಿರ್ಮಾಣ ಮಾಡಿ

ಮಾನ್ಯರೇ

ಪ್ರತಿ ವರ್ಷ ನವೆಂಬರ್ ಮಾಹೆ ಬಂದಾಗ ಎಲ್ಲಾ ಸಂಘ ಸಂಸ್ಥೆಗಳು, ರಾಜಕಾರಣಿಗಳು ಕನ್ನಡ ಅಭಿಮಾನದ ಬಗ್ಗೆ ಉದ್ದುದ್ದ ಭಾಷಣ ಮಾಡುತ್ತಾರೆ. ಆದರೆ, ಇದುವರೆಗೆ ಪ್ರತಿ ಜಿಲ್ಲೆಯಲ್ಲಿ, ತಾಲೂಕುಗಳಲ್ಲಿ ಸಮುದಾಯಕ್ಕೆ ಸೀಮಿತವಾದ ಭವನಗಳನ್ನು ನಿರ್ಮಾಣ ಮಾಡಿ ಆಯಾಯ ಸಮುದಾಯದ ಮತಗಳನ್ನು ಸೆಳೆಯುವ ಹುನ್ನಾರ ಮಾಡುತಿದ್ದಾರೆ. ಆದರೆ ಇದುವರೆಗೆ ಎಷ್ಟು ಕನ್ನಡ ಭವನ ನಿರ್ಮಾಣ ಮಾಡಿದ್ದಾರೆ? ಎಷ್ಟೋ ಕನ್ನಡ ಶಾಲೆಗಳ ಕಟ್ಟಡಗಳು ಶಿಥಿಲಗೊಂಡಿವೆ. ಕನ್ನಡ ಶಾಲೆಯಲ್ಲಿ ಮಕ್ಕಳು ತುಂಬಾ ಭಯಭೀತಿಯಿಂದ ಪಾಠಗಳನ್ನು ಕೇಳುವಂತಾಗಿದೆ. ಕನ್ನಡ ಕಲಿಸಿ ಕನ್ನಡ ಶಾಲೆಗೆ ಸೇರಿಸಿ ಎಂದು ಗಂಟೆಗಟ್ಟಲೆ ಭಾಷಣ ಮಾಡುವ ರಾಜಕಾರಣಿಗಳು ಈ ನೈಜ ಪರಿಸ್ಥಿತಿಯ ಬಗ್ಗೆ ಅವಲೋಕನ ಮಾಡುತ್ತಿಲ್ಲ ಏಕೆ? ಇನ್ನಾದರೂ ಕನ್ನಡಿಗರು ಜಾಗರೂಕರಾಗಿ ಕನ್ನಡವನ್ನು ಉಳಿಸಿ, ಬೆಳೆಸಬೇಕಾಗಿದೆ.

–ಎ.ವಿ.ರಾಜಶೇಖರ, ಹೆಬ್ಬಾಳ 2ನೇ ಹಂತ, ಮೈಸೂರು

ಎಲ್ಲಿ ನೋಡಿದರೂ ಸಿಎಂ, ಡಿಸಿಎಂ ಬಗ್ಗೆ ವ್ಯಾಪಕ ಚರ್ಚೆ

ಮಾನ್ಯರೆ,

ಇಂದು ಯಾವುದೇ ಹೋಟೆಲ್ ಮುಂದೆ, ಬಸ್ ಸ್ಟ್ಯಾಂಡ್‌ಗಳಲ್ಲಿ, ಟೀ ಅಂಗಡಿಗಳ ಹತ್ತಿರ, ದೇವಸ್ಥಾನದ ಮುಂದೆ ಒಟ್ಟಾರೆ ಸಾರ್ವಜನಿಕ ಸ್ಥಳಗಳಲ್ಲಿ ಮಾತ್ರವಲ್ಲ, ಕೆಲವು ಸರ್ಕಾರಿ ಕಚೇರಿಗಳಲ್ಲೂ ಚರ್ಚೆಯಾಗುತ್ತಿರುವ ರಾಜ್ಯ ರಾಜಕಾರಣ ಸುದ್ದಿ ಎಂದರೆ, ಡಿಸಿಎಂ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗುತ್ತಾರಾ? ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಷ್ಟು ಸುಲಭವಾಗಿ ಅಧಿಕಾರವನ್ನು ಬಿಟ್ಟು ಕೊಡುತ್ತಾರಾ? ಎಂಬ ಚರ್ಚೆಗಳು ಸಾಮಾನ್ಯ ಎಂಬಂತಾಗಿದೆ. ಕೆಲವು ಖಾಸಗಿ ಚಾನಲ್‌ಗಳು ಸಹ ಮುಖ್ಯ ಸುದ್ದಿಯನ್ನಾಗಿ ಇದನ್ನೇ ಹೇಳುತ್ತಿವೆ. ಕಾಂಗ್ರೆಸ್ ಹೈಕಮಾಂಡ್ ಸಹ ಈ ಬಗ್ಗೆ ಸ್ಪಷ್ಟ ನಿರ್ಧಾರ ತೆಗೆದುಕೊಳ್ಳುವ ಧೈರ್ಯವನ್ನು ತೋರಿಸುತ್ತಿಲ್ಲ. ಹೈಕಮಾಂಡ್‌ಗೆ ಬೀಸುವ ದೊಣ್ಣೆಯಿಂದ ತಪ್ಪಿಸಿಕೊಂಡರೆ ಸಾಕು ಎನ್ನುವಂತಾಗಿದೆ. ಇನ್ನು ವಿರೋಧ ಪಕ್ಷದ ನಾಯಕರಂತೂ ಸದ್ಯದಲ್ಲೇ ರಾಜ್ಯ ರಾಜಕೀಯದಲ್ಲಿ ಕ್ರಾಂತಿ ಆಗುತ್ತದೆ. ಮುಖ್ಯಮಂತ್ರಿ ಬದಲಾವಣೆಯಂತೂ ನಿಶ್ಚಿತ ಎನ್ನುವಂತೆ ಮಾತನಾಡುತ್ತಾರೆ. ಈ ಚರ್ಚೆ ನಡುವೆ ಯಾವ ರಾಜಕೀಯ ಪಕ್ಷದವರೂ ಸಾರ್ವಜನಿಕರ ಸಮಸ್ಯೆಗೆ ತಲೆಕೆಡಿಸಿಕೊಂಡಂತೆ ಕಾಣುತ್ತಿಲ್ಲ. ಇದು ಇನ್ನು ಎಷ್ಟು ದಿನ ಮುಂದುವರೆಯಬೇಕು? ಇದು ಒಂದು ರೀತಿಯಲ್ಲಿ ಟಿವಿ ಧಾರಾವಾಹಿಯಂತೆ ಮುಂದುವರೆಯುತ್ತಿದೆ. ಕಾಂಗ್ರೆಸ್ ಹೈಕಮಾಂಡ್ ಅಧಿಕಾರ ಹಸ್ತಾಂತರಕ್ಕೆ ಸಂಬಂಧಿಸಿದಂತೆ ಹೇಗಾದರೂ ತೆರೆ ಎಳೆಯಬೇಕಿದೆ.

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು


ಎಲ್ಲಾ ನಗರ ಪಾಲಿಕೆಗಳಿಗೆ ಉಪ ಲೋಕಾಯುಕ್ತ ಅವಶ್ಯ

ಮಾನ್ಯರೆ,

ರಾಜ್ಯದ ನಗರ ಪಾಲಿಕೆಗಳ ಕೆಲಸದ ಬಗ್ಗೆ ಇತ್ತೀಚಿನ ವರದಿಗಳು ಆತಂಕಕಾರಿ. ಜನರು ಸಲ್ಲಿಸುವ ಮನವಿಗಳಲ್ಲಿ ಸರಿ ಸುಮಾರು 40% ಅರ್ಜಿಗಳು ಸಮಯಕ್ಕೆ ಸರಿಯಾಗಿ ವಿಲೇವಾರಿ ಆಗುತ್ತಿಲ್ಲ. ಮತ್ತು ಶೇ.60 ಕಚೇರಿ ಸಂಬಂಧಿತ ದೂರುಗಳು ಕ್ರಮ ಕೈಗೊಳ್ಳದೆ ಹಾಗೇ ಉಳಿಯುತ್ತಿವೆ ಎಂದು ವರದಿಯಾಗಿದೆ. ಇದಕ್ಕೆ ಮೂಲ ಕಾರಣ, ಮೇಲ್ವಿಚಾರಣೆ ಕೊರತೆ ಮತ್ತು ಪಾರದರ್ಶಕತೆಯ ಅಭಾವ. ಉಪ ಲೋಕಾಯುಕ್ತರನ್ನು ಪ್ರತಿಯೊಂದು ನಗರ ಪಾಲಿಕೆಗೆ ಉಸ್ತುವಾರಿಯಾಗಿ ನೇಮಿಸಿದರೆ ಅಧಿಕಾರಿಗಳ ಹೊಣೆಗಾರಿಕೆ ಹೆಚ್ಚುತ್ತದೆ. ಉದಾಹರಣೆಗೆ, ಮೈಸೂರು ಮತ್ತು ಹುಬ್ಬಳ್ಳಿ ನಗರಗಳಲ್ಲಿ ಉಪ ಲೋಕಾಯುಕ್ತರ ತಾತ್ಕಾಲಿಕ ಪರಿಶೀಲನೆ ನಡೆದಾಗ 60% ಕೆಲಸಗಳಲ್ಲಿ ವಿಳಂಬ ಕಂಡುಬಂದಿತ್ತು. ಇಂತಹ ಪರಿಶೀಲನೆಗಳು ಕೆಲಸದ ವೇಗ ಹೆಚ್ಚಿಸಲು ಸಹಾಯ ಮಾಡುತ್ತವೆ. ಇನ್ನೂ ಶಾಸನಸಭೆಯ ಮಾಹಿತಿಯ ಪ್ರಕಾರ, ನಗರ ಪಾಲಿಕೆಗಳು ವರ್ಷಕ್ಕೆ 2,500 ಕೋಟಿಗಿಂತ ಹೆಚ್ಚಿನ ಹಣ ಖರ್ಚು ಮಾಡುತ್ತವೆ. ಇಷ್ಟು ದೊಡ್ಡ ಮೊತ್ತ ಜನರ ಅಭಿವೃದ್ಧಿಗೆ ನೇರವಾಗಿ ತಲುಪಬೇಕಾದರೆ ಬಲವಾದ ನಿಗಾ ವ್ಯವಸ್ಥೆ ಅಗತ್ಯ. ಉಪ ಲೋಕಾಯುಕ್ತರು ದೂರುಗಳ ತ್ವರಿತ ಪರಿಹಾರ, ಅಧಿಕಾರಿಗಳ ಜವಾಬ್ದಾರಿ, ಮತ್ತು ಪಾರದರ್ಶಕತೆ ಎಲ್ಲವನ್ನೂ ಸುಧಾರಿಸಬಹುದು. ಆದ್ದರಿಂದ, ರಾಜ್ಯ ಸರ್ಕಾರವು ಎಲ್ಲಾ ನಗರ ಪಾಲಿಕೆಗಳಲ್ಲಿ ಶೀಘ್ರವಾಗಿ ಉಪ ಲೋಕಾಯುಕ್ತರ ನೇಮಕ ಮಾಡುವುದು ಅತ್ಯಂತ ಔಚಿತ್ಯಪೂರ್ಣ.

–ಡಾ. ಎಚ್.ಕೆ. ವಿಜಯಕುಮಾರ, ಮೈಸೂರು.

ಚಿಂತನೆ



ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ: 94482 08746/ 97421 79000

ಆಯಸ್ಸಿಗೆ ತಕ್ಕಂತೆ ಅವತಾರ...!



> “70–80 ವರ್ಷ ಬದುಕುತ್ತೇವೆ ಎಂದರೆ ನಮ್ಮ ನಡವಳಿಕೆಯೂ ಬದಲಾಗುತ್ತಾ ಹೋಗಬೇಕು ಎಂಬುದು ಅಪೇಕ್ಷಣೀಯ. ನಾವು ಕಳೆದ ಹತ್ತು ವರ್ಷಗಳ ಹಿಂದೆ ಹೇಗಿದ್ದೆವೋ ಹಾಗೆ ಈಗ ಇರಲಾಗುವುದಿಲ್ಲ. ನಮ್ಮಲ್ಲಿ ಅನೇಕರು ಖಾಯಿಲೆ ಬಿದ್ದಾಗ ಹೇಳುವುದು, ನನಗೆ ಈ ಹಿಂದೆ ಸಣ್ಣಪುಟ್ಟ ಕಾರಣಕ್ಕೆ ಖಾಯಿಲೆಗಳು ಬರುತ್ತಿರಲಿಲ್ಲ. ಆದರೆ ಈಗೇಕೋ ಹೀಗಾಗುತ್ತಿದೆ ಎನ್ನುತ್ತಾರೆ. ಆದರೆ, ನನಗೆ ಈಗ ವಯಸ್ಸಾಗುತ್ತಿದೆ ಎಂಬುದನ್ನು ಅವರು ಗಮನಿಸುವುದಿಲ್ಲ.

ಮನುಷ್ಯ ಹುಟ್ಟಿದ ಮೇಲೆ ಸಾಯಲೇಬೇಕು, ಈ ಜಗತ್ತಿನಲ್ಲಿ ಯಾರೂ ಶಾಶ್ವತವಲ್ಲ ಎಂಬುದು ನಮಗೆಲ್ಲರಿಗೂ ತಿಳಿದಿದೆ. ಆದರೆ, ನಮ್ಮ ಆಯಸ್ಸು ಎಷ್ಟು ಎಂಬುದು ನಿಖರವಾಗಿ ನಮಗೆ ತಿಳಿದಿಲ್ಲ. ಅದು ಒಂದು ರೀತಿಯ ಪ್ರಕೃತಿಯ ವಿಸ್ಮಯ. ನಾವು ಶಾಶ್ವತವಾಗಿರಲಂತೂ ಸಾಧ್ಯವಿಲ್ಲ ಎಂಬುದು ನಮಗೆಲ್ಲಾ ತಿಳಿದಿದೆಯಾದರೂ ನಾವು ಶಾಶ್ವತವಾಗಿರುತ್ತೇವೆ ಎಂಬಂತೆ ನಮ್ಮ ವರ್ತನೆ ಇರುತ್ತದೆ.

ಭಾರತದ ಜನರ ಸರಾಸರಿ ಆಯಸ್ಸು 70.82 ವರ್ಷಗಳು ಎಂದು ಒಂದು ಸಮೀಕ್ಷೆ ಹೇಳುತ್ತದೆ. ಇದು ಗಂಡಸರ ಆಯಸ್ಸು. ಹೆಂಗಸರು ಗಂಡಸರಿಗಿಂತಲೂ ಹೆಚ್ಚು ಕಾಲ ಬದುಕುತ್ತಾರೆ. ಅವರ ಸರಾಸರಿ ಆಯಸ್ಸು 73 ವರ್ಷ ಎಂದು ಈ ಸಮೀಕ್ಷೆ ಹೇಳುತ್ತದೆ. ಕೆಲವೆಡೆ ಆರೋಗ್ಯ ಸೇವೆ ಉತ್ತಮವಾಗಿರುವ ಕಡೆ ಈ ಪ್ರಮಾಣ ಮೂರ್‍ನಾಲ್ಕು ವರ್ಷ ಜಾಸ್ತಿ ಇರಬಹುದು ಅಷ್ಟೇ ಎಂದು ಅದು ತಿಳಿಸುತ್ತದೆ. ಆದರೆ ಮನುಷ್ಯನ ಗರಿಷ್ಠ ಆಯಸ್ಸು 110–120 ವರ್ಷಗಳು. ಆದರೆ ಈ ರೀತಿ ನೂರು ವರ್ಷಕ್ಕಿಂತ ಹೆಚ್ಚಿನ ಅವಧಿಯವರೆಗೆ ಬದುಕುವವರು ಬೆರಳೆಣಿಕೆಯಷ್ಟು. ನಾವು ಕಂಡ ಧೀರ್ಘಾಯುಷ್ಯದವರು ಎಂದರೆ ಪೂಜ್ಯ ಶಿವಕುಮಾರ ಮಹಾಸ್ವಾಮಿಗಳು. ಅವರು 111 ವರ್ಷ ಬದುಕಿದ್ದರು. ಹಾಗೆಯೇ ಇತ್ತೀಚೆಗೆ ನಿಧನರಾದ ಸಾಲುಮರದ ತಿಮ್ಮಕ್ಕ ತಮ್ಮ 114 ನೆಯ ವಯಸ್ಸಿನಲ್ಲಿ ನಿಧನರಾದರು. ನಮ್ಮ ಪತ್ರಿಕೆಗಳಲ್ಲಿ ಶತಾಯುಷಿಗಳು ಮೃತರಾದಾಗ ಅದನ್ನು ವಿಶೇಷವಾಗಿ ಪ್ರಕಟಿಸಲಾಗುತ್ತದೆ. ಇದರ ಅರ್ಥ ಅಷ್ಟೊಂದು ವರ್ಷ, ಅಂದರೆ ನೂರಕ್ಕೂ ಹೆಚ್ಚು ವರ್ಷ ಬದುಕುವವರು ಬಹಳ ಕಡಿಮೆ. ಪತ್ರಿಕೆಗಳಲ್ಲಿ ಬರುವ ಸಾವಿನ ಸುದ್ದಿಗಳಲ್ಲಿ 70–80 ವರ್ಷದವರ ಮರಣದ ಬಗ್ಗೆಯೇ ಹೆಚ್ಚಾಗಿರುತ್ತದೆ.

ಇದಕ್ಕೇ ತಿಳಿದವರು ಹೇಳುವುದು ನಾವು ಆಚರಿಸಿಕೊಳ್ಳುವ ಹುಟ್ಟುಹಬ್ಬದ ಸಮಯದಲ್ಲಿ ನನ್ನ ಆಯಸ್ಸು ಒಂದು ವರ್ಷ ಕಡಿಮೆಯಾಯಿತು ಅಥವಾ ಸಾವಿನೆಡೆಗೆ ನಮ್ಮ ಪಯಣ ಇನ್ನು ಹತ್ತಿರವಾಯ್ತು ಎಂದು ಭಾವಿಸಬೇಕು ಎಂದು. ಇದರ ಅರ್ಥ ಹೆದರಿಸುವುದಕ್ಕಲ್ಲ. ಬದಲಾಗಿ ಸಾವು ನಮ್ಮ ಭುಜದ ಮೇಲೆಯೇ ಇರುವಾಗ ನಾವು ಹೆಚ್ಚು ವರ್ಷ ಬದುಕುತ್ತೇವೆ ಎಂಬ ಅಹಂ ಕಡಿಮೆ ಮಾಡಿಕೊಂಡು, ಉಳಿದ ಸಮಯದಲ್ಲಿ ಸಮಾಜಮುಖಿಯಾದ ಜೀವನ ನಡೆಸಬೇಕು ಎಂಬುದೇ ಆಗಿದೆ.

ನಾವು ಹೀಗೆ 70–80 ವರ್ಷ ಬದುಕುತ್ತೇವೆ ಎಂದರೆ ನಮ್ಮ ನಡವಳಿಕೆಯೂ ಬದಲಾಗುತ್ತಾ ಹೋಗಬೇಕು ಎಂಬುದು ಅಪೇಕ್ಷಣೀಯ. ನಾವು ಕಳೆದ ಹತ್ತು ವರ್ಷಗಳ ಹಿಂದೆ ಹೇಗಿದ್ದವೋ ಹಾಗೆ ಈಗ ಇರಲಾಗುವುದಿಲ್ಲ. ನಮ್ಮಲ್ಲಿ ಅನೇಕರು ಖಾಯಿಲೆ ಬಿದ್ದಾಗ ಹೇಳುವುದು, ನನಗೆ ಈ ಹಿಂದೆ ಸಣ್ಣಪುಟ್ಟ ಕಾರಣಕ್ಕೆ ಖಾಯಿಲೆಗಳು ಬರುತ್ತಿರಲಿಲ್ಲ. ಆದರೆ ಈಗೇಕೋ ಹೀಗಾಗುತ್ತಿದೆ ಎನ್ನುತ್ತಾರೆ. ಆದರೆ, ನನಗೆ ಈಗ ವಯಸ್ಸಾಗುತ್ತಿದೆ ಎಂಬುದನ್ನು ಅವರು ಗಮನಿಸುವುದಿಲ್ಲ.

ನಮ್ಮ ಆಯಸ್ಸನ್ನು ಬೇರೆಬೇರೆ ರೀತಿಯಾಗಿ ನೋಡಬೇಕೆಂದು ಕೆಲವು ಕಡೆ ತಿಳಿಸಲಾಗಿದೆ. ಇದನ್ನು ಇಪ್ಪತ್ತು ವರ್ಷಗಳ ಅವಧಿಯಲ್ಲಿ ಪರಿಗಣಿಸಿದಾಗ ಮೊದಲ ಇಪ್ಪತ್ತು ವರ್ಷ ಬಾಲ್ಯ, ಓದುವುದರ ಕಡೆಗೆ ಇರುತ್ತದೆ. ನಂತರದ ಇಪ್ಪತ್ತು ವರ್ಷ ನೌಕರಿ ಗಿಟ್ಟಿಸಿಕೊಳ್ಳುವುದು (ಅಥವಾ ಸ್ವಂತ ಉದ್ಯೋಗ ಮಾಡುವುದು), ಮದುವೆಯಾಗುವುದು, ಮಕ್ಕಳನ್ನು ಪಡೆಯುವುದು ಇದಕ್ಕೆ ಸೀಮಿತವಾಗಬೇಕು. ನಂತರದ ವರ್ಷಗಳಲ್ಲಿ ಮಕ್ಕಳ ವಿದ್ಯಾಭ್ಯಾಸ ಮುಗಿಯಬೇಕು, ಮಕ್ಕಳ ಮದುವೆ, ಮನೆ ಕಟ್ಟುವುದು, ಅದಕ್ಕಾಗಿ ಮಾಡಿದ ಸಾಲ ತೀರಿಸುವುದು, ಮುಂದೆ ಬರುವ ನಿವೃತ್ತಿಯ ಅವಧಿಗಾಗಿ ಒಂದಷ್ಟು ಭದ್ರತೆ ಮಾಡಿಕೊಳ್ಳುವುದು ಇತ್ಯಾದಿ ಮುಗಿದಿರಬೇಕು. ನಂತರ ನಿವೃತ್ತಿಯ ಜೀವನ. ಇದರಲ್ಲಿ ಹಳೆಯ ಸ್ನೇಹಿತರೊಡನೆ ಸ್ನೇಹ, ವಿಹಾರ, ಸತ್ಸಂಗ, ಸಮಾಜಮುಖಿ ಸಂಘಟನೆಗಳ ಜೊತೆಗೆ ಕೆಲಸ ಮಾಡುವುದು ಸೇರುತ್ತದೆ. ನಂತರದ ಇಪ್ಪತ್ತು ವರ್ಷ ಆ ದೇವರು ನೀಡುವ ವಯಸ್ಸಿನ ಬೋನಸ್ ಎಂದು ಭಾವಿಸಿ ಶಾಂತವಾದ, ಉದ್ವಿಗ್ನ ರಹಿತವಾದ ಜೀವನ ಅಳವಡಿಸಿಕೊಳ್ಳಬೇಕು ಎಂದು ಹೇಳಲಾಗುತ್ತದೆ.

ಮತ್ತೊಂದು ಸೂತ್ರ ಎಂದರೆ ನಾವು ನಮ್ಮ ವಯೋಮಾನಕ್ಕೆ ತಕ್ಕುದಾದ ನಡವಳಿಕೆ ನಮ್ಮದಾಗಿಸಿಕೊಳ್ಳಬೇಕು. ನಾವು ಜೀವನದ ವಿವಿಧ ಹಂತಗಳನ್ನು ದಾಟುತ್ತೇವೆ. ಅದು ಬಾಲ್ಯ, ಕಿಶೋರ, ಯುವಕ, ಪ್ರೌಢ, ವೃದ್ಧ ಹೀಗೆ. ಇದಕ್ಕೂ ಮೇಲಿನ ಇಪ್ಪತ್ತು ವರ್ಷಗಳ ಸೂತ್ರ ಅಳವಡಿಸಿಕೊಳ್ಳಬಹುದು. ಮಕ್ಕಳಾಗಿದ್ದಾಗ ಆಟ ಹಾಗೂ ಕುತೂಹಲ ಜೀವನವಾಗಿರುತ್ತದೆ. ನಂತರ ಸಾಮಾಜಿಕವಾಗಿ ಹೇಗೆ ಬದುಕಬೇಕು ಎಂಬುದನ್ನು ಅರ್ಥ ಮಾಡಿಕೊಳ್ಳಬೇಕು. ಕ್ರಮೇಣ ಸ್ವತಂತ್ರವಾಗಿ ತೀರ್ಮಾನ ತೆಗೆದುಕೊಳ್ಳುವುದನ್ನು ಅಭ್ಯಾಸ ಮಾಡಿಕೊಳ್ಳಬೇಕು. ಯೌವನಾವಸ್ಥೆಯಲ್ಲಿ ಉದ್ಯೋಗ, ಸಂಬಂಧಗಳ ಬೆಳವಣಿಗೆ ಆಗಬೇಕು, ವೃದ್ಧಾಪ್ಯದಲ್ಲಿ ನಮ್ಮ ಅನುಭವಗಳನ್ನು ಮಕ್ಕಳಲ್ಲಿ, ಬಂಧುಗಳಲ್ಲಿ, ಸ್ನೇಹಿತರೊಡನೆ ಹಂಚಿಕೊಳ್ಳಬೇಕು. ಆಗ ಮುಖ್ಯವಾಗಿ ಆರೋಗ್ಯದ ಕಡೆಗೆ ಗಮನ ಕೊಡಬೇಕು. ಏಕೆಂದರೆ ದೇಹ ಮೊದಲಿನ ಹಾಗೆ ಸ್ಪಂದಿಸುವುದಿಲ್ಲ. ಇದರಲ್ಲಿ ಪ್ರತಿ ವಯಸ್ಸಿಗೂ ಜೀವನ ಬೇರೆಬೇರೆ ರೀತಿಯೇ ಆಗಿರುತ್ತದೆ. ನಮ್ಮ ಅನುಭವ ಜಾಸ್ತಿಯಾದಂತೆ ನಮ್ಮ ನಡವಳಿಕೆಯೂ ಬದಲಾಗುತ್ತಾ ಹೋಗಬೇಕು. ಯೌವನ ಅಥವಾ ವೃದ್ಧಾಪ್ಯದಲ್ಲಿ ಮಕ್ಕಳಂತೆ ನಮ್ಮ ವರ್ತನೆ ಇದ್ದರೆ ಅಪಹಾಸ್ಯಕ್ಕೆ ಗುರಿಯಾಗಬೇಕಾಗುತ್ತದೆ. ಅದನ್ನು ಅಪ್ರಬುದ್ಧ ನಡವಳಿಕೆ ಎಂದು ಪರಿಗಣಿಸಲಾಗುತ್ತದೆ.

ಮತ್ತೊಂದು ಅನಿಸಿಕೆ ಎಂದರೆ ನಾವು 60, 70, 80, 90 ಹಾಗೂ 100 ವರ್ಷಗಳನ್ನು ವಿಶೇಷವಾಗಿ ನೆನಪಿಸಿಕೊಳ್ಳುತ್ತೇವೆ. ನಮ್ಮ ಶಾಸ್ತ್ರಗಳೂ ಇದನ್ನೇ ಹೇಳುತ್ತವೆ. ಈ ವರ್ಷಗಳಿಗೆ ತಲುಪಿದಾಗ ನಾವು ಶಾಂತಿ ಮಾಡಿಕೊಳ್ಳಬೇಕು ಅಥವಾ ಮಕ್ಕಳು ನಮ್ಮ ಶಾಂತಿ ಪ್ರಕ್ರಿಯೆಯನ್ನು ಮಾಡಬೇಕು ಎಂದು ಹೇಳಲಾಗುತ್ತದೆ. 60 ವರ್ಷ ತುಂಬಿದಾಗ ಸರ್ಕಾರಿ ನೌಕರಿಯಿಂದ ನಿವೃತ್ತಿಯಾಗುತ್ತದೆ. (ಇತರೆಡೆಗಳಲ್ಲಿಯೂ ಹೆಚ್ಚೂ ಕಡಿಮೆ ಇದೇ ರೀತಿ ಇರುತ್ತದೆ). ಈ ವಯಸ್ಸಿನಲ್ಲಿ ಒಂದು ಷಷ್ಟ್ಯಬ್ದಿ ಶಾಂತಿಯಾಗಬೇಕು ಎಂದು ಹೇಳಲಾಗುತ್ತದೆ. ಈ 60 ವಯೋಮಾನದಲ್ಲಿ ನಮ್ಮ ನಡವಳಿಕೆ ಹೇಗಿರಬೇಕು ಎಂದರೆ ಈಗ ನಾನು ಎಷ್ಟು ಸಂಪಾದಿಸುತ್ತೇನೆ ಎಂಬುದು ಮುಖ್ಯವಾದ ವಿಚಾರವಾಗುವುದಿಲ್ಲ. ಈ 60 ರ ವಯಸ್ಸನ್ನು ನಿಜವಾಗಿ ವೃದ್ಧಾಪ್ಯ ಎಂದು ಹೇಳಲಾಗುವುದಿಲ್ಲವಾದರೂ, ಅಂದಿನಿಂದ ವೃದ್ಧಾಪ್ಯ ಆರಂಭವಾಗುತ್ತದೆ. ಇಲ್ಲಿ ನಾವು ಹೆಚ್ಚು ತಿಳುವಳಿಕೆ ಉಳ್ಳವರಂತೆ ನಡೆದುಕೊಳ್ಳಬೇಕು.

70ನೇ ವಯಸ್ಸಿನಲ್ಲಿ ಮಾಡಿಕೊಳ್ಳಬೇಕಾದ ಶಾಂತಿ ಭೀಮರಥ ಶಾಂತಿ. ಈ ಹಂತದಲ್ಲಿ ಶಾಂತಿ ಹಾಗೂ ನೆಮ್ಮದಿ ನಮಗೆ ಮುಖ್ಯ ವಿಷಯವಾಗಿರುತ್ತದೆ. ಈ ಹಂತದಲ್ಲಿ ನಾವು ಯಾವುದಕ್ಕೂ ತಕ್ಷಣದ ಪ್ರತಿಕ್ರಿಯೆ ನೀಡಬಾರದು. ಯಾವುದೇ ವಾದಗಳನ್ನು ಮಾಡಲು ಹೋಗಬಾರದು. ಇದನ್ನು ನೆನಪಿಸಲು ಈ ಶಾಂತಿಗೆ ಸೂಚಿಸಲಾಗುತ್ತದೆ.

80 ವರ್ಷದ ಶಾಂತಿ 'ಅಷ್ಟ್ಯಬ್ದಿ ಶಾಂತಿ'. ಈ ಹಂತದಲ್ಲಿ ನಮ್ಮ ದೇಹ ಹಾಗೂ ಮನಸ್ಸು ಮತ್ತಷ್ಟು ಮಾಗಿರುತ್ತದೆ. ನಾವು ಬದುಕುತ್ತಿರುವುದು ಔಷಧಿಗಳಿಂದ ಎಂಬ ಪರಿಸ್ಥಿತಿ ಉಂಟಾಗುತ್ತದೆ. ನಮ್ಮ ಬಾಯಿ ಚಪಲ ಗೌಣವಾಗುತ್ತದೆ, ತಿಂದಿದ್ದು ಸರಿಯಾಗಿ ಅರಗುವುದಿಲ್ಲವಾದ್ದರಿಂದ ಹೆಚ್ಚು ಆಹಾರ ಬೇಡವಾಗುತ್ತದೆ. ನಾವು ಬದುಕಿರುವುದೇ ನಮ್ಮ ಅದೃಷ್ಟ ಎಂದು ಮನೆಯವರು ಭಾವಿಸುವಂತೆ ಆಗಬೇಕು.

ಇನ್ನು ಕೆಲವರಿಗೆ 83 ವರ್ಷದ ವಯಸ್ಸಿನಲ್ಲಿ ಸಹಸ್ರ ಪೂರ್ಣ ಚಂದ್ರದರ್ಶನ ಶಾಂತಿ ನಡೆಸಲಾಗುತ್ತದೆ. ಈ 82–83 ವರ್ಷಗಳಲ್ಲಿ ಒಂದು ಸಾವಿರ ಪೂರ್ಣಿಮೆಗಳನ್ನು ನಾವು ಕಂಡಿರುತ್ತೇವೆ. ಇದಕ್ಕಾಗಿಯೂ ಒಂದು ಶಾಂತಿ ನಡೆಯುತ್ತದೆ. ಆ ಸಮಯದಲ್ಲಿ ಕಿರಿಯರು ನಿಮ್ಮಂತೆಯೇ ನಮಗೂ ಆಯಸ್ಸು ವೃದ್ಧಿಸಲಿ, ನಿಮ್ಮಂತೆ ಆರೋಗ್ಯದಾಯಕವಾಗಿರುವಂತೆ ಹರಸಿ ಎಂದು ಕಿರಿಯರು ಅವರಿಗೆ ನಮಸ್ಕರಿಸುತ್ತಾರೆ.

90 ವರ್ಷವಾದಾಗ 'ನವಥಿ' ಎಂಬ ಶಾಂತಿ ಪ್ರಕ್ರಿಯೆ ಇದೆ ಎಂದು ಧರ್ಮಶಾಸ್ತ್ರಗಳು ಹೇಳುತ್ತವೆ. ಈ ಸಮಯದಲ್ಲಿ ನಮ್ಮ ನಡವಳಿಕೆ ಬಹಳ ಪಕ್ವವಾಗಬೇಕು. ನಾನು ಎಲ್ಲವನ್ನೂ ಬದಲಿಸಬಲ್ಲೆ ಎಂಬ ಅಹಂ ಹೋಗಿ, ಈ ಹಂತದಲ್ಲಿ ನಾನು ಯಾರನ್ನೂ ತಿದ್ದಲಾಗುವುದಿಲ್ಲ. ನಾವು ಯಾವುದನ್ನೂ ತೀವ್ರವಾಗಿ, ವೈಯಕ್ತಿಕವಾಗಿ ಭಾವಿಸುವಂತಿಲ್ಲ. ನನ್ನಿಂದ ಈ ಜಗತ್ತು ಬದಲಿಸಲು ಸಾಧ್ಯವಿಲ್ಲ. ಅಂತಹ ಪ್ರಯತ್ನ ಮಾಡಬಾರದು ಎಂಬ ಅರಿವು ಮೂಡಬೇಕು. ನಾವು ಅತ್ಯಂತ ಸಾತ್ವಿಕ ಜೀವನ ನಡೆಸುವಂತೆ ಆಗಬೇಕು.

ಶತಾಯುಷಿಯಾದಾಗ 'ಶತನಮನಂ' ಎಂಬ ಆಚರಣೆ ಮಾಡಬೇಕು. ಈ ನೂರು ವರ್ಷ ಎಂಬುದು ನಮಗೆ ಸಂಖ್ಯೆ ಎಂಬಂತೆ ಆಗಬಾರದು. ಈ ಹಂತದಲ್ಲಿ ನನ್ನ ಕುಟುಂಬ, ಮಕ್ಕಳು, ಮೊಮ್ಮಕ್ಕಳು, ಮರಿಮಕ್ಕಳುಗಳಾಗಿರುತ್ತಾರೆ. ಅವರಿಗೆ ನಾವು ಮಾರ್ಗದರ್ಶಕರಾಗಿರಬೇಕು. ಹಾಗೆಂದು ಅವರು ಕೇಳದೆ ನಾವು ಯಾವುದೇ ಸಲಹೆ ಕೊಡಲು ಹೋಗಬಾರದು. ಇವತ್ತಿನ ಕಾಲಮಾನದ ಜನರು ನಮ್ಮ ಕಾಲಕ್ಕಿಂತ ಹೆಚ್ಚಿನ ತಿಳುವಳಿಕೆ ಹೊಂದಿದ್ದಾರೆ ಎಂದು ಭಾವಿಸಿ, ಅನುಸರಿಸಿಕೊಂಡು ಹೋಗಬೇಕು. ಈ ಹಂತದಲ್ಲಿ ನಾನು ಈ ಹಿಂದೆ ಯಾವ ಚಿಕ್ಕ ಕಾರಣಗಳಿಗೆ ನನ್ನ ಅನಗತ್ಯ ಶ್ರಮ ಹಾಕಿದೆ ಎಂಬುದನ್ನು ಅವಲೋಕನ ಮಾಡಿಕೊಳ್ಳಬೇಕು. ಈ ಸಮಯದಲ್ಲಿ ಮರಣಕ್ಕೂ ಕಾಯಬೇಕು, ಅದನ್ನು ಸ್ವಾಗತಿಸಬೇಕು. ಈ ನೂರು ವರ್ಷವೆಂದರೆ ನಮ್ಮ ಜೀವನ ಸಂಪೂರ್ಣವಾಯಿತು ಎಂಬುದನ್ನು ಮನಗಾಣಬೇಕು. ನಾವು ನಮಸ್ಕರಿಸಿದಾಗ ಹಿರಿಯರು ಆಶೀರ್ವದಿಸುವುದೇ ನೂರು ವರ್ಷ ಬಾಳು ಎಂದು. ಅಲ್ಲಿಗೆ ಜೀವನದ ಎಲ್ಲಾ ಹಂತಗಳು ಮುಕ್ತಾಯವಾಗುತ್ತದೆ. ನೆಮ್ಮದಿಯಾಗಿ ಅನಾಯಾಸ ಮರಣ ದೊರಕಲಿ ಎಂದು ದೇವರನ್ನು ಬೇಡಿಕೊಳ್ಳಬೇಕು ಎಂದು ಶಾಸ್ತ್ರಗಳು ಹೇಳುತ್ತವೆ.

ಇಲ್ಲೆಲ್ಲಾ ಶಾಸ್ತ್ರಗಳ ಅನುಸಾರ ನಾವು ಶಾಂತಿ ಕಾರ್ಯಕ್ರಮ ಮಾಡಿಕೊಳ್ಳಲೇಬೇಕು ಎಂದು ಅರ್ಥವಲ್ಲ. ನಮಗೆ ಇಷ್ಟು ವಯಸ್ಸಾಗಿದೆ. ಈಗ ನನ್ನ ನಡವಳಿಕೆ ವಯೋಮಾನಕ್ಕೆ ತಕ್ಕುದಾಗಿ ಇರಬೇಕು ಎಂಬುದನ್ನು ಅರ್ಥಮಾಡಿಸಲು ಈ ಸಂಪ್ರದಾಯಗಳನ್ನು ಮಾಡಿರುವುದಾಗಿ ಮೇಲ್ನೋಟಕ್ಕೆ ಕಂಡುಬರುತ್ತದೆ.

ನನ್ನ ಪರಿಚಿತರಿಬ್ಬರ ಬಗ್ಗೆ ಹೇಳಲೇಬೇಕು. ಅವರಿಬ್ಬರೂ ಸುಮಾರು 75–80ರ ಪ್ರಾಯದವರು. ಇದರಲ್ಲಿ ಒಬ್ಬರಿಗೆ 55–60ರ ಸುಮಾರಿನಲ್ಲಿ ಹಲ್ಲುಗಳಲ್ಲಿ ಸಮಸ್ಯೆಯಾಗಿ ಎಲ್ಲಾ ಹಲ್ಲುಗಳನ್ನು ಕೀಳಿಸಬೇಕಾಯಿತು. ನಂತರ ದಂತ ವೈದ್ಯರು ಕೃತಕ ಹಲ್ಲುಗಳನ್ನು ಕಟ್ಟಿಸಿಕೊಳ್ಳಲು ಹೇಳಿದರು. ಇವರು ನಂತರ ಬರುತ್ತೇನೆ ಎಂದು ವೈದ್ಯರಿಗೆ ಹೇಳಿಬಂದವರು, ನಂತರ ಯೋಚನೆ ಮಾಡಿದ್ದು ಎಂದರೆ ನನಗೆ ಆ ದೇವರು ಇಷ್ಟು ವರ್ಷ ಎಲ್ಲಾ ಹಲ್ಲುಗಳನ್ನು ಕೊಟ್ಟಿದ್ದ. ಅದರಿಂದ ನಾನು ಸಾಕಷ್ಟು ತಿಂದಿದ್ದೇನೆ. ಈಗ ಈ ವಯೋಮಾನಕ್ಕೆ ದೇವರು ಹಲ್ಲು ಬೇಡ ಎಂದು ಹೇಳಿದ್ದಾನೆ. ಹಾಗಾಗಿ ನಾನು ಮತ್ತೆ ಕೃತಕ ಹಲ್ಲು ಕಟ್ಟಿಸಿಕೊಳ್ಳುವುದು ಎಂದು ತೀರ್ಮಾನಿಸಿದರು. ಕೃತಕ ಹಲ್ಲು ನಿಜವಾದ ಹಲ್ಲಿನಂತೆ ಖಂಡಿತಾ ಕೆಲಸ ಮಾಡುವುದಿಲ್ಲ. ಅದಕ್ಕೆ ಸ್ವಾಭಾವಿಕ ಕಳೆ ಇರುವುದಿಲ್ಲ. ಆದ್ದರಿಂದ ನಾನು ಬೊಚ್ಚುಬಾಯಿಯಲ್ಲೇ ಇರುತ್ತೇನೆ ಎಂದು ತೀರ್ಮಾನಿಸಿದರು. ಮನೆಯವರು ಒತ್ತಾಯ ಮಾಡಿದರು ಅವರು ತಿರಸ್ಕರಿಸಿದರು. ಹೀಗಾಗಿ ಈಗ 20 ವರ್ಷಗಳಾಗಿವೆ. ಅವರು ಹಾಸ್ಯವಾಗಿ ಹೇಳುವುದು ನನಗೆ ಹಲ್ಲು ನೋವೇ ಬರುವುದಿಲ್ಲ. ಏಕೆಂದರೆ ನನಗೆ ಹಲ್ಲುಗಳಿದ್ದರೆ ತಾನೆ ಅವರ ವಸಡು ಈಗ ಒಂದಷ್ಟು ಗಟ್ಟಿಯಾಗಿದೆ. ಈಗ ಹಲವು ಗಟ್ಟಿ ಪದಾರ್ಥಗಳನ್ನು ಅವರು ಸೇವಿಸಬಲ್ಲರು. ಈಗವರು ಹೇಳುವುದು ನಾನು ತೆಗೆದುಕೊಂಡ ನಿರ್ಧಾರ ಸರಿಯಾಗಿತ್ತು ಎಂದು.

ಮತ್ತೊಬ್ಬರು ಈಗ ಸುಮಾರು 78 ವರ್ಷ ವಯಸ್ಸಿನವರು. ಅವರಿಗೂ ಹಲ್ಲಿನ ಸಮಸ್ಯೆಯಾಗಿ ಎಲ್ಲಾ ಹಲ್ಲುಗಳನ್ನು ತೆಗೆಯಬೇಕಾಯಿತು. ನಂತರ ಇತರರ ಒತ್ತಡಕ್ಕೆ ಮಣಿದು ಕೃತಕ ಹಲ್ಲು ಕಟ್ಟಿಸಿಕೊಂಡರು. ಆದರೆ ಅದು ಮೊದಲಿನ ಲಕ್ಷಣ, ಸಾಮರ್ಥ್ಯ ನೀಡಲಿಲ್ಲ. ಜೊತೆಗೆ ಅದರ ನಿರ್ವಹಣೆಯೂ ಕಷ್ಟ ಎನಿಸಿತು. ಕೃತಕ ಹಲ್ಲು ಪಕ್ಕಕ್ಕಿಟ್ಟು ಎಲ್ಲರ ಜೊತೆಗೆ ನಗುತ್ತಾ ಬಾಳುತ್ತಿದ್ದಾರೆ.

ಇದರ ಅರ್ಥವೂ ಅದೇ. ಯಾವ ವಯಸ್ಸಿಗೆ ಏನಾಗಬೇಕೋ ಅದನ್ನು ಒಪ್ಪಿಕೊಂಡು ಜೀವನ ಮಾಡಬೇಕು ಎಂಬುದೇ ಆಗಿದೆ. ಅಂತಹ ಮನಸ್ಥಿತಿ ನಮ್ಮದಾಗಬೇಕು ಎಂಬುದು ಅಪೇಕ್ಷೆ.

ರಾಷ್ಟ್ರದೇವೋಭವ ಸಂದೇಶ ಸಾರುವಲ್ಲಿ ವಿದ್ಯಾರ್ಥಿಗಳ ಪಾತ್ರ ಮಹತ್ವದ್ದು

ವಿದ್ಯಾರ್ಥಿಗಳಿಗೆ ಚಿನ್ನದ ಪದಕ ವಿತರಿಸಿ ಪೇಜಾವರ ಶ್ರೀ ವಿಶ್ವಪ್ರಸನ್ನತೀರ್ಥ ಸ್ವಾಮೀಜಿ ಅಭಿಮತ



ಮೈಸೂರಿನ ವಿಜಯ ವಿಠಲ ಶಿಕ್ಷಣ ಸಂಸ್ಥೆಗಳ ವತಿಯಿಂದ ಆಯೋಜಿಸಿದ್ದ ಸಾಧಕರ ದಿನ ಸಮಾರಂಭದಲ್ಲಿ, ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನತೀರ್ಥ ಸ್ವಾಮೀಜಿ ಅಭಿನಂದಿಸಿ, ಆಶೀರ್ವದಿಸಿದರು.

ಮೈಸೂರು, ಡಿ.8– ರಾಷ್ಟ್ರದೇವೋಭವ ಸಂದೇಶ ಸಾರುವಲ್ಲಿ ವಿದ್ಯಾರ್ಥಿಗಳು ಮಹತ್ವದ ಪಾತ್ರ ವಹಿಸಬೇಕು ಎಂದು ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ ಹೇಳಿದರು.

ಮೈಸೂರಿನ ವಿಜಯ ವಿಠಲ ಶಿಕ್ಷಣ ಸಂಸ್ಥೆಗಳ ವತಿಯಿಂದ ಆಯೋಜಿಸಿದ್ದ ಸಾಧಕರ ದಿನ ಕಾರ್ಯಕ್ರಮದಲ್ಲಿ ಕಳೆದ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ಹದಿಮೂರು ಹಾಗೂ ದ್ವಿತೀಯ ಪಿಯುಸಿಯ ಮೂವರು ವಿದ್ಯಾರ್ಥಿಗಳಿಗೆ ಚಿನ್ನದ ಪದಕ ವಿತರಿಸಿ, ರಾಜ್ಯ ಹಾಗೂ ರಾಷ್ಟ್ರಮಟ್ಟದ ಕ್ರೀಡಾ ಸ್ಪರ್ಧೆಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಅಭಿನಂದಿಸಿ ಆಶೀರ್ವಚನ ನೀಡಿದರು.

ಶಿಕ್ಷಣದ ಜೊತೆಗೆ ಮಕ್ಕಳಿಗೆ ಸಂಸ್ಕೃತಿಯ ಮಹತ್ವ ತಿಳಿಸಿ, ಮೌಲ್ಯಗಳನ್ನು ಬೆಳೆಸಿ ಮತ್ತು ದೇಶಪ್ರೇಮವನ್ನು ಗಟ್ಟಿಗೊಳಿಸುವ ಮಹತ್ವದ ಜವಾಬ್ದಾರಿ ಶಿಕ್ಷಕರದ್ದಾಗಿದೆ. ವಿದ್ಯಾರ್ಥಿಗಳೂ ಕೂಡ ಶಿಸ್ತಿನಿಂದ ಅಭ್ಯಾಸ ಮಾಡಿ ವಿನಯ, ಕರುಣೆ ಮತ್ತು ಆತ್ಮವಿಶ್ವಾಸ ರೂಢಿಸಿಕೊಳ್ಳಬೇಕು. ರಾಷ್ಟ್ರಪ್ರೇಮ ಬೆಳೆಸಿಕೊಂಡು ಸಾಂಸ್ಕೃತಿಕ ಮೌಲ್ಯವನ್ನು ಎತ್ತಿ ಹಿಡಿಯಬೇಕು. ರಾಷ್ಟ್ರದೇವೋಭವ ಜಾಗೃತಿಯಲ್ಲಿ ಕೈಜೋಡಿಸಬೇಕು ಎಂದು ಕರೆ ನೀಡಿದರು.

ವಿದ್ಯಾರ್ಥಿ ದಿಸೆಯಿಂದಲೇ ಸಾಮಾಜಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗುವುದು ಉತ್ತಮ. ಈ ನಿಟ್ಟಿನಲ್ಲಿ ನೀವು ಫನ್ ಫೇರ್ ಮೂಲಕ ಸಂಗ್ರಹಿಸಿದ್ದ ಹಣವನ್ನು ಬಾಲಕಿಯರು, ವಿಶೇಷಚೇತನರು, ಬುಡಕಟ್ಟು ಹಾಗೂ ಹಿಂದುಳಿದ ಗ್ರಾಮೀಣ ವಿದ್ಯಾರ್ಥಿಗಳಿಗೆ ಆಸರೆಯಾಗಿರುವ ವಿವಿಧ ಟ್ರಸ್ಟ್‌ಗಳಿಗೆ ನೀಡಿರುವುದು ಅನುಕರಣೀಯ ಎಂದು ಇದೇ ವೇಳೆ ಶ್ಲಾಘಿಸಿದರು.

ವಿಜಯ ವಿಠಲ ಶಿಕ್ಷಣ ಸಂಸ್ಥೆಗಳ ಕಾರ್ಯದರ್ಶಿ ಆರ್.ವಾಸುದೇವ ಭಟ್ ಮಾತನಾಡಿ, ವಿದ್ಯಾರ್ಥಿಗಳು ಶೈಕ್ಷಣಿಕ ಸಾಧನೆ ಜೊತೆಗೆ ಮುಕ್ತ ದಿನ, ಫನ್ ಫೇರ್‌ನಂತಹ ಎಲ್ಲಾ ಚಟುವಟಿಕೆಗಳಲ್ಲೂ ಉತ್ಸಾಹದಿಂದ ಪಾಲ್ಗೊಂಡು ಅನುಭವ ಪಡೆದುಕೊಂಡಿದ್ದಾರೆ. ವಿದ್ಯಾರ್ಥಿಗಳ ಸೃಜನಶೀಲತೆ, ಸಮರ್ಪಣಾಭಾವ ಚಟುವಟಿಕೆಗಳ ಮೂಲಕ ಅನಾವರಣಗೊಂಡಿದೆ. ಸಣ್ಣ ವಯಸ್ಸಿನಲ್ಲೇ ನೊಂದವರಿಗೆ ನೆರವಾಗುವ ಮಾನವೀಯತೆ ಬೆಳೆಸಿಕೊಂಡಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಸಂಸ್ಥೆಯ ಗೌರವ ಕಾರ್ಯದರ್ಶಿ ಸಿ.ಎ. ವಿಶ್ವನಾಥ ಮಾತನಾಡಿ, ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಿ ಅವರ ಆತ್ಮವಿಶ್ವಾಸ ಹೆಚ್ಚಿಸಿದರೆ ಅವರ ಭವಿಷ್ಯಕ್ಕೆ ಉತ್ತಮ ಅಡಿಪಾಯ ಸಿಕ್ಕಂತಾಗುತ್ತದೆ. ಒಂದು ಸರಳ ಮೆಚ್ಚುಗೆ, ಯುವ ಮನಸ್ಸುಗಳ ಉತ್ಸಾಹ ಹೆಚ್ಚಿಸುತ್ತದೆ. ಶಿಕ್ಷಕರು, ಪೋಷಕರು ಹಾಗೂ ಮಾರ್ಗದರ್ಶಕರು ಮಕ್ಕಳ ಬೆನ್ನುತಟ್ಟಬೇಕು. ಅವರಲ್ಲಿ ಸಕಾರಾತ್ಮಕ ಮನೋಭಾವ ಪೋಷಿಸಿ, ಉತ್ತಮ ಪ್ರಜೆಗಳನ್ನಾಗಿ ರೂಪಿಸಬೇಕು ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ವಿಜಯ ವಿಠಲ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಹೆಚ್.ಸತ್ಯಪ್ರಸಾದ್, ವಿಜಯ ವಿಠಲ ವಿದ್ಯಾಶಾಲಾ ಪ್ರಾಂಶುಪಾಲೆ ಶ್ರೀಮತಿ ಎಸ್.ಎ. ವೀಣಾ ಮತ್ತಿತರರು ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ವಿಭಾಗದ ವಿವಿಧ ರೈಲು ನಿಲ್ದಾಣಗಳಿಗೆ ಡಿಆರ್‌ಎಂ ಮುದಿತ್ ಮಿತ್ತಲ್ ಭೇಟಿ; ವಿವಿಧ ಕಾಮಗಾರಿ ಪರಿಶೀಲನೆ

ಮೈಸೂರು, ಡಿ.8– ನೈರುತ್ಯ ರೈಲ್ವೆ ಮೈಸೂರು ವಿಭಾಗದ ಡಿಆರ್‌ಎಂ ಮುದಿತ್ ಮಿತ್ತಲ್ ಅವರು ಸೋಮವಾರ ವಿವಿಧ ರೈಲು ನಿಲ್ದಾಣಗಳಿಗೆ ಭೇಟಿ ನೀಡಿ, ಪರಿಶೀಲಿಸಿದರು.

ಮೈಸೂರಿನ ಅಶೋಕಪುರಂ, ಕಡಕೊಳ, ನಂಜನಗೂಡು ಹಾಗೂ ಚಾಮರಾಜನಗರ ರೈಲು ನಿಲ್ದಾಣಗಳಲ್ಲಿ ಪರಿಶೀಲನೆ ನಡೆಸಿದ ಅವರು, ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಸೂಚನೆ ನೀಡಿದರು.



ನೈರುತ್ಯ ರೈಲ್ವೆ ಮೈಸೂರು ವಿಭಾಗದ ಡಿಆರ್‌ಎಂ ಮುದಿತ್ ಮಿತ್ತಲ್, ಅಧಿಕಾರಿಗಳೊಂದಿಗೆ ನಂಜನಗೂಡು ರೈಲು ನಿಲ್ದಾಣದಲ್ಲಿ ಪರಿಶೀಲನೆ ನಡೆಸಿದರು.

ಚಾಮರಾಜನಗರದಲ್ಲಿ ಅಮೃತ ಭಾರತ್ ಸ್ಟೇಶನ್ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳ ಪ್ರಗತಿಯನ್ನು ಅವಲೋಕಿಸಿ, ಪ್ರಯಾಣಿಕರ ಸೌಲಭ್ಯಗಳು, ಮೂಲಸೌಕರ್ಯದ ಸುಧಾರಣೆಗಳು ಮತ್ತು ನಿಲ್ದಾಣ ಪುನರ್ವಿಕಾಸಕ್ಕೆ ವಿಶೇಷ ಗಮನ ಹರಿಸುವಂತೆ ತಿಳಿಸಿದರು. ಈ ವೇಳೆ ನಿಲ್ದಾಣದಲ್ಲಿನ ಉದ್ಯೋಗಿಗಳು ಮತ್ತು ಸಿಬ್ಬಂದಿಗಳೊಂದಿಗೆ ಸಂವಾದ ನಡೆಸಿದರು.

ನಂಜನಗೂಡಿನಲ್ಲಿ ರೈಲ್ವೆ ಗೂಡ್ಸ್ ಶೆಡ್‌ನ ಕಾರ್ಯಾಚರಣೆ, ದಕ್ಷತೆ ಹಾಗೂ ಭವಿಷ್ಯದ ಸಾಮರ್ಥ್ಯ ವೃದ್ಧಿ ಅಗತ್ಯಗಳನ್ನು ಅವಲೋಕಿಸಿದರು. ನಂತರ ಕಡಕೊಳ ರೈಲು ನಿಲ್ದಾಣಕ್ಕೆ ಭೇಟಿ ನೀಡಿ, ಕಂಟೇನರ್ ಲೋಡಿಂಗ್ ಪಾಯಿಂಟ್ ಕಾರ್ಯಕ್ಷಮತೆ, ಸರಕು ಹಸ್ತಾಂತರ ಸೌಲಭ್ಯಗಳು ಹಾಗೂ ಸರಕು ಸಾಗಣೆ ಕಾರ್ಯಕ್ಷಮತೆ ಬಗ್ಗೆ ಮಾಹಿತಿ ಪಡೆದು, ಅಗತ್ಯ ಅಭಿವೃದ್ಧಿ ಕಾರ್ಯಗಳ ಬಗ್ಗೆ ಚರ್ಚಿಸಿದರು.

ಬಳಿಕ ಮೈಸೂರಿನ ಅಶೋಕಪುರಂ ರೈಲು ನಿಲ್ದಾಣಕ್ಕೆ ಆಗಮಿಸಿ, ಪ್ರಯಾಣಿಕರ ಸೌಲಭ್ಯಗಳು, ಸುರಕ್ಷತಾ ಕ್ರಮಗಳು ಹಾಗೂ ನಿಲ್ದಾಣದ ನಿರ್ವಹಣೆ ಪರಿಶೀಲಿಸಿದರು. ಈ ವೇಳೆ ಗತಿ ಶಕ್ತಿ ಸಿಪಿಎಂ ಆನಂದ್ ಭಾರತಿ ಸೇರಿದಂತೆ ವಿವಿಧ ವಿಭಾಗದ ಹಿರಿಯ ಅಧಿಕಾರಿಗಳು ಹಾಜರಿದ್ದರು.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಡಿ.8– ವಿ.ವಿ ಮೊಹಲ್ಲಾ ವಿಭಾಗ ವ್ಯಾಪ್ತಿಯಲ್ಲಿ 3ನೇ ತ್ರೈಮಾಸಿಕ ನಿರ್ವಹಣಾ ಕೆಲಸ ನಿಮಿತ್ತ ಡಿ.10 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯ ವರೆಗೆ ಸರಸ್ವತಿಪುರಂ 1 ರಿಂದ 5ನೇ ಮೇನ್, ನ್ಯೂ ಕಾಂತರಾಜ ಅರಸ್ ರಸ್ತೆ, ಕೆ.ಜಿ ಕೊಪ್ಪಲು ಮುಖ್ಯ ರಸ್ತೆ, ಯೂನಿವರ್ಸಿಟಿ ಕ್ವಾರ್ಟ್ರಸ್, ಮುಸ್ಲಿಂ ಹಾಸ್ಟೆಲ್, ವಿಶ್ವಮಾನವ ಜೋಡಿ ರಸ್ತೆ, ಮುರಗನ್ ಮೆಡಿಕಲ್ಸ್‌ಯಿಂದ ಕುಕ್ಕರಹಳ್ಳಿ ಕೆರೆ ರಸ್ತೆಯವರೆಗೆ, ಸರಸ್ವತಿಪುರಂ 5 ರಿಂದ 16ನೇ ಮೇನ್, ಪಡುವಾರಹಳ್ಳಿ, ಡಿ.ಸಿ ರೆಸಿಡೆನ್ಸಿ, ರಿಜನಲ್ ಕಮಿಷನರ್ ಆಫೀಸ್, ಸಿ.ಎಫ್.ಟಿ.ಆರ್.ಐ ಕ್ಯಾಂಪಸ್, ವಾಲ್ಮೀಕಿ ರಸ್ತೆ, ಜಡ್ಜ್ ಕ್ವಾರ್ಟ್ರಸ್, ಒಂಟಿಕೊಪ್ಪಲು, ಹುಣಸೂರು ಮುಖ್ಯರಸ್ತೆ ವಾಗ್ದೇವಿ ನಗರ, ಜೆಸಿ ಕಾಲೇಜು ಸುತ್ತಮುತ್ತ ಚಾಮರಾಜ ಮೊಹಲ್ಲಾ, ಜಿಲ್ಲಾ ಪಂಚಾಯತ್ ಕಚೇರಿ, ಕೋರ್ಟ್, ಅರಸು ರಸ್ತೆ, ಜಿಲ್ಲಾಧಿಕಾರಿ ಕಚೇರಿ, ಮಹಾರಾಜ ಮತ್ತು ಯುವರಾಜ ಕಾಲೇಜು ಸುತ್ತಮುತ್ತ, ಶಿವರಾಂಪೇಟೆ, ದಿವಾನ್ಸ್ ರಸ್ತೆ, ಧನ್ವಂತರಿ ರಸ್ತೆ, ಜೆ.ಕೆ ಗ್ರೌಂಡ್ ಸುತ್ತಮತ್ತಲಿನ ಪ್ರದೇಶ, ಮೆಟ್ರೋಪೋಲ್ ಸುತ್ತಮುತ್ತ, ಜೆ.ಎಲ್.ಬಿ ರಸ್ತೆ ಜಯಲಕ್ಷ್ಮಿ ವಿಲಾಸ್, ಜಿಲ್ಲಾ ಪಂಚಾಯತ್ ಕಚೇರಿ, ನ್ಯಾಯಾಲಯದ ಆವರಣ, ಏರ್‌ಲೈನ್ಸ್ ಹೋಟೇಲ್ ರಸ್ತೆ, ಮಹಾರಾಜ ಹಾಸ್ಟೆಲ್ ಏರಿಯಾ, ಗೀತಾರಸ್ತೆ, ರಾಮಸ್ವಾಮಿ ವೃತ್ತ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

‘ಭಾರತ್ ಬೌದ್ಧಿಕ್ಸ್’ 21 ಸಂಪುಟಗಳ ಬಿಡುಗಡೆ

ಮೈಸೂರು, ಡಿ.8– ವಿದ್ಯಾ ಭಾರತಿ ಉಚ್ಚ ಶಿಕ್ಷಾ ಸಂಸ್ಥಾನ(ವಿಬಿಯುಎಸ್‌ಎಸ್)ದ ವತಿಯಿಂದ ಪ್ರಕಟಿಸಲಾಗಿರುವ ಭಾರತೀಯ ಜ್ಞಾನ ಪರಂಪರೆ ಆಧಾರಿತ ‘ಭಾರತ್ ಬೌದ್ಧಿಕ್ಸ್’ ಪುಸ್ತಕದ 21 ಸಂಪುಟಗಳನ್ನು ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯದ ಸಮಕುಲಾಧಿಪತಿ ಪ್ರೊ.ಬಿ. ಸುರೇಶ್ ಬಿಡುಗಡೆಗೊಳಿಸಿದರು.



ಭಾರತೀಯ ಜ್ಞಾನ ಪರಂಪರೆ ಆಧಾರಿತ ‘ಭಾರತ್ ಬೌದ್ಧಿಕ್ಸ್’ ಪುಸ್ತಕದ ಸಂಪುಟಗಳನ್ನು ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯದ ಸಮಕುಲಾಧಿಪತಿ ಪ್ರೊ.ಬಿ.ಸುರೇಶ್ ಬಿಡುಗಡೆಗೊಳಿಸಿದರು.

ಈ ವೇಳೆ ಮಾತನಾಡಿದ ಅವರು, ಭಾರತ್ ಬೌದ್ಧಿಕ್‌ನ 21 ಸಂಪುಟಗಳು ಕೇವಲ ಪುಸ್ತಕಗಳಲ್ಲ, ಇವು ನಮ್ಮ ಪ್ರಾಚೀನ ಬೌದ್ಧಿಕ ಪ್ರತಿಭೆ ಹಾಗೂ 21ನೇ ಶತಮಾನದ ಆಧುನಿಕ ಸವಾಲುಗಳ ನಡುವಿನ ಸೇತುವೆಯಾಗಿವೆ. ಇವು ಭಾರತೀಯ ಶಿಕ್ಷಣದ ಭವಿಷ್ಯವನ್ನು ಪ್ರತಿನಿಧಿಸುತ್ತವೆ. ನಮ್ಮ ಯುವಜನತೆಯಲ್ಲಿ ಸಾಂಸ್ಕೃತಿಕ ಮಹತ್ವ ಬಿತ್ತುವುದರ ಜೊತೆಗೆ ಅವರನ್ನು ಜಾಗತಿಕವಾಗಿ ಸಮರ್ಥರನ್ನಾಗಿ ಸಿದ್ಧಗೊಳಿಸಲು ಸಹಾಯಕವಾಗಿವೆ ಎಂದು ಅಭಿಪ್ರಾಯಿಸಿದರು.

ಭಾರತ್ ಬೌದ್ಧಿಕ್ಸ್ ಪರೀಕ್ಷೆಗೆ ನೆರವು: ಮುಂಬರುವ ‘ಭಾರತ್ ಬೌದ್ಧಿಕ್ಸ್ ಪರೀಕ್ಷೆ–2026’ಕ್ಕೆ ಈ 21 ಸಂಪುಟಗಳ ಮೂಲಕ ಸಮಗ್ರ ಪಠ್ಯಕ್ರಮವನ್ನು ರೂಪಿಸಲಾಗಿದೆ. ಇವುಗಳನ್ನು ಪರೀಕ್ಷಾರ್ಥಿಗಳ ಅಧ್ಯಯನಕ್ಕೆ ಅನುಕೂಲವಾಗುವಂತೆ ಮೂರು ವಿಭಾಗಗಳಾಗಿ ವಿಂಗಡಿಸಲಾಗಿದೆ. ವಿಜ್ಞಾನ(ವೈದಿಕ ಗಣಿತ, ಭಾರತೀಯ ವೈದ್ಯಕೀಯ ಮತ್ತು ಶಸ್ತ್ರಚಿಕಿತ್ಸೆ, ಭಾರತೀಯ ಕಾಲ–ದರ್ಶನ), ಸಮಾಜ ವಿಜ್ಞಾನ (ರಾಜಧರ್ಮ, ಆಡಳಿತ, ಭಾರತೀಯ ಆರ್ಥಿಕ ಚಿಂತನೆ, ನಗರ ಯೋಜನೆ) ಮತ್ತು ಕಲೆ(ನಾಟ್ಯ, ನಾದ, ಮತ್ತು ಭಾರತೀಯ ಚೇತನಾ, ವಾಸ್ತು ಶಾಸ್ತ್ರ) ವಿಭಾಗಗಳಾಗಿ ವಿಂಗಡಿಸಲಾಗಿದ್ದು, ತಲಾ ಏಳು ಪುಸ್ತಕಗಳಿವೆ. ಪರೀಕ್ಷಾರ್ಥಿಗಳು ಈ ಮೂರು ವಿಭಾಗದಲ್ಲಿ ಒಂದನ್ನು ಆಯ್ಕೆ ಮಾಡಿಕೊಳ್ಳಬಹುದು.

ಭಾರತ್ ಬೌದ್ಧಿಕ್ಸ್ ಸಂಪುಟ ಬಿಡುಗಡೆ ಸಂದರ್ಭದಲ್ಲಿ ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿವಿ ಕುಲಪತಿ ಪ್ರೊ.ಎ.ಎನ್. ಸಂತೋಷ್ ಕುಮಾರ್, ಕುಲಸಚಿವ ಡಾ.ಎಸ್.ಎ. ಧನರಾಜ್, ಪರೀಕ್ಷಾ ನಿಯಂತ್ರಕ ಪ್ರೊ.ಪಿ.ನಂಜುಂಡಸ್ವಾಮಿ, ಹಣಕಾಸು ಅಧಿಕಾರಿ ಎಂ.ಮಹದೇವಸ್ವಾಮಿ, ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಡೀನ್ ಮತ್ತು ಪ್ರಾಂಶುಪಾಲ(ಪ್ರಭಾರಿ) ಪ್ರೊ.ಸಿ.ನಟರಾಜು, ಉಪ ಕುಲಸಚಿವ ಪ್ರೊ.ಬಿ.ಎಸ್.ಹರೀಶ್, ಸಹಾಯಕ ಕುಲಸಚಿವ(ಆಡಳಿತ) ಡಾ.ಎಂ.ಎಸ್. ಮಹೇಶನ್, ವಿಬಿಯುಎಸ್‌ಎಸ್ ಕರ್ನಾಟಕ ದಕ್ಷಿಣ ಪ್ರಾಂತದ ಪ್ರಮುಖರಾದ ಡಾ. ಪ್ರವೀಣಕುಮಾರ್ ಮೆಳ್ಳಿ(ಕಾರ್ಯದರ್ಶಿ), ಆಂಧ್ರ ಪ್ರದೇಶ ಕೇಂದ್ರೀಯ ವಿಶ್ವವಿದ್ಯಾಲಯ(ಅನಂತಪುರ)ದ ಕುಲಸಚಿವ ಪ್ರೊ.ಎಸ್.ಬಿ.ಕವಡೆ, ಹಾಗೂ ಪ್ರಾಂತ ಸಮಿತಿ ಸದಸ್ಯರಾದ ಡಾ.ಸಂಜಯ್ ಬಗಡೇಕರ್, ಡಾ.ಮಧುಸೂದನ್, ಡಾ.ಚಂದ್ರೇಶ್ ಮತ್ತು ಡಾ.ಗುಡೆಪ್ಪ ಮತ್ತಿತರರು ಉಪಸ್ಥಿತರಿದ್ದರು.

ಜ.31, ಫೆ.1ಕ್ಕೆ ಭಾರತ್ ಬೌದ್ಧಿಕ್ಸ್ ಪರೀಕ್ಷೆ

ಪರಿವರ್ತಕ ಶೈಕ್ಷಣಿಕ ಯೋಜನೆಯಾಗಿರುವ ಭಾರತ್ ಬೌದ್ಧಿಕ್ಸ್ ಪರೀಕ್ಷೆಯು ದೇಶಾದ್ಯಂತ 2026ರ ಜ.31 ಹಾಗೂ ಫೆ.1ರಂದು ಆಯೋಜಿಸಿದ್ದು, ಇದರಲ್ಲಿ ಒಂದು ದಿನವನ್ನು ಸಂಸ್ಥೆಗಳು ಆಯ್ಕೆ ಮಾಡಿಕೊಳ್ಳಬಹುದು. ಸ್ನಾತಕ, ಸ್ನಾತಕೋತ್ತರ ಮತ್ತು ಪಿಎಚ್‌ಡಿ ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಹಾಜರಾಗಲು ಅರ್ಹರಿದ್ದಾರೆ. ಇದು ಆಫ್‌ಲೈನ್ ಪರೀಕ್ಷೆಯಾಗಿರುವ ಕಾರಣ ನೋಂದಣಿ ಶುಲ್ಕ 100 ರೂ. ಪಾವತಿಸಬೇಕಾಗುತ್ತದೆ. ಈ ಪರೀಕ್ಷೆಯಲ್ಲಿ ಪ್ರಥಮ ಸ್ಥಾನ ಪಡೆದವರಿಗೆ 1 ಲಕ್ಷ ರೂ., 2ನೇ ಸ್ಥಾನಕ್ಕೆ 50 ಸಾವಿರ, ಮೂರನೇ ಸ್ಥಾನಕ್ಕೆ 25 ಸಾವಿರ ಹಾಗೂ ನಾಲ್ಕನೇ ಸ್ಥಾನ ಪಡೆದವರಿಗೆ 2,500 ರೂ. ಬಹುಮಾನ ನೀಡಲಾಗುತ್ತದೆ. ಜೊತೆಗೆ ಉನ್ನತ ಶ್ರೇಣಿಯ ಆಯ್ದ ವಿದ್ಯಾರ್ಥಿಗಳನ್ನು ನವದೆಹಲಿಯಲ್ಲಿ ನಡೆಯುವ ರಾಷ್ಟ್ರೀಯ ಸಮ್ಮೇಳನಕ್ಕೆ ಆಹ್ವಾನಿಸಲಾಗುವುದು. ಆಸಕ್ತ ವಿದ್ಯಾರ್ಥಿಗಳು ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳು ಹೆಚ್ಚಿನ ಮಾಹಿತಿಗೆ www.bharatboudhiks.com ವೆಬ್‌ಸೈಟ್‌ಗೆ ಭೇಟಿ ನೀಡಬಹುದು ಅಥವಾ ಮೊ.ಸಂ.9620198326/ 9916892226 ಕ್ಕೆ ಕರೆ ಮಾಡಬಹುದು.

ಸುತ್ತೂರು ಜಾತ್ರೆ: ಜ.16ಕ್ಕೆ ಉಚಿತ ಸಾಮೂಹಿಕ ವಿವಾಹ

ಮೈಸೂರು, ಡಿ. 8– ಸುತ್ತೂರು ಶ್ರೀಕ್ಷೇತ್ರದಲ್ಲಿ ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ ಜಾತ್ರಾ ಮಹೋತ್ಸವವು 2026 ಜನವರಿ 15ರಿಂದ 20ರವರೆಗೆ ಜರುಗಲಿದೆ. ಜ.16 ಶುಕ್ರವಾರದಂದು ಉಚಿತ ಸಾಮೂಹಿಕ ವಿವಾಹವನ್ನು ಏರ್ಪಡಿಸಲಾಗಿದೆ. ಸಾಮೂಹಿಕ ವಿವಾಹದಲ್ಲಿ ಪಾಲ್ಗೊಳ್ಳಲು ಎಲ್ಲಾ ಸಮಾಜದ ವಧು–ವರರಿಗೂ ಮುಕ್ತ ಅವಕಾಶವಿರುತ್ತದೆ. ವಧುವಿಗೆ ಮಾಂಗಲ್ಯ, ಸೀರೆ, ಕುಪ್ಪಸ, ಕಾಲುಂಗುರಗಳನ್ನು ಹಾಗೂ ವರನಿಗೆ ಪಂಚೆ, ವಲ್ಲಿ, ಷರ್ಟ್‌ಗಳನ್ನು ನೀಡಲಾಗುತ್ತದೆ. ವಧು–ವರರು ಹಾಗೂ ಜೊತೆಯಲ್ಲಿ ಬರುವ ಬಂಧುವರ್ಗದವರಿಗೆ ಪ್ರಸಾದ ವ್ಯವಸ್ಥೆ ಇರುತ್ತದೆ ಮತ್ತು ಕುಟುಂಬದ ಸದಸ್ಯರಿಗೆ ಹಿಂದಿನ ದಿನ ವಸತಿ ವ್ಯವಸ್ಥೆ ಕಲ್ಪಿಸಲಾಗುವುದು.

ವಿವಾಹವಾಗಬಯಸುವವರು ಹೆಚ್ಚಿನ ವಿವರಗಳಿಗಾಗಿ ಜಾತ್ರಾ ಮಹೋತ್ಸವ ಕಾರ್ಯಾಲಯದಲ್ಲಿ ಅಥವಾ ಸಂಚಾಲಕರುಗಳಾದ ಆರ್. ಕುಮಾರಸ್ವಾಮಿ ಹಾಗೂ ಸಹ ಸಂಚಾಲಕರುಗಳಾದ ವೀರಭದ್ರಯ್ಯ, ಸಿ. ಮಹದೇವಪ್ರಸಾದ್ ಅವರುಗಳನ್ನು ಕ್ರಮವಾಗಿ 0821–2548212–122, 9448674702, 9741342222, 9449030588 ದೂರವಾಣಿಗಳಲ್ಲಿ ಸಂಪರ್ಕಿಸಿ, ನಿಗದಿತ ಅರ್ಜಿಯನ್ನು ಪಡೆಯಬಹುದಾಗಿದೆ.

ಅರ್ಜಿಯಲ್ಲಿ ಪೂರ್ಣ ವಿವರಗಳನ್ನು ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ 31–12–2025ರೊಳಗಾಗಿ ಮೈಸೂರು ಜೆಎಸ್‌ಎಸ್ ಮಹಾವಿದ್ಯಾಪೀಠದಲ್ಲಿರುವ ಜಾತ್ರಾ ಮಹೋತ್ಸವ ಕಾರ್ಯಾಲಯ, ಸುತ್ತೂರು ಶ್ರೀಕ್ಷೇತ್ರದ ಜೆಎಸ್‌ಎಸ್ ಸಂಸ್ಥೆಯ ಸಂಯೋಜನಾಧಿಕಾರಿಗಳ ಕಚೇರಿ, ಚಾಮರಾಜನಗರದ ಜೆಎಸ್‌ಎಸ್ ಅಕ್ಷರದಾಸೋಹ ಕೇಂದ್ರ ಕಚೇರಿ ಅಥವಾ ತಾಳವಾಡಿ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಡಿ.9 ಮತ್ತು 11 ರಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು, ಡಿ.8– ಹಂಪಾಪುರ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ಲಿಂಕ್ ಲೈನ್ ಹಾಗೂ ಸೋಲಾರ್ ಕಾಮಗಾರಿ ನಿಮಿತ್ತ ಡಿ.9 ಮತ್ತು 11 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಹಂಪಾಪುರ, ಕಂಚಮಳ್ಳಿ, ಹೊಮ್ಮರಗಳ್ಳಿ, ಮಾದಾಪುರ, ಕೆ.ಬೆಳ್ತೂರು, ಮನುಗನಹಳ್ಳಿ ಮತ್ತು ಬಾಚೇಗೌಡನಹಳ್ಳಿ ಪಂಚಾಯಿತಿ ವ್ಯಾಪ್ತಿ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

ವಿಶೇಷ ಕೋರ್ಸ್ ನಿರ್ವಹಣೆ ಸಂಬಂಧ ಸಾವಿತ್ರಿಬಾಯಿ ಫುಲೆ ಸಂಸ್ಥೆಯೊಂದಿಗೆ ಕೆಪಿಎ ಒಡಂಬಡಿಕೆ

ಮೈಸೂರು, ಡಿ.8(ಎಂಕೆ)– ಸಂಪನ್ಮೂಲ ವ್ಯಕ್ತಿಗಳ ವಿನಿಮಯ, ಸಂಶೋಧನೆ, ಅಭಿವೃದ್ಧಿ ಹಾಗೂ ವಿಶೇಷ ಕೋರ್ಸ್‌ಗಳನ್ನು ಅಭಿವೃದ್ಧಿಪಡಿಸಿ ನಿರ್ವಹಿಸುವ ಸಂಬಂಧ ಕರ್ನಾಟಕ ಪೊಲೀಸ್ ಅಕಾಡೆಮಿಯು ಕೇಂದ್ರ ಸರ್ಕಾರದ ಪ್ರತಿಷ್ಠಿತ ಸಂಸ್ಥೆಯಾದ ಸಾವಿತ್ರಿಬಾಯಿ ಫುಲೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಂಸ್ಥೆ(ಎಸ್‌ಪಿಎನ್‌ಐಡಬ್ಲ್ಯೂಸಿಡಿ)ಯೊಡನೆ ಒಡಂಬಡಿಕೆ ಮಾಡಿಕೊಂಡಿದೆ.



ಮೈಸೂರಿನ ನಜರ್‌ಬಾದ್‌ನಲ್ಲಿರುವ ಕರ್ನಾಟಕ ಪೊಲೀಸ್ ಅಕಾಡೆಮಿ ಹಾಗೂ ಕೇಂದ್ರ ಸರ್ಕಾರದ ಸಾವಿತ್ರಿಬಾಯಿ ಫುಲೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಂಸ್ಥೆ(ಎಸ್‌ಪಿಎನ್‌ಐಡಬ್ಲ್ಯೂಸಿಡಿ) ನಡುವೆ ಒಡಂಬಡಿಕೆ ಮಾಡಿಕೊಳ್ಳಲಾಯಿತು. ಕೆಪಿಎ ನಿರ್ದೇಶಕ ಎಸ್.ಎಲ್.ಚೆನ್ನಬಸವಣ್ಣ, ಎಸ್‌ಪಿಎನ್‌ಐಡಬ್ಲ್ಯೂಸಿಡಿ ಬೆಂಗಳೂರು ಪ್ರಾದೇಶಿಕ ಕೇಂದ್ರದ ನಿರ್ದೇಶಕ ಪಿ.ಜೆ.ಫಿಲಿಪ್ಸ್ ಮತ್ತಿತರರಿದ್ದರು.

ಮೈಸೂರಿನ ನಜರ್‌ಬಾದ್‌ನಲ್ಲಿರುವ ಕರ್ನಾಟಕ ಪೊಲೀಸ್ ಅಕಾಡೆಮಿಯಲ್ಲಿ ಸೋಮವಾರ ನಡೆದ ಸರಳ ಕಾರ್ಯಕ್ರಮದಲ್ಲಿ ಕೆಪಿಎ ನಿರ್ದೇಶಕ ಎಸ್.ಎಲ್.ಚೆನ್ನಬಸವಣ್ಣ ಹಾಗೂ ಎಸ್‌ಪಿಎನ್‌ಐಡಬ್ಲ್ಯೂಸಿಡಿ ಬೆಂಗಳೂರು ಪ್ರಾದೇಶಿಕ ಕೇಂದ್ರದ ನಿರ್ದೇಶಕ ಪಿ.ಜೆ.ಫಿಲಿಪ್ಸ್ ಒಡಂಬಡಿಕೆಗೆ ಸಹಿ ಹಾಕಿದರು.

ಬಳಿಕ ಕೆಪಿಎ ನಿರ್ದೇಶಕ ಎಸ್.ಎಲ್. ಚೆನ್ನಬಸವಣ್ಣ ಮಾತನಾಡಿ, ಕರ್ನಾಟಕ ಪೊಲೀಸ್ ಅಕಾಡೆಮಿ ಮತ್ತು ಸಾವಿತ್ರಿಬಾಯಿ ಫುಲೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಂಸ್ಥೆ ನಡುವಿನ ಒಡಂಬಡಿಕೆಯು ದೌರ್ಜನ್ಯರಹಿತ ಸಮಾಜ ನಿರ್ಮಾಣ ಮಾಡುವ ಆಶಯ ಹೊಂದಿದೆ. ಪ್ರಸ್ತುತ ಸಮಾಜದಲ್ಲಿ ಮಹಿಳೆಯರು ಮತ್ತು ಮಕ್ಕಳು ಎದುರಿಸುತ್ತಿರುವ ಸವಾಲುಗಳು, ಅವರ ಸಮಸ್ಯೆಗಳ ನಿರ್ವಹಣೆ ಕುರಿತು ಕರ್ತವ್ಯನಿರತ ಪೊಲೀಸ್ ಅಧಿಕಾರಿಗಳಿಗೆ ಮಾಹಿತಿ ನೀಡಿ, ಅವರನ್ನು ಸಂವೇದನಾಶೀಲರನ್ನಾಗಿ ಮಾಡಲು ಸಹಕಾರಿಯಾಗಲಿದೆ ಈ ಮೂಲಕ ಸಮಾಜದಲ್ಲಿ ಮಹಿಳೆಯರ ಮತ್ತು ಮಕ್ಕಳ ಮೇಲೆ ನಡೆಯುತ್ತಿರುವ ದೌರ್ಜನ್ಯದ ಪ್ರಕರಣಗಳು ಗಣನೀಯವಾಗಿ ಕಡಿಮೆಯಾಗಿ, ದೌರ್ಜನ್ಯ ಮುಕ್ತ ಸಮಾಜ ನಿರ್ಮಾಣವಾಗುವಂತಾಗಲಿ ಎಂದು ಆಶಯ ವ್ಯಕ್ತಪಡಿಸಿದರು.

ಎಸ್‌ಪಿಎನ್‌ಐಡಬ್ಲ್ಯೂಸಿಡಿ ಬೆಂಗಳೂರು ಪ್ರಾದೇಶಿಕ ಕೇಂದ್ರದ ನಿರ್ದೇಶಕ ಪಿ.ಜೆ. ಫಿಲಿಪ್ಸ್ ಮಾತನಾಡಿ, ಕರ್ನಾಟಕ ಪೊಲೀಸ್ ಅಕಾಡೆಮಿಯೊಂದಿಗೆ ಒಡಂಬಡಿಕೆ ಮಾಡಿಕೊಂಡಿರುವುದು ಹೆಮ್ಮೆಯ ವಿಷಯವಾಗಿದ್ದು, ಕರ್ನಾಟಕ ರಾಜ್ಯದಲ್ಲಿ ವರದಿಯಾಗುತ್ತಿರುವ ಮಹಿಳೆಯರ ಮತ್ತು ಮಕ್ಕಳ ದೌರ್ಜನ್ಯಗಳ ಸಂಖ್ಯೆಯನ್ನು ಗಣನೀಯವಾಗಿ ಕಡಿಮೆ ಮಾಡುವುದಲ್ಲದೇ, ರಾಜ್ಯವನ್ನು ದೌರ್ಜನ್ಯ ಮುಕ್ತ ಮಾಡುವಲ್ಲಿ ಪೊಲೀಸ್ ಇಲಾಖೆಯೊಂದಿಗೆ ಕೈ ಜೋಡಿಸುವುದು ಮುಖ್ಯ ಉದ್ದೇಶವಾಗಿದೆ ಎಂದರು. ಸಾವಿತ್ರಿಬಾಯಿ ಫುಲೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಂಸ್ಥೆ ಬೆಂಗಳೂರು ಪ್ರಾದೇಶಿಕ ಕೇಂದ್ರದ ಉಪ ನಿರ್ದೇಶಕ ಲೋಕೇಶ್, ಕರ್ನಾಟಕ ಪೊಲೀಸ್ ಅಕಾಡೆಮಿಯ ಅಧಿಕಾರಿ ವರ್ಗ ಹಾಗೂ ಬೋಧಕರು ಉಪಸ್ಥಿತರಿದ್ದರು.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಡಿ.8– ವರಕೂಡು (ವರುಣ) ಮತ್ತು ವಾಜಮಂಗಲ ವಿದ್ಯುತ್ ವತರಣಾ ಕೇಂದ್ರದಲ್ಲಿ ನಿರ್ವಹಣಾ ಕಾಮಗಾರಿ ನಿಮಿತ್ತ ಡಿ.9 ರಂದು ಬೆಳಗ್ಗೆ 10 ರಿಂದ ಸಂಜೆ 6 ಗಂಟೆಯ ವರೆಗೆ ಹಾರೋಹಳ್ಳಿ, ಮೆಲ್ಲಹಳ್ಳಿ, ಗಳಗರ ಹುಂಡಿ, ಲಕ್ಷ್ಮಿಪುರ, ಶಿವಪುರ, ಹಲಗಯ್ಯನಹುಂಡಿ, ATM College Muffadal ಇಂಡಸ್ಟ್ರೀಸ್, ಹೆಚ್‌ಎನ್‌ಕೆ ಇಂಡಸ್ಟ್ರೀಸ್, ಬನ್ನೂರು ಮುಖ್ಯ ರಸ್ತೆ, ಟಿ.ನರಸೀಪುರ ಮುಖ್ಯ ರಸ್ತೆ, ನಾಡನಹಳ್ಳಿ, ಭುಗತಹಳ್ಳಿ, ವಾಜಮಂಗಲ, ವರುಣ, ದಂಡಿಕೆರೆ, ಪಿಲ್ಲಹಳ್ಳಿ, ಮೊಸಂಬಾಯನಹಳ್ಳಿ, ಚಿಕ್ಕಹಳ್ಳಿ, ಚೋರನಹಳ್ಳಿ, ಯಾಂದಳ್ಳಿ, ವರಕೂಡು, ಬಡಗಲಹುಂಡಿ, ಮೂಡಲಹುಂಡಿ, ಕೆಂಪೇಗೌಡನ ಹುಂಡಿ, ವಸಂತನಗರ, ಪ್ರಕೃತಿ ಬಡಾವಣೆ, ಲಾಲ್ ಬಹದ್ದೂರ್ ಶಾಸ್ತ್ರಿ ನಗರ, ಗೋಪಲ ಗೌಡ ನಗರ, ಜೆಎಸ್‌ಎಸ್ ಬಡಾವಣೆ 2ನೇ ಹಂತ, ಪೊಲೀಸ್ ಬಡಾವಣೆ 3ನೇ ಹಂತ, ಬಿವಿಎಲ್ ಬಡಾವಣೆ, MYCEM College, VTC Regional center, ವರಕೂಡು Paper Factory ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಡಿ.8– ಬೋಗಾದಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ನಿರ್ವಹಣಾ ಕೆಲಸ ನಿಮಿತ್ತ ಡಿ.9 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಜನತಾನಗರ, ಬೋಗಾದಿ 2ನೇ ಹಂತ ಉತ್ತರ ಮತ್ತು ದಕ್ಷಿಣ, ಗಂಗೋತ್ರಿ ಕ್ಯಾಂಪಸ್, ಗಂಗೋತ್ರಿ ಕ್ವಾಟ್ರಸ್, ದಾಸನ ಕೊಪ್ಪಲು, ಮರಟಿ ಕ್ಯಾತನಹಳ್ಳಿ, ರೂಪನಗರ, ದೀಪಾ ನಗರ, ಬೋಗಾದಿ ಗ್ರಾಮ, ಪ್ರೀತಿ ಲೇಔಟ್, ಆರ್.ಎಂ.ಪಿ ಲೇಔಟ್, ವಿಜಯನಗರ 3ನೇ ಹಂತ, ಹಿನಕಲ್, ವಿಜಯನಗರ 4ನೇ ಹಂತ, ವಿಜಯಶ್ರೀಪುರ, ಸುಧಾ ಲೇಔಟ್, ರೈಲ್ವೆ ಲೇಔಟ್, ಎಸ್.ಬಿ.ಎಂ ಲೇಔಟ್, ವಾಗ್ದೇವಿ ನಗರ, ಸಿ.ಎಫ್.ಟಿ.ಆರ್.ಐ ಲೇಔಟ್, ಯುನಿವರ್ಸಿಟಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ನಿರ್ಮಲಾನಂದನಾಥ ಶ್ರೀಗಳಿಂದ ಗೌರವ



ಮೈಸೂರು ತಾಲೂಕು ನಾಗನಹಳ್ಳಿ ಗ್ರಾಮದಲ್ಲಿ ಶ್ರೀ ಲಕ್ಷ್ಮಿದೇವಿ ದೇವಾಲಯದ ಪುನರ್ ನಿರ್ಮಾಣ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿದ ಬಿಜೆಪಿ ಮುಖಂಡ ನಾಗನಹಳ್ಳಿ ಜಗದೀಶ್‌ಗೌಡ ಅವರಿಗೆ ಶ್ರೀ ಲಕ್ಷ್ಮಿದೇವಿ ಚಿತ್ರವುಳ್ಳ ಚಿನ್ನದ ಉಂಗುರ ತೊಡಿಸುವ ಮೂಲಕ ಆದಿಚುಂಚನಗಿರಿ ಮಠಾಧಿಪತಿಗಳಾದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿಗಳು ಗೌರವಿಸಿದರು. ಈ ವೇಳೆ ವಿಧಾನಪರಿಷತ್ ಮಾಜಿ ಸದಸ್ಯ ಡಿ. ಮಾದೇಗೌಡ, ಮಾಜಿ ಸಂಸದ ಪ್ರತಾಪ್‌ಸಿಂಹ, ಶ್ರೀರಂಗಪಟ್ಟಣ ತಾಲೂಕು ಬಿಜೆಪಿ ಮುಖಂಡ ಸಚ್ಚಿದಾನಂದ, ಜಿಪಂ ಮಾಜಿ ಸದಸ್ಯರಾದ ದಿನೇಶ್, ಮಹದೇವಪ್ಪ, ಮಹೇಶ್, ಸಿಂಗಪ್ಪ, ಶ್ರೀಕಂಠಯ್ಯ ಯಾದವೇಂದ್ರ, ಸತೀಶ್, ಪದ್ಮರಾಜ್ ಇನ್ನಿತರರಿದ್ದರು.

ಗೋವಾ ನೈಟ್‌ಕ್ಲಬ್ ಅಗ್ನಿ ದುರಂತ: ನಾಲ್ವರ ಬಂಧನ

ಮೂವರು ಅಧಿಕಾರಿಗಳು ಅಮಾನತು

ಪಣಜಿ: ಗೋವಾದ ಬಿರ್ಚ್ ಬೈ ರೋಮಿಯೋ ಲೇನ್ ನೈಟ್‌ಕ್ಲಬ್‌ನಲ್ಲಿ ಸಂಭವಿಸಿದ ಭಾರಿ ಬೆಂಕಿ ಅವಘಡದಲ್ಲಿ ಮಹಿಳೆಯರು, ಪ್ರವಾಸಿಗರು ಸೇರಿ ಒಟ್ಟು 25 ಮಂದಿ ಸಾವನ್ನಪ್ಪಿದ ಘಟನೆ ಬೆನ್ನಲ್ಲೇ ಪೊಲೀಸರು ನಾಲ್ವರನ್ನು ಬಂಧನಕ್ಕೊಳಪಡಿಸಿದ್ದು, ಮೂವರು ಅಧಿಕಾರಿಗಳನ್ನು ಅಮಾನತು ಮಾಡಿದ್ದಾರೆ.



ಕ್ಲಬ್‌ನ ಮುಖ್ಯ ಜನರಲ್ ಮ್ಯಾನೇಜರ್ ರಾಜೀವ್ ಮೋಡಕ್, ಜನರಲ್ ಮ್ಯಾನೇಜರ್ ವಿವೇಕ್ ಸಿಂಗ್, ಬಾರ್ ಮ್ಯಾನೇಜರ್ ರಾಜೀವ್ ಸಿಂಘಾನಿಯಾ ಮತ್ತು ಗೇಟ್ ಮ್ಯಾನೇಜರ್ ರಿಯಾನ್ಶು ಠಾಕೂರ್ ಎಂಬುವವರನ್ನು ಬಂಧಿಸಲಾಗಿದೆ ಎಂದು ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಅವರು ಮಾಹಿತಿ ನೀಡಿದ್ದಾರೆ.

ಇದಲ್ಲದೆ ಕ್ಲಬ್‌ನ ಮಾಲೀಕರಾದ ಸೌರಭ್ ಲೂತ್ರಾ ಮತ್ತು ಗೌರವ್ ಲೂತ್ರಾ ಹಾಗೂ ಕಾರ್ಯಕ್ರಮ ಆಯೋಜಕರ ವಿರುದ್ಧವೂ ಎಫ್‌ಐಆರ್ ದಾಖಲಿಸಲಾಗಿದೆ ಎಂದು ತಿಳಿಸಿದ್ದಾರೆ. ಈ ನಡುವೆ ನೈಟ್‌ಕ್ಲಬ್ ಕಾರ್ಯಾಚರಣೆಯನ್ನು ಪ್ರಾರಂಭಿಸಲು ಅವಕಾಶ ನೀಡುವಲ್ಲಿ ನಿಯಮಗಳನ್ನು ಪಾಲನೆ ಮಾಡದೆ, ನಿರ್ಲಕ್ಷ್ಯ ತೋರಿದ ಪಂಚಾಯತ್‌ಗಳ ನಿರ್ದೇಶಕರು ಸೇರಿದಂತೆ ಮೂವರು ಹಿರಿಯ ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿದೆ ಎಂದು ತಿಳಿದುಬಂದಿದೆ.

ಉತ್ತರ ಗೋವಾದ ಅರ್ಪೋರಾದ ರೋಮಿಯೋ ಲೇನ್‌ನಲ್ಲಿರುವ ಫೇಮಸ್ ನೈಟ್ ಕ್ಲಬ್‌ನಲ್ಲಿ ತಡರಾತ್ರಿ 1 ಗಂಟೆ ಸುಮಾರಿಗೆ ಅಗ್ನಿ ಅವಘಡ ಸಂಭವಿಸಿದೆ. ದುರ್ಘಟನೆಯಲ್ಲಿ 25 ಮಂದಿ ಸಾವನ್ನಪ್ಪಿದ್ದಾರೆ.

ಆರಂಭದಲ್ಲಿ ಕ್ಲಬ್ ಮುಚ್ಚಲು ಸಿದ್ಧತೆ ಮಾಡಿಕೊಳ್ಳುತ್ತಿದ್ದಾಗ ಅಡುಗೆ ಮನೆಯ ಬಳಿ ಗ್ಯಾಸ್ ಸಿಲಿಂಡರ್ ಸ್ಫೋಟಗೊಂಡು ಅವಘಡ ಸಂಭವಿಸಿದೆ ಎನ್ನಲಾಗುತ್ತಿತ್ತು. ಇದೀಗ ಪಟಾಕಿ ಸಿಡಿಸಿದ ಪರಿಣಾಮ ಬೆಂಕಿ ಹೊತ್ತಿಕೊಂಡಿರಬಹುದು ಎಂಬ ಮಾತುಗಳು ಕೇಳಿ ಬರುತ್ತಿವೆ. ಆದರೆ, ಈ ಬಗ್ಗೆ ಅಧಿಕಾರಿಗಳು ಯಾವುದೇ ಸ್ಪಷ್ಟ ಮಾಹಿತಿಗಳನ್ನು ನೀಡಿಲ್ಲ. ತನಿಖೆ ಪೂರ್ಣಗೊಂಡ ಬಳಿಕವಷ್ಟೇ ಸತ್ಯಾಸತ್ಯತೆಗಳು ಬಹಿರಂಗಗೊಳ್ಳಲಿವೆ.

ಮಲಯಾಳಂ ನಟಿ ಮೇಲೆ ಅತ್ಯಾಚಾರ ಪ್ರಕರಣ: ನಟ ದಿಲೀಪ್ ಖುಲಾಸೆ

ಪಲ್ಸರ್ ಸುನಿ ಸೇರಿ ಆರು ಮಂದಿ ತಪ್ಪಿತಸ್ಥರು

ಎರ್ನಾಕುಲಂ: ಮಲಯಾಳಂ ಚಲನಚಿತ್ರೋದ್ಯಮವನ್ನು ಬೆಚ್ಚಿಬೀಳಿಸಿದ ಖ್ಯಾತ ನಟಿಯ ಅಪಹರಣ ಮತ್ತು ಅತ್ಯಾಚಾರ ಪ್ರಕರಣದಲ್ಲಿ ಮಲಯಾಳಂ ನಟ ದಿಲೀಪ್ ಅವರನ್ನು ಕೇರಳ ಕೋರ್ಟ್ ಖುಲಾಸೆಗೊಳಿಸಿದ್ದು, ಪ್ರಮುಖ ಆರೋಪಿ ಪಲ್ಸರ್ ಸುನಿ ಸೇರಿದಂತೆ ಆರು ಆರೋಪಿಗಳು ದೋಷಿ ಎಂದು ಸೋಮವಾರ ತೀರ್ಪು ಪ್ರಕಟಿಸಿದೆ.

2017 ರಲ್ಲಿ ನಟಿಯನ್ನು ಅಪಹರಿಸಿ ಲೈಂಗಿಕ ದೌರ್ಜನ್ಯ ಎಸಗಿದ ಪ್ರಕರಣದ ಸುದೀರ್ಘ ವಿಚಾರಣೆ ನಡೆಸಿದ ಎರ್ನಾಕುಲಂ ಪ್ರಿನ್ಸಿಪಾಲ್ ಸೆಷನ್ಸ್ ನ್ಯಾಯಾಲಯ ಇಂದು ತೀರ್ಪ ಪ್ರಕಟಿಸಿದ್ದು, ನಟ ದಿಲೀಪ್(ಪಿ ಗೋಪಾಲ ಕೃಷ್ಣನ್) ಅವರನ್ನು ಖುಲಾಸೆಗೊಳಿಸಿದೆ.

ಪ್ರಧಾನ ಸೆಷನ್ಸ್ ನ್ಯಾಯಾಧೀಶ ಹನಿ ಎಂ ವರ್ಗೀಸ್, ಫೆಬ್ರವರಿ 2017 ರಲ್ಲಿ ನಟಿಯನ್ನು ಅಪಹರಿಸಿ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದಲ್ಲಿ ಎನ್ ಎಸ್ ಸುನಿಲ್ ಅಲಿಯಾಸ್ ಪಲ್ಸರ್ ಸುನಿ, ಮಾರ್ಟಿನ್ ಆಂಟೋನಿ, ಬಿ ಮಣಿಕಂದನ್, ವಿ ಪಿ ವಿಜೀಶ್, ಎಚ್ ಸಲೀಂ(ವಡಿವಲ್ ಸಲೀಂ) ಮತ್ತು ಪ್ರದೀಪ್ ಅವರನ್ನು ತಪ್ಪಿತಸ್ಥರೆಂದು ಘೋಷಿಸಿದರು.

ಅಪರಾಧ'ದಲ್ಲಿ ಅವರ ನೇರ ಭಾಗಿಯಾಗುವಿಕೆಯನ್ನು ಪ್ರಾಸಿಕ್ಯೂಷನ್ ಯಶಸ್ವಿಯಾಗಿ ಸಾಬೀತುಪಡಿಸಿದೆ ಎಂದು ನ್ಯಾಯಾಲಯ ಹೇಳಿದೆ. ಶಿಕ್ಷೆಯ ಪ್ರಮಾಣವನ್ನು ಶುಕ್ರವಾರ, ಡಿಸೆಂಬರ್ 12, 2025 ರಂದು ಪ್ರಕಟಿಸಲಾಗುವುದು ಎಂದು ಹೇಳಿದೆ. ಆದಾಗ್ಯೂ, ಎಂಟನೇ ಆರೋಪಿ ದಿಲೀಪ್ ವಿರುದ್ಧದ ಕ್ರಿಮಿನಲ್ ಪಿತೂರಿ ಆರೋಪವನ್ನು(ಸೆಕ್ಷನ್ 120 ಬಿ) ಸಾಬೀತುಪಡಿಸಲು ಪ್ರಾಸಿಕ್ಯೂಷನ್ ವಿಫಲವಾಗಿದೆ ಎಂದು ನ್ಯಾಯಾಲಯವು ಹೇಳಿದೆ.



ಇನ್ನು ಆರೋಪಿಗಳಿಗೆ ಆಶ್ರಯ ನೀಡಿದ ಆರೋಪ ಹೊತ್ತಿರುವ ಚಾರ್ಲಿ ಥಾಮಸ್(7ನೇ ಆರೋಪಿ), ದಿಲೀಪ್ ಮತ್ತು ಪ್ರಮುಖ ಆರೋಪಿ ನಡುವೆ ಸಂಪರ್ಕ ಕಲ್ಪಿಸಿದ ಆರೋಪ ಹೊತ್ತಿರುವ ಸನಿಲ್‌ಕುಮಾರ್(9ನೇ ಆರೋಪಿ) ಮತ್ತು ಸಾಕ್ಷ್ಯ ನಾಶಪಡಿಸಿದ ಆರೋಪ ಹೊತ್ತಿರುವ ಶರತ್ ಜಿ ನಾಯರ್(15ನೇ ಆರೋಪಿ) ಅವರನ್ನು ಸಹ ಕೋರ್ಟ್ ಖುಲಾಸೆಗೊಳಿಸಿದೆ.

ಪ್ರಾಸಿಕ್ಯೂಷನ್ ಪ್ರಕಾರ, ಮೊದಲ ಆರು ಆರೋಪಿಗಳು ಅಪಹರಣ ಮತ್ತು ಲೈಂಗಿಕ ದೌರ್ಜನ್ಯದಲ್ಲಿ ನೇರವಾಗಿ ಭಾಗಿಯಾಗಿದ್ದಾರೆ. ಪ್ರಕರಣದಲ್ಲಿ ಇತರ ಮೂವರು ಈ ಹಿಂದೆ ಮಾಫಿಯಾದಾರರಾಗಿದ್ದರು. ಪಲ್ಸರ್ ಸುನಿ ಹಲ್ಲೆಯ ದೃಶ್ಯಗಳನ್ನು ಹೊಂದಿರುವ ಮೊಬೈಲ್ ಫೋನ್ ಅನ್ನು ಹಸ್ತಾಂತರಿಸಿದ್ದರು ಎನ್ನಲಾಗಿದೆ.

2017 ರಲ್ಲಿ ದಾಖಲಾದ ಪ್ರಕರಣದಲ್ಲಿ ನೇರವಾಗಿ ಭಾಗಿಯಾಗಿದ್ದ ಪಲ್ಸರ್ ಸುನಿ ಸೇರಿದಂತೆ ಆರು ಆರೋಪಿಗಳ ವಿರುದ್ಧ ಸಾಮೂಹಿಕ ಅತ್ಯಾಚಾರ, ಅಪಹರಣ ಮತ್ತು ಸಂಚು ರೂಪಿಸಿದ ಆರೋಪಗಳನ್ನು ಹೊರಿಸಲಾಗಿತ್ತು. ಈ ಕೃತ್ಯದಲ್ಲಿ ನೇರವಾಗಿ ಭಾಗವಹಿಸದಿದ್ದರೂ ಘಟನೆಯ ಮುಖ್ಯ ಸೂತ್ರಧಾರ ಎಂದು ದಿಲೀಪ್ ಕುಮಾರ್ ಅವರ ಹೆಸರನ್ನು ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖಿಸಲಾಗಿತ್ತು.

ಕೃತ್ಯದಲ್ಲಿ ನೇರವಾಗಿ ಭಾಗಿಯಾಗಿದ್ದ ಆರು ಆರೋಪಿಗಳು ಸೇರಿದಂತೆ ಒಟ್ಟು ಹತ್ತು ಮಂದಿ ವಿಚಾರಣೆ ಎದುರಿಸಿದ್ದರು. ಸಂತ್ರಸ್ತ ನಟಿಯ ಮೇಲಿನ ವೈಯಕ್ತಿಕ ದ್ವೇಷದಿಂದ ಅತ್ಯಾಚಾರಕ್ಕೆ ಸುಪಾರಿ ನೀಡಿದ್ದರು ಎಂಬುದು ದಿಲೀಪ್ ವಿರುದ್ಧ ಆರೋಪ ಹೊರಿಸಲಾಗಿತ್ತು. ಆದರೆ ನಾನು ಯಾವುದೇ ತಪ್ಪು ಮಾಡಿಲ್ಲ, ತನ್ನನ್ನು ಪ್ರಕರಣದಲ್ಲಿ ಪೊಲೀಸರು ಸಿಲುಕಿಸಿದ್ದಾರೆ ಎಂದು ದಿಲೀಪ್ ವಾದಿಸಿದ್ದರು.

ಮೇಲ್ಮನವಿ ಸಲ್ಲಿಸಲು ಕೇರಳ ಸರ್ಕಾರ ನಿರ್ಧಾರ

ಕೊಚ್ಚಿ: ನಟಿಯೊಬ್ಬರ ಅಪಹರಣ ಮತ್ತು ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ನಟ ದಿಲೀಪ್ ಅವರನ್ನು ಖುಲಾಸೆಗೊಳಿಸಿದ ಎರ್ನಾಕುಲಂ ಸೆಷನ್ಸ್ ನ್ಯಾಯಾಲಯದ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸುವುದಾಗಿ ಕೇರಳ ಸರ್ಕಾರ ಸೋಮವಾರ ಪ್ರಕಟಿಸಿದೆ.

ಸರ್ಕಾರ ಸಂತ್ರಸ್ತೆಯ ಪರವಾಗಿ ದೃಢವಾಗಿ ನಿಲ್ಲುತ್ತದೆ ಮತ್ತು ನ್ಯಾಯವನ್ನು ದೊರಕಿಸಿಕೊಡಲು ಅಗತ್ಯವಿರುವ ಎಲ್ಲ ರೀತಿಯ ಕಾನೂನು ಕ್ರಮಗಳನ್ನು ತೆಗೆದುಕೊಳ್ಳುತ್ತದೆ ಎಂದು ಕಾನೂನು ಸಚಿವ ಪಿ ರಾಜೀವ್ ಹೇಳಿದ್ದಾರೆ. ಈ ಸಂಬಂಧ ಇಂದು ವಿಚಾರಣೆ ನಡೆಸಿದ ಎರ್ನಾಕುಲಂ ಸೆಷನ್ಸ್ ನ್ಯಾಯಾಲಯವು, ಪ್ರಮುಖ ಆರೋಪಿ ಸುನೀಲ್ ಎನ್‌ಎಸ್ ಅಲಿಯಾಸ್ ಪಲ್ಸರ್ ಸುನಿ ಸೇರಿದಂತೆ ಒಂದರಿಂದ ಆರನೇ ಆರೋಪಿಗಳನ್ನು ತಪ್ಪಿತಸ್ಥರು ಎಂದು ಘೋಷಿಸಿದೆ. ಆದರೆ, 7 ರಿಂದ 11 ರವರೆಗಿನ ಆರೋಪಿಗಳನ್ನು ಖುಲಾಸೆಗೊಳಿಸಿದೆ. ಪಿತೂರಿ ಆರೋಪವನ್ನು ಸಾಬೀತುಪಡಿಸಲು ಪ್ರಾಸಿಕ್ಯೂಷನ್ ವಿಫಲವಾಗಿದೆ ಎಂದು ನ್ಯಾಯಾಲಯವು ತೀರ್ಪು ನೀಡಿದ ನಂತರ ಎಂಟನೇ ಆರೋಪಿಯಾಗಿದ್ದ ನಟ ದಿಲೀಪ್ ಎಲ್ಲ ಆರೋಪಗಳಿಂದ ಮುಕ್ತರಾದರು.

ತನಿಖೆ ಮತ್ತು ಪ್ರಾಸಿಕ್ಯೂಷನ್‌ನ ಪ್ರತಿಯೊಂದು ಹಂತದಲ್ಲಿ ಸಂತ್ರಸ್ತೆ ಮತ್ತು ಪ್ರಾಸಿಕ್ಯೂಷನ್ ತಂಡದೊಂದಿಗೆ ನಿಕಟ ಸಮಾಲೋಚನೆ ನಡೆಸಲಾಯಿತು. ಆರಂಭದಿಂದಲೂ, ಸಂತ್ರಸ್ತೆಯನ್ನು ಬೆಂಬಲಿಸಲು ಮತ್ತು ನ್ಯಾಯ ವ್ಯವಸ್ಥೆಯಲ್ಲಿ ಅವರ ನಂಬಿಕೆಯನ್ನು ಎತ್ತಿಹಿಡಿಯಲು ನಾವು ಬದ್ಧರಾಗಿದ್ದೇವೆ. ನಮ್ಮ ಸಂಕಲ್ಪ ಸ್ಪಷ್ಟ ಮತ್ತು ಅಚಲವಾಗಿದೆ ಎಂದು ರಾಜೀವ್ ಹೇಳಿದರು.

ಸಂಪೂರ್ಣ ತೀರ್ಪನ್ನು ಅಧ್ಯಯನ ಮಾಡಿದ ನಂತರ ಸರ್ಕಾರ ತನ್ನ ಮುಂದಿನ ಕಾನೂನು ಕ್ರಮ ಕೈಗೊಳ್ಳುವ ಕುರಿತು ನಿರ್ಧರಿಸುತ್ತದೆ ಎಂದು ಅವರು ಹೇಳಿದರು.

2017ರ ಫೆಬ್ರವರಿ 17ರಂದು ನಟ ದಿಲೀಪ್ ಅವರು ನಟಿಯೊಬ್ಬರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪ ಕೇಳಿಬಂದಿತ್ತು. ಈ ಸಂಬಂಧ ಪೊಲೀಸರು 2017ರ ಜುಲೈ 10 ರಂದು ದಿಲೀಪ್ ಅವರನ್ನು ಬಂಧಿಸಿದ್ದರು. ಬಳಿಕ ದಿಲೀಪ್ ಅವರಿಗೆ ಜಾಮೀನು ದೊರೆತಿತ್ತು.

ಗಾಯಗೊಂಡಿದ್ದ ಬಾಲಕಿ ಸಾವು



ಹಲಗೂರು, ಡಿ.8– ಸಮೀಪದ ದಳವಾಯಿ ಕೋಡಿಹಳ್ಳಿ ಗ್ರಾಮದಲ್ಲಿ ರಸ್ತೆ ದಾಟುತ್ತಿದ್ದ ವೇಳೆ ಬೈಕ್ ಡಿಕ್ಕಿ ಹೊಡೆದ ಪರಿಣಾಮ ತೀವ್ರ ಗಾಯಗೊಂಡಿದ್ದ ಬಾಲಕಿ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾಳೆ.

ದಳವಾಯಿ ಕೋಡಿಹಳ್ಳಿ ಗ್ರಾಮದ ನವೀನ್ ಕುಮಾರ್ ಅವರ ಪುತ್ರಿ ದೀಕ್ಷಿತಾ (8) ಮೃತ ಬಾಲಕಿ. ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 2ನೇ ತರಗತಿ ವ್ಯಾಸಂಗ ಮಾಡುತ್ತಿದ್ದ ದೀಕ್ಷಿತಾ ಡಿ.3ರಂದು ಶಾಲೆ ಮುಗಿಸಿ ಮನೆಗೆ ಹಿಂದಿರುಗುವ ವೇಳೆ ರಸ್ತೆ ದಾಟುತ್ತಿದ್ದಾಗ ಹಲಗೂರು ಕಡೆಯಿಂದ ಕನಕಪುರ ಕಡೆಗೆ ತೆರಳುತ್ತಿದ್ದ ಬೈಕ್ ಡಿಕ್ಕಿ ಹೊಡೆದ ಪರಿಣಾಮ ತೀವ್ರ ಗಾಯಗೊಂಡ ಬಾಲಕಿಯನ್ನು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿತ್ತು ಆದರೆ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾಳೆ. ಈ ಸಂಬಂಧ ಹಲಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಚಿರತೆ ದಾಳಿಗೆ ಮೇಕೆ ಸಾವು

ಹಲಗೂರು, ಡಿ.8– ಚಿರತೆ ದಾಳಿಗೆ ಮೇಕೆ ಸಾವನ್ನಪ್ಪಿ, ಹಸು ಗಾಯಗೊಂಡಿರುವ ಘಟನೆ ಇಲ್ಲಿಗೆ ಸಮೀಪದ ಹುಲ್ಲಹಳ್ಳಿ ಗ್ರಾಮದಲ್ಲಿ ಸೋಮವಾರ ಮುಂಜಾನೆ ನಡೆದಿದೆ.

ಗ್ರಾಮದ ನಾಗೇಂದ್ರ ಅವರಿಗೆ ಸೇರಿದ ಮೇಕೆ ಸಾವನ್ನಪ್ಪಿದ್ದು, ಹಸು ಗಾಯಗೊಂಡಿದೆ. ನಾಗೇಂದ್ರ ಅವರು ತಮ್ಮ ಮನೆಯ ಹಿಂಭಾಗದಲ್ಲಿರುವ ಕೊಟ್ಟಿಗೆಯಲ್ಲಿ ಮೇಕೆ ಸೇರಿದಂತೆ ಹಸುವನ್ನು ಕಟ್ಟಿ ಹಾಕಿದ್ದರು. ಈ ವೇಳೆ ಚಿರತೆ ದಾಳಿ ನಡೆಸಿ ಮೇಕೆ ಬಲಿ ಪಡೆದು ಹಸುವನ್ನು ಗಾಯಗೊಳಿಸಿದೆ. ಸೋಮವಾರ ಬೆಳಗ್ಗೆ ನೋಡಿದಾಗ ಪ್ರಕರಣ ಬೆಳಕಿಗೆ ಬಂದಿದೆ. ಘಟನೆಯಿಂದ ಗ್ರಾಮದಲ್ಲಿ ಭೀತಿಯ ವಾತಾವರಣ ಸೃಷ್ಟಿಯಾಗಿದ್ದು, ತಕ್ಷಣ ಚಿರತೆ ಸೆರೆಹಿಡಿಯಲು ಬೋನು ಇಡುವಂತೆ ಹಾಗೂ ಅಗತ್ಯ ಕ್ರಮ ಕೈಗೊಳ್ಳುವಂತೆ ಅರಣ್ಯ ಇಲಾಖೆಗೆ ಗ್ರಾಮಸ್ಥರು ಮನವಿ ಮಾಡಿದ್ದಾರೆ.

ಕಾಡಾನೆ ದಾಳಿಗೆ ಭತ್ತದ ಫಸಲು ನಾಶ

ಹಲಗೂರು, ಡಿ.8– ಕಾಡಾನೆ ದಾಳಿಗೆ ಭತ್ತದ ಫಸಲು ನಾಶವಾಗಿರುವ ಘಟನೆ ಇಲ್ಲಿನ ಸಮೀಪದ ಗೊಲ್ಲರಹಳ್ಳಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಮಹದೇವ ಅವರಿಗೆ ಸೇರಿದ ಭತ್ತದ ಫಸಲು ನಾಶವಾಗಿರುವುದು. ಭಾನುವಾರ ತಡರಾತ್ರಿ ದಾಳಿ ನಡೆಸಿದ ಕಾಡಾನೆ ಕಟಾವಿಗೆ ಬಂದಿದ್ದ ಭತ್ತದ ಫಸಲನ್ನು ತಿಂದು ತುಳಿದು ನಾಶಪಡಿಸಿದೆ.

ಜಮೀನಿನ ಮಾಲೀಕ ಮಹದೇವು ಮಾತನಾಡಿ, ನಾನು ಹಲಗೂರಿನಲ್ಲಿ ವಾಸವಾಗಿದ್ದು ಒಂದು ಎಕರೆ ಜಮೀನನ್ನು ಗುತ್ತಿಗೆ ಪಡೆದು ಭತ್ತ ಬೆಳೆದಿದ್ದೆ. ಆದರೆ ತಡರಾತ್ರಿ ಬಸವನ ಬೆಟ್ಟದ ಕಾಡಿನಿಂದ ಬಂದ ಒಂಟಿ ಸಲಗ ಭತ್ತದ ಗದ್ದೆ ತುಳಿದು ನಾಶಗೊಳಿಸಿದೆ. ಇದರಿಂದ ಸುಮಾರು 30 ಸಾವಿರಕ್ಕೂ ಹೆಚ್ಚು ನಷ್ಟ ಸಂಭವಿಸಿದೆ. ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸೂಕ್ತ ಪರಿಹಾರ ನೀಡುವಂತೆ ಮನವಿ ಮಾಡಿದ್ದಾರೆ.

ಚಿರತೆ ದಾಳಿಗೆ 4 ಕುರಿಗಳ ಸಾವು

ಮದ್ದೂರು, ಡಿ.8– ಚಿರತೆ ದಾಳಿಗೆ 4 ಕುರಿಗಳು ಸಾವನ್ನಪ್ಪಿದ್ದು, 2 ಕುರಿಗಳು ತೀವ್ರವಾಗಿ ಗಾಯಗೊಂಡಿರುವ ಘಟನೆ ಜರುಗಿದೆ.

ತಾಲೂಕಿನ ವಳಗೆರೆಹಳ್ಳಿ ಗ್ರಾಮದ ರೈತ ಶ್ರೀನಿವಾಸ್ ಎಂಬುವರಿಗೆ ಸೇರಿದ ಕುರಿಗಳು ಸಾವನ್ನಪ್ಪಿರುವುದು. ಮನೆ ಹಿಂಭಾಗದ ಕೊಟ್ಟಿಗೆಗೆ ಭಾನುವಾರ ರಾತ್ರಿ 10 ಗಂಟೆ ವೇಳೆ ನುಗ್ಗಿರುವ ಚಿರತೆ 18 ಕುರಿಗಳ ಪೈಕಿ 6 ಕುರಿಗಳ ಮೇಲೆ ದಾಳಿ ಮಾಡಿದೆ. ಕುರಿಗಳ ಚೀರಾಟದಿಂದ ಕೊಟ್ಟಿಗೆಗೆ ಬಂದ ಶ್ರೀನಿವಾಸ್ ಚಿರತೆ ದಾಳಿ ಮಾಡುತ್ತಿರುವುದು ಕಂಡು ಆತಂಕಗೊಂಡು ಚೀರಾಟ ನಡೆಸಿದ ಪರಿಣಾಮ ಚಿರತೆ ಪರಾರಿಯಾಗಿದೆ. ಅಷ್ಟರಾಗಲೇ ಚಿರತೆ 4 ಕುರಿಗಳನ್ನು ಬಲಿ ಪಡೆದು 2 ಕುರಿಗಳನ್ನು ಗಾಯಗೊಳಿಸಿದೆ.

ತಾಲೂಕಿನಾದ್ಯಂತ ಚಿರತೆಗಳ ಉಪಟಳ ಹೆಚ್ಚಾಗಿದ್ದು, ಇದರಿಂದ ರಾತ್ರಿ ವೇಳೆ ರೈತರು ಜಮೀನುಗಳಿಗೆ ಹೋಗಲು ಹೆದರುವ ಸ್ಥಿತಿ ನಿರ್ಮಾಣವಾಗಿದೆ. ಕೆಲವು ಗ್ರಾಮಗಳಲ್ಲಿ ಹಾಡಹಗಲೇ ಚಿರತೆಗಳು ಕಾಣಿಸಿಕೊಳ್ಳುತ್ತಿವೆ. ಇದರಿಂದ ಗ್ರಾಮಸ್ಥರು ಭಯಭೀತರಾಗಿದ್ದಾರೆ. ಆದ್ದರಿಂದ ಅರಣ್ಯ ಅಧಿಕಾರಿಗಳು ಚಿರತೆ ಉಪಟಳ ತಡೆಯಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ರೈತರು ಆಗ್ರಹಿಸಿದ್ದಾರೆ.

ಅಗ್ರಹಾರಬಾಚಹಳ್ಳಿ ಗ್ರಾಪಂ ನೂತನ ಕಟ್ಟಡಕ್ಕೆ ಭೂಮಿ ಪೂಜೆ

ನಿವೇಶನ ನೀಡಲು ಗ್ರಾಪಂ ಆಡಳಿತ ಮಂಡಳಿ ಮುಂದಾಗಬೇಕು: ಶಾಸಕ ಹೆಚ್.ಟಿ.ಮಂಜು

ಕೆ.ಆರ್.ಪೇಟೆ, ಡಿ.8– ಗ್ರಾಪಂ ವ್ಯಾಪ್ತಿ ಸರ್ಕಾರಿ ಜಾಗ ಗುರುತಿಸಿ ಬಡವರಿಗೆ ನಿವೇಶನ ವಿತರಿಸಲು ಗ್ರಾಪಂ ಅಧ್ಯಕ್ಷರು ಹಾಗೂ ಸದಸ್ಯರು ಮತ್ತು ಅಧಿಕಾರಿಗಳು ಮುಂದಾಗಬೇಕು. ನಿವೇಶನ ನೀಡಿದರೆ ಬಡವರಿಗೆ ಶಾಶ್ವತ ಸೂರು ನೀಡಿದಂತಾಗುತ್ತದೆ. ಇದರಿಂದ ಗ್ರಾಪಂಗೆ ಒಳ್ಳೆಯ ಹೆಸರು ಬರುತ್ತದೆ ಎಂದು ಶಾಸಕ ಹೆಚ್.ಟಿ.ಮಂಜು ತಿಳಿಸಿದರು.

ತಾಲೂಕಿನ ಅಗ್ರಹಾರಬಾಚಹಳ್ಳಿ ಗ್ರಾಪಂ ಹಾಗೂ ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನಾ ಇಲಾಖೆ (ಕೆಶಿಫ್) ಇವರ ಸಂಯುಕ್ತ ಆಶ್ರಯದಲ್ಲಿ ನಿರ್ಮಿಸಲಾಗುತ್ತಿರುವ ಗ್ರಾಪಂ ನೂತನ ಕಟ್ಟಡ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಗ್ರಾಪಂಗಳು ಸ್ಥಳೀಯ ಸರ್ಕಾರ ಇದ್ದಂತೆ. ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಾಕಷ್ಟು ಯೋಜನೆಗಳನ್ನು ಗ್ರಾಪಂಗಳ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. ಹೀಗಾಗಿ ಗ್ರಾಪಂ ಆಡಳಿತ ಮಂಡಳಿ ಗ್ರಾಪಂ ವ್ಯಾಪ್ತಿಯಲ್ಲಿ ಎಲ್ಲೆಲ್ಲಿ ಸರ್ಕಾರಿ ಜಮೀನಿದೆ ಎಂಬುದನ್ನು ಕಂದಾಯ ಇಲಾಖೆ ಅಧಿಕಾರಿಗಳಿಂದ ಮಾಹಿತಿ ಪಡೆದು ನಿವೇಶನ ಹಂಚಿಕೆ ಮಾಡಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದ ಅವರು ಅಗ್ರಹಾರಬಾಚಹಳ್ಳಿಯ ಹೈಸ್ಕೂಲ್ ಬಳಿ ಕೀರೇಮಡಿ ಸರ್ಕಾರಿ ಭೂಮಿಯನ್ನು ಸರ್ವೆ ನಡೆಸಿ, ಸಮತಟ್ಟು ಮಾಡಿಸಿ ನಿವೇಶನ ಹಂಚಿಕೆಗೆ ಕ್ರಮ ವಹಿಸುತ್ತಿರುವುದಕ್ಕೆ ಶಾಸಕರು ಮೆಚ್ಚುಗೆ ವ್ಯಕ್ತಪಡಿಸಿದರು.



ಗ್ರಾಪಂ ನೂತನ ಕಟ್ಟಡ ಕಾಮಗಾರಿಗೆ ಶಾಸಕ ಹೆಚ್.ಟಿ.ಮಂಜು ಭೂಮಿ ಪೂಜೆ ನೆರವೇರಿಸಿದರು.

ಇದೇ ರೀತಿ ಎಲ್ಲಾ ಗ್ರಾಪಂಗಳು ನಿವೇಶನ ವಿತರಣೆಗೆ ಕ್ರಮ ವಹಿಸಬೇಕು. ನಿವೇಶನ ಹಕ್ಕುಪತ್ರ ವಿತರಣೆಗೆ ಅಧಿಕಾರಿಗಳು ಮತ್ತು ಸರ್ಕಾರದ ಮಟ್ಟದಲ್ಲಿ ಆಗಬೇಕಾದ ಕೆಲಸಗಳನ್ನು ಶಾಸಕನಾಗಿ ನಾನು ಮುಂದೆ ನಿಂತು ಮಾಡಿಸಿಕೊಡುತ್ತೇನೆ. ಹಾಗಾಗಿ ಗ್ರಾಪಂಗಳು ನಿವೇಶನ ಹಂಚಿಕೆಗೆ ತುರ್ತು ಕ್ರಮ ವಹಿಸಬೇಕು. ಜೊತೆಗೆ ನರೇಗಾ ಕಾಮಗಾರಿಗಳನ್ನು ಹೆಚ್ಚು ಕೈಗೊಂಡು ಗ್ರಾಮಾಭಿವೃದ್ಧಿಗೆ ಕೈ ಜೋಡಿಸಬೇಕು ಎಂದರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಮಗದ ಅಧ್ಯಕ್ಷ ಬಿ.ನಾಗೇಂದ್ರ ಕುಮಾರ್ ಮಾತನಾಡಿ, ಅಗ್ರಹಾರಬಾಚಹಳ್ಳಿ ಅಭಿವೃದ್ಧಿಗೆ ಶಾಸಕರೊಂದಿಗೆ ಸರ್ಕಾರ ಹಾಗೂ ಅಧಿಕಾರಿಗಳ ಮಟ್ಟದಲ್ಲಿ ಕೆಲಸ ಮಾಡಿಸಿಕೊಡಲು ಕೈ ಜೋಡಿಸುತ್ತೇನೆ ಎಂದು ಭರವಸೆ ನೀಡಿದರು.

ಗ್ರಾಪಂ ಅಧ್ಯಕ್ಷ ಎ.ಸಿ.ದಿವಿಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಪಿಡಿಪಿ ಜಿ.ಎಸ್.ಶಿಲ್ಪ, ತಾಪಂ ಇಒ ಸುಷ್ಮಾ.ಕೆ, ತಾಪಂ ಯೋಜನಾಧಿಕಾರಿ ಶ್ರೀನಿವಾಸ್, ಕೆಶಿಫ್ ಕಾರ್ಯಪಾಲಕ ಇಂಜಿನಿಯರ್ ಶಿವಕುಮಾರ್, ಎಇಇ ಶಿವರಾಜು, ಇಂಜಿನಿಯರ್ ಮದನ್‌ಕುಮಾರ್, ಕಸಬಾ ರಾಜಸ್ವ ನಿರೀಕ್ಷಕ ಜ್ಞಾನೇಶ್, ಗ್ರಾಪಂ ಉಪಾಧ್ಯಕ್ಷೆ ಸುನೀತಾ, ತಾಪಂ ಮಾಜಿ ಅಧ್ಯಕ್ಷ ಮಹದೇವೇಗೌಡ, ಸೊಸೈಟಿ ಅಧ್ಯಕ್ಷ ಅಶೋಕ್, ಹಿರಿಯ ಮುಖಂಡರಾದ ರಘು, ಅಣ್ಣೇಗೌಡ, ಚಂದ್ರೇಗೌಡ, ಎ.ಎಸ್.ಪುಟ್ಟಸ್ವಾಮೀಗೌಡ, ಎ.ಎಸ್.ರಾಮಚಂದ್ರೇಗೌಡ, ಡಿ.ರಾಜೇಗೌಡ, ಎ.ಹೆಚ್.ಯೋಗೇಶ್, ನಾಗೇಶ್, ಬಸವೇಗೌಡ, ಮರೀಗೌಡ, ಕರವೇ ತಾಲೂಕು ಅಧ್ಯಕ್ಷ ಎ.ಎಸ್.ಶ್ರೀನಿವಾಸ್, ರೂಪೇಶಾಚಾರ್, ಮಹಾದೇವೇಗೌಡ, ಗ್ರಾಪಂ ಸದಸ್ಯರಾದ ಚನ್ನೇಗೌಡ, ಕುಮಾರಗೌಡ, ಫಯಾಜ್ ಉಲ್ಲಾಖಾನ್, ಸಾವಿತ್ರಮ್ಮ, ಭಾಗ್ಯ, ರೇಣುಕಾ, ಆಶಾ, ಶಶಿರೇಖಾ, ವೈ.ಎಂ.ನೇತ್ರಾವತಿ, ರೇವತಿ, ಪ್ರೇಮಾ, ನೇತ್ರಾವತಿ, ನಂಜೇಗೌಡ, ದಿನೇಶ್, ಕುಮಾರ್, ಚಿಲ್ಲದಹಳ್ಳಿ ಆರ್.ಶ್ರೀನಿವಾಸ್, ಕಾರ್ಯದರ್ಶಿ ಚಂದ್ರಕುಮಾರ್, ಎಫ್‌ಡಿಸಿ ಟಿ.ಗೀತಾ, ಬಿಲ್ ಕಲೆಕ್ಟರ್ ನರಸಿಂಹಯ್ಯ, ಡಿಇಓ ತ್ರಿವೇಣಿ.ಎ. ಸೇರಿದಂತೆ ಇತರರಿದ್ದರು.

ಮಳವಳ್ಳಿಯಲ್ಲಿ ಸುತ್ತೂರು ಶಿವರಾತ್ರಿ ಶಿವಯೋಗಿಗಳ 1066ನೇ ಜಯಂತಿ ಹಿನ್ನೆಲೆ

ರಾಷ್ಟ್ರಪತಿ ಭಾಗಿ; ಡಿಸಿ, ಐಜಿಪಿಯಿಂದ ಸ್ಥಳ ಪರಿಶೀಲನೆ

ಮಳವಳ್ಳಿ, ಡಿ.8– ಪಟ್ಟಣದಲ್ಲಿ ನಡೆಯುವ ಸುತ್ತೂರು ಶಿವರಾತ್ರಿ ಶಿವಯೋಗಿಗಳ 1066ನೇ ಜಯಂತಿ ಮಹೋತ್ಸವ ಉದ್ಘಾಟನೆಗೆ ಡಿ.17ರಂದು ರಾಷ್ಟ್ರಪತಿ ದ್ರೌಪತಿ ಮುರ್ಮು ಆಗಮಿಸುವ ಹಿನ್ನೆಲೆಯಲ್ಲಿ ಹೆಲಿಪ್ಯಾಡ್, ವೇದಿಕೆ ಹಾಗೂ ಇತರೆ ಸ್ಥಳಗಳನ್ನು ಸೋಮವಾರ ದಕ್ಷಿಣ ವಲಯ ಡಿಐಜಿಪಿ ಬೋರಲಿಂಗಯ್ಯ, ಜಿಲ್ಲಾಧಿಕಾರಿ ಡಾ.ಕುಮಾರ್ ಸೇರಿದಂತೆ ಇತರೆ ಅಧಿಕಾರಿಗಳು ಪರಿಶೀಲನೆ ನಡೆಸಿದರು.



ದಕ್ಷಿಣ ವಲಯ ಡಿಐಜಿಪಿ ಬೋರಲಿಂಗಯ್ಯ, ಡಿಸಿ ಡಾ.ಕುಮಾರ್ ಸ್ಥಳ ಪರಿಶೀಲಿಸಿದರು.

ಪಟ್ಟಣದ ಹೊರವಲಯದ ಮಾರೇಹಳ್ಳಿ ಬಳಿ ನಿರ್ಮಿಸುತ್ತಿರುವ ಹೆಲಿಪ್ಯಾಡ್‌ಗೆ ತೆರಳಿ ಗ್ರೀನ್ ರೂಂ ನಿರ್ಮಾಣ, ವಿದ್ಯುತ್ ಕಂಬಗಳ ತೆರವು, ಜಾಗ ಸಮತಟ್ಟಾಗಿಸುವುದು, ಕಾರ್ಯಕ್ರಮಕ್ಕೆ ರಾಷ್ಟ್ರಪತಿಗಳು ತೆರಳುವ ಮಾರ್ಗ, ಮೂಲ ಸೌಲಭ್ಯಗಳ ಅಳವಡಿಕೆ ಕುರಿತು ತೆಗೆದುಕೊಂಡಿರುವ ಕ್ರಮಗಳ ಚರ್ಚೆ ನಡೆಸಿದರು.

ನಂತರ ಪ್ರವಾಸಿ ಮಂದಿರ, ತಾಲೂಕು ಆಸ್ಪತ್ರೆಗೆ ಭೇಟಿ ನೀಡಿ ಆಡಳಿತಾಧಿಕಾರಿಗಳ ಜೊತೆಗೆ ಚರ್ಚೆ ನಡೆಸಿ ದಿನದ 24 ಗಂಟೆಯೂ ಆರೋಗ್ಯ ಸಿಬ್ಬಂದಿ ಲಭ್ಯವಿರಬೇಕು. ತುರ್ತು ಚಿಕಿತ್ಸೆಗೆ ಬೇಕಾದ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ಡಾ.ಸಂಜಯ್ ಹಾಗೂ ತಾಲೂಕು ವೈದ್ಯಾಧಿಕಾರಿ ಡಾ. ವೀರಭದ್ರಪ್ಪ ಅವರಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಡಿ.17ರಿಂದ 22ವರೆಗೆ ನಡೆಯುವ ಜಯಂತೋತ್ಸವಕ್ಕೆ ರಾಷ್ಟ್ರಪತಿಗಳು, ಮುಖ್ಯಮಂತ್ರಿ ಸೇರಿದಂತೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಚಿವರು ಆಗಮಿಸುವ ಹಿನ್ನೆಲೆಯಲ್ಲಿ ಸಾರ್ವಜನಿಕರ ವಾಹನಗಳ ಪಾರ್ಕಿಂಗ್ ವ್ಯವಸ್ಥೆ, ಗಣ್ಯ ವ್ಯಕ್ತಿಗಳ ವಾಸ್ತವ್ಯಕ್ಕೆ ತಾಲೂಕು ವ್ಯಾಪ್ತಿಯ ಎಲ್ಲಾ ಲಾಡ್ಜ್, ಕಲ್ಯಾಣ ಮಂಟಪ, ರೆಸಾರ್ಟ್‌ಗಳ ರೂಂಗಳನ್ನು ಕಾಯ್ದಿರಿಸುವುದು, ಕಾನೂನು ಸುವ್ಯವಸ್ಥೆಗೆ ಧಕ್ಕೆ ಬಾರದಂತೆ ಫ್ಲೆಕ್ಸ್, ಬ್ಯಾನರ್ ಅಳವಡಿಕೆ, ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕುರಿತು ಎಚ್ಚರಿಕೆ ವಹಿಸಬೇಕೆಂದು ಪೊಲೀಸ್ ಅಧಿಕಾರಿಗಳಿಗೆ ಸಲಹೆ ನೀಡಿದರು.

ಜಯಂತಿ ನಡೆಯುವ ವೇದಿಕೆ ಬಳಿ ಪರಿಶೀಲಿಸಿ ವೇದಿಕೆ ಅಳತೆ, ಗಣ್ಯರ ಆಗಮನದ ಮುಖ್ಯದ್ವಾರ, ಪಾರ್ಕಿಂಗ್, ಊಟದ ವ್ಯವಸ್ಥೆ, ಕುಡಿಯುವ ನೀರು ಸೇರಿದಂತೆ ಮೂಲ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆದರು.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಎಸಿ ಶಿವಮೂರ್ತಿ, ತಹಸೀಲ್ದಾರ್ ಲೋಕೇಶ್, ಪುರಸಭೆ ಮುಖ್ಯಾಧಿಕಾರಿ ನಾಗರತ್ನ, ಲೋಕೋಪಯೋಗಿ ಇಂಜಿನಿಯರ್ ಸೋಮಶೇಖರ್, ಸೆಸ್ಕ್ ಕಾರ್ಯಪಾಲಕ ಇಂಜಿನಿಯರ್ ಪ್ರೇಮ್ ಕುಮಾರ್, ಗ್ರಾಮಾಂತರ ವೃತ್ತ ನಿರೀಕ್ಷಕ ಶ್ರೀಧರ್, ತಾಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು, ಜಯಂತಿ ಮಹೋತ್ಸವದ ವಿದ್ಯಾ ಪೀಠದ ಅಧಿಕಾರಿಗಳು ಉಪಸ್ಥಿತರಿದ್ದರು.

ಮಹಿಳೆ ಮಾಂಗಲ್ಯ ಸರ ಕಳವು

ಭಾರತೀನಗರ, ಡಿ.8– ಬುಡಬುಡಿಕೆ ವ್ಯಕ್ತಿಯೋರ್ವ ಮಹಿಳೆಯ ಕರಿಮಣಿ ಮಾಂಗಲ್ಯ ಸರ ಕಸಿದು ಪರಾರಿಯಾಗಿರುವ ಘಟನೆ ಇಲ್ಲಿಗೆ ಸಮೀಪದ ಕಡಿಲುವಾಗಿಲು ಗ್ರಾಮದಲ್ಲಿ ನಡೆದಿದೆ.

ಕಡಿಲುವಾಗಿಲು ಗ್ರಾಮದ ನಂಜಮ್ಮ ಮಾಂಗಲ್ಯ ಸರ ಕಳೆದುಕೊಂಡವರು. ಬುಡಬುಡಿಕೆ ವ್ಯಕ್ತಿಯೋರ್ವ ಮನೆ ಬಳಿ ಬಂದಾಗ ಈಕೆ ನನ್ನ ಮಗನಿಗೆ ಮದುವೆಯಾಗಿಲ್ಲ, ಯಾವಾಗ ಮದುವೆಯಾಗುತ್ತದೆ ಎಂದು ಕೇಳಿದ್ದಾರೆ. ಮಗನಿಗೆ ಕಂಕಣ ಭಾಗ್ಯ ಕೂಡಿ ಬರಲು ಮಡಿಕೆಯಲ್ಲಿ ನಿನ್ನ ಮಾಂಗಲ್ಯ ಸರ ಇಟ್ಟು ಪೂಜೆ ಮಾಡು ಎಂದು ನಂಬಿಸಿ ಮೋಡಿ ಮಾಡಿದ್ದಾನೆ. ಆ ಮೋಡಿಗೆ ಮರುಳಾದ ನಂಜಮ್ಮ ಮಡಿಕೆಯಲ್ಲಿ 15 ಗ್ರಾಂ ತೂಕದ ಮಾಂಗಲ್ಯ ಸರ ಹಾಕಿದ್ದಾಳೆ. ಪೂಜೆ ಮಾಡಲು ಒಳ ಹೋಗಿ ಪೂಜಾ ಸಾಮಾಗ್ರಿಗಳನ್ನು ತರಲು ಮುಂದಾದಾಗ ಬುಡಬುಡಿಕೆ ವ್ಯಕ್ತಿ ಮಾಂಗಲ್ಯದೊಂದಿಗೆ ಪರಾರಿಯಾಗಿದ್ದಾನೆ.

ಮೋಡಿಗೆ ಒಳಗಾಗಿದ್ದ ಆಕೆ ಒಂದು ತಾಸು ಪ್ರಜ್ಞಾಹೀನಳಾಗಿದ್ದಾಳೆ. ನಂತರ ನೋಡಿದಾಗ ಬುಡುಬುಡಿಕೆಯವನು ಪರಾರಿಯಾಗಿರುವುದು ಬೆಳಕಿಗೆ ಬಂದಿದೆ. ಈ ವಿಷಯವನ್ನು ನಂಜಮ್ಮ ತನ್ನ ಮಗನಿಗೆ ತಿಳಿಸಿದ್ದು, ಕೆ.ಎಂ.ದೊಡ್ಡಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಕೆ.ಎಂ.ದೊಡ್ಡಿ ಠಾಣೆ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಉದರ ದರ್ಶಕ ಸಂತಾನಹರಣ ಶಸ್ತ್ರ ಚಿಕಿತ್ಸೆ

ಮಂಡ್ಯ, ಡಿ.8– ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಡಿಸೆಂಬರ್ ಮಾಹೆಯ ಉದರ ದರ್ಶಕ ಸಂತಾನಹರಣ ಶಸ್ತ್ರ ಚಿಕಿತ್ಸೆ ಡಿ.9 ಶ್ರೀರಂಗಪಟ್ಟಣ ತಾಲೂಕು ಆಸ್ಪತ್ರೆ, ಡಿ.10 ಕೆ.ಆರ್.ಪೇಟೆ ತಾಲೂಕು ಆಸ್ಪತ್ರೆ, ಡಿ.11 ಮದ್ದೂರು ತಾಲೂಕು ಆಸ್ಪತ್ರೆ, ಡಿ.12 ಪಾಂಡವಪುರ ಉಪವಿಭಾಗ ಆಸ್ಪತ್ರೆ, ಡಿ.15 ನಾಗಮಂಗಲ ಸಾರ್ವಜನಿಕ ಆಸ್ಪತ್ರೆ, ಡಿ.16 ಶ್ರೀರಂಗಪಟ್ಟಣ ತಾಲೂಕು ಆಸ್ಪತ್ರೆ, ಡಿ.17 ಕೆ.ಆರ್. ಪೇಟೆ ತಾಲೂಕು ಆಸ್ಪತ್ರೆ, ಡಿ.18 ಮದ್ದೂರು ತಾಲೂಕು ಆಸ್ಪತ್ರೆ, ಡಿ.20 ಮಂಡ್ಯ ಮಿಮ್ಸ್ ಆಸ್ಪತ್ರೆ, ಡಿ.23 ರಂದು ನಾಗಮಂಗಲ ಸಾರ್ವಜನಿಕ ಆಸ್ಪತ್ರೆಯಲ್ಲಿ. ಪ್ರತಿ ಮಂಗಳ ವಾರ ಮಳವಳ್ಳಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಬೆಳಗ್ಗೆ 10 ಗಂಟೆಗೆ ಉದರ ದರ್ಶಕ ಸಂತಾನಹರಣ ಶಸ್ತ್ರ ಚಿಕಿತ್ಸೆ ನಡೆಸಲಾ ಗುವುದು ಎಂದು ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಂದನೇ ಪುಟದಿಂದ

ಮಧ್ಯದಲ್ಲಿ ರಾಜ್ಯ ಬಿಕ್ಕಟ್ಟು ಶಮನ

ಧೋರಣೆಯನ್ನು ಹೊಂದಿದ್ದು, ನಾಯಕತ್ವ ವಿಚಾರದಲ್ಲಿ ಸೋನಿಯಾ ಅವರು ಮಧ್ಯಪ್ರವೇಶಿಸಿರುವುದು, ಡಿಕೆ.ಶಿವಕುಮಾರ್ ಬೆಂಬಲಿಗರಲ್ಲಿ ಸಂತಸ ಮೂಡಿಸಿದೆ

2023 ರಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗ ನಡೆದ ಅಧಿಕಾರ ಹಂಚಿಕೆ ಒಪ್ಪಂದವಾಗಿದ್ದು, ಈ ಒಪ್ಪಂದದ ವೇಳೆ ಸೋನಿಯಾ ಮತ್ತು ಅವರ ಪುತ್ರಿ ಪ್ರಿಯಾಂಕಾ ಗಾಂಧಿ ವಾದ್ರಾ ಕೂಡ ಇದ್ದರೂ ಎನ್ನಲಾಗಿದೆ. ಒಪ್ಪಂದದ ಪ್ರಕಾರ, ಸಿದ್ದರಾಮಯ್ಯ ಅವರು ಎರಡೂವರೆ ವರ್ಷಗಳ ಅವಧಿಯನ್ನು ಪೂರ್ಣಗೊಳಿ ಸಿದ ನಂತರ ಸಿಎಂ ಹುದ್ದೆಯನ್ನು ಡಿಕೆ. ಶಿವಕುಮಾರ್ ಅವರಿಗೆ ಬಿಟ್ಟುಕೊಡಬೇಕಾಗುತ್ತದೆ.

ಈ ನಡುವೆ ಸಿದ್ದರಾಮಯ್ಯ ಬೆಂಬಲಿಗರು ಮುಖ್ಯಮಂತ್ರಿ ಸ್ಥಾನದಲ್ಲಿ ಸಿದ್ದರಾಮಯ್ಯ ಅವರನ್ನು ಮುಂದುವರೆಸಬೇಕೆಂದು ರಾಹುಲ್ ಗಾಂಧಿಯವರನ್ನು ಒತ್ತಾಯಿಸುತ್ತಿದ್ದಾರೆ. ಒಂದು ಸಿದ್ದರಾಮಯ್ಯ ಅವರನ್ನು ಬಲವಂತವಾಗಿ ಕೆಳಗಿಳಿಸಿದರೆ ಅಹಿಂದ ಸಮುದಾಯಗಳ ಬೆಂಬಲ ಕಳೆದುಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆಂದು ತಿಳಿದುಬಂದಿದೆ.

ದೆಹಲಿಯಲ್ಲಿ ಇತ್ತೀಚೆಗೆ ರಾಹುಲ್ ಗಾಂಧಿ ಅವರನ್ನು ಭೇಟಿಯಾಗಿ ಒಂದು ಗಂಟೆಗೂ ಹೆಚ್ಚು ಕಾಲ ರಾಜ್ಯದ ರಾಜಕೀಯ ಬೆಳವಣಿಗೆಗಳ ಕುರಿತು ಚರ್ಚಿಸಿದ ಪ್ರಿಯಾಂಕ್ ಅವರು, ಡಿಕೆ. ಶಿವಕುಮಾರ್ ಅವರಿಗೆ ಹತ್ತಿರವಾಗುತ್ತಿದ್ದು. ಇತ್ತೀಚೆಗೆ ಡಿಕೆ.ಶಿವಕುಮಾರ್ ಅವರನ್ನು ಭೇಟಿಯಾಗುವ ಮೂಲಕ ಹೈಕಮಾಂಡ್ ಶಿವಕುಮಾರ್ ಜೊತೆ ನಿಲ್ಲುವ ಸಾಧ್ಯತೆ ಇದೆ ಎಂಬ ಸಂದೇಶವನ್ನು ರವಾನಿಸಿದ್ದಾರೆ. ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯನವರಿಗಿಂತ ಮೊದಲು ಕಾಂಗ್ರೆಸ್ ಇರಲಿಲ್ಲವೇ? ಎಂದು ಪ್ರಶ್ನಿಸಿದ್ದಾರೆ.

ಏತನ್ಮಧ್ಯೆ ಸೋನಿಯಾ ಗಾಂಧಿಯವರು ನಿರ್ಧಾರ ತೆಗೆದುಕೊಳ್ಳುವ ಮೊದಲು ಹಲವಾರು ಆಯ್ಕೆಗಳನ್ನು ಪರಿಗಣಿಸುವ ಸಾಧ್ಯತೆಯಿದ್ದು, ಸಿದ್ದರಾಮಯ್ಯ ಮತ್ತು ಶಿವಕುಮಾರ್ ಆಪ್ತರ ನಡುವೆ ಭಿನ್ನಾಭಿಪ್ರಾಯ ಮುಂದುವರಿದರೆ, ಮಲ್ಲಿಕಾರ್ಜುನ ಖರ್ಗೆ ಅವರನ್ನು ಸಿಎಂ ಹುದ್ದೆಗೆ ಒಮ್ಮತದ ಅಭ್ಯರ್ಥಿಯನ್ನಾಗಿ ಹೆಸರಿಸುವ ಬಗ್ಗೆಯೂ ಯೋಚಿಸಬಹುದು ಎಂದು ಖರ್ಗೆ ಅವರ ಬೆಂಬಲಿಗರು ಹೇಳಿದ್ದಾರೆ.

ಸಿದ್ದರಾಮಯ್ಯ ಅವರ ಮನವೊಲಿಸಿದ್ದೇ ಆದರೆ, ಹಿಂದುಳಿದ ವರ್ಗಗಳ ಮೇಲೆ ವಿಶೇಷವಾಗಿ ಕುರುಬ ಸಮುದಾಯದ ಮೇಲೆ ಪ್ರಭಾವ ಬೀರಲು ಹೈಕಮಾಂಡ್ ಸಿದ್ದರಾಮಯ್ಯಅವರನ್ನು ರಾಜ್ಯಸಭೆಗೆ ನಾಮನಿರ್ದೇಶನ ಮಾಡಬಹುದು ಅಥವಾ ಎಲ್‌ಒಪಿ ಹುದ್ದೆಗೆ ಪರಿಗಣಿಸಬಹುದು ಎಂದು ಕಾಂಗ್ರೆಸ್‌ನ ಹಿರಿಯ ನಾಯಕರೊಬ್ಬರು ತಿಳಿಸಿದ್ದಾರೆ.

ಬದಲಾವಣೆಗೆ ಹೈಕಮಾಂಡ್ ಸಮ್ಮತಿಸಿಲ್ಲ

ಡಿಸಿಎಂ ಡಿಕೆ ಶಿವಕುಮಾರ್ ಅವರು ಅವಕಾಶ ಕೊಡಿ ಎಂದು ಕೇಳಿದ್ದರು. ಆದರೆ, ನಾಯಕತ್ವ ಬದಲಾವಣೆ ಪರಿಸ್ಥಿತಿ ಈಗ ಇಲ್ಲ ಎಂದು ಪಕ್ಷದ ಹೈಕಮಾಂಡ್ ಹೇಳಿದೆ ಎಂದರು. ಕಾಂಗ್ರೆಸ್‌ನಲ್ಲಿ ಅಧಿಕಾರಕ್ಕಾಗಿ ಯಾವುದೇ ಕಿತ್ತಾಟ ನಡೆದಿಲ್ಲ. ಇದೆಲ್ಲ ಪ್ರತಿಪಕ್ಷದವರ ಸೃಷ್ಟಿ. ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಿನಿಂದ ಸಿಎಂ ಬದಲಾಗುತ್ತಾರೆಂದು ಹೇಳುತ್ತಿದ್ದಾರೆ. ಆದರೆ, ಸಿಎಂ ಬದಲಾಗುತ್ತಾರೆ ಎಂಬ ಕನಸು ಕಾಣಬೇಕಷ್ಟೇ ಎಂದು ಪ್ರತಿಪಕ್ಷಗಳ ವಿರುದ್ಧ ವಾಗ್ದಾಳಿ ನಡೆಸಿದರು.

ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಿ 5 ವರ್ಷ ಪೂರೈಸುತ್ತಾರೆ ಎಂಬ ನಂಬಿಕೆ ವೈಯಕ್ತಿಕವಾಗಿ ನನಗಿದೆ. ದೆಹಲಿಯಲ್ಲಿಯೂ ಕರ್ನಾಟಕದಲ್ಲಿ ನಾಯಕತ್ವ ಬದಲಾವಣೆ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ. ಸಿಎಂ ಸಿದ್ದರಾಮಯ್ಯರನ್ನು ಹೈಕಮಾಂಡ್ ನಾಯಕರು ಕರೆದಿಲ್ಲ ಎಂದು ಯತೀಂದ್ರ ಸ್ಪಷ್ಟಪಡಿಸಿದ್ದಾರೆ.

ಅವಿಶ್ವಾಸ ನಿರ್ಣಯ ಮಂಡಿಸುವ ಸಾಮರ್ಥ್ಯ ಬಿಜೆಪಿಗಿಲ್ಲ: ಇದೇ ವೇಳೆ ರಾಜ್ಯ ಸರ್ಕಾರದ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸುವ ಕೆಲ ಬಿಜೆಪಿ ನಾಯಕರ ಹೇಳಿಕೆಗೆ ಪ್ರತಿಕ್ರಿಯಿಸಿದ ಯತೀಂದ್ರ ಸಿದ್ದರಾಮಯ್ಯ ಅವರು, ಆ ಪ್ರಯತ್ನಕ್ಕೆ ಕೈಹಾಕಿದರೆ ಮುಖಭಂಗ ಎದುರಿಸುತ್ತಾರೆ. ಆ ಸಾಮರ್ಥ್ಯ ಅವರಿಗೆಲ್ಲಿದೆ ಎಂದರು. ರಾಜ್ಯ ಸರ್ಕಾರಕ್ಕೆ ಸಂಪೂರ್ಣ ಬಹುಮತ ಇದೆ. ಅವರಿಗೆ ಇದು ಗೊತ್ತು. ಅನಗತ್ಯ ರಾಜಕೀಯ ಮಾಡುವ ಬದಲು ಜನರ ವಿಷಯಗಳ ಬಗ್ಗೆ ಚರ್ಚೆ ಮಾಡಲಿ. ಪ್ರತಿಪಕ್ಷವಾಗಿ ಸಮಯವನ್ನು ಸದುಪಯೋಗ ಮಾಡಿಕೊಳ್ಳುತ್ತಾರೋ ಅಥವಾ ವ್ಯರ್ಥ ಮಾಡುತ್ತಾರೋ ಅವರೇ ನಿರ್ಧರಿಸಲಿ ಎಂದರು.

ಖಾಸಗಿ ಆಸ್ಪತ್ರೆ ವಿರುದ್ಧ ಕ್ರಮ

ನಿಯಮ ಉಲ್ಲಂಘಿಸಿದ ಖಾಸಗಿ ಆಸ್ಪತ್ರೆಗಳ ವಿರುದ್ಧ ಕೆಪಿಎಂಇ ಅಧಿನಿಯಮ ಸೆಕ್ಷನ್ 15ರ ಉಪಬಂಧ 1ರ ಅನ್ವಯ ಕ್ರಮ ಜರುಗಿಸಲಾಗುವುದು. ಗರ್ಭಿಣಿಯರ ತಪಾಸಣೆ ಸಂದರ್ಭದಲ್ಲಿ ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳು ಅನುಸರಿಸಬೇಕಾದ ನೀತಿ ನಿಯಮಗಳಿದ್ದು, ನಿಯಮ ಉಲ್ಲಂಘಿಸುವ ಖಾಸಗಿ ಆಸ್ಪತ್ರೆಗಳ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದರು.

ಸಿಎಂ ಆಗೋ ಪರಿಸ್ಥಿತಿ ಉದ್ಭವವಾಗಲ್ಲ

ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, ಡಿಕೆಶಿ ಸಿಎಂ ಆದರೆ ನಾನು ಸಂಪುಟ ಸೇರುವುದಿಲ್ಲ ಎಂದು ಈಗಾಗಲೇ ಹೇಳಿದ್ದೇನೆ. ಅವರು ಸಿಎಂ ಆದಾಗ ಆ ಪ್ರಶ್ನೆ ಏಳುತ್ತದೆ. ನಾನು ಕಾಂಗ್ರೆಸ್‌ನಲ್ಲೇ ಇದ್ದವನು. ಪಕ್ಷ ನನಗೆ ಏನು ಮಾಡಿಲ್ಲ, ಆದರೆ ಕೆಲವರು ಷಡ್ಯಂತ್ರ ಮಾಡಿದ್ದಾರೆ ಎಂದು ಯಾರ ಹೆಸರನ್ನು ಉಲ್ಲೇಖಿಸದೇ ದೂರಿದರು.

ನಾನು ಪಕ್ಷ ಬಿಡುತ್ತೇನೆ ಅಂತ ಯಾರು ಹೇಳಿದ್ದು ಎಂದ ಅವರು, ಸಕ್ರಿಯ ರಾಜಕಾರಣದಲ್ಲಿ ಇರುತ್ತೇನೆ ಎಂದರು. ಯತೀಂದ್ರ ಸಿದ್ದರಾಮಯ್ಯ ಹೇಳಿಕೆ ಅವರ ವೈಯಕ್ತಿಕ ಹೇಳಿಕೆಯಾಗಿದೆ. ಸಿದ್ದರಾಮಯ್ಯನವರು ಹೈಕಮಾಂಡ್‌ಗೆ ಹೆದರಿಸುವಂತಹದ್ದು, ಹೈಕಮಾಂಡ್ ಸಿದ್ದರಾಮಯ್ಯನವರನ್ನು ಕೈ ಬಿಡುವುದಾಗಲಿ ಇಲ್ಲ ಎಂದು ಹೇಳಿದರು. ಪರಮೇಶ್ವರ್ ಅವರನ್ನ ದಲಿತರು ಎಂಬ ಕಾರಣಕ್ಕೆ ಸಿಎಂ ಸ್ಥಾನಕ್ಕೆ ಪರಿಗಣಿಸಬೇಕಿಲ್ಲ. 2013 ರಲ್ಲಿ ಅಧ್ಯಕ್ಷರಾಗಿ ಅವರು ಪಕ್ಷ ಗೆಲ್ಲಿಸಿದ್ದಾರೆ. ಕಾಂಗ್ರೆಸ್‌ಗೆ ಅವರ ಕೊಡುಗೆಯೂ ಇದೆ ಎಂದರು.

ರಾಜಣ್ಣ ಯಾವ ಪಕ್ಷದಲ್ಲಿದ್ದಾರೆ ಅನ್ನೋದನ್ನು ಹೇಳಲಿ ಎಂಬ ಶಾಸಕ ಬಾಲಕೃಷ್ಣ ಹೇಳಿಕೆಯ ಬಗ್ಗೆ ಪ್ರತಿಕ್ರಿಯಿಸಿ, ನಾನು ಯಾವನಿಂದಲೂ ಕಲಿಯಬೇಕಾಗಿಲ್ಲ. ನಾನು ಕಾಂಗ್ರೆಸ್ ಪಕ್ಷದಲ್ಲಿ 15 ವರ್ಷದಿಂದ ಇದ್ದೇನೆ. ಬಾಲಿಷ ಹೇಳಿಕೆ ಏನು ಬೇಕಿದ್ದರೂ ಹೇಳಿಕೊಳ್ಳಲಿ ಎಂದು ತಿರುಗೇಟು ನೀಡಿದರು.

ಖರ್ಗೆಗೆ ಸುಪ್ರೀಂಕೋರ್ಟ್ ನೋಟಿಸ್

ನ್ಯಾ.ವಿಕ್ರಮನಾಥ ನೇತೃತ್ವದ ದ್ವಿಸದಸ್ಯ ಪೀಠ ವಿಚಾರಣೆ ಕೈಗೆತ್ತಿಕೊಂಡಿದ್ದು, ಸಿಎಂ ಸಿದ್ದರಾಮಯ್ಯ ಹಾಗೂ ಚುನಾವಣಾ ಆಯೋಗಕ್ಕೆ ನೋಟಿಸ್ ಜಾರಿಗೊಳಿಸಿದೆ.

ಚಿತ್ತಾಪುರ ಕ್ಷೇತ್ರದಲ್ಲಿ ಅಕ್ರಮ ಆರೋಪ: ಪ್ರಿಯಾಂಕ್ ಖರ್ಗೆಗೆ ನೋಟಿಸ್: 2023ರ ಚುನಾವಣೆ ವೇಳೆ ಚಿತ್ತಾಪುರ ಕ್ಷೇತ್ರದಲ್ಲಿ ಅಕ್ರಮ ನಡೆಸಲಾಗಿದೆ ಎಂಬ ಆರೋಪದ ಪ್ರಕರಣದಲ್ಲಿ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಚುನಾವಣಾ ಆಯೋಗಕ್ಕೆ ಸುಪ್ರೀಂಕೋರ್ಟ್ ನೋಟಿಸ್ ಜಾರಿ ಮಾಡಿದೆ.

ಹೈಕೋರ್ಟ್ ಆದೇಶ ಪ್ರಶ್ನಿಸಿ ಅಶ್ವತ್ಥರಾಮ್ ರಾಥೋಡ್ ಎಂಬುವರು ಸಲ್ಲಿಸಿದ್ದ ವಿಶೇಷ ಮೇಲ್ಮನವಿ ಅರ್ಜಿಯನ್ನು ನ್ಯಾಯಮೂರ್ತಿಗಳಾದ ಎಂ.ಎಂ.ಸುಂದರೇಶ್ ಹಾಗೂ ಸತೀಶ್ ಚಂದ್ರ ಶರ್ಮಾ ಅವರ ಪೀಠವು ಸೋಮವಾರ (ಡಿ.8) ವಿಚಾರಣೆ ನಡೆಸಿತು. ಸುಳ್ಳು ಜಾತಿ ಪ್ರಮಾಣಪತ್ರ ಹಾಗೂ ಶೈಕ್ಷಣಿಕ ದಾಖಲೆಗಳನ್ನು ಚುನಾವಣಾ ಆಯೋಗಕ್ಕೆ ಸಲ್ಲಿಸಿರುವುದಲ್ಲದೇ, ಉಚಿತ ಗ್ಯಾರಂಟಿಗಳ ಮೂಲಕ ಮತದಾರರಿಗೆ ಆಮಿಷವೊಡ್ಡಿ ವಿಧಾನಸಭೆ ಚುನಾವಣೆಯಲ್ಲಿ ಗೆದ್ದಿರುವ ಪ್ರಿಯಾಂಕ್ ಖರ್ಗೆ ಅವರ ಆಯ್ಕೆಯನ್ನು ಅಸಿಂಧುಗೊಳಿಸಬೇಕು ಎಂದು ಅರ್ಜಿದಾರರು ಕೋರಿದ್ದಾರೆ.

ಪ್ರಿಯಾಂಕ್ ಅವರು ಪರಿಶಿಷ್ಟ ಜಾತಿ ಪ್ರಮಾಣ ಪತ್ರದ ಬದಲು ಗ್ರಾಮ ಪಂಚಾಯಿತಿ ಚುನಾವಣೆಗೆ ಸಲ್ಲಿಸಲಾಗುವ ಜಾತಿ ಮತ್ತು ಆದಾಯ ಪ್ರಮಾಣಪತ್ರ ಸಲ್ಲಿಸಿದ್ದಾರೆ. ಅದೂ ಸಹ 2021ರ ಪ್ರಮಾಣ ಪತ್ರವಾಗಿದೆ. ಶೈಕ್ಷಣಿಕ ಅರ್ಹತೆಗೆ ಸಂಬಂಧಿಸಿದಂತೆಯೂ ಅಸಮರ್ಪಕ ಮತ್ತು ನಕಲಿ ದಾಖಲೆಗಳನ್ನು ಸಲ್ಲಿಸಿದ್ದಾರೆ. ಇದಲ್ಲದೆ, ಕಾಂಗ್ರೆಸ್‌ನಿಂದ ಗ್ಯಾರಂಟಿ ಯೋಜನೆಗಳ ಮೂಲಕ ಮತದಾರರಿಗೆ ಆಮಿಷ ಒಡ್ಡಿದ್ದು, ಇದು ಲಂಚ ಹಾಗೂ ಭ್ರಷ್ಟಾಚಾರಕ್ಕೆ ಸಮ ಎಂದು ದೂರಿದ್ದಾರೆ.

ತಮ್ಮ ವಶಕ್ಕೆ ಒಪ್ಪಿಸಲು ಬೆದರಿಕೆ

ಎಂದು ಚಾಲಕ ಹೇಳಿದಾಗ, ಕಲ್ಲಿನಿಂದ ಬಸ್‌ನ ಗಾಜನ್ನು ಒಡೆದು ಹಾಕಿದ್ದಲ್ಲದೆ, ಬಾಲಕಿಯನ್ನು ತಮ್ಮೊಂದಿಗೆ ಕಳುಹಿಸುವವರೆಗೂ ಬಸ್ ಹೋಗಲು ಬಿಡಲ್ಲ ಎಂದು ಬಸ್‌ನ ಕೀ ಕಸಿಯಲು ಪ್ರಯತ್ನಿಸಿದ್ದಾರೆ. ತಮ್ಮ ಕೃತ್ಯ ಮೊಬೈಲ್‌ನಲ್ಲಿ ವಿಡಿಯೋ ಮಾಡಲಾಗುತ್ತಿದೆ ಎಂಬುದನ್ನು ಗಮನಿಸಿದ ಪುಂಡರು, ವಿಡಿಯೋ ಡಿಲಿಟ್ ಮಾಡುವಂತೆ ಮತ್ತೇ ದಮ್ಕಿ ಹಾಕಿ ಪರಾರಿಯಾಗಿದ್ದರು. ಈ ವಿಡಿಯೋ ಸಮೇತ ಪುಂಡರ ವಿರುದ್ಧ ಖಾಸಗಿ ಶಾಲೆ ಆಡಳಿತ ಮಂಡಳಿ ನೀಡಿದ ದೂರನ್ನು ದಾಖಲಿಸಿಕೊಂಡ ಪೊಲೀಸರು ಆರೋಪಿಗಳಿಗಾಗಿ ಹುಡುಕಾಟ ನಡೆಸುತ್ತಿದ್ದರು. ಅದೇ ವೇಳೆ ಸಾಮಾಜಿಕ ಜಾಲತಾಣಗಳಲ್ಲಿ ವಿಡಿಯೋ ವೈರಲ್ ಆಗಿ, ಕೂಡಲೇ ಪುಂಡರನ್ನು ಅರೆಸ್ಟ್ ಮಾಡಿ, ಪುಂಡರ ಅಟ್ಟಹಾಸವನ್ನು ಮಟ್ಟಹಾಕುವಂತೆ ಪೋಷಕರು ಹಾಗೂ ನೆಟ್ಟಿಗರು ಪೊಲೀಸರನ್ನು ಆಗ್ರಹಿಸಲಾರಂಭಿಸಿದರು. ಈ ನಡುವೆ ಪ್ರಕಾಶ್ ಎಂಬಾತನನ್ನು ಬಂಧಿಸಿರುವ ಕಿಕ್ಕೇರಿ ಠಾಣೆ ಪೊಲೀಸರು, ಗಿರೀಶ್ ಎಂಬಾತನಿಗಾಗಿ ಹುಡುಕಾಟ ನಡೆಸಿದ್ದಾರೆ.

ಪಂಚಾಯ್ತಿಗೊಂದರಂತೆ ಕೆಪಿಎಸ್

ಅತಿಥಿ ಶಿಕ್ಷಕರ ನೇಮಕ ಮಾಡಲಾಗಿದೆ. ಶಿಕ್ಷಕರ ಕೋರಿಕೆ ವರ್ಗಾವಣೆ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ವರ್ಗಾವಣೆ ಪೂರ್ಣಗೊಂಡ ನಂತರ ಪರಿಪೂರ್ಣವಾಗಿ ಹೆಚ್ಚುವರಿ ಶಿಕ್ಷಕರ ಮರು ಹೊಂದಾಣಿಕೆ ಪ್ರಕ್ರಿಯೆಯನ್ನು ತರ್ಕಬದ್ಧಗೊಳಿಸಲಾಗುವುದು. ಪ್ರತಿ ಮಗುವೂ ಶಾಲೆಯಲ್ಲಿ ಇರಬೇಕು ಮತ್ತು ಚೆನ್ನಾಗಿ ಕಲಿಯಬೇಕು ಎಂಬ ಮಹತ್ವದ ಉದ್ದೇಶದಿಂದ ಎಲ್ಲಾ ಕೆಪಿಎಸ್ ಶಾಲೆಗಳು ಏಕರೂಪ ನೀತಿ ಪಾಲಿಸುವಂತೆ ಸೂಚಿಸಲಾಗಿದೆ ಎಂದರು. ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಮಕ್ಕಳಿಗೆ ಶೂ ಮತ್ತು ಸಾಕ್ಸ್ ವಿತರಣೆಗೆ 111.88 ಕೋಟಿ ರೂ. ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಇದೇ ಸಂದರ್ಭದಲ್ಲಿ ಜಗದೇವ್ ಗುತ್ತೇದಾರ ಅವರ ಮತ್ತೊಂದು ಪ್ರಶ್ನೆಗೆ ಉತ್ತರಿಸಿದರು.

ಬ್ರಿಟಿಷರ ದಬ್ಬಾಳಿಕೆ ನಡುವೆಯೂ 'ವಂದೇ ಮಾತರಂ' ಬಂಡೆಯಂತೆ ಗಟ್ಟಿಯಾಗಿ ನಿಂತಿತು

ನವದೆಹಲಿ: ವಂದೇ ಮಾತರಂ ಗೀತೆಯ 150ನೇ ವಾರ್ಷಿಕೋತ್ಸವ ಕುರಿತು ಲೋಕಸಭೆಯಲ್ಲಿ ಸೋಮವಾರ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ತುರ್ತು ಪರಿಸ್ಥಿತಿಯಿಂದ ಸಂವಿಧಾನವನ್ನು 'ಹತ್ತಿಕ್ಕಲಾಯಿತು' ಮತ್ತು ರಾಷ್ಟ್ರವು ಸರಪಳಿಯಲ್ಲಿ ಬಂಧಿಸಲ್ಪಟ್ಟಿತು ಎಂದು ಹೇಳಿದರು.



ಲೋಕಸಭೆಯಲ್ಲಿ ವಂದೇ ಮಾತರಂ ಕುರಿತ ಚರ್ಚೆಗೆ ಇಂದು 10 ಗಂಟೆ ಮೀಸಲಿಡಲಾಗಿದ್ದು, ಚರ್ಚೆಯನ್ನು ಪ್ರಾರಂಭಿಸಿದ ಮೋದಿ, ವಂದೇ ಮಾತರಂ ಬ್ರಿಟಿಷ್ ದಬ್ಬಾಳಿಕೆಯ ಹೊರತಾಗಿಯೂ ಬಂಡೆಯಂತೆ ನಿಂತು ಏಕತೆಗೆ ಪ್ರೇರಣೆ ನೀಡಿತು ಎಂದು ಗಮನ ಸೆಳೆದರು.

'ವಂದೇ ಮಾತರಂ' ಗೀತೆಯು 100 ವರ್ಷಗಳನ್ನು ಪೂರೈಸಿದಾಗ, ರಾಷ್ಟ್ರವು ತುರ್ತು ಪರಿಸ್ಥಿತಿಯಿಂದ ಬಂಧಿಸಲ್ಪಟ್ಟಿತ್ತು. ಆ ಸಮಯದಲ್ಲಿ, ಸಂವಿಧಾನದ ಕತ್ತು ಹಿಸುಕಲಾಯಿತು ಮತ್ತು ದೇಶಭಕ್ತಿಗಾಗಿ ಬದುಕಿದವರನ್ನು ಜೈಲಿಗೆ ತಳ್ಳಲಾಯಿತು. ತುರ್ತು ಪರಿಸ್ಥಿತಿಯು ನಮ್ಮ ಇತಿಹಾಸದಲ್ಲಿ ಒಂದು ಕರಾಳ ಅಧ್ಯಾಯವಾಗಿತ್ತು. ಈಗ ವಂದೇ ಮಾತರಂನ ಶ್ರೇಷ್ಠತೆಯನ್ನು ಪುನಃಸ್ಥಾಪಿಸಲು ನಮಗೆ ಅವಕಾಶವಿದೆ ಮತ್ತು ಈ ಅವಕಾಶವನ್ನು ಕಳೆದುಹೋಗಲು ಬಿಡಬಾರದು ಎಂದು ನಾನು ನಂಬುತ್ತೇನೆ ಎಂದು ಮೋದಿ ಹೇಳಿದರು.

ವಂದೇ ಮಾತರಂ ಗೀತೆಯು ಭಾರತದ ಸ್ವಾತಂತ್ರ್ಯ ಚಳವಳಿಗೆ ಶಕ್ತಿ ತುಂಬಿತು ಮತ್ತು ಸ್ಫೂರ್ತಿ ನೀಡಿತು ಮತ್ತು ಧೈರ್ಯ ಮತ್ತು ದೃಢಸಂಕಲ್ಪದ ಹಾದಿಯನ್ನು ತೋರಿಸಿತು. ಇಂದು ಆ ಪವಿತ್ರ ವಂದೇ ಮಾತರಂ ಅನ್ನು ಈ ಸದನದಲ್ಲಿ ನಮಗೆಲ್ಲರಿಗೂ ಸ್ಮರಿಸುವುದು ಒಂದು ದೊಡ್ಡ ಸೌಭಾಗ್ಯ. ವಂದೇ ಮಾತರಂ 150 ವರ್ಷಗಳನ್ನು ಪೂರೈಸುವ ಐತಿಹಾಸಿಕ ಸಂದರ್ಭವನ್ನು ನಾವು ವೀಕ್ಷಿಸುತ್ತಿರುವುದು ನಮಗೆ ಹೆಮ್ಮೆಯ ವಿಷಯ ಎಂದರು. "ವಂದೇ ಮಾತರಂ' ಮೂಲಕ, ಬಂಕಿಮ ಚಂದ್ರ ಚಟ್ಟೋಪಾಧ್ಯಾಯ ಅವರು ಈ ಸವಾಲಿಗೆ ಹೆಚ್ಚಿನ ಶಕ್ತಿ ಮತ್ತು ದೃಢಸಂಕಲ್ಪದಿಂದ ಪ್ರತಿಕ್ರಿಯಿಸಿದರು. ಬ್ರಿಟಿಷರು 1905 ರಲ್ಲಿ ಬಂಗಾಳವನ್ನು ವಿಭಜಿಸಿದರು. ಆದರೆ, ವಂದೇ ಮಾತರಂ ಬಂಡೆಯಂತೆ ನಿಂತು ಏಕತೆಗೆ ಪ್ರೇರಣೆ ನೀಡಿತು' ಎಂದರು.

ಮಧುಮೇಹ, ಬಿಪಿಯದ್ದೇ ಕಾರುಬಾರು

ಅದೇ ರೀತಿ ರೆಟಿನೋಪತಿ ಸಂಬಂಧ 11,475 ಮಂದಿಗೆ ತಪಾಸಣೆ ನಡೆಸಿದ್ದು, ಈ ಪೈಕಿ 86 ಮಂದಿಗೆ ಈ ಅನಾರೋಗ್ಯ ಖಚಿತಪಟ್ಟಿದೆ. ಸಿಕೆಡಿ (ದೀರ್ಘಕಾಲದ ಮೂತ್ರಪಿಂಡ ಕಾಯಿಲೆ) ಸಂಬಂಧ 68,144 ಮಂದಿ ತಪಾಸಣೆ ನಡೆಸಿದ್ದು, ಈ ಪೈಕಿ 168 ಮಂದಿಗೆ ಈ ಸಮಸ್ಯೆ ಇರುವುದು ದೃಢಪಟ್ಟಿದೆ. ಎನ್‌ಎಎಫ್‌ಎಲ್‌ಡಿ (ನಾನ್ ಆಲ್ಕೋಹಾಲ್ ಫ್ಯಾಟಿ ಲಿವರ್ ಡಿಸೀಸ್) ಸಂಬಂಧ 20,144 ಮಂದಿ ತಪಾಸಣೆ ನಡೆಸಿದ್ದು, ಈ ಪೈಕಿ 85 ಮಂದಿಗೆ ಇದು ದೃಢಪಟ್ಟಿದೆ. ಸಿಓಪಿಡಿ (ದೀರ್ಘಕಾಲದ ಪ್ರತಿರೋಧಕ ಶ್ವಾಸಕೋಶದ ಕಾಯಿಲೆ) ಸಂಬಂಧ 59723 ಮಂದಿ ತಪಾಸಣೆ ನಡೆಸಿದ್ದು, 96 ಮಂದಿಯಲ್ಲಿ ದೃಢಪಟ್ಟಿದೆ. ಓಎಸ್‌ಎ (ಒಬ್ಸ್ ಟ್ರಕ್ಟಿವ್ ಸ್ಲೀಪ್ ಅಪ್ನಿಯಾ) ಸಂಬಂಧ 42,859 ಮಂದಿ ತಪಾಸಣೆ ನಡೆಸಿದ್ದು, ಈ ಪೈಕಿ 14 ಮಂದಿಗೆ ಈ ಸಮಸ್ಯೆ ಕಂಡುಬಂದಿದೆ.

285 ಮಂದಿಗೆ ಮಾನಸಿಕ ಅನಾರೋಗ್ಯ: ಮಾನಸಿಕ ಆರೋಗ್ಯ ಸಂಬಂಧ 29,399 ಮಂದಿ ತಪಾಸಣೆ ನಡೆಸಿದ್ದು, ಈ ಪೈಕಿ 285 ಮಂದಿಯಲ್ಲಿ ಮಾನಸಿಕ ಅನಾರೋಗ್ಯ ಪತ್ತೆಯಾಗಿದೆ. ಅದೇ ರೀತಿಯಲ್ಲಿ ನರರೋಗ ಸಮಸ್ಯೆಗಳ ಸಂಬಂಧ 18,928 ಮಂದಿ ತಪಾಸಣೆ ನಡೆಸಿದಾಗ, 40 ಮಂದಿಯಲ್ಲಿ ಇದು ದೃಢಪಟ್ಟಿದೆ. ಅನೀಮಿಯಾ (19–29 ವರ್ಷ) ಸಂಬಂಧ 19,186 ಮಂದಿ ತಪಾಸಣೆ ನಡೆಸಿದ್ದು, ಈ ಪೈಕಿ 286 ಮಂದಿಗೆ ಈ ಅನಾರೋಗ್ಯ ಕಂಡುಬಂದಿದೆ.

ಬಾಯಿ ಕ್ಯಾನ್ಸರ್‌ಗೆ ಸಂಬಂಧಿಸಿದಂತೆ 8,16,089 ಜನಸಂಖ್ಯೆಯನ್ನು ತಪಾಸಣೆಗೆ ಒಳಪಡಿಸುವ ಗುರಿ ಹೊಂದಿದ್ದು, ಈವರೆಗೆ ನಡೆಸಿದ 61,541 ಮಂದಿ ತಪಾಸಣೆಯಲ್ಲಿ ಕೇವಲ 8 ಮಂದಿಗೆ ಇದು ದೃಢಪಟ್ಟಿದೆ. ಸ್ತನ ಕ್ಯಾನ್ಸರ್ ಮತ್ತು ಗರ್ಭಕಂಠದ ಕ್ಯಾನ್ಸರ್ ತಪಾಸಣೆಗೆ 4,02,413 ಜನಸಂಖ್ಯೆಯನ್ನು (ಮಹಿಳೆಯರು) ತಪಾಸಣೆ ನಡೆಸುವ ಗುರಿ ಹೊಂದಿದ್ದು, ಈವರೆಗೆ ಸ್ತನ ಕ್ಯಾನ್ಸರ್ ಸಂಬಂಧ 22,960 ಮಂದಿ ತಪಾಸಣೆ ನಡೆಸಿದ್ದು, ಈ ಪೈಕಿ 6 ಮಂದಿಯಲ್ಲಿ ಈ ಕಾಯಿಲೆ ಕಂಡುಬಂದಿದೆ. ಅದೇ ರೀತಿಯಲ್ಲಿ ಗರ್ಭಕಂಠದ ಕ್ಯಾನ್ಸರ್ ಸಂಬಂಧ 12,025 ಮಂದಿ ತಪಾಸಣೆ ನಡೆಸಿದ್ದು, 15 ಮಂದಿಯಲ್ಲಿ ಇದು ದೃಢಪಟ್ಟಿದೆ.

ಪರೀಕ್ಷಾ ಶುಲ್ಕ ನಿಗದಿ

ಪರೀಕ್ಷಾ ಪ್ರಾಧಿಕಾರವೇ ಭರಿಸುತ್ತದೆ. ಇತ್ತೀಚಿನ ದಿನಗಳಲ್ಲಿ ಪರೀಕ್ಷೆಗಳನ್ನು ಹೆಚ್ಚಿನ ಪಾರದರ್ಶಕವಾಗಿ ನಡೆಸಲು ಆಧುನಿಕ ತಂತ್ರಜ್ಞಾನ ಬಳಕೆ ಅನಿವಾರ್ಯ, ಅರ್ಜಿಗೆ ನಿಗದಿಪಡಿಸಿದ ಶುಲ್ಕದಲ್ಲಿ ಎಲ್ಲಾ ವೆಚ್ಚ ನಿಭಾಯಿಸುವುದು ಕಷ್ಟವಾಗುತ್ತಿದೆ. ಅಭ್ಯರ್ಥಿಗಳಿಗೆ ಹೆಚ್ಚಿನ ಆರ್ಥಿಕ ಹೊರೆ ಆಗದಂತೆ ಪ್ರಾಧಿಕಾರ ಪರೀಕ್ಷೆ ನಡೆಸಲು ಕನಿಷ್ಠ ಮೊತ್ತ ನಿಗದಿಪಡಿಸಿದ್ದು, ಆ ಶುಲ್ಕ ಪಡೆಯುವುದು ಅನಿವಾರ್ಯ. ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸುವುದರಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಯಾವುದೇ ಆರ್ಥಿಕ ಲಾಭ ಇಲ್ಲ ಎಂದು ಸ್ಪಷ್ಟಪಡಿಸಿದರು.

ಪ್ರಾಧಿಕಾರ 2022ರಿಂದ ನಿಗದಿತ ಶುಲ್ಕ ವಿಧಿಸುತ್ತಿದ್ದು, ಪರೀಕ್ಷೆ ನಡೆಸುವ ವೆಚ್ಚ ವರ್ಷದಿಂದ ವರ್ಷಕ್ಕೆ ಹೆಚ್ಚಾದರೂ ಬಡ ಹಾಗೂ ಗ್ರಾಮೀಣ ಅಭ್ಯರ್ಥಿಗಳ ಹಿತದೃಷ್ಟಿಯಿಂದ ಶುಲ್ಕ ಹೆಚ್ಚಿಸಿಲ್ಲ.

ಆರ್ಥಿಕ ಹೊರೆ ತಪ್ಪಿಸಲು ಒಂದೇ ಪಠ್ಯಕ್ರಮವಿರುವ ವಿವಿಧ ಇಲಾಖೆಯ ವಿವಿಧ ಹುದ್ದೆಗಳಿಗೆ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದರೆ ಮೊದಲ ಹುದ್ದೆಗೆ ಮಾತ್ರ ಅನ್ವಯಿಸುವ ಪೂರ್ಣ ಶುಲ್ಕ ಪಾವತಿಸಲು ಹಾಗೂ ಹೆಚ್ಚುವರಿ ಹುದ್ದೆಗೆ ಕೇವಲ 100 ರೂ. ವಿಧಿಸಲಾಗುತ್ತಿದೆ ಎಂದರು.

ಬಿಜೆಪಿಯಿಂದ ಸುವರ್ಣ ಸೌಧಕ್ಕೆ ಮುತ್ತಿಗೆ

ಸುವರ್ಣಸೌಧ ಮುತ್ತಿಗೆ ಕಾರ್ಯಕ್ರಮ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಹಾಗೂ ಪ್ರತಿಪಕ್ಷ ನಾಯಕರುಗಳಾದ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ ನೇತೃತ್ವದಲ್ಲಿ ನಡೆಯಲಿದ್ದು, ಬಿಜೆಪಿಯ ಎಲ್ಲಾ ಶಾಸಕರು, ಪ್ರಮುಖ ಮುಖಂಡರು ಹಾಗೂ ನೂರಾರು ಮಂದಿ ಕಾರ್ಯಕರ್ತರು, ರೈತರು ಪಾಲ್ಗೊಳ್ಳುವರು.

ವಿಜಯೇಂದ್ರ ಕಿಡಿ: ಇಂದು ಸುವರ್ಣಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ರಾಜ್ಯದಲ್ಲಿ ಅಧಿಕಾರಕ್ಕೆ ಬಂದರೆ ಎಲ್ಲಾ ಸಮಸ್ಯೆಗಳಿಗೆ ಪರಿಹರಿಸುತ್ತೇವೆ ಎಂದು ಸುಳ್ಳು ಭರವಸೆ ಕೊಟ್ಟು ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ. ನಿರುದ್ಯೋಗ, ನೀರಾವರಿ, ನೇಕಾರರ, ರೈತರ ಸಮಸ್ಯೆ ಸೇರಿದಂತೆ ಯಾವುದನ್ನು ಈಡೇರಿಸಿಲ್ಲ. ಬದಲಾಗಿ ಈ ವಿಚಾರಕ್ಕೆ ಸಂಬಂಧಿಸಿದಂತೆ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರಿಗೆ ಪತ್ರ ಬರೆಯುವುದರಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ನಿಸ್ಸೀಮರಾಗಿದ್ದಾರೆ. ಅವರು ರಾಜ್ಯದ ಮುಖ್ಯಮಂತ್ರಿ ಎಂಬುದನ್ನೇ ಮರೆತು ಬಿಟ್ಟಿದ್ದಾರೆ ಎಂದು ಕಿಡಿಕಾರಿದರಲ್ಲದೆ, ಇವೆಲ್ಲ ಖಂಡಿಸಿ ನಾಳೆ ಸುವರ್ಣ ಸೌಧಕ್ಕೆ ಮುತ್ತಿಗೆ ಹಾಕುವ ಮೂಲಕ ಸರ್ಕಾರಕ್ಕೆ ಬುದ್ಧಿ ಕಲಿಸುತ್ತೇವೆ ಎಂದು ತಿಳಿಸಿದರು. ಮುಖ್ಯಮಂತ್ರಿ ಪಟ್ಟ ಉಳಿಸಿಕೊಳ್ಳುವ ಭರದಲ್ಲಿ ಸಿದ್ದರಾಮಯ್ಯ, ಕುರ್ಚಿ ಕಸಿದುಕೊಳ್ಳಲು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರಯತ್ನ ನಡೆಸುತ್ತಿದ್ದಾರೆ. ಅಧಿಕಾರ ಹಂಚಿಕೆ ಜಟಾಪಟಿಯಲ್ಲಿ ಕಾಲ ಕಳೆಯುತ್ತಿದ್ದಾರೆ. ವಿರೋಧ ಪಕ್ಷಗಳು ಯಾವುದೇ ವಿಷಯಗಳ ಬಗ್ಗೆ ಪ್ರಶ್ನೆ ಎತ್ತಿದರೆ ಕೇಂದ್ರ ಸರ್ಕಾರದತ್ತ ಬೊಟ್ಟು ಮಾಡುತ್ತಿದ್ದಾರೆ. ಎಲ್ಲಾ ಸಮಸ್ಯೆಗಳನ್ನೂ ಕೇಂದ್ರ ಸರ್ಕಾರ ಬಗೆಹರಿಸುವುದಾದರೆ ರಾಜ್ಯದಲ್ಲಿ ಮುಖ್ಯಮಂತ್ರಿ ಏಕೆ ಬೇಕು ಎಂದು ಪ್ರಶ್ನಿಸಿದರು.

ಯಾಕಯ್ಯ ಸಣ್ಣಗಾಗಿದ್ದೀಯಾ, ನಾಟಿಕೋಳಿ ತಿನ್ನಬೇಕಯ್ಯಾ...

ಆರ್.ಅಶೋಕ್‌ಗೆ ಸಿಎಂ ಸಿದ್ದರಾಮಯ್ಯ ಸಲಹೆ



ವಿಪಕ್ಷ ನಾಯಕ ಆರ್.ಅಶೋಕ್ ಅವರೊಂದಿಗೆ ಸಿಎಂ ಸಿದ್ದರಾಮಯ್ಯ ಮಾತನಾಡುತ್ತಿರುವುದು

ಬೆಳಗಾವಿ, ಡಿ.8– ಯಾಕಯ್ಯಾ ಸಣ್ಣಗಾಗಿದ್ದೀಯಾ...ನಾಟಿಕೋಳಿ ತಿನ್ನ ಬೇಕಯ್ಯಾ... ಹೀಗಂತ ವಿಪಕ್ಷ ನಾಯಕ ಆರ್.ಅಶೋಕ್ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಲಹೆ ನೀಡಿದರು.

ಬೆಳಗಾವಿ ಸುವರ್ಣಸೌಧ'ದ ಮೊಗಸಾಲೆಯಲ್ಲಿ ನಾಟಿಕೋಳಿ ಬಗ್ಗೆ ಸಿಎಂ ಹಾಗೂ ವಿಪಕ್ಷದ ನಾಯಕರ ನಡುವೆ ಸ್ವಾರಸ್ಯಕರವಾದ ಚರ್ಚೆಯಾದ ಪ್ರಸಂಗ ನಡೆಯಿತು. ಅಧಿವೇಶನಕ್ಕಾಗಿ ಇಂದು ಬೆಳಗ್ಗೆಯೆ ಸುವರ್ಣ ಸೌಧಕ್ಕೆ ಆಗಮಿಸಿದ್ದ ಸಿಎಂ ಸಿದ್ದರಾಮಯ್ಯ ಹಾಗೂ ವಿಪಕ್ಷ ನಾಯಕ ಆರ್.ಅಶೋಕ್ ಮೊಗಸಾಲೆಯಲ್ಲಿ ಮುಖಾಮುಖಿಯಾಗಿ ಉಭಯ ಕುಶಲೋಪರಿ ವಿಚಾರಿಸಿದರು.

ಈ ವೇಳೆ ಅಶೋಕ್ ಹೆಗಲಮೇಲೆ ಕೈ ಹಾಕಿದ ಸಿಎಂ ಸಿದ್ದರಾಮಯ್ಯ 'ಯಾಕಯ್ಯಾ ಸಣ್ಣಗಾಗಿದ್ದೀಯಾ?' ಎಂದು ಪ್ರಶ್ನಿಸಿ ದರು. ಆಗ 'ಇಲ್ಲಾ ಸಾರ್, ನಾನು ನಿಮ್ಮ ರೀತಿ ನಾಟಿ ಕೋಳಿ ತಿನ್ನೋದಿಲ್ಲ. ಈಗ ಅದನ್ನ ಬಿಟ್ಟಿದ್ದೇನೆ' ಎಂದು ಅಶೋಕ್ ಉತ್ತರಿಸಿದರು. ಇದಕ್ಕೆ ಪ್ರತಿಕ್ರಿಯೆ ನೀಡಿದ ಸಿದ್ದರಾಮಯ್ಯ 'ನಾಟಿಕೋಳಿ ತಿನ್ನ ಬೇಕಯ್ಯಾ, ಏನು ಆಗೋಲ್ಲ' ಎಂದು ಅಶೋಕ್ ಅವರಿಗೆ ಸಲಹೆ ನೀಡಿದರು.

ಕಳೆದ ಅವಧಿಯಲ್ಲಿ ಮಂಡ್ಯದಲ್ಲಿ 200ಕ್ಕೂ ಹೆಚ್ಚು ರೈತರ ಆತ್ಮಹತ್ಯೆ ನಿಮ್ಮ ಕೊಡುಗೆ

●ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಕೇಂದ್ರ ಸಚಿವ ಕುಮಾರಸ್ವಾಮಿ ವಾಗ್ದಾಳಿ ●ಜಿಲ್ಲೆಯ ರೈತರ 900 ಕೋಟಿ ಸಾಲ ಮನ್ನಾ ನನ್ನ ಕೊಡುಗೆ

ಬೆಂಗಳೂರು, ಡಿ.8(ಕೆಎಂಶಿ)– ಮಂಡ್ಯ ಜಿಲ್ಲೆಗೆ ನನ್ನ ಕೊಡುಗೆ ಏನೆಂಬುದನ್ನು ಬಹಿರಂಗವಾಗಿ ಪಟ್ಟಿ ಮಾಡಿಕೊಡಲು ಸಿದ್ಧನಿದ್ದೇನೆ. ನೀವು ಮುಖ್ಯಮಂತ್ರಿಯಾಗಿ ಏನು ಕೊಡುಗೆ ನೀಡಿದ್ದೀರಿ ಎಂಬುದನ್ನು ತಿಳಿಸಿ ಎಂದು ಸಿಎಂ ಸಿದ್ದರಾಮಯ್ಯ ಅವರಿಗೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಸವಾಲು ಹಾಕಿದ್ದಾರೆ.

ನವದೆಹಲಿಯ ಗೃಹ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಿಮ್ಮ ಹಿಂದಿನ ಐದು ವರ್ಷ ಆಡಳಿತದಲ್ಲಿ 200ಕ್ಕೂ ಹೆಚ್ಚು ರೈತರು ಮಂಡ್ಯದಲ್ಲಿ ಸರಣಿ ಆತ್ಮಹತ್ಯೆ ಮಾಡಿಕೊಂಡಿದ್ದೇ ನಿಮ್ಮ ಕೊಡುಗೆ. ಅಂಥ ಕಷ್ಟಕಾಲದಲ್ಲಿ ನಾನು ಅಧಿಕಾರಕ್ಕೆ ಬಂದ ಮೇಲೆ ಅದೇ ಜಿಲ್ಲೆಯ ರೈತರ 900 ಕೋಟಿ ರೂ. ಸಾಲ ಮನ್ನಾ ಮಾಡಿದೆ. ಇದಕ್ಕಿಂತ ಕೊಡುಗೆ ಬೇಕಾ? ನಿಮ್ಮ ಕಾಲದಲ್ಲಿ ರೈತರ ಜೀವ ಹೋಯಿತು, ನನ್ನ ಕಾಲದಲ್ಲಿ ಜೀವ ಉಳಿಯಿತು. ಇದು ನಿಮಗೆ ಗೊತ್ತಿರಲಿ ಎಂದು ವಾಗ್ದಾಳಿ ನಡೆಸಿದರು.



ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೀರಿನ ಹೆಜ್ಜೆ ಪುಸ್ತಕ ಯಾರೋ ಬರೆದಿರುವ ಕಟ್ ಅಂಡ್ ಪೇಸ್ಟ್ ಮಾಡಿರುವ ಪುಸ್ತಕ. ಬೇರೆ ಯಾವುದೋ ಪುಸ್ತಕದಲ್ಲಿ ಬರೆದಿರುವುದನ್ನೇ ಕತ್ತರಿಸಿ ಈ ಪುಸ್ತಕದಲ್ಲಿ ಅಂಟಿಸಿದ್ದಾರೆ ಎಂದು ಟೀಕಿಸಿದರು.

ಈ ಪುಸ್ತಕವನ್ನು ನನಗೆ ಯಾರೋ ತಂದುಕೊಟ್ಟರು, ಸಾಮಾನ್ಯವಾಗಿ ಯಾವುದೇ ಪುಸ್ತಕವಾದರೂ ಆಸಕ್ತಿಯಿಂದ ಓದುತ್ತೇನೆ. ಆದರೆ, ಈ ಪುಸ್ತಕ ನೋಡಿದಾಗ ಇಲ್ಲಿರುವುದು ಅವರ ಹೆಜ್ಜೆಗಳಲ್ಲ. ಯಾರದೋ ಹೆಜ್ಜೆಗಳನ್ನು ನನ್ನ ಹೆಜ್ಜೆಗಳು ಎಂದು ತೋರಿಸುವ ಕಸರತ್ತು ಮಾಡಿದ್ದಾರೆ ಎಂದರು.

ಮೇಕೆದಾಟು ಯೋಜನೆ ಬಗ್ಗೆ ಜನರನ್ನು ಯಾಮಾರಿಸುವುದಕ್ಕೆ ನಮ್ಮ ನೀರು– ನಮ್ಮ ಹಕ್ಕು ಪಾದಯಾತ್ರೆ ಮಾಡಿ ಅಧಿಕಾರಕ್ಕೆ ಬಂದಿರಿ. ಆದರೆ, ಮೇಕೆದಾಟು ಮಾತ್ರ ಇದ್ದಲ್ಲಿಯೇ ಇದೆ. ಕೇಂದ್ರ ಜಲ ಆಯೋಗದ ಮುಂದೆ ವಾದ ಮಂಡಿಸಿ ಎಂಬುದಾಗಿ ಸುಪ್ರೀಂಕೋರ್ಟ್ ಹೇಳಿದೆ. ತಮಿಳುನಾಡಿನಲ್ಲಿ ಅಧಿಕಾರ ನಡೆಸುತ್ತಿರುವವರು ಕಾಂಗ್ರೆಸ್‌ನ ರಾಜಕೀಯ ಪಾರ್ಟನರ್‌ಗಳೇ ಆಗಿದ್ದು, ಇವರೊಂದಿಗೆ ಮಾತನಾಡಬೇಡವೇ ಎಂದರು.

ಮೇಕೆದಾಟು ಪ್ರದೇಶದಲ್ಲಿ ಸುಮಾರು 12 ಸಾವಿರ ಎಕರೆಯಷ್ಟು ಅರಣ್ಯ ಮುಳುಗಡೆ ಆಗುತ್ತದೆ. ವನ್ಯ ಸಂಪತ್ತು ನಾಶವಾಗುತ್ತದೆ ಎನ್ನುತ್ತಿದ್ದಾರೆ. ಬರೀ ಕೇಂದ್ರ ಸರ್ಕಾರದ ಅಧಿಕಾರ ಮಾತ್ರವಲ್ಲ. ರಾಜ್ಯ ಸರ್ಕಾರಕ್ಕೂ ಹಕ್ಕು, ಜವಾಬ್ದಾರಿ ಇರುತ್ತದೆ. ಪಲಾಯನ ಮಾಡುವ ಅಗತ್ಯವಿಲ್ಲ. ಇನ್ನೆಷ್ಟು ದಿನ ನುಣುಚಿಕೊಳ್ಳುತ್ತೀರಿ.

ಕಾಂಗ್ರೆಸ್ ಜನಪ್ರತಿನಿಧಿಯೊಬ್ಬರು ಬಳ್ಳಾರಿಯಲ್ಲಿ ದಿನನಿತ್ಯ ಪ್ರತಿಭಟನೆ ಮಾಡಿಸುವ, ಜನರನ್ನು ಎತ್ತಿ ಕಟ್ಟುವ ಕೆಲಸ ಮಾಡುತ್ತಿದ್ದಾರೆ. ತಮಗೆ ವೈಯಕ್ತಿಕವಾಗಿ ರಾಷ್ಟ್ರೀಯ ಖನಿಜಾಭಿವೃದ್ಧಿ ನಿಗಮ (ಎನ್‌ಎಂಡಿಸಿ)ದಿಂದ ಲಾಭವಾಗುವ ಕೆಲಸ ಆಗಲಿಲ್ಲ ಎಂದು ಯೋಜನೆಗೆ ಅಡ್ಡಿಪಡಿಸುತ್ತಿದ್ದಾರೆ. ಇದರಿಂದ ರಾಜ್ಯದ ಅಭಿವೃದ್ಧಿ ಸಾಧ್ಯವೇ, ಸಹಕಾರ ಪಡೆಯುವುದು, ಕೊಡುವುದು ಎಂದರೆ ಇದೇನಾ ಎಂದು ಪ್ರಶ್ನಿಸಿದರು.

ಯುವಜನರ ಸರಿದಾರಿಗೆ ತರಲು ಭಗವದ್ಗೀತೆ ಬೋಧಿಸಿ ಎಂದಿದ್ದೇ ತಪ್ಪಾ...!?

ಕರ್ನಾಟಕ ಡ್ರಗ್ಸ್ ದಂಧೆಗಳಲ್ಲಿ ದಾಪುಗಾಲಿಡುತ್ತಿದೆ; ವಿದ್ಯಾರ್ಥಿ ದಿಸೆಯಿಂದ ಭಗವದ್ಗೀತೆ ಬೋಧಿಸುವುದು ಇದಕ್ಕೆ ಪರಿಹಾರ ಆಗಬಹುದು

ಬೆಂಗಳೂರು, ಡಿ.8(ಕೆಎಂಶಿ)–ರಾಜ್ಯದಲ್ಲಿ ಮಾದಕ ವಸ್ತುಗಳ ನಶೆಗೆ ಸಿಲುಕಿ ಯುವಜನರು ಹಾಳಾಗುತ್ತಿದ್ದಾರೆ, ಇಂಥ ಪರಿಸ್ಥಿತಿಯಿಂದ ಯುವಜನರನ್ನು ಸರಿದಾರಿಗೆ ತರಲು ವಿದ್ಯಾರ್ಥಿ ದಿಸೆಯಿಂದಲೇ ಭಗವದ್ಗೀತೆ ಬೋಧಿಸಬೇಕು ಎಂದಿದ್ದರಲ್ಲಿ ತಪ್ಪೇನಿದೆ? ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾಜ ಯಾವ ದಿಕ್ಕಿಗೆ ಹೋಗುತ್ತಿದೆ ಎಂಬುದನ್ನು ನಾವು ನಿತ್ಯವೂ ನೋಡುತ್ತಿದ್ದೇವೆ. ಒಳ್ಳೆಯ ಸಮಾಜ ನಿರ್ಮಿಸುವ ಉದ್ದೇಶದಿಂದ ಮಕ್ಕಳಿಗೆ ಚಿಕ್ಕಂದಿನಿಂದಲೇ ಭಗವದ್ಗೀತೆ ಕಲಿಸಬೇಕು ಎಂಬುದು ನನ್ನ ಅಭಿಪ್ರಾಯ, ಮನುವಾದಕ್ಕೂ ಭಗವದ್ಗೀತೆಗೂ ಏನು ಸಂಬಂಧ, ಇಂಥ ಮನಃಸ್ಥಿತಿಯೇ ಅಪಾಯಕಾರಿ ಎಂದರು.


ತಮ್ಮನ್ನು ಟೀಕಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರಿಗೆ ತಿರುಗೇಟು ಕೊಟ್ಟ ಕುಮಾರಸ್ವಾಮಿ, ಒಳ್ಳೆಯ, ಸದ್ವಿಚಾರಗಳ ಚರ್ಚೆ, ಮಕ್ಕಳಿಗೆ ಒಳ್ಳೆಯ ವಿಷಯಗಳ ಬೋಧನೆ ಮನುವಾದವೇ, ಭಗವದ್ಗೀತೆ ಕಲಿಸಿ ಎಂಬುದಾಗಿ ಕೇಂದ್ರ ಶಿಕ್ಷಣ ಸಚಿವರಿಗೆ ಪತ್ರ ಬರೆದಿದ್ದು ಮಹಾನ್ ಅಪರಾಧವೇ.

ಕರ್ನಾಟಕ ಡ್ರಗ್ಸ್ ದಂಧೆಯಲ್ಲಿ ದಾಪುಗಾಲು ಇಡುತ್ತಿದೆ. ಎಲ್ಲಾ ದಂಧೆಗಳಿಗೂ ರಾಜ್ಯವೇ ಕೇಂದ್ರ ಸ್ಥಾನವಾಗುತ್ತಿದೆ. ಶಾಲಾ–ಕಾಲೇಜುಗಳ ಬಳಿ ಡ್ರಗ್ಸ್ ಮಾರಾಟ ನಿರಾತಂಕವಾಗಿ ನಡೆಯುತ್ತಿದೆ.

ಮಕ್ಕಳು ದಾರಿ ತಪ್ಪುತ್ತಿದ್ದಾರೆ, ಡ್ರಗ್ಸ್ ಸೇವನೆಯಿಂದ ಸಮಾಜದಲ್ಲಿ ಸಂಬಂಧಗಳು ಹಾಳಾಗುತ್ತಿವೆ. ಕೆಟ್ಟ ಸಂಸ್ಕೃತಿಯತ್ತ ಯುವಜನರು ಆಕರ್ಷಿತರಾಗಿ ಭವಿಷ್ಯ ಹಾಳು ಮಾಡಿಕೊಳ್ಳುತ್ತಿದ್ದಾರೆ. ಪೊಲೀಸ್ ಅಧಿಕಾರಿಗಳೇ ಅಪರಾಧ ಕೃತ್ಯಗಳಲ್ಲಿ ಭಾಗಿಯಾಗುತ್ತಿದ್ದಾರೆ. ಇಂಥ ಸುದ್ದಿಗಳು ಮುಖಪುಟಗಳಲ್ಲಿ ರಾರಾಜಿಸುತ್ತಿವೆ.

ಭಗವದ್ಗೀತೆ ನಮಗೆ ಶಾಂತಿ, ಶಿಸ್ತು, ಸಂಯಮ ಕಲಿಸುತ್ತದೆ. ಸದ್ವಿಚಾರಗಳ ಮೂಲಕ ವ್ಯಕ್ತಿತ್ವವನ್ನು ಪರಿಪೂರ್ಣಗೊಳಿಸುತ್ತದೆ. ನಾನೂ ಸಂವಿಧಾನದ ಅಡಿಯಲ್ಲೇ ಮಂತ್ರಿಯಾಗಿದ್ದೇನೆ. ಎಲ್ಲರೂ ಭಗವಂತನ ಹೆಸರಿನಲ್ಲಿಯೇ ಪ್ರಮಾಣ ಸ್ವೀಕಾರ ಮಾಡುತ್ತೇವೆ. ನಾನೂ ಅದನ್ನೇ ಮಾಡಿದ್ದೇನೆ, ಆದರೆ, ಮಹದೇವಪ್ಪ ಯಾರ ಹೆಸರಲ್ಲಿ ಪ್ರಮಾಣ ಸ್ವೀಕಾರ ಮಾಡಿದ್ದಾರೋ ನನಗೆ ಗೊತ್ತಿಲ್ಲ.

ಕಾಂಗ್ರೆಸ್ ಎಂಎಲ್‌ಸಿಯಿಂದ ಹೊರಟ್ಟಿ ವಿರುದ್ಧ ಸಾಲು ಸಾಲು ಆರೋಪ



ಹೊರಟ್ಟಿ



ನಾಗರಾಜ್

ಬೆಳಗಾವಿ, ಡಿ.8– ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ವಿರುದ್ಧ ಕಾಂಗ್ರೆಸ್ ಎಂಎಲ್‌ಸಿ ನಾಗರಾಜ್ ಯಾದವ್ ಅವರು ಭ್ರಷ್ಟಾಚಾರ, ಅಕ್ರಮ ನೇಮಕಾತಿ, ಫೋನ್ ಟ್ಯಾಪಿಂಗ್ ಸೇರಿದಂತೆ ಹಲವು ಇತರೆ ಆರೋಪ ಮಾಡಿದ್ದಾರೆ. ಹೀಗೆ ಹಲವು ಆರೋಪ ಎದುರಿಸುತ್ತಿರುವ ಹೊರಟ್ಟಿಯವರ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಬೇಕು ಎಂದು ಯಾದವ್ ಆಗ್ರಹಿಸಿದ್ದಾರೆ.

ತಮ್ಮ ಕೈ ಕೆಳಗೆ ಕೆಲಸ ಮಾಡುವ ನೌಕರರ ಫೋನ್‌ಕಾಲ್ ಲಿಸ್ಟ್‌ಗಳನ್ನು ಅವರು ತೆಗೆದುಕೊಂಡಿದ್ದು, ಈ ಬಗ್ಗೆ ತನಿಖೆ ನಡೆದರೆ ಸತ್ಯ ಹೊರಬರಲಿದೆ. ಜೊತೆಗೆ ನೇಮಕಾತಿಗಳಲ್ಲಿಯೂ ಹೊರಟ್ಟಿ ಅವ್ಯವಹಾರ ಮಾಡಿದ್ದಾರೆ. ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಸಿ.ಟಿ. ರವಿ ಅವಾಚ್ಯ ಶಬ್ದ ಬಳಕೆ ಮಾಡಿದ್ದ ಬಗ್ಗೆ ಬಗ್ಗೆ ದೂರು ಕೊಟ್ಟಾಗ ನಾನು ಆ ಮಾತು ಕೇಳಿಸಿಕೊಂಡಿಲ್ಲ ಅಂದಿದ್ದರು. ನೈತಿಕತೆ ಕಳೆದುಕೊಂಡ ಮೇಲೆ ಅವರು ರಾಜೀನಾಮೆ ಕೊಟ್ಟು ಹೋಗುವುದು ಸೂಕ್ತ ಎಂದು ವಾಗ್ದಾಳಿ ನಡೆಸಿದರು.

ನಾಗರಾಜ್ ಯಾದವ್ ಅವರ ಸಾಲು ಸಾಲು ಆರೋಪಕ್ಕೆ ಸಭಾಪತಿ ಬಸವ ರಾಜ್ ಹೊರಟ್ಟಿ ಪ್ರತಿಕ್ರಿಯಿಸಿದ್ದು, ತಮ್ಮ ವಿರುದ್ಧದ ಆರೋಪಗಳಿಗೆ ದಾಖಲೆ ಬಿಡುಗಡೆ ಮಾಡುವಂತೆ ಸವಾಲು ಹಾಕಿದ್ದಾರೆ. ಇಷ್ಟಕ್ಕೆ ಸುಮ್ಮನಾಗದ ಹೊರಟ್ಟಿ, ದಾಖಲೆ ಬಿಡುಗಡೆ ಮಾಡದೆಯೇ ಕೇವಲ ಆರೋಪ ಮಾಡುವವರು ಹೇಡಿಗಳು ಎಂದು ಚಾಟಿಬೀಸಿದ್ದಾರೆ.

ಸಿಎ ಸೈಟ್‌ನಲ್ಲಿ ಕಟ್ಟಡ ನಿರ್ಮಾಣಕ್ಕೆ ಕಾಲಮಿತಿ 5 ವರ್ಷಕ್ಕೆ ಹೆಚ್ಚಿಸುವ ಭರವಸೆ



ಬೆಳಗಾವಿ, ಡಿ.8– ಸರ್ಕಾರದಿಂದ ಪಡೆದ ಸಿಎ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಮಾಡಲು ಈಗಿರುವ ಮೂರು ವರ್ಷಗಳ ಕಾಲಮಿತಿಯನ್ನು 5 ವರ್ಷಗಳಿಗೆ ಹೆಚ್ಚಿಸುವ ಬಗ್ಗೆ ಗಂಭೀರ ಪ್ರಯತ್ನ ಮಾಡಲಾಗುವುದು ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬೈರತಿ ಸುರೇಶ್ ಭರವಸೆ ನೀಡಿದ್ದಾರೆ.

ವಿಧಾನಪರಿಷತ್ತಿನಲ್ಲಿ ಇಂದು ಬಿಜೆಪಿ ಸದಸ್ಯ ಡಿ.ಎಸ್ ಅರುಣ್ ಮತ್ತು ಇತರರ ಗಮನ ಸೆಳೆಯುವ ಸೂಚನೆಗೆ ಸಚಿವರು ಉತ್ತರಿಸಿದರು. ಸಿಎ ನಿವೇಶನ ಪಡೆದು 3 ವರ್ಷಗಳ ಒಳಗೆ ಉದ್ದೇಶಿತ ಕಾರ್ಯಕ್ಕಾಗಿ ಕಟ್ಟಡ ನಿರ್ಮಾಣ ಆರಂಭಿಸಬೇಕೆಂಬ ನಿಯಮವನ್ನು ಸಡಿಲಿಸಬೇಕೆಂಬ ಒತ್ತಾಯವಿದೆ. ಈ ಹಿನ್ನೆಲೆಯಲ್ಲಿ ನಿಯಮ ಸಡಿಲಿಸಿ 5 ವರ್ಷಗಳಿಗೆ ಹೆಚ್ಚಿಸುವ ಬಗ್ಗೆ ಗಂಭೀರ ಪ್ರಯತ್ನ ನಡೆಸಲಾಗುತ್ತದೆ ಎಂದು ಸದನಕ್ಕೆ ಭರವಸೆ ನೀಡಿದರು.

ನಗರಾಭಿವೃದ್ಧಿ ಪ್ರಾಧಿಕಾರಗಳು ನೀಡಿರುವ ಸಿಎ ನಿವೇಶನಗಳಿಗೆ 30 ವರ್ಷಗಳ ನಂತರ ಗುತ್ತಿಗೆ ಅವಧಿ ನವೀಕರಣ ಮಾಡುವಾಗ 30 ವರ್ಷಗಳ ಹಿಂದಿನ ದರವನ್ನೇ ನಿಗದಿಪಡಿಸಲು ಸಾಧ್ಯವಿಲ್ಲ. ಆದರೆ, ಎಸ್‌ಆರ್ ದರವನ್ನ ಕಡಿಮೆ ಮಾಡುವ ಬಗ್ಗೆ ಪರಿಶೀಲಿಸಲಾಗುವುದು ಎಂದು ತಿಳಿಸಿದರು.

ವಿನಯ್ ಕುಲಕರ್ಣಿ ಜಾಮೀನು ಅರ್ಜಿ ಮತ್ತೆ ವಜಾ



ಬೆಂಗಳೂರು, ಡಿ.8– ಜಿಲ್ಲಾ ಪಂಚಾಯಿತಿ ಸದಸ್ಯ ಯೋಗೀಶ್‌ಗೌಡರ ಕೊಲೆ ಪ್ರಕರಣದಲ್ಲಿ ವಿನಯ್ ಕುಲಕರ್ಣಿಗೆ ಮತ್ತೆ ಆಘಾತವಾಗಿದೆ. ಜಾಮೀನು ಕೋರಿ ಅವರು ಸಲ್ಲಿಸಿದ್ದ ಅರ್ಜಿಯನ್ನು ಜನಪ್ರತಿನಿಧಿಗಳ ಕೋರ್ಟ್ ವಜಾ ಮಾಡಿದೆ.

ವಿಜಯ್ ಕುಲಕರ್ಣಿ ಅರ್ಜಿಗೆ ಸಿಬಿಐ ಕೂಡ ಆಕ್ಷೇಪಣೆ ಎತ್ತಿತ್ತು. ಪ್ರಮುಖ ಸಾಕ್ಷಿಗಳು ಯಾರೆಂದು ಆರೋಪಿ ನಿರ್ಧರಿಸಲು ಸಾಧ್ಯವಿಲ್ಲ. ಹೀಗಾಗಿ ಜಾಮೀನು ಮಂಜೂರು ಮಾಡದಂತೆ ವಕೀಲರು ಮನವಿ ಮಾಡಿದರು. ವಾದ–ಪ್ರತಿವಾದ ಆಲಿಸಿದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಜಾಮೀನು ಅರ್ಜಿ ವಜಾ ಮಾಡಿದೆ. ಇದೇ ಪ್ರಕರಣದ ಮತ್ತೋರ್ವ ಆರೋಪಿ ಚಂದ್ರಶೇಖರ ಇಂಡಿಗೆ ಜಾಮೀನು ಮಂಜೂರು ಮಾಡಿದೆ.

ಮೈಸೂರಿನ ಸಿಎಫ್‌ಟಿಆರ್‌ಐನಲ್ಲಿ ಜಿಐ ಮಹೋತ್ಸವ ಸಮಾರೋಪ

ಸಾವಿರಾರು ಜನರು ಭೇಟಿ; ಲಕ್ಷಾಂತರ ವಹಿವಾಟು


ಮೈಸೂರು, ಡಿ.8(ಬಿಎಲ್‌ಯು)– ಸಾಂಸ್ಕೃತಿಕ ನಗರಿ ಮೈಸೂರಿನ ಸಿಎಫ್‌ಟಿಆರ್‌ಐನಲ್ಲಿ ನಡೆದ ಆರು ದಿನಗಳ ಜಿಐ ಮಹೋತ್ಸವ 3.0 ಇಂದು ಸಮಾರೋಪಗೊಂಡಿತು. ಸಾವಿರಾರು ಜನರು ಜಿ.ಐ. ಮಹೋತ್ಸವಕ್ಕೆ ಭೇಟಿ ನೀಡಿ ದೇಶೀಯ ವಸ್ತುಗಳನ್ನು ಖರೀದಿಸಿದರು.

ಜಿಐ ಉತ್ಪನ್ನಗಳ ಮೂಲಕ ಭಾರತದ ಪರಂಪರೆಯನ್ನು ಉತ್ತೇಜಿಸುವ ಜಿ.ಐ. ಮಹೋತ್ಸವ ವೀಕ್ಷಕರನ್ನು ಮನಸೂರೆಗೊಂಡಿತು. ರಾಸಾಯನಿಕ ಗೊಬ್ಬರ ಹಾಗೂ ಔಷಧಗಳನ್ನು ಬಳಸದೆ ಸಾವಯವ ಗೊಬ್ಬರ ಹಾಗೂ ದೇಶಿ ವಸ್ತುಗಳ ಬಳಸಿ ತಯಾರಿಸಿದ ವಸ್ತುಗಳು ಕಣ್ಮನ ಸೆಳೆದವು.

ಡಿಸೆಂಬರ್ 5 ರಿಂದ ಆರಂಭವಾದ ಜಿ.ಐ.ಮಹೋತ್ಸವದ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಸಾರ್ವಜನಿಕರು ರಾಸಾಯನಿಕ ಬಳಸದೆ ತಯಾರಿಸಿರುವ ಹಲವು ವಸ್ತುಗಳನ್ನು ಖರೀದಿಸಿದರು.

ಜಿ.ಐ ಟ್ಯಾಗ್ (ಭೌಗೋಳಿಕ ಗುರುತು) ಕುರಿತಂತೆ ನಡೆದ ಆರು ದಿನಗಳ ಸಮಾವೇಶದಲ್ಲಿ ಬಹಳಷ್ಟು ಜನರು ಜಿ.ಐ.ಟ್ಯಾಗ್ ಹೊಂದಿರುವ ದೇಶಿ ವಸ್ತುಗಳನ್ನು ಖರೀದಿ ಮಾಡಿದರು. ಇದರಿಂದ ಜಿ.ಐ. ಮಹೋತ್ಸವದಲ್ಲಿ ಲಕ್ಷಾಂತರ ರೂಪಾಯಿ ವಹಿವಾಟು ನಡೆದಿದೆ.


ಸಾವಯುವ ಕೃಷಿಯಿಂದ ಬೆಳೆದ ಇಂಡಿ ನಿಂಬೆ, ನಂಜನಗೂಡು ರಸಬಾಳೆ, ಕೊಡಗಿನ ಕಿತ್ತಳೆ, ಬ್ಯಾಡಗಿ ಮೆಣಸಿನ ಕಾಯಿ, ಮೈಸೂರು ಸ್ಯಾಂಡಲ್ ಸೋಪ್, ಕೊಲ್ಲಾಪುರ ಚಪ್ಪಲಿ, ಮೈಸೂರಿನ ಸಾಂಪ್ರದಾಯಿಕ ವರ್ಣಚಿತ್ರಗಳು ಹಾಗೂ ಗಂಜೀಫಾ ಕಾರ್ಡ್‌ಗಳು, ಚನ್ನಪಟ್ಟಣದ ಆಟಿಕೆ ಹಾಗೂ ಗೊಂಬೆ, ಉಡುಪಿ ಸೀರೆ, ಮೈಸೂರು ರೋಸ್ ವುಡ್, ನವಲಗುಂದ ಜಮಖಾನಾ, ಧಾರವಾಡ ಪೇಡ, ಪಾಲ್ಕಾಡ್ ಮತ್ತ ಅಕ್ಕಿ ಸೇರಿದಂತೆ ಜಿ.ಐ.ಮಾನ್ಯತೆ ಹೊಂದಿರುವ ನೂರಾರು ವಸ್ತುಗಳ ಪ್ರದರ್ಶನ ಹಾಗೂ ಮಾರಾಟದ ವ್ಯವಸ್ಥೆ ಮಾಡಲಾಗಿತ್ತು.



ಮೈಸೂರಿನ ಸಿಎಫ್‌ಟಿಆರ್‌ಐನಲ್ಲಿ ಸೋಮವಾರ ನಡೆದ ಜಿ.ಐ.ಮಹೋತ್ಸವದ ಸಮಾರೋಪ ಸಮಾರಂಭದಲ್ಲಿ ಜಿ.ಐ.ಮಾನ್ಯತೆ ಪಡೆದ ವಸ್ತುಗಳನ್ನು ತಯಾರಕರು ಪ್ರದರ್ಶಿಸಿದರು.

ಜಾಗತಿಕ ಮಾರುಕಟ್ಟೆಯಲ್ಲಿ ಭಾರತದ ಜಿ.ಐ. ಟ್ಯಾಗ್ ಹೊಂದಿರುವ ವಸ್ತುಗಳಿಗೆ ಹೆಚ್ಚಿನ ಬೇಡಿಕೆ ಕಲ್ಪಿಸುವುದು, ಕರ್ನಾಟಕದ ಜಿ.ಐ.ಪ್ರಮಾಣಿತ ಬೆಳೆಗಳು, ತಳಿಗಳು– ಸಮಸ್ಯೆಗಳು ಮತ್ತು ಅವಕಾಶ ಸೇರಿದಂತೆ ಜಿ.ಐ.ಟ್ಯಾಗ್ ಸಂಬಂಧ ಬಹಳಷ್ಟು ವಿಚಾರಗಳು ಮಂಡನೆಯಾದವು. ತಜ್ಞರು ಈ ಸಂಬಂಧ ಸಮಗ್ರ ವಿವರಣೆ ನೀಡಿದರು. ಇಂದಿನ ಸಮಾರೋಪ ಸಮಾರಂಭದಲ್ಲಿ ಜಿ.ಐ.ಪ್ರಮಾಣಿತ ವಸ್ತುಗಳನ್ನು ತಯಾರಿಸಿ ಮಾರಾಟ ಮಾಡುವ ಮಾರಾಟಗಾರರು ತಮ್ಮ ಅನುಭವ ಹಂಚಿಕೊಂಡರು.

ಹುಟ್ಟುಹಬ್ಬದ ಶುಭ ಹಾರೈಕೆ





ಜಿಲ್ಲಾ ಪಂಚಾಯತಿ ಮಾಜಿ ಸದಸ್ಯ ಎಸ್. ಮಾದೇಗೌಡರಿಗೆ ಮುಸಂಬಿ ಹಾರ ಹಾಕುವ ಮೂಲಕ ಕೆ.ಮಹದೇವ್ ಚಿತ್ರ ರೆಸಿಡೆನ್ಸಿ ಮಾಲೀಕರು ಗಿರೀಶ್, ಬಾಬು, ರವಿ, ವೈಸ್‌ಬಿ ಬಸವರಾಜ್ ಅವರು ಹುಟ್ಟುಹಬ್ಬದ ಶುಭ ಕೋರಿದರು. ಮತ್ತೊಂದು ಚಿತ್ರದಲ್ಲಿ ಮಾಜಿ ಶಾಸಕ ಅಶ್ವಿನ್ ಕುಮಾರ್, ಕಾಂತರಾಜು ಹಾಗೂ ಸ್ನೇಹಿತರು ಬೃಹತ್ ಗಾತ್ರದ ಹಾರ ಹಾಕಿ ಮಾದೇಗೌಡರನ್ನು ಅಭಿನಂದಿಸಿ, ಶುಭಾಶಯ ಕೋರಿದರು.


ಡಿ.14ಕ್ಕೆ ಮೈಸೂರು ಭವಿಷ್ಯದ ಅಭಿವೃದ್ಧಿ: ಸಾರ್ವಜನಿಕ ಸಂವಾದ



ಯದುವೀರ್




ಹರೀಶ್‌ಗೌಡ



ಪ್ರೊ.ಲೋಕನಾಥ್



ಎ.ರವೀಂದ್ರ



ಪ್ರಕಾಶ್ ಬೆಳವಾಡಿ



ಡಾ. ಶುಶ್ರುತ

ಮೈಸೂರು, ಡಿ. 8 – ಇದೇ ಮೊದಲ ಬಾರಿಗೆ 'ಗ್ರೇಟರ್ ಮೈಸೂರು ಅಥವಾ ಗ್ರೇಟರ್ ವಿಷನ್: ನಗರದ ನಿಜವಾದ ಅಗತ್ಯವೇನು' ವಿಷಯದ ಮೇಲೆ ಬಹು ಮಹತ್ವದ ಸಾರ್ವಜನಿಕ ಸಂವಾದವನ್ನು ಭಾನುವಾರ (ಡಿ.14) ಬೆಳಿಗ್ಗೆ 10ರಿಂದ ಮಧ್ಯಾಹ್ನ 12ರವರೆಗೆ ಮೈಸೂರು ವಿಶ್ವವಿದ್ಯಾಲಯದ ಮಾನಸ ಗಂಗೋತ್ರಿ ಆವರಣದ ರಾಣಿ ಬಹದ್ದೂರ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಗೋಪಾಲಗೌಡ ಶಾಂತವೇರಿ ಆಸ್ಪತ್ರೆಯ ನಿರ್ದೇಶಕರೂ ಆದ ಖ್ಯಾತ ನರರೋಗ ತಜ್ಞ ಡಾ. ಶುಶ್ರುತ ಗೌಡ, ವಿ.ಆರ್. ಟ್ರಸ್ಟ್ ವತಿಯಿಂದ ಮೈಸೂರು ನಗರದ ನಾಗರಿಕ ಜಾಗೃತಿ, ಅಭಿವೃದ್ಧಿಯಲ್ಲಿ ಸಾರ್ವಜನಿಕ ಪಾಲ್ಗೊಳ್ಳುವಿಕೆ ಮತ್ತು ಸುಸ್ಥಿರ ನಗರಾಭಿವೃದ್ಧಿ ನೀಲ ನಕಾಶೆ ಸಿದ್ಧಪಡಿಸಿ ನೀಡುವ ಉದ್ದೇಶದಿಂದ ಈ ಮಹತ್ವದ ಸಂವಾದವನ್ನು ಆಯೋಜಿಸಲಾಗಿದೆ.

ಮೈಸೂರಿನ ದೀರ್ಘಕಾಲಿಕ ಅಭಿವೃದ್ಧಿ, ನಗರ ವಿಸ್ತರಣೆ, ಮೂಲಸೌಕರ್ಯ ಹಾಗೂ ಸುಸ್ಥಿರ ಬೆಳವಣಿಗೆ ಕುರಿತಾಗಿ ತಜ್ಞರು, ಆಡಳಿತಗಾರರು ಹಾಗೂ ನಾಗರಿಕರು ಈ ಸಂವಾದದಲ್ಲಿ ಪಾಲ್ಗೊಳ್ಳಲಿದ್ದಾರೆ.

ನಗರಾಭಿವೃದ್ಧಿಗೆ ಗ್ರೇಟರ್ ಮೈಸೂರು, ಮಾದರಿಯ ಭೌಗೋಳಿಕ ವಿಸ್ತರಣೆ ಅಗತ್ಯವೋ, ಅಥವಾ ಸಮಗ್ರ ದೃಷ್ಟಿಕೋನ ಮತ್ತು ದೀರ್ಘಕಾಲಿಕ ಯೋಜನೆಗಳು ಮುಖ್ಯವೋ ಎಂಬ ಪ್ರಶ್ನೆಗೆ ಉತ್ತರ ಹುಡುಕುವ ಉದ್ದೇಶದಿಂದ ವಿವಿಧ ಕ್ಷೇತ್ರಗಳ ಗಣ್ಯರು ಒಂದು ವೇದಿಕೆಯಲ್ಲಿ ಸಂವಾದ ನಡೆಸಲಿದ್ದಾರೆ.

ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಹುಣಸೂರು ಶಾಸಕ ಜಿ.ಡಿ.ಹರೀಶ್‌ಗೌಡ, ಮೈಸೂರು ವಿಶ್ವವಿದ್ಯಾನಿಲಯದ ಉಪಕುಲಪತಿ ಪ್ರೊ.ಎನ್.ಕೆ. ಲೋಕನಾಥ್, ಮಾಜಿ ಮುಖ್ಯ ಕಾರ್ಯದರ್ಶಿ, ಎ.ರವೀಂದ್ರ, ಐಎಎಸ್ (ನಿವೃತ್ತ), ನಟ ಹಾಗೂ ಸಮಾಜಮುಖಿ ಕಾರ್ಯಕರ್ತ ಪ್ರಕಾಶ್ ಬೆಳವಾಡಿ, ಪ್ರೊ (ನಿವೃತ್ತ) ಕೆಸಿ. ಬಸವರಾಜ, ಅರ್ಥಶಾಸ್ತ್ರ ವಿಭಾಗ, ಮೈಸೂರು ವಿಶ್ವವಿದ್ಯಾಲಯ ಹಾಗೂ ಖ್ಯಾತ ಉದ್ಯಮಿ ಕಿರಣ್ ರಂಗ (ನಿರ್ದೇಶಕರು, ರಂಗಾ ಗ್ರೂಪ್) ಈ ಸಂವಾದದಲ್ಲಿ ಪಾಲ್ಗೊಳ್ಳಲಿದ್ದಾರೆ.

ವಿ.ಆರ್ ಟ್ರಸ್ಟ್ ಮತ್ತು ಗೋಪಾಲ ಗೌಡ ಆಸ್ಪತ್ರೆ ನಿರ್ದೇಶಕ ಡಾ. ಶುಶ್ರುತ ಗೌಡ ಪ್ರಾಸ್ತಾವಿಕ ಭಾಷಣ ಮಾಡಲಿದ್ದಾರೆ.

ದೇಶ – ವಿದೇಶ

ಲೋಕಸಭೆಯಲ್ಲಿ 'ವಂದೇ ಮಾತರಂ' ಚರ್ಚೆ

ಸರ್ಕಾರ, ಬಿಜೆಪಿ ವಿರುದ್ಧ ಪ್ರಿಯಾಂಕಾ ಗಾಂಧಿ, ಅಖಿಲೇಶ್ ಯಾದವ್ ತೀವ್ರ ಕಿಡಿ!



ನವದೆಹಲಿ: 'ವಂದೇ ಮಾತರಂ' ಗೀತೆಯ 150ನೇ ವಾರ್ಷಿಕೋತ್ಸವ ಹಿನ್ನೆಲೆಯಲ್ಲಿ ಲೋಕಸಭೆಯಲ್ಲಿ 'ವಂದೇ ಮಾತರಂ' ಕುರಿತ ಚರ್ಚೆಯಲ್ಲಿ ಪಾಲ್ಗೊಂಡ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ ಹಾಗೂ ಸಮಾಜವಾದಿ ಪಕ್ಷದ ಅಧ್ಯಕ್ಷ ಅಖಿಲೇಶ್ ಯಾದವ್ ಪ್ರಧಾನಿ ನರೇಂದ್ರ ಮೋದಿ ಅವರನ್ನು ಗುರಿಯಾಗಿಸಿ ಸರ್ಕಾರದ ವಿರುದ್ಧ ಕಿಡಿಕಾರಿದರು.

ಜನರ ಗಮನವನ್ನು ಬೇರೆಡೆ ಸೆಳೆಯಲು ಸರ್ಕಾರ ವಂದೇ ಮಾತರಂ ಕುರಿತು ಚರ್ಚೆ ನಡೆಸುತ್ತಿದೆ. ಈಗಿನ ಹಾಗೂ ಭವಿಷ್ಯವನ್ನು ನೋಡಲು ಬಯಸದ ಕಾರಣ ಭೂತಕಾಲದ ಬಗ್ಗೆ ಅಧ್ಯಯನ ಮಾಡಬೇಕೆಂದು ಸರ್ಕಾರ ಬಯಸುತ್ತದೆ ಎಂದರು.

ದೇಶದಲ್ಲಿ ಜನರು ಸಂತೋಷವಾಗಿಲ್ಲ, ಸಾಕಷ್ಟು ಸಮಸ್ಯೆಗಳಿಂದ ನರಳುತ್ತಿದ್ದಾರೆ. ಸರ್ಕಾರ ಅವರ ಸಮಸ್ಯೆಗಳಿಗೆ ಪರಿಹಾರ ಕಂಡುಹಿಡಿಯಲು ಪ್ರಯತ್ನಿಸುತ್ತಿಲ್ಲ. ಮೋದಿ ಅವರ ಆತ್ಮ ವಿಶ್ವಾಸ ಕಡಿಮೆಯಾಗುತ್ತಿದೆ. ಅವರ ನೀತಿಗಳು ದೇಶವನ್ನು ದುರ್ಬಲಗೊಳಿಸುತ್ತಿವೆ ಎಂದು ಟೀಕಾ ಪ್ರಹಾರ ನಡೆಸಿದರು.

ಮಧ್ಯಪ್ರದೇಶದಲ್ಲಿ 10 ನಕ್ಸಲರು ಶಸ್ತ್ರಾಸ್ತ್ರ ಸಹಿತ ಶರಣಾಗತಿ!

ಭೋಪಾಲ್: ಮಧ್ಯಪ್ರದೇಶದ ಬಾಲಘಾಟ್ ಜಿಲ್ಲೆಯಲ್ಲಿ 2.36 ಕೋಟಿ ರೂ.ಗಳ ಸಾಮೂಹಿಕ ಬಹುಮಾನ ಹೊಂದಿದ್ದ ಹತ್ತು ಕಟ್ಟಾ ನಕ್ಸಲರು ಶರಣಾಗಿದ್ದಾರೆ.



ನಾಲ್ವರು ಮಹಿಳೆಯರು ಸೇರಿದಂತೆ ನಕ್ಸಲರು ಭಾನುವಾರ ಯಾದವ್ ಅವರ ಮುಂದೆ AK-47 ಮತ್ತು INSAS ರೈಫಲ್‌ಗಳು ಸೇರಿದಂತೆ ತಮ್ಮ ಆಧುನಿಕ ಶಸ್ತ್ರಾಸ್ತ್ರಗಳನ್ನು ತ್ಯಜಿಸಿದರು. ಅವರು ನಿಷೇಧಿತ ಕಮ್ಯುನಿಸ್ಟ್ ಪಕ್ಷ (ಮಾವೋವಾದಿ)ದ ಭೋರ್ಸದೇವ್ ಪ್ರದೇಶ ಸಮಿತಿಯ ಭಾಗವಾಗಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇದರಿಂದಾಗಿ ಮುಖ್ಯಮಂತ್ರಿ ಮೋಹನ್ ಯಾದವ್ ಅವರು ದಿಂಡೋರಿ ಮತ್ತು ಮಾಂಡ್ಲಾವನ್ನು ನಕ್ಸಲ್ ಪ್ರಭಾವದಿಂದ ಸಂಪೂರ್ಣವಾಗಿ ಮುಕ್ತಗೊಳಿಸಲಾಗಿದೆ ಎಂದು ಘೋಷಿಸಿದರು. ದಿಂಡೋರಿ ಮತ್ತು ಮಾಂಡ್ಲಾ ಈಗ ನಕ್ಸಲ್ ಪ್ರಭಾವದಿಂದ ಸಂಪೂರ್ಣವಾಗಿ ಮುಕ್ತವಾಗಿವೆ. ಜನವರಿಯಿಂದ ಬಾಲಘಾಟ್‌ನಲ್ಲಿ ಸಂಪೂರ್ಣ ನಕ್ಸಲ್ ನಿರ್ಮೂಲನಾ ಅಭಿಯಾನ ಪ್ರಾರಂಭವಾಗಲಿದೆ. ಮುಖ್ಯವಾಹಿನಿಗೆ ಮರಳುವವರಿಗೆ 15 ವರ್ಷಗಳ ಕಾಲ ಪುನರ್ವಸತಿ ಪ್ಯಾಕೇಜ್ ಸಿಗುತ್ತದೆ, ಆದರೆ ಹಾಗೆ ಮಾಡದವರ ವಿರುದ್ಧ ಕಠಿಣ ಕ್ರಮ ಮುಂದುವರಿಯುತ್ತದೆ ಎಂದು ಯಾದವ್ ಹೇಳಿದರು.

ಇತಿಹಾಸ ತಿರುಚಲು ಪ್ರಧಾನಿ ಮೋದಿ ಯತ್ನ: ಗೌರವ್ ಗೊಗೊಯ್



ನವದೆಹಲಿ: ಲೋಕಸಭೆಯಲ್ಲಿ 'ವಂದೇ ಮಾತರಂ' ಗೀತೆ ಕುರಿತ ಚರ್ಚೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಭಾಷಣವು ಇತಿಹಾಸವನ್ನು ಪುನಃ ಬರೆಯುವ ಮತ್ತು ಅದಕ್ಕೆ ರಾಜಕೀಯ ಬಣ್ಣ ಬಳಿಯುವ ಉದ್ದೇಶವನ್ನು ಹೊಂದಿತ್ತು. ಬಿಜೆಪಿ ಎಷ್ಟೇ ಪ್ರಯತ್ನಿಸಿದರೂ, ಜವಾಹರಲಾಲ್ ನೆಹರು ಅವರ ಕೊಡುಗೆಗಳ ಮೇಲೆ ಒಂದೇ ಒಂದು ಕಪ್ಪು ಚುಕ್ಕಿ ಇಡಲು ಸಾಧ್ಯವಾಗುವುದಿಲ್ಲ ಎಂದು ಕಾಂಗ್ರೆಸ್ ಸೋಮವಾರ ಹೇಳಿದೆ.

'ವಂದೇ ಮಾತರಂ' ಗೀತೆಗೆ ಅರ್ಹವಾದ ಪ್ರಾಮುಖ್ಯತೆ ಮತ್ತು ರಾಷ್ಟ್ರೀಯ ಗೀತೆಯ ಸ್ಥಾನಮಾನವನ್ನು ನೀಡಿದ್ದು ಕಾಂಗ್ರೆಸ್ ಎಂದು ವಿರೋಧ ಪಕ್ಷ ಹೇಳಿದೆ.

'ವಂದೇ ಮಾತರಂ' ಗೀತೆಯ 150ನೇ ವಾರ್ಷಿಕೋತ್ಸವ ಹಿನ್ನೆಲೆಯಲ್ಲಿ ಲೋಕಸಭೆಯಲ್ಲಿ 'ವಂದೇ ಮಾತರಂ' ಕುರಿತ ಚರ್ಚೆಗೆ ಇಂದು 10 ಗಂಟೆ ಮೀಸಲಿಡಲಾಗಿದ್ದು, ಪ್ರಧಾನಿ ನರೇಂದ್ರ ಮೋದಿ ಚರ್ಚೆಯನ್ನು ಪ್ರಾರಂಭಿಸಿದರು.

ಬಾಬ್ರಿ ಮಾದರಿಯ ಮಸೀದಿ ನಿರ್ಮಾಣಕ್ಕೆ ಎರಡೇ ದಿನದಲ್ಲಿ 1.3 ಕೋಟಿ ದೇಣಿಗೆ

ಕೋಲ್ಕತ್ತ: ಪಶ್ಚಿಮ ಬಂಗಾಳದ ಮುರ್ಷಿದಾಬಾದ್ ಜಿಲ್ಲೆಯಲ್ಲಿ ಅಮಾನತುಗೊಂಡ ಟಿಎಂಸಿ ಶಾಸಕ ಹುಮಾಯೂನ್ ಕಬೀರ್ ನಿರ್ಮಿಸಲಿರುವ ಪ್ರಸ್ತಾವಿತ ಬಾಬರಿ ಮಸೀದಿ ಮಾದರಿಯ ಮಸೀದಿಗಾಗಿ ಇರಿಸಲಾಗಿರುವ ದೇಣಿಗೆ ಪೆಟ್ಟಿಗೆಗಳು ಬಹುತೇಕ ತುಂಬಿವೆ.

ಭೌತಿಕವಾಗಿ ಮತ್ತು ಆನ್‌ಲೈನ್ ಮೂಲಕ ದೇಣಿಗೆಗಳು ಹರಿದುಬರುತ್ತಲೇ ಇದ್ದು ನಗದು ಎಣಿಕೆ ಯಂತ್ರಗಳು ರಾತ್ರಿಯಿಡೀ ಓಡಾಡುತ್ತಿವೆ.

ನಾಲ್ಕು ದೇಣಿಗೆ ಪೆಟ್ಟಿಗೆಗಳು ಮತ್ತು ಒಂದು ಚೀಲದಿಂದ ಕನಿಷ್ಠ 37.33 ಲಕ್ಷ ರೂ. ನಗದು ಎಣಿಕೆಯಾಗಿದ್ದು, ಕ್ಯೂಆರ್ ಕೋಡ್‌ಗಳ ಮೂಲಕ ಆನ್‌ಲೈನ್ ಕೊಡುಗೆಗಳು 93 ಲಕ್ಷ ರೂ.ಗಳನ್ನು ತಲುಪಿವೆ. ದೇಣಿಗೆಗಳು ಒಟ್ಟು 1.30 ಕೋಟಿ ರೂ.ಗಳನ್ನು ದಾಟಿದೆ ಎಂದು ಕಬೀರ್ ಅವರ ಆಪ್ತರು ಸೋಮವಾರ ತಿಳಿಸಿದ್ದಾರೆ.

ಕಬೀರ್ ಶನಿವಾರ ಭದ್ರತೆಯ ನಡುವೆ ಮುರ್ಷಿದಾಬಾದ್‌ನ ರೆಜಿನಗರದಲ್ಲಿ ಮಸೀದಿಯ ಅಡಿಪಾಯ ಹಾಕಿದರು. ಅವರು ಉದ್ದೇಶಪೂರ್ವಕವಾಗಿ ಅಯೋಧ್ಯೆಯಲ್ಲಿ ಬಾಬರಿ ಮಸೀದಿ ಧ್ವಂಸದ ವಾರ್ಷಿಕ ದಿನವಾದ ಡಿಸೆಂಬರ್ 6 ಅನ್ನು ಈ ಶಿಲಾನ್ಯಾಸ ಕಾರ್ಯಕ್ರಮಕ್ಕೆ ಆಯ್ಕೆ ಮಾಡಿಕೊಂಡಿದ್ದಾರೆ. ಈ ಕ್ರಮವು ಈಗಾಗಲೇ ಧ್ರುವೀಕೃತ ಚುನಾವಣೆಗೆ ಸಜ್ಜಾಗಿರುವ ಬಂಗಾಳಕ್ಕೆ ಹೊಸ ರಾಜಕೀಯ ನರೇಟೀವ್ ನ್ನು ಸೃಷ್ಟಿಸಿದೆ.

ಥೈಲ್ಯಾಂಡ್, ಕಾಂಬೋಡಿಯಾ ನಡುವೆ ಮತ್ತೆ ಯುದ್ಧ ಶುರು



ಥೈಲ್ಯಾಂಡ್: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಧ್ಯಸ್ಥಿಕೆಯಲ್ಲಿ ಮಾಡಿಕೊಂಡ ಕದನ ವಿರಾಮ ಒಪ್ಪಂದವನ್ನು ಥೈಲ್ಯಾಂಡ್, ಕಾಂಬೋಡಿಯಾ ಎರಡೂ ದೇಶಗಳೂ ಉಲ್ಲಂಘಿಸಿವೆ. ಥೈಲ್ಯಾಂಡ್ ಕಾಂಬೋಡಿಯಾದೊಂದಿಗಿನ ವಿವಾದಿತ ಗಡಿ ಪ್ರದೇಶದಲ್ಲಿ ವೈಮಾನಿಕ ದಾಳಿ ನಡೆಸಿದೆ ಎಂದು ಥಾಯ್ ಮಿಲಿಟರಿ ಅಧಿಕಾರಿಗಳು ಸೋಮವಾರ ತಿಳಿಸಿದ್ದಾರೆ.

ಪೂರ್ವ ಪ್ರಾಂತ್ಯದ ಉಬೊನ್ ರಾಟ್ಚಥಾನಿಯ ಎರಡು ಪ್ರದೇಶಗಳಲ್ಲಿ ನಡೆದ ಹೊಸ ಘರ್ಷಣೆಯಲ್ಲಿ ಒಬ್ಬ ಥಾಯ್ ಸೈನಿಕ ಸಾವನ್ನಪ್ಪಿದ್ದು, ನಾಲ್ವರು ಗಾಯಗೊಂಡಿದ್ದಾರೆ ಎಂದು ಥಾಯ್ ಸೇನೆಯ ಹೇಳಿಕೆ ತಿಳಿಸಿದೆ. ತನ್ನ ಪಡೆಗಳು ಕಾಂಬೋಡಿಯಾದಿಂದ ಗುಂಡಿನ ದಾಳಿಗೆ ಒಳಗಾದವು ಎಂದು ಸೇನೆಯು ತಿಳಿಸಿದೆ. ಕಾಂಬೋಡಿಯಾದ ರಕ್ಷಣಾ ಸಚಿವಾಲಯವು ಇಂದು ಬೆಳಗ್ಗೆ ಥಾಯ್ ಪಡೆಗಳು ತನ್ನ ಎರಡು ಸೇನಾ ನೆಲೆಗಳ ಮೇಲೆ ದಾಳಿ ಮಾಡಿದೆ ಎಂದು ತಿಳಿಸಿದೆ. ಕಳೆದ ಹಲವಾರು ದಿನಗಳಿಂದ ಥಾಯ್ ಪಡೆಗಳು ಪ್ರಚೋದನಕಾರಿ ಚಟುವಟಿಕೆಗಳನ್ನು ನಡೆಸುತ್ತಿವೆ ಮತ್ತು ಕಾಂಬೋಡಿಯನ್ ಪಡೆಗಳು ಪ್ರತೀಕಾರ ತೀರಿಸಿಕೊಂಡಿಲ್ಲ ಎಂದು ಸಚಿವಾಲಯ ಹೇಳಿಕೊಂಡಿದೆ.

ನಿಮ್ಮ ಹಣ ನಿಮ್ಮ ಹಕ್ಕು ಜಾಗೃತಿ ಶಿಬಿರಕ್ಕೆ ಜಿಲ್ಲಾಧಿಕಾರಿ ಚಾಲನೆ

ಮಡಿಕೇರಿ, ಡಿ.8–ದೀರ್ಘ ಕಾಲದಿಂದ ಬ್ಯಾಂಕ್‌ನಲ್ಲಿರುವ ತಮ್ಮ ಹಣ ಪಡೆಯದೆ ಉಳಿದಿರುವ ಠೇವಣಿ, ವಿಮಾ ಕಂತುಗಳನ್ನು ಅವುಗಳ ಮಾಲೀಕರು ಅಥವಾ ಕಾನೂನುಬದ್ಧ ವಾರಸುದಾರರು ಹಣವನ್ನು ವಾಪಸ್ಸು ಪಡೆಯುವ ಸಂಬಂಧ 'ನಿಮ್ಮ ಹಣ ನಿಮ್ಮ ಹಕ್ಕು' ಜಾಗೃತಿ ಶಿಬಿರಕ್ಕೆ ಜಿಲ್ಲಾಧಿಕಾರಿ ವೆಂಕಟ್ ರಾಜಾ ಸೋಮವಾರ ಚಾಲನೆ ನೀಡಿದರು.



ಜಿಲ್ಲಾಧಿಕಾರಿ ವೆಂಕಟ್ ರಾಜಾ, ಜಿಪಂ ಸಿಇಓ ಆನಂದ್ ಪ್ರಕಾಶ ಮೀನಾ, ಆರ್‌ಬಿಐನ ಸಹಾಯಕ ಮಹಾಪ್ರಬಂಧಕಿ ನಿಶಾ ಭಿತ್ತಿಪತ್ರ ಬಿಡುಗಡೆ ಮಾಡಿದರು.

ನಗರದ ಜಿಪಂ ಸಭಾಂಗಣದಲ್ಲಿ ನಡೆದ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿ ವಿವಿಧ ಕಾರಣಗಳಿಂದ ಬ್ಯಾಂಕ್‌ನಲ್ಲಿ ದೀರ್ಘಕಾಲದಿಂದ ಇರುವ ಹಣ ಹಾಗೂ ವಿಮಾ ಕಂತನ್ನು ಪಡೆಯದಿರುವ ಗ್ರಾಹಕರಿಗೆ ಮಾಹಿತಿ ನೀಡಿ ಹಣವನ್ನು ವಾಪಸ್ಸು ಪಡೆಯಲು ಹೆಚ್ಚಿನ ಅರಿವು ಮೂಡಿಸಬೇಕು. ಜಿಲ್ಲೆಯಲ್ಲಿ 1.41 ಲಕ್ಷ ಮಂದಿಯ ಬ್ಯಾಂಕ್ ಖಾತೆಯಲ್ಲಿ ದೀರ್ಘಕಾಲದಿಂದ ಸು.33 ಕೋಟಿಯಷ್ಟು ಹಣವಿದ್ದು, ವಾರಸುದಾರರು ಹಣ ವಾಪಸ್ಸು ಪಡೆಯಬಹುದಾಗಿದೆ. ಆ ನಿಟ್ಟಿನಲ್ಲಿ ಪ್ರತಿಯೊಬ್ಬ ಗ್ರಾಹಕರಿಗೂ ಮಾಹಿತಿ ದೊರೆಯುವಂತಾಗಬೇಕು ಎಂದರು

ಜಿಪಂ ಸಿಇಒ ಆನಂದ್ ಪ್ರಕಾಶ್ ಮೀನಾ ಮಾತನಾಡಿ, ಬ್ಯಾಂಕ್‌ನಲ್ಲಿ 10 ವರ್ಷಕ್ಕಿಂತ ಹೆಚ್ಚು ಕಾಲ ನಿಷ್ಕ್ರಿಯವಾಗಿರುವ ಖಾತೆಯಲ್ಲಿನ ಹಣ ಮತ್ತು ಕ್ಲೈಮ್ ಮಾಡದ ಠೇವಣಿಯನ್ನು ಆರ್‌ಬಿಐ ನಿಂದ ಡಿಇಎಎಫ್ ನಿಧಿಗೆ ವರ್ಗಾಯಿಸಲಾಗುತ್ತದೆ. ಆದ್ದರಿಂದ ಸಂಬಂಧಪಟ್ಟ ಗ್ರಾಹಕರು ಕಾನೂನು ಬದ್ಧ ಉತ್ತರಾಧಿಕಾರಿಗಳು ಯಾವುದೇ ಸಮಯದಲ್ಲಿ ಹಣವನ್ನು ವಾಪಸ್ಸು ಪಡೆಯಬಹುದು. ಆ ನಿಟ್ಟಿನಲ್ಲಿ ಎಲ್ಲೆಡೆ ಜಾಗೃತಿ ಮೂಡಿಸಬೇಕೆಂದು ಸಲಹೆ ಮಾಡಿದರು.

ಆರ್‌ಬಿಐನ ಸಹಾಯಕ ಮಹಾ ಪ್ರಬಂಧಕ ನಿಶಾ ಮಾತನಾಡಿ ಹಣಕಾಸು ಸಚಿವಾಲಯದ ಮಾರ್ಗಸೂಚಿ ಪ್ರಕಾರ ಎಲ್ಲಾ ಬ್ಯಾಂಕು, ವಿಮೆ ಮತ್ತು ಇತರ ಶಾಖೆಗಳಲ್ಲಿ ಡಿ.31ರವರೆಗೆ ಕಾನೂನು ಬದ್ಧ ವಾರಸುದಾರರಿಗೆ ಅರಿವು ಮೂಡಿಸುವ ಕಾರ್ಯಕ್ರಮ ನಡೆಯಲಿದೆ. ದೀರ್ಘ ಕಾಲದವರೆಗೆ ಹಕ್ಕು ಪಡೆಯದ ಹಣಕಾಸಿನ ಸ್ವತ್ತುಗಳನ್ನು ಕಾನೂನು ಬದ್ಧ ವಾರಸುದಾರರಿಗೆ ಮರು ಪಡೆಯಲು ಈ ಶಿಬಿರ ಏರ್ಪಡಿಸಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಕೆಲವು ಠೇವಣಿದಾರರಿಗೆ ತಮ್ಮ ಖಾತೆಯಲ್ಲಿರುವ ಹಣವನ್ನು ಆನ್‌ಲೈನ್ ಮೂಲಕ ಹಸ್ತಾಂತರಿಸಲಾಯಿತು. ಮಾರ್ಗದರ್ಶಿ ಬ್ಯಾಂಕ್ ಜಿಲ್ಲಾ ವ್ಯವಸ್ಥಾಪಕ ಗಂಗಾಧರ ನಾಯಕ್ ಮಾತನಾಡಿದರು.

ಕ್ರಿಸ್ಮಸ್ ಗಾಯನ ಸ್ಪರ್ಧೆಗೆ ಫಾ.ಜೇಮ್ಸ್ ಚಾಲನೆ

ವಿರಾಜಪೇಟೆ, ಡಿ.8– ರೋಮನ್ ಕ್ಯಾಥೋಲಿಕ್ ಅಸೋಸಿಯೇಷನ್, ಸಂತ ಅನ್ನಮ್ಮ ದೇವಾಲಯ ಸಹಯೋಗದೊಂದಿಗೆ ನಡೆದ ಕ್ರಿಸ್ಮಸ್ ಗಾಯನ ಸ್ಪರ್ಧೆಗೆ ವಲಯದ ಶ್ರೇಷ್ಠ ಗುರು ಫಾ. ಜೇಮ್ಸ್ ಡೊಮೇನಿಕ್ ಧ್ವಜಾರೋಹಣ ನೆರವೇರಿಸಿ, ಚಾಲನೆ ನೀಡಿದರು.


ಮೈಸೂರು ಧರ್ಮಕ್ಷೇತ್ರದ ಧರ್ಮಾಧ್ಯಕ್ಷರಾದ ರೆ.ಫಾ. ಎಸ್.ಜೆ. ಫ್ರಾನ್ಸಿಸ್ ಸೆರಾವೋ ಅವರನ್ನು ರೋಮನ್ ಕ್ಯಾಥೋಲಿಕ್ ಅಸೋಸಿಯೇಷನ್ ಸನ್ಮಾನಿಸಿತು.

ಮೈಸೂರು ಧರ್ಮಕ್ಷೇತ್ರದ ಧರ್ಮಾಧ್ಯಕ್ಷ ರೆ.ಫಾ. ಎಸ್.ಜೆ. ಫ್ರಾನ್ಸಿಸ್ ಸೆರಾವೋ ದಿವ್ಯ ಸಾನಿಧ್ಯ ವಹಿಸಿದ್ದು, ಡಿಸೆಂಬರ್ ಬಂತೆಂದರೆ ಸಾಕು ಕ್ರಿಸ್ಮಸ್ ಹಾಗೂ ಹೊಸ ವರ್ಷದ ಹುರುಪು ಎಲ್ಲರಲ್ಲೂ ಮನೆಮಾಡಿರುತ್ತದೆ. ದೇವ ಪುರುಷರಾದ ಯೆಸುಕ್ರಿಸ್ತನು ಭೂಮಿಯಲ್ಲಿರುವ ಮಾನವರ ಕಲ್ಯಾಣಕ್ಕಾಗಿ ಡಿ. 25 ರಂದು ಭೂಮಿಯಲ್ಲಿ ಅವತರಿಸಿದ ದಿನವನ್ನು ಕ್ರಿಸ್ಮಸ್ ಹಬ್ಬವನ್ನಾಗಿ ಆಚರಿಸಲಾಗುತ್ತದೆ. ಇಲ್ಲಿ ಎಲ್ಲರೂ ಒಂದಾಗಿ ಬಾಳುವ ಪಣ ತೊಡಬೇಕು. ಇವ ನಮ್ಮವ ಎನ್ನುವ ಭಾವನೆ ಬೆಳೆಸಿಕೊಳ್ಳಬೇಕು ಎಂದರು.

ಮುಖ್ಯ ಅತಿಥಿಗಳಾಗಿದ್ದ ಅರಾಟ್ ಗ್ರೂಪ್ ಎಂ.ಡಿ.ಟೋನಿ ವಿನ್ಸೆಂಟ್ ಮಾತನಾಡಿ, ಕ್ರಿಸ್ಮಸ್ ಪ್ರತಿಯೊಬ್ಬರ ಜೀವನದಲ್ಲಿ ಸಂತೋಷವನ್ನು ನೀಡುವ ಆಚರಣೆಯಾಗಿದೆ. ದಾನ ಮಾಡುವ ಮೂಲಕ ಕೃತಜ್ಞರಾಗಿರಬೇಕು ಮತ್ತು ಉದಾರವಾಗಿರಬೇಕೆಂಬ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿರುವ ಸಂಸ್ಥೆ ಕಾರ್ಯ ಮೆಚ್ಚುವಂತಹದ್ದು ಎಂದು ಶುಭ ಹಾರೈಸಿದರು.

ರೋಮನ್ ಕ್ಯಾಥೋಲಿಕ್ ಅಸೋಸಿಯೇಷನ್ ವಿರಾಜಪೇಟೆ, ಪೊನ್ನಂಪೇಟೆ ತಾಲೂಕು ಘಟಕದ ಅಧ್ಯಕ್ಷ ಆಂಟೋನಿ ರಾಬಿನ್ ಮಾತನಾಡಿ, ಸ್ಪರ್ಧಾ ಕಾರ್ಯಕ್ರಮ ಆಯೋಜನೆಯ ಉದ್ದೇಶವೆಂದರೆ ಕ್ರಿಸ್ಮಸ್ ಹಬ್ಬದ ಸಂದೇಶವಾದ ಶಾಂತಿ ಮತ್ತು ಪ್ರೀತಿಯನ್ನು ಹಂಚಿಕೊಳ್ಳುವ ಒಂದು ಉತ್ತಮ ವೇದಿಕೆಯಾಗಿದೆ. ಹದಿನೈದು ವರ್ಷಗಳಿಂದ ಸಮುದಾಯದ ಒಗ್ಗಟ್ಟಿಗೆ ಹಾಗೂ ನಮ್ಮ ಸಂಸ್ಕೃತಿಯ ಆಚರಣೆಯಲ್ಲಿ ತೊಡಗಿಸಿಕೊಳ್ಳಲು ಈ ಸಂಸ್ಥೆ ಶ್ರಮಿಸುತ್ತಿದೆ. ಕಳೆದ ಮೂರು ವರ್ಷಗಳಿಂದ ಕ್ರಿಸ್‌ಮಸ್ ಗಾಯನ ಸ್ಪರ್ಧೆಯನ್ನು ಆಯೋಜಿಸಿಕೊಂಡು ಬರುತ್ತಿದ್ದೇವೆ. ಎಂದರು.

ರೋಮನ್ ಕ್ಯಾಥೋಲಿಕ್ ಅಸೋಸಿಯೇಷನ್ ಜಿಲ್ಲಾಧ್ಯಕ್ಷ ಜಾನ್ಸನ್ ಪಿಂಟೋ ಅಧ್ಯಕ್ಷತೆ ವಹಿಸಿದ್ದು, ಜಿಲ್ಲೆಯ ಎಲ್ಲ ಧರ್ಮ ಕೇಂದ್ರದ ಗುರುಗಳು ಸೇರಿದಂತೆ ಜನಾಂಗ ಬಾಂಧವರು ಒಟ್ಟಾಗಿ ಸೇರಿ ನಾವೆಲ್ಲ ಒಂದೇ ಎನ್ನುವ ಭಾವೈಕ್ಯತೆ ಮೂಡಿಸಬೇಕೆಂಬನಿಟ್ಟಿನಲ್ಲಿ ವೇದಿಕೆಯಾಗಿದೆ ಎಂದರು.

ಎಐಸಿಸಿ ಉಪಾಧ್ಯಕ್ಷ ಡಿ.ಕೆ. ಬ್ರಿಜೇಶ್ ಹಾಗೂ ಸಂತ ಅನ್ನಮ್ಮ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಮದಲೈ ಮುತ್ತು ಮಾತನಾಡಿದರು.

ಧರ್ಮ ಗುರುಗಳಾದ ಜೇಮ್ಸ್ ಡೊಮೆನಿಕ್, ಜಿಲ್ಲಾ ರೋಮನ್ ಕ್ಯಾಥೋಲಿಕ್ ಅಸೋಸಿಯೇಷನ್ ಉಪಾಧ್ಯಕ್ಷ ಜೋಕಿಂ ರಾಡ್ರಿಗಸ್, ರೋಮನ್ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಮರ್ವಿನ್ ಲೋಬೋ, ತಾಲೂಕು ಉಪಾಧ್ಯಕ್ಷ ಆಂತೋನಿ ಜೋಸೆಫ್, ಕಾರ್ಯದರ್ಶಿ ಸ್ಟಾಲಿನ್, ಚಾರ್ಲ್ಸ್ ಡಿಸೋಜ, ಬೆನೆಡಿಕ್ಟ್ ಸಾಲ್ದಾನಾ, ದಿನೇಶ್ ಮತಿಯಾಸ್, ಸಹಾಯಕ ಧರ್ಮಗುರು ಅಭಿಲಾಷ್, ಕೊಡಗಿನ ವಿವಿಧ ಭಾಗಗಳ ಘಟಕದ ಅಧ್ಯಕ್ಷರು, ಪದಾಧಿಕಾರಿಗಳು, ಉಪಸ್ಥಿತರಿದ್ದರು. ಗಾನ ತರಂಗ ಸ್ಪರ್ಧಾ ಕಾರ್ಯಕ್ರಮದಲ್ಲಿ ಭಾಗವಹಿಸಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಇದೇ ಸಂದರ್ಭ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದವರಿಗೆ ಹಾಗೂ ಕಾರ್ಯಕ್ರಮಕ್ಕೆ ಕೈಜೋಡಿಸಿದವರಿಗೆ ಸನ್ಮಾನಿಸಲಾಯಿತು.

ಜಿಲ್ಲಾ ಮಟ್ಟದ ಅಂತರಶಾಲಾ ಟೇಬಲ್ ಟೆನಿಸ್ ಪಂದ್ಯಾವಳಿ


ಕೊಡಗು ವಿದ್ಯಾಲಯದಲ್ಲಿ ಜಿಲ್ಲಾ ಮಟ್ಟದ ಅಂತರಶಾಲಾ ಟೇಬಲ್ ಟೆನಿಸ್ ಚಾಂಪಿಯನ್‌ಶಿಪ್ ಪಂದ್ಯಾವಳಿ ನೆರವೇರಿತು.

ಮಡಿಕೇರಿ: ಕೊಡಗು ವಿದ್ಯಾಲಯದಲ್ಲಿ ಜಿಲ್ಲಾ ಮಟ್ಟದ ಅಂತರ ಶಾಲಾ ಟೇಬಲ್ ಟೆನಿಸ್ ಚಾಂಪಿಯನ್‌ಶಿಪ್ ನೆರವೇರಿತು. 80 ವಿದ್ಯಾರ್ಥಿಗಳು ವಿವಿಧ ವಿಭಾಗಗಳಲ್ಲಿ ತಮ್ಮ ಕ್ರೀಡಾ ಪ್ರತಿಭೆಯನ್ನು ಪ್ರದರ್ಶಿಸಿದರು. ಎರಡು ವರ್ಷಗಳಿಂದ ಕೊಡಗು ವಿದ್ಯಾಲಯ ಈ ಪಂದ್ಯಾವಳಿಗೆ ಆತಿಥ್ಯ ವಹಿಸಿಕೊಂಡು ಬಂದಿದೆ.

ಜಿಲ್ಲಾ ಟೇಬಲ್ ಟೆನಿಸ್ ಅಸೋಸಿಯೇಷನ್ ಅಧ್ಯಕ್ಷ ಮಲ್ಲೆಂಗಡ ರಚನ್ ಪೊನ್ನಪ್ಪ ದೀಪ ಬೆಳಗಿಸಿ ಪಂದ್ಯಾವಳಿಯನ್ನು ಉದ್ಘಾಟಿಸಿದರು. ಟೇಬಲ್ ಟೆನಿಸ್ ಕ್ರೀಡೆ ಶಿಸ್ತು, ಏಕಾಗ್ರತೆ ಮತ್ತು ಕ್ರೀಡಾತ್ಮಕತೆಯನ್ನು ಬೆಳೆಸುವ ಕ್ರೀಡೆಯಾಗಿದೆ ಎಂದು ರಚನ್ ಪೊನ್ನಪ್ಪ ಹೇಳಿದರು.

ಸಮಾರೋಪ ಸಮಾರಂಭದಲ್ಲಿ ಬಹುಮಾನ ವಿತರಿಸಿದ ಶಾಲಾ ಆಡಳಿತ ಮಂಡಳಿ ನಿರ್ದೇಶಕ ಗುರುದತ್ ಸಿ.ಎಸ್, ಟೇಬಲ್ ಟೆನಿಸ್ ಮನಸ್ಸಿನ ಏಕಾಗ್ರತೆ ಮತ್ತು ಗಮನವನ್ನು ವೃದ್ಧಿಸುವ ಕ್ರೀಡೆ ಎಂದರು.

ಟೇಬಲ್ ಟೆನಿಸ್ ಟ್ರೈನಿಂಗ್ ಅಕಾಡೆಮಿಯ ಸಂಚಾಲಕ ಹರಿಶಂಕರ್ ಸೇರಿದಂತೆ ಅತಿಥಿಗಳಿಗೆ ಗೌರವ ಸಲ್ಲಿಸಲಾಯಿತು. ಕೊಡಗು ವಿದ್ಯಾಲಯದ ಪ್ರಾಂಶುಪಾಲರಾದ ಕೆ.ಎಸ್. ಸುಮಿತ್ರಾ, ಆಡಳಿತಾಧಿಕಾರಿ ರವಿ.ಪಿ, ಶಾಲಾ ನಿರ್ವಹಣಾ ಮಂಡಳಿ, ಶಿಕ್ಷಕರು, ಪೋಷಕರು ಹಾಗೂ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಹಾಜರಿದ್ದರು.

ಪೊರುಕೊಂಡ ರಯಾನ್ ಪೆಮ್ಮಯ್ಯ ರಾಜ್ಯ ಮಟ್ಟಕ್ಕೆ ಆಯ್ಕೆ



ನಾಪೋಕ್ಲು, ಡಿ.8–ಇಲ್ಲಿಗೆ ಸಮೀಪದ ಬೇತು ಗ್ರಾಮದ ಸೇಕ್ರೆಡ್ ಹಾರ್ಟ್ಸ್ ಆಂಗ್ಲ ಮಾಧ್ಯಮ ಶಾಲೆಯ ಹತ್ತನೇ ತರಗತಿ ವಿದ್ಯಾರ್ಥಿ ಪೊರುಕೊಂಡ ರಯಾನ್ ಪೆಮ್ಮಯ್ಯ ರಾಜ್ಯ ಮಟ್ಟದ ಶಟಲ್ ಬ್ಯಾಡ್ಮಿಂಟನ್‌ಗೆ ಆಯ್ಕೆಯಾಗಿದ್ದಾರೆ.

ವಿಭಾಗ ಮಟ್ಟದ ಪ್ರೌಢಶಾಲಾ ಅಂಡರ್–17 ವಯೋಮಿತಿಯ ಶಟಲ್ ಬ್ಯಾಡ್ಮಿಂಟನ್ ಪಂದ್ಯಾಟದಲ್ಲಿ ಕೊಡಗು ತಂಡದ ಪರ ಆಡಿ ಜಯಗಳಿಸಿದರು.

ಕಕ್ಕಬ್ಬೆ ಕುಂಜಿಲ ಗ್ರಾಮ ಪಂಚಾಯಿತಿ ಮಕ್ಕಳ ಗ್ರಾಮ ಸಭೆ


ಕಕ್ಕಬ್ಬೆ ಕುಂಜಿಲ ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ಮಕ್ಕಳ ಗ್ರಾಮ ಸಭೆಯನ್ನು ನಡೆಸಲಾಯಿತು.

ನಾಪೋಕ್ಲು, ಡಿ.8– ಕಕ್ಕಬ್ಬೆ ಕುಂಜಿಲ ಗ್ರಾಮ ಪಂಚಾಯಿತಿಯ ಸಭಾಂಗಣದಲ್ಲಿ ಮಕ್ಕಳ ಗ್ರಾಮ ಸಭೆಯನ್ನು ಸೋಮವಾರ ನಡೆಸಲಾಯಿತು.

ಕುಂಜಿಲ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿನಿ ಕುಮಾರಿ ಫಾತಿಮಾ ಮುಬಾಶಿರ ಅಧ್ಯಕ್ಷತೆಯಲ್ಲಿ ಆಯೋಜಿಸಿದ್ದ ಸಭೆಯಲ್ಲಿ ಕಕ್ಕಬ್ಬೆ ಕುಂಜಿಲ ಗ್ರಾ. ಪಂ.ಅಧ್ಯಕ್ಷೆ ಶಿಲ್ಪಾ ಲೋಕೇಶ್ ಮಾತನಾಡಿ, ಮಕ್ಕಳು ಮಂಡಿಸಿದ ಅಹವಾಲುಗಳನ್ನು ಮುಂದಿನ ಕ್ರಿಯಾಯೋಜನೆಯಲ್ಲಿ ಅಳವಡಿಸಿಕೊಂಡು ಸೂಕ್ತ ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಗ್ರಾಪಂ ಉಪಾಧ್ಯಕ್ಷೆ ಬೀನಾ ಸುಚಿತ್ರ, ಸದಸ್ಯರಾದ ಕಲಿಯಂಡ ಸಂಪನ್ ಅಯ್ಯಪ್ಪ, ಚೋಯಮಾಡಂಡ ಹರೀಶ್ ಮೊಣ್ಣಪ್ಪ, ಕೋಡಿಮಣಿಯಂಡ ಬೋಪಣ್ಣ, ತುಕಡಿ ಸಾಫಿಯ, ನಂಬುಡಮಂಡ ಶೈಲ ಶಾಲಾ ಅಧ್ಯಾಪಕರು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕೆ.ಪಿ. ಬಾಣೆ ಶಾಲಾ ಮಕ್ಕಳು ಸಂವಿಧಾನ ಪೀಠಿಕೆಯನ್ನು ವಾಚಿಸಿ ಮಕ್ಕಳ ಅಹವಾಲುಗಳನ್ನು ಸಭೆಯಲ್ಲಿ ಮಂಡಿಸಿದರು.

ಸಿಎನ್‌ಸಿಯಿಂದ ಪುಷ್ಪ ನಮನ



ಪುತ್ತರಿಯ ಹಿನ್ನೆಲೆಯಲ್ಲಿ ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ದೇವಟ್ ಪರಂಬುವಿನ ಕೊಡವರ ನರಮೇಧದ ಸ್ಮಾರಕ ಸ್ಥಳದಲ್ಲಿ ಪುಷ್ಪ ನಮನ ಸಲ್ಲಿಸಿತು. ಸಿಎನ್‌ಸಿ ಅಧ್ಯಕ್ಷ ಎನ್.ಯು. ನಾಚಪ್ಪ ನೇತೃತ್ವದಲ್ಲಿ ಪಟ್ಟಮಾಡ ಕುಶ, ಮಂದಪಂಡ ಮನೋಜ್ ಹಾಗೂ ನಂದೇಟಿರ ಮೋಹನ್ ಸುಬ್ಬಯ್ಯ ಇದ್ದರು.

ಕಾಡುಪ್ರಾಣಿ ಹಾವಳಿ ನಿಯಂತ್ರಿಸಲು ಆಗ್ರಹಿಸಿ ಬೆಳಗಾವಿ ಚಲೋ

ಗುಂಡ್ಲುಪೇಟೆ ಡಿ.8 (ಸೋಮ್.ಜಿ)– ಜಿಲ್ಲೆಯಲ್ಲಿ ಕಾಡುತ್ತಿರುವ ಕಾಡುಪ್ರಾಣಿಗಳ ಹಾವಳಿಯನ್ನು ತಪ್ಪಿಸಬೇಕು ಎಂದು ಒತ್ತಾಯಿಸಿ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲು ತಾಲೂಕಿನ ರೈತ ಮುಖಂಡರು ಸುವರ್ಣಸೌಧ ಬೆಳಗಾವಿ ಚಲೋ ಕೈಗೊಂಡಿದ್ದಾರೆ.

ಚಳಿಗಾಲದ ಅಧಿವೇಶನದ ಸಮಯದಲ್ಲಿ ಮೈಸೂರು ಚಾಮರಾಜನಗರ ಜಿಲ್ಲೆಯಲ್ಲಿ ಹೆಚ್ಚು ಉಪಟಳ ನೀಡುತ್ತಿರುವ ಕಾಡುಪ್ರಾಣಿಗಳ ಹಾವಳಿ ತಪ್ಪಿಸುವಂತೆ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲು ಇಲ್ಲಿನ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವಾಸುದೇವ ಮೇಟಿ ಬಣದ ಸುಮಾರು 25 ಜನರ ಎರಡು ತಂಡ ಸುವರ್ಣ ಸೌಧ ಬೆಳಗಾವಿ ಚಲೋ ಹಮ್ಮಿಕೊಂಡಿದ್ದಾರೆ.


ಗುಂಡ್ಲುಪೇಟೆಯಿಂದ ಎರಡು ವಾಹನದಲ್ಲಿ ಬೆಳಗಾವಿಗೆ ಹೊರಟ ರೈತ ಮುಖಂಡರು.

ಹೋಂಸ್ಟೇ ಹಾಗೂ ರೆಸಾರ್ಟ್‌ಗಳನ್ನು ಸಂರಕ್ಷಿತ ಅರಣ್ಯದಿಂದ ಕನಿಷ್ಠ 10ಕಿಮೀ ದೂರದಲ್ಲಿಡಬೇಕು ಅಕ್ರಮ ರೆಸಾರ್ಟ್‌ಗಳನ್ನು ಕೂಡಲೆ ಮುಚ್ಚಬೇಕು, ಜಿಲ್ಲೆಯ ಎಲ್ಲಾ ಕೆರೆಗಳಿಗೆ ನೀರು ತುಂಬಿಸಬೇಕು, ಅಕ್ರಮ ಗಣಿಗಾರಿಕೆ ಹಾಗೂ 16 ರಿಂದ 20 ಚಕ್ರದ ಭಾರಿ ವಾಹನಗಳ ಸಂಚಾರಕ್ಕೆ ಕಡಿವಾಣ ಹಾಕುವುದು, ರೈತರು ಬೆಳೆದ ಎಲ್ಲಾ ಬೆಳೆಗಳಿಗೆ ಸಮಯಕ್ಕೆ ಸರಿಯಾಗಿ ಬೆಂಬಲ ಬೆಲೆ ಘೋಷಣೆ ಮಾಡಿ ಶೀಘ್ರವಾಗಿ ಖರೀದಿ ಕೇಂದ್ರಗಳನ್ನು ತೆರೆಯುವುದು, ಸರ್ಕಾರಿ ಅಧಿಕಾರಿಗಳ ಲಂಚಾವತಾರ ಬಡ ರೈತರಿಗೆ ಹೊರಲಾರದ ಹೊರೆಯಾಗಿದ್ದು, ಲೋಕಾಯುಕ್ತ ಸಂಸ್ಥೆಯನ್ನು ಇನ್ನಷ್ಟು ಸದೃಢಗೊಳಿಸಿ ದಕ್ಷ ಅಧಿಕಾರಿಗಳನ್ನು ನೇಮಿಸಬೇಕು ಎಂಬ ಒತ್ತಾಯಗಳು ಸೇರಿದಂತೆ ಜಿಲ್ಲಾ ಸಮಸ್ಯೆಗಳನ್ನು ರಾಜ್ಯ ಸಮಿತಿಯ ಜೊತೆ ಸೇರಿ ಬೆಳಗಾವಿಯ ಸುವರ್ಣ ಸೌಧದಲ್ಲಿ ದನಿಯೆತ್ತುವ ಸಲುವಾಗಿ ಹೋಗುತ್ತಿದ್ದೇವೆ ಎಂದು ಸಂಘದ ಜಿಲ್ಲಾಧ್ಯಕ್ಷ ಮಾಡ್ರಹಳ್ಳಿ ಮಹದೇವಪ್ಪ ತಿಳಿಸಿದ್ದಾರೆ.

ಭಕ್ತಿಯಿಂದ ಬೇಡಿಕೊಂಡರೆ ಕೋರಿಕೆ ಸಫಲ: ಗಣಪತಿ ಶ್ರೀ


ಪಾರ್ವತಿ ಬೆಟ್ಟಕ್ಕೆ ಆಗಮಿಸಿದ ಗಣಪತಿ ಆಶ್ರಮದ ಸಚ್ಚಿದಾನಂದ ಸ್ವಾಮೀಜಿ, ವಿಜಯಾನಂದ ತೀರ್ಥ ಸ್ವಾಮೀಜಿಯವರನ್ನು ಭಕ್ತರು ಪೂರ್ಣಕುಂಭದೊಂದಿಗೆ ಸ್ವಾಗತಿಸಿದರು.

ಗುಂಡ್ಲುಪೇಟೆ, ಡಿ.8(ಸೋಮ್.ಜಿ)–ಬೇರೆಯವರು ಹೇಳಿದರು ಎಂಬುದಕ್ಕಿಂತ ಭಗವಂತನ ಮೇಲೆ ನಿಜವಾದ ಭಕ್ತಿಯಿಂದ ಬೇಡಿಕೊಂಡ ಯಾವುದೇ ಕೋರಿಕೆಗಳು ಈಡೇರುತ್ತವೆ ಎಂದು ಮೈಸೂರಿನ ಸಚ್ಚಿದಾನಂದ ಗಣಪತಿ ಆಶ್ರಮದ ಶ್ರೀ ಸಚ್ಚಿದಾನಂದ ಸ್ವಾಮೀಜಿ ಹೇಳಿದ್ದಾರೆ.

ತಾಲೂಕಿನ ಸ್ಕಂದಗಿರಿ ಪಾರ್ವತಾಂಬ ಬೆಟ್ಟಕ್ಕೆ ಭೇಟಿ ನೀಡಿ ಮಾತನಾಡಿದ ಸ್ವಾಮೀಜಿ ಸ್ಕಂದ ಕ್ಷೇತ್ರವಾದ ಇಲ್ಲಿ ಸ್ವತಃ ಸೋಮೇಶ್ವರಸ್ವಾಮಿಯು ಮಹಾಶಕ್ತಿ ಪಾರ್ವತಿಯ ಜತೆಗೆ ನೆಲೆಸಿದ್ದು ಅತ್ಯಂತ ಪುರಾಣ ಪವಿತ್ರವಾಗಿದೆ. ಇಲ್ಲಿ ನಡೆಸುವ ಕಲ್ಯಾಣೋತ್ಸವ ಅತ್ಯಂತ ಶಕ್ತಿಶಾಲಿಯಾಗಿದ್ದು, ಭಕ್ತರ ಅರ್ಪಣಾ ಮನೋಭಾವದ ಕೋರಿಕೆಗಳು ಈಡೇರುತ್ತವೆ. 1964ರಲ್ಲಿ ಮೊದಲ ಬಾರಿಗೆ ನಡೆದ ಜಾತ್ರೆಯಲ್ಲಿ ಲಕ್ಷಾಂತರ ಭಕ್ತರು ಸೇರಿದ್ದರು. ಅಲ್ಲಿ ಸಿದ್ಧ ಪಡಿಸಿದ್ದ ಪ್ರಸಾದವನ್ನು ಭಕ್ತರಿಗೆ ಬಡಿಸಿದಷ್ಟೂ ಮತ್ತಷ್ಟು ಹೆಚ್ಚುವ ಮೂಲಕ ಅಕ್ಷಯವಾಗುತ್ತಿತ್ತು. ಇದು ಸ್ವತಃ ಪಾರ್ವತಿ ದೇವಿಯು ತನ್ನ ಭಕ್ತರಿಗೆ ತೋರಿದ ಕರುಣೆ ಎಂದು ಸ್ಮರಿಸಿದರು.

ಆಶ್ರಮದ ಕಿರಿಯ ಶ್ರೀಗಳಾದ ವಿಜಯಾನಂದ ತೀರ್ಥ ಸ್ವಾಮೀಜಿ ಜತೆ ಸೋಮವಾರ ದೇವಾಲಯಕ್ಕೆ ಆಗಮಿಸಿದ ಅವಧೂತರನ್ನು ಬೆಟ್ಟದ ಸುತ್ತಮುತ್ತಲಿನ ಕಂದೇಗಾಲ, ಶಿಂಡನಪುರ, ಮೊಳ್ಳಯ್ಯನ ಹುಂಡಿ ಗ್ರಾಮಸ್ಥರು, ಬ್ರಾಹ್ಮಣಸಭಾ ಹಾಗೂ ಸಚ್ಚಿದಾನಂದ ಶ್ರೀಗಳ ಭಕ್ತರು ಜನಪದ ಕಲಾ ತಂಡಗಳು, ಮಂಗಳವಾದ್ಯಗಳು, ವೀರಗಾಸೆಗಳ ಜತೆಗೆ ಭಕ್ತಿಪೂರ್ವಕವಾಗಿ ಬರಮಾಡಿಕೊಂಡರು. ಸೋಮೇಶ್ವರಸ್ವಾಮಿ ಹಾಗೂ ಮಹಾಪಾರ್ವತಿ ಅಮ್ಮನವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದ ನಂತರ ದೇವಾಲಯದ ಆವರಣದಲ್ಲಿ ಆಯೋಜಿಸಿದ್ದ ಹೋಮಕುಂಡಕ್ಕೆ ಪೂರ್ಣಾಹುತಿ ಸಲ್ಲಿಸಿದರು.

ತಾಲೂಕು ಬ್ರಾಹ್ಮಣರ ಸಂಘದ ಅಧ್ಯಕ್ಷ ಗೋಪಾಲ ಕೃಷ್ಣಭಟ್, ಚಾಮರಾಜೇಶ್ವರ ದೇವಾಲಯದ ಪ್ರಧಾನ ಅರ್ಚಕ ನಾಗರಾಜ ದೀಕ್ಷಿತ್, ಪ್ರದೀಪ್ ದೀಕ್ಷಿತ್, ಮಾಜಿ ಶಾಸಕ ಸಿ.ಎಸ್. ನಿರಂಜನ ಕುಮಾರ್, ಟೌನ್ ಪಿಎಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಮಂಜುನಾಥ್, ಪುರಸಭೆ ಮಾಜಿ ಅಧ್ಯಕ್ಷ ಎಲ್.ಸುರೇಶ್, ಮುಖಂಡರಾದ ಎಸ್.ಪಿ. ಸುರೇಶ್, ಮಹದೇವಪ್ಪ, ಮಂಜುನಾಥ್, ಮೋಹನ್, ಕುಮಾರ್, ಸುಮನ್, ತೇಜಾ, ನಾಗಮಲ್ಲಪ್ಪ, ಮಾದೇಶ್, ಅಭಿವೃದ್ಧಿ ಸಮಿತಿ ಸದಸ್ಯರು ಗ್ರಾಮಸ್ಥರು, ಮಹಿಳಾ ಭಕ್ತರು ಭಾಗವಹಿಸಿದ್ದರು.

ಚಿರತೆ ದಾಳಿಯಿಂದ ಜಾನುವಾರು ರಕ್ಷಿಸಿದ ರೈತ



ಚಾಮರಾಜನಗರ: ಜಮೀನಿನಲ್ಲಿ ಮೇಯುತ್ತಿದ್ದ ಮೇಕೆ ಹಾಗೂ ಹಸುವಿನ ಮೇಲೆ ಏಕಾಏಕಿ ದಾಳಿ ನಡೆಸಿದ ಚಿರತೆಯನ್ನು ವೃದ್ಧ ರೈತ ದೊಣ್ಣೆಯಿಂದ ಹೊಡೆದು ಹಿಮ್ಮೆಟ್ಟಿಸಿದ ಘಟನೆ ನಗರದ ಸಮೀಪದ ರಾಮುಸಮುದ್ರ ಬಳಿಯ ದೊಡ್ಡಕೆರೆ ರಸ್ತೆ ಬಳಿಯ ಜಮೀನಿನಲ್ಲಿ ಸೋಮವಾರ ನಡೆದಿದೆ.

ರಾಮಸಮುದ್ರದ ನಿವಾಸಿ ವೃದ್ಧ ರೈತ ಸಿದ್ದಶೆಟ್ಟಿ ಹಸು, ಮೇಕೆ ಮೇಯಿಸಲೆಂದು ಹೋಗಿದ್ದರೆನ್ನಲಾಗಿದ್ದು, ಮಧ್ಯಾಹ್ನ ಏಕಾಏಕಿ ಚಿರತೆಯೊಂದು ಜಾನುವಾರುಗಳ ಮೇಲೆ ದಾಳಿ ನಡೆಸಿದೆ. ಇದನ್ನು ನೋಡಿದ ರೈತ ಸಿದ್ದಶೆಟ್ಟಿ ಅಕ್ಕಪಕ್ಕದ ರೈತರನ್ನು ಕೂಗಿಕೊಂಡು ಚಿರತೆಗೆ ದೊಣ್ಣೆಯಿಂದ ಹೊಡೆದು ಓಡಿಸಿದ್ದಾನೆ. ನಂತರ ಅಕ್ಕ–ಪಕ್ಕದ ಜಮೀನಿನ ರೈತರು ಬರುವಷ್ಟರಲ್ಲಿ ಚಿರತೆ ಪರಾರಿಯಾಗಿದ್ದು, ಅದೃಷ್ಟವಶಾತ್ ರೈತ ಬಚಾವಾಗಿದ್ದಾರೆ.

ಈ ಘಟನೆಯಿಂದ ರೈತರು ಭಯಭೀತರಾಗಿದ್ದು, ಕೂಡಲೇ ಚಿರತೆ ಸೆರೆ ಹಿಡಿದು ಕಾಡಿಗೆ ಬಿಡುವಂತೆ ಆಗ್ರಹಿಸಿದ್ದಾರೆ. ಪ್ರಾಣದ ಹಂಗನ್ನು ತೊರೆದು ಹಸು ಹಾಗೂ ಮೇಕೆಗಳನ್ನು ರಕ್ಷಿಸಿದ್ದ ವೃದ್ಧ ರೈತನ ಸಾಹಸಕ್ಕೆ ಸ್ಥಳೀಯರು ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

ಆರೋಪಿಗಳಿಬ್ಬರ ಬಂಧನ: ಬೈಕ್, ಕೇಬಲ್ ವೈರ್ ವಶ

ಯಳಂದೂರು.ಡಿ.8 (ವಿ.ನಾಗರಾಜು)–ಪಂಪ್‌ಸೆಟ್‌ಗಳಿಗೆ ಅಳವಡಿಸಿದ್ದ ಕೇಬಲ್ ವೈರ್‌ಗಳನ್ನು ಕಳ್ಳತನ ಮಾಡುತ್ತಿದ್ದ ಇಬ್ಬರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಚಾಮರಾಜನಗರದ ಮಹದೇಶ್ವರ ಬಡಾವಣೆಯ ನಿವಾಸಿಗಳಾದ ಮನೋಜ್(26), ರಾಜು(20) ಬಂಧಿತರು. ಸಂತೇಮರಹಳ್ಳಿಯಲ್ಲಿ ಸಬ್‌ಇನ್ಸ್‌ಪೆಕ್ಟರ್ ತಾಜುದ್ದೀನ್ ಹಾಗೂ ಸಿಬ್ಬಂದಿ ವಾಹನಗಳ ತಪಾಸಣೆ ಮಾಡುತ್ತಿದ್ದಾಗ ಬೈಕ್‌ನಲ್ಲಿ ಚೀಲ ಇಟ್ಟುಕೊಂಡು ಚಾಮರಾಜನಗರ ಕಡೆಗೆ ತೆರಳುತ್ತಿದ್ದ ಮನೋಜ್ ಹಾಗೂ ರಾಜುನನ್ನು ನಿಲ್ಲಿಸಿ ತಪಾಸಣೆ ಮಾಡಿದಾಗ ಚೀಲದಲ್ಲಿ ಪಂಪ್‌ಸೆಟ್‌ಗಳ ಕೇಬಲ್ ವೈರ್‌ಗಳಿರುವುದು ಪತ್ತೆಯಾಗಿದೆ. ಕೂಡಲೇ ಇಬ್ಬರು ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ಮಾಡಿದಾಗ ಗೂಳಿಪುರ ಸುತ್ತಮುತ್ತ ಪಂಪ್‌ಸೆಟ್‌ಗಳಲ್ಲಿ ಕೇಬಲ್ ವೈರ್‌ಗಳನ್ನು ಕಳ್ಳತನ ಮಾಡಿರುವುದಾಗಿ ಪೊಲೀಸರಿಗೆ ನೀಡಿರುವ ಹೇಳಿಕೆಯಲ್ಲಿ ತಿಳಿಸಿದ್ದಾರೆ.


ಕೇಬಲ್ ವೈರ್‌ಗಳನ್ನು ಕಳ್ಳತನ ಮಾಡುತ್ತಿದ್ದ ಇಬ್ಬರು ಆರೋಪಿಗಳನ್ನು ಪೊಲೀಸರು ಬಂಧಿಸಿರುವುದು.

ಬಂಧಿತರಿಂದ ಬೈಕ್ ಹಾಗೂ 15 ಸಾವಿರ ಮೌಲ್ಯದ ಕೇಬಲ್ ವೈರ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ಸಂತೇಮರಹಳ್ಳಿ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ನ್ಯಾಯಾಲಯದ ಆದೇಶದ ಮೇರೆಗೆ ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಎಎಸ್‌ಐ ಉಮೇಶ್, ಸಿಬ್ಬಂದಿ ಸೋಮಶೇಖರ್, ಹೇಮಂತ್‌ಕುಮಾರ್, ನಂಜುಂಡಸ್ವಾಮಿ, ರಮೇಶ್, ಮಹದೇವಸ್ವಾಮಿ ಇದ್ದರು.

ಕಾಡು ಪ್ರಾಣಿಗಳ ಹಾವಳಿ ತಡೆಗೆ ಪ್ರತಿಭಟನೆ



ಚಾಮರಾಜನಗರ, ಡಿ.8–ತಾಲೂಕಿನ ಹೆಗ್ಗೋಠಾರ, ಕಲ್ಪುರ ವ್ಯಾಪ್ತಿಯಲ್ಲಿ ಕಾಡು ಪ್ರಾಣಿಗಳ ಹಾವಳಿ ತಡೆಗೆ ಆಗ್ರಹಿಸಿ ನಗರದಲ್ಲಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಪ್ರತಿಭಟನೆ ನಡೆಸಿದವು.

ನಗರದ ಚಾಮರಾಜನಗರ ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಕಚೇರಿ ಮುಂಭಾಗ ಜಮಾಯಿಸಿದ ಪ್ರತಿಭಟನಾಕಾರರು ಕೆಲಕಾಲ ಪ್ರತಿಭಟನೆ ನಡೆಸಿ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲಾಧ್ಯಕ್ಷ ಹೊನ್ನೂರು ಬಸವಣ್ಣ ಮಾತನಾಡಿ, ತಾಲೂಕಿನ ಹೆಗ್ಗೋಠಾರ, ಕಲ್ಪುರ ವ್ಯಾಪ್ತಿಯಲ್ಲಿ ಹುಲಿ, ಚಿರತೆಗಳ ಹಾವಳಿ ಹೆಚ್ಚಾಗಿದೆ. 2 ತಿಂಗಳಲ್ಲಿ 8–10 ಜಾನುವಾರುಗಳನ್ನು ಕೊಂದು ಹಾಕಿದ್ದು ನಾಲ್ವರನ್ನು ಬಲಿ ಪಡೆದುಕೊಂಡಿವೆ. ಆದರೆ, ಇಲ್ಲಿಯ ತನಕ ಹುಲಿ, ಚಿರತೆ ಸೆರೆ ಹಿಡಿಯುವಲ್ಲಿ ಅರಣ್ಯಾಧಿಕಾರಿಗಳು ಕ್ರಮವಹಿಸಿಲ್ಲ. ಈ ಸಂಬಂಧ ಪ್ರಶ್ನಿಸಿದರೆ ಬೋನು ಇಲ್ಲ, ಸಿಬ್ಬಂದಿ ಕೊರತೆ ಎಂದು ಸಬೂಬು ಹೇಳುತ್ತಾರೆ ಸರ್ಕಾರ ಕೂಡಲೇ ಅರಣ್ಯ ಸಿಬ್ಬಂದಿ ನೇಮಕ ಮಾಡಿ ಅಗತ್ಯವಿರುವ ಪರಿಕರಗಳನ್ನು ಪೂರೈಕೆ ಮಾಡಬೇಕು ಎಂದು ಒತ್ತಾಯಿಸಿದರು.

ಸಂಘದ ಸಂಘಟನಾ ಕಾರ್ಯದರ್ಶಿ ವಿಜಯಕುಮಾರ್ ಮಾತನಾಡಿ, ಜಿಲ್ಲೆಯಲ್ಲಿ ಶೇ.50ರಷ್ಟು ಅರಣ್ಯವಿದ್ದು ಕಾಡು ಪ್ರಾಣಿಗಳ ಹಾವಳಿ ನಿರಂತರವಾಗಿದೆ. ಕಾಡು ಪ್ರಾಣಿಗಳಿಂದ ರೈತರು ಸಾವನ್ನಪ್ಪಿದಾಗ ಚೆಕ್ ತೆಗೆದುಕೊಂಡು ಬರುವುದಲ್ಲ. ಬದಲಿಗೆ ಕಾಡು ಪ್ರಾಣಿಗಳ ಹಾವಳಿ ತಡೆಯಲು ಮುಂದಾಗಬೇಕು ಎಂದರು.

ಪ್ರತಿಭಟನೆಯಲ್ಲಿ ಪದಾಧಿಕಾರಿಗಳಾದ ಮೇಲಾಜಿಪುರ ಕುಮಾರ್, ಕಲ್ಪುರ ರಘು, ಮಹೇಶ್, ಮುರುಗೇಂದ್ರ ಸ್ವಾಮಿ, ಲೋಕೇಶ್ ಹಳೇಪುರ, ಮಹೇಶ್, ತಮ್ಮಯಪ್ಪ ದೊರೆಸ್ವಾಮಿ, ಸಂಜಯ್ ಇತರರು ಭಾಗವಹಿಸಿದ್ದರು.

ಇ–ಸ್ವತ್ತು, ಹಕ್ಕುಪತ್ರಕ್ಕೆ ಆಗ್ರಹಿಸಿ ಮಹಿಳೆಯರ ಪ್ರತಿಭಟನೆ

ಕೊಳ್ಳೇಗಾಲ, ಡಿ.8.(ಎನ್‌ಎನ್)– ಪಟ್ಟಣ ವ್ಯಾಪ್ತಿಯ ಮುಡಿಗುಂಡ ಮತ್ತು ಶಂಕನಪುರ ಬಡಾವಣೆಗಳ ಸ್ಲಂ ಬೋರ್ಡ್ ಮನೆಗಳಿಗೆ ಇ–ಸ್ವತ್ತು ಮತ್ತು ರಿಜಿಸ್ಟರ್ ಹಕ್ಕುಪತ್ರ ನೀಡಬೇಕೆಂದು ಆಗ್ರಹಿಸಿ ಮಹಿಳಾ ವಾಸಿಗಳು ನಗರಸಭೆ ಮುಂಭಾಗ ಸೋಮವಾರ ಪ್ರತಿಭಟನೆ ನಡೆಸಿದರು.

ನಗರಸಭೆಯ ಪೌರಾಯುಕ್ತರ ಕಚೇರಿಯ ಮುಂದೆ ಸೇರಿದ ಪ್ರತಿಭಟನಾಕಾರರು ಹಲವು ವರ್ಷಗಳಿಂದ ಶಂಕನಪುರದಲ್ಲಿ ವಾಸಿಸುತ್ತಿದ್ದರೂ ನಮ್ಮ ನಿವೇಶನಗಳಿಗೆ ಈವರೆಗೂ ಇ–ಸ್ವತ್ತು, ರಿಜಿಸ್ಟರ್ ಸೇರಿದಂತೆ ಯಾವುದೇ ಹಕ್ಕುಪತ್ರಗಳನ್ನು ನೀಡಿಲ್ಲ. ಇದಕ್ಕಾಗಿ ಎಲ್ಲ ಅಗತ್ಯ ದಾಖಲೆಗಳನ್ನು ಸಲ್ಲಿಸಿ ಮೂರು ವರ್ಷಗಳಾಗಿದ್ದರೂ ಯಾವುದೇ ಸ್ಪಷ್ಟ ಉತ್ತರ ನೀಡದೆ ಅಲೆಸುತ್ತಿದ್ದಾರೆ. ಈರೀತಿಯಾದರೆ ನಮ್ಮ ಪಾಡೇನು ಎಂದು ಅಧಿಕಾರಿಗಳ ವರ್ತನೆ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಈಗ ಆರು ತಿಂಗಳೊಳಗೆ ಹಕ್ಕುಪತ್ರ ನೀಡುವ ಪ್ರಕ್ರಿಯೆಯನ್ನು ಪೂರ್ಣಗೊಳಿಸುವುದಾಗಿ ಅಧಿಕಾರಿಗಳು ಭರವಸೆ ನೀಡಿದ್ದಾರೆ. ಅಧಿಕಾರಿಗಳು ಕೊಟ್ಟ ಅವಧಿಯಲ್ಲಿ ನಮ್ಮ ಬೇಡಿಕೆ ಈಡೇರಿಸದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಬೇಕಾಗುತ್ತದೆ, ಆಮರಣಾಂತ ಉಪವಾಸಕ್ಕೂ ನಾವು ಸಿದ್ಧರಿದ್ದೇವೆ ಎಂದು ಎಚ್ಚರಿಕೆ ನೀಡಿದರು.

ನಿವಾಸಿಗಳಾದ ಶಿವಮ್ಮ, ಕವಿತಾ, ಸುಮ, ನಿಂಗಮ್ಮ, ರಾಧ, ಪುಟ್ಟನಂಜಮ್ಮ, ನಾಗವೇಣಿ, ದೀಪಾ, ಜಯಮ್ಮ, ಮಹದೇವ, ನಿಂಗರಾಜು ಸೇರಿದಂತೆ ಹಲವು ಮಂದಿ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಬಸವರಾಜು ನಿಧನ



ಕೊಳ್ಳೇಗಾಲ, ಡಿ.8–ತಾಲೂಕಿನ ಸಿದ್ದಯ್ಯನಪುರ ಗ್ರಾಮದ ಬಸವರಾಜು (67) ದೀರ್ಘಕಾಲದ ಅಸ್ವಸ್ಥತೆಯಿಂದ ಸೋಮವಾರ ನಿಧನರಾದರು

ಮೃತರು ಪತ್ನಿ, ಪುತ್ರರಾದ ಮೈಸೂರು ಮಿತ್ರ ಡಿಟಿಪಿ ಆಪರೇಟರ್ ನಾಗಭೂಷಣ್, ರೋಹಿತ್, ಪುತ್ರಿ ದೇವಿಕಲಾ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಸಂಜೆ ಸಿದ್ದಯ್ಯನಪುರ ರುದ್ರಭೂಮಿಯಲ್ಲಿ ಮೃತರ ಅಂತ್ಯಕ್ರಿಯೆ ಜರುಗಿತು.

ಸಿ.ಎಸ್.ರುದ್ರಸ್ವಾಮಿ (ರುದ್ರಪ್ಪ)



ಚಾಮರಾಜನಗರ, ಡಿ.8–ಅಡಿಕೆ ವ್ಯಾಪಾರಿ ಸಿ.ಎಸ್. ರುದ್ರಸ್ವಾಮಿ (ರುದ್ರಪ್ಪ 87) ಸೋಮವಾರ ಅನಾರೋಗ್ಯದಿಂದ ಸ್ವಗೃಹದಲ್ಲಿ ನಿಧನರಾದರು.

ಮೃತರು ಪತ್ನಿ ನಾಗರತ್ನಮ್ಮ, ಮಕ್ಕಳಾದ ನಾಗನಂದಿನಿ, ಮೋಹನ್ ಕುಮಾರ್, ಅಶ್ವಿನಿ, ಪಲ್ಲವಿ, ಅಳಿಯ ಮಹೇಶ್ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಅಂತ್ಯಕ್ರಿಯೆ ಮಂಗಳವಾರ ಮಧ್ಯಾಹ್ನ 1 ಗಂಟೆಗೆ ನಗರದ ವೀರಶೈವ ರುದ್ರಭೂಮಿಯಲ್ಲಿ ನಡೆಯಲಿದೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

ತಂತಿ ಬೇಲಿ ಅಳವಡಿಸಿರುವುದರಿಂದ ಕೆಆರ್‌ಎಸ್ ಬೃಂದಾವನ ಈಗ ಸುರಕ್ಷಿತ

ಕಾವೇರಿ ನೀರಾವರಿ ನಿಗಮದ ಅಸಿಸ್ಟೆಂಟ್ ಎಕ್ಸಿಕ್ಯೂಟಿವ್ ಇಂಜಿನಿಯರ್ ಫಾರೂಕ್ ಅಹಮ್ಮದ್ ಸ್ಪಷ್ಟನೆ

ಮೈಸೂರು, ಡಿ. 8 (ಆರ್‌ಕೆ)– ತಂತಿ ಬೇಲಿ (ಫೆನ್ಸಿಂಗ್) ಅಳವಡಿಸಿರುವುದರಿಂದ ವಿಶ್ವಪ್ರಸಿದ್ಧ ಕೃಷ್ಣರಾಜ ಸಾಗರ (ಕೆಆರ್‌ಎಸ್) ದ ಬೃಂದಾವನ ಸುರಕ್ಷಿತವಾಗಿದೆ ಎಂದು ಕಾವೇರಿ ನೀರಾವರಿ ನಿಗಮ ನಿಯಮಿತ (ಸಿಎನ್‌ಎನ್‌ಎಲ್)ದ ಅಸಿಸ್ಟೆಂಟ್ ಎಗ್ಸಿಕ್ಯೂಟಿವ್ ಇಂಜಿನಿಯರ್ ಫಾರೂಕ್ ಅಹಮ್ಮದ್ ತಿಳಿಸಿದ್ದಾರೆ.

ಕೆಆರ್‌ಎಸ್ ಬೃಂದಾವನದ ಬಳಿ ಮತ್ತೆ ಚಿರತೆ ಕಾಣಿಸಿಕೊಂಡ ಬಗ್ಗೆ 'ಮೈಸೂರು ಮಿತ್ರ'ನಲ್ಲಿ ವರದಿಗೆ ಸ್ಪಷ್ಟೀಕರಣ ನೀಡಿರುವ ಅವರು ಬೃಂದಾವನದ ಸುತ್ತ ತಂತಿ ಬೇಲಿ ಅಳವಡಿಸಿರುವುದರಿಂದ ಅಲ್ಲಿಗೆ ಚಿರತೆ, ಹುಲಿ ಅಥವಾ ಇನ್ನಾವುದೇ ಪ್ರಾಣಿಗಳು ನುಸುಳಲು ಸಾಧ್ಯವಿಲ್ಲ ಎಂದಿದ್ದಾರೆ.

ಈ ಹಿಂದೆಯೇ ಬೃಂದಾವನದ ಸುತ್ತಲು ಸಂಪೂರ್ಣವಾಗಿ ಸೋಲಾರ್ ತಂತಿ ಬೇಲಿ ಅಳವಡಿಸಲಾಗಿದೆ. ಇದೀಗ ಚಿರತೆ ಕಾಣಿಸಿಕೊಂಡಿರುವುದು ಬೃಂದಾವನದ ತಂತಿ ಬೇಲಿ ಹೊರಗಿನ ತೋಟಗಾರಿಕೆ ಇಲಾಖೆಗೆ ಸೇರಿದ ಪ್ರದೇಶದಲ್ಲಿ ಎಂದಿರುವ ಅವರು, ಅಲ್ಲಿಗೆ ಯಾವುದೇ ತಂತಿ ಬೇಲಿ ಅಳವಡಿಸಿಲ್ಲವಾದ್ದರಿಂದ ಆ ಪ್ರದೇಶದಲ್ಲಿ ಗಿಡ–ಗಂಟಿ ಬೆಳೆದಿರುವ ಕಾರಣ ಪ್ರಾಣಿಗಳು ಓಡಾಡಿರಬಹುದು. ಆದರೆ ಬೃಂದಾವನದಲ್ಲಿ ಚಿರತೆ ಪ್ರತ್ಯಕ್ಷವಾಗಿಲ್ಲ. ಬೃಂದಾವನದ ಸುತ್ತಲೂ ಇರುವ ಸೋಲಾರ್ ತಂತಿ ಬೇಲಿಯಿಂದ ಯಾವುದೇ ಪ್ರಾಣಿ ಬೃಂದಾವನ ಪ್ರವೇಶಿಸಲು ಅವಕಾಶವಿಲ್ಲ ಎಂದು ತಿಳಿಸಿದ್ದಾರೆ.

ಆದಾಗ್ಯೂ ಕಾವೇರಿ ನೀರಾವರಿ ನಿಗಮದಿಂದ ಪ್ರವಾಸಿಗರ ಸುರಕ್ಷತೆಗಾಗಿ ಬೃಂದಾವನ ಗಾರ್ಡನ್‌ನಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಪರಿಣಾಮ ಇತ್ತೀಚಿನ ದಿನಗಳಲ್ಲಿ ಯಾವುದೇ ಅನಾಹುತ ಸಂಭವಿಸಿಲ್ಲ ಎಂದು ಅವರು ತಿಳಿಸಿದ್ದಾರೆ.

ಅಂಬೇಡ್ಕರ್ ಅವರಿಗೆ ನಮನ



ಡಾ. ಬಿ.ಆರ್. ಅಂಬೇಡ್ಕರ್ ಅವರ 69ನೇ ಮಹಾ ಪರಿನಿಬ್ಬಾಣ ದಿನದ ಅಂಗವಾಗಿ ಮೈಸೂರಿನ ಗಾಂಧಿನಗರದ ಅಂಬೇಡ್ಕರ್ ವೃತ್ತದಲ್ಲಿ ಮುಖಂಡರು, ಮಕ್ಕಳು ಮೇಣದ ಬತ್ತಿ ಬೆಳಗಿ ನಮನ ಸಲ್ಲಿಸಿದರು. ಕರ್ನಾಟಕ ದಲಿತ ಪ್ಯಾಂಥರ್ಸ್ ಅಧ್ಯಕ್ಷ ಯೋಗ ನರಸಿಂಹ, ಸುರೇಶ್, ದೇವೇಂದ್ರ, ಕಿರಣ್‌ಕುಮಾರ್, ಎಂ. ಮಹೇಶ್, ಅನುಪಮ್, ಚೇತನ್, ಕಾಂತರಾಜ್, ನವೀನ್, ಧನಂಜಯ್, ರಮೇಶ್, ಗುರುರಾಜ್, ಕುಮಾರ್, ಚಲುವ, ವಿನೋದ್, ಕಾರ್ತಿಕ್, ಸಂಜು, ಭವನ್, ಅಪ್ಪು ಇನ್ನಿತರರಿದ್ದರು.

ಇಬ್ಬರು ಅಪರಿಚಿತರ ಸಾವು

ಮೈಸೂರು, ಡಿ. 8– ಮೈಸೂರು ನಗರದಲ್ಲಿ ಇಬ್ಬರು ಅಪರಿಚಿತ ವ್ಯಕ್ತಿಗಳು ಸಾವಿಗೀಡಾಗಿರುವ ಬಗ್ಗೆ ವರದಿಯಾಗಿದೆ. ಕೆ.ಆರ್. ಆಸ್ಪತ್ರೆಯ ಫಾರ್ಮಸಿ ಸ್ಟೋರ್ ತಂಗುದಾಣದಲ್ಲಿ ಡಿ. 3ರಂದು ಸುಮಾರು 50 ವರ್ಷದ ವ್ಯಕ್ತಿ ಮಲಗಿದ್ದ ಸ್ಥಿತಿಯಲ್ಲಿ ಸಾವನ್ನಪ್ಪಿದ್ದಾರೆ.

ಜಗನ್ಮೋಹನ ಅರಮನೆ ಬಳಿ ಡಿ. 6ರಂದು ಅಸ್ವಸ್ಥರಾಗಿ ಬಿದ್ದಿದ್ದ ಸುಮಾರು 65 ವರ್ಷದ ವ್ಯಕ್ತಿಯನ್ನು ಸಾರ್ವಜನಿಕರು ಕೆ.ಆರ್. ಆಸ್ಪತ್ರೆಗೆ ದಾಖಲಿಸಿದ್ದು, ಈತ ಚಿಕಿತ್ಸೆ ಫಲಕಾರಿಯಾಗದೇ ಡಿ. 7ರಂದು ಸಾವನ್ನಪ್ಪಿದ್ದಾನೆ.

ಇವರ ವಾರಸುದಾರರು ದೇವರಾಜ ಠಾಣೆ ದೂರವಾಣಿ ಸಂಖ್ಯೆ 0821–2418306 ಅನ್ನು ಸಂಪರ್ಕಿಸುವಂತೆ ಪೊಲೀಸ್ ಪ್ರಕಟಣೆ ಕೋರಿದೆ.

ವ್ಯಕ್ತಿ ನಾಪತ್ತೆ



ಮೈಸೂರು, ಡಿ. 8– ವ್ಯಕ್ತಿಯೊಬ್ಬರು ನಾಪತ್ತೆಯಾಗಿರುವ ಬಗ್ಗೆ ದೇವರಾಜ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ದೇವರಾಜ ಮೊಹಲ್ಲಾದಲ್ಲಿರುವ ಗೋಲ್ಡನ್ ಕಂಫರ್ಟ್ ಹೋಟೆಲ್‌ನಿಂದ ಕಳೆದ 6ರಂದು ಬೆಳಗ್ಗೆ 7.30ರಲ್ಲಿ ಬಿ. ದೇವರಾಜು(53) ಅವರು ಕಾಣೆಯಾಗಿದ್ದಾರೆ ಎಂದು ಪುತ್ರ ಪೊಲೀಸರಿಗೆ ನೀಡಿದ ದೂರಿನಲ್ಲಿ ತಿಳಿಸಲಾಗಿದೆ.

ಇವರ ಬಗ್ಗೆ ಮಾಹಿತಿ ಇರುವವರು ದೇವರಾಜ ಠಾಣೆ ದೂರವಾಣಿ ಸಂಖ್ಯೆ 0821–2418306 ಅನ್ನು ಸಂಪರ್ಕಿಸುವಂತೆ ಪೊಲೀಸ್ ಪ್ರಕಟಣೆ ಕೋರಿದೆ.

ಪ್ರೊ.ಎಚ್.ಎಸ್. ಹರಿಶಂಕರ್ ಕನ್ನಡ– ರಷ್ಯಾ ಭಾಷೆಗಳ ನಡುವಿನ ಸಂಪರ್ಕ ರಾಯಭಾರಿ

86ನೇ ವರ್ಷದ ಜನ್ಮದಿನದ ಅಂಗವಾಗಿ ಅಭಿನಂದನೆ



ಪ್ರೊ.ಎಚ್.ಎಸ್. ಹರಿಶಂಕರ್ ಅವರನ್ನು 86ನೇ ವರ್ಷದ ಜನ್ಮದಿನದ ಅಂಗವಾಗಿ ಹೊಯ್ಸಳ ಕನ್ನಡ ಸಂಘ, ಸವಿಗನ್ನಡ ಬಳಗದ ವತಿಯಿಂದ ಸೋಮವಾರ ಸನ್ಮಾನಿಸಲಾಯಿತು.

ಮೈಸೂರು, ಡಿ. 8 – ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿವೃತ್ತ ಪ್ರಾಧ್ಯಾಪಕ, ಸಾಹಿತಿ ಎಚ್.ಎಸ್. ಹರಿಶಂಕರ್ ಅವರು ಕನ್ನಡದ ಕೃತಿಗಳನ್ನು ರಷ್ಯನ್‌ಗೆ, ರಷ್ಯನ್ ಕೃತಿಗಳನ್ನು ಕನ್ನಡಕ್ಕೆ ಅನುವಾದ ಮಾಡುವ ಮೂಲಕ ಈ ಎರಡು ಭಾಷೆಗಳ ನಡುವಿನ ರಾಯಭಾರಿಯಂತೆ ಕೆಲಸ ಮಾಡುತ್ತಿದ್ದಾರೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಬಣ್ಣಿಸಿದರು.

ಎಚ್.ಎಸ್. ಹರಿಶಂಕರ್ ಅವರನ್ನು 86ನೇ ವರ್ಷದ ಜನ್ಮದಿನದ ಅಂಗವಾಗಿ ಕುವೆಂಪುನಗರ ಅನಿಕೇತನ ರಸ್ತೆಯ ಐದನೇ ಕ್ರಾಸಿನ ಸ್ವಗೃಹದಲ್ಲಿ ಹೊಯ್ಸಳ ಕನ್ನಡ ಸಂಘ ಹಾಗೂ ಸವಿಗನ್ನಡ ಬಳಗದ ಪರವಾಗಿ ಸೋಮವಾರ ಅಭಿನಂದಿಸಿ ಮಾತನಾಡಿದ ಅವರು, ಹರಿಶಂಕರ್ ಅವರು ರಷ್ಯಾದಲ್ಲಿ ಕೂಡ ಕೆಲವು ವರ್ಷಗಳ ಕಾಲ ವಾಸವಿದ್ದು, ಅಲ್ಲಿನ ಬಾನುಲಿ ಕೇಂದ್ರದಲ್ಲಿ ಕೆಲಸ ಮಾಡಿದ್ದಾರೆ ಎಂದರು.

ಹರಿಶಂಕರ್ ಅವರು ಬಳಿ ಹಲವು ರಷ್ಯಯನ್ನರು ಕನ್ನಡ ಕಲಿಯುತ್ತಿದ್ದಾರೆ. ಪ್ರಸ್ತುತ 'ಗಾಲಿನಾ' ಕೂಡ ಕನ್ನಡ ಕಲಿಯುತ್ತಿದ್ದಾರೆ. ಅಲ್ಲದೇ ಬಸವಣ್ಣನವರ ವಚನಗಳನ್ನು ಕನ್ನಡ– ಇಂಗ್ಲಿಷ್– ರಷ್ಯನ್ ಭಾಷೆಗೆ ಅನುವಾದಿಸುತ್ತಿದ್ದಾರೆ ಎಂದು ಅವರು ಮೆಚ್ಚುಗೆ ಸೂಚಿಸಿದರು.

ಪ್ರೊ.ಎಚ್.ಎಸ್. ಹರಿಶಂಕರ್ ಮಾತನಾಡಿ, ಸನ್ಮಾನಕ್ಕೆ ಕೃತಜ್ಞತೆ ಸಲ್ಲಿಸಿದರು. ಅವರ ಸಹೋದರ ಪ್ರೊ.ಎಚ್.ಎಸ್. ಗೋಪಿನಾಥ್ ಹರಿಹರ ಅವರು ತಮ್ಮ ನೆನಪುಗಳನ್ನು ಹಂಚಿಕೊಂಡರು.

ಶ್ರೀ ಇಳೈ ಆಳ್ವಾರ್ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಬೆಂಗಳೂರಿನ ವ್ಯಂಗ್ಯ ಚಿತ್ರಕಾರ ಶ್ರೀಧರ್ ಅವರು ಹರಿಶಂಕರ್ ಅವರ ವ್ಯಂಗ್ಯಚಿತ್ರವನ್ನು ಸಮರ್ಪಿಸಿದರು. ವಿಜ್ಞಾನ ಲೇಖಕ ಎಸ್. ರಾಮಪ್ರಸಾದ್, ಕನ್ನಡ ಸಾಹಿತ್ಯ ಕಲಾಕೂಟದ ಅಧ್ಯಕ್ಷ ಎಂ. ಚಂದ್ರಶೇಖರ್, ಕವಯತ್ರಿಯರಾದ ಮಂಗಳಾ ಮುದ್ದುಮಾದಪ್ಪ, ಬಿ.ಕೆ. ಮೀನಾಕ್ಷಿ, ಸೌಗಂಧಿಕಾ ಜೋಯಿಸ್, ಪ್ರಭಾಶಾಸ್ತ್ರಿ ಜ್ಯೋಶುಲ, ಶಾಸನತಜ್ಞ ಎಚ್.ಎಂ. ನಾಗರಾಜ ರಾವ್, ಭವಿಷ್ಯ ನಿಧಿ ನಿವೃತ್ತ ಆಯುಕ್ತ ರಾಜಗೋಪಾಲಚಾರ್, ಸಮ್ಮುದಯ ಶೋತೃ ಬಳಗದ ಕಣ್ಣೂರು ಗೋವಿಂದಚಾರಿ, ರಷ್ಯಾದ ಡಾ.ಗಾಲಿನ ಕೋಚುರಿಯೇವಿಷ್ವ ಡಾ.ದಿವ್ಯಾ ಮೊದಲಾದವರು ಪ್ರೊ.ಎಚ್.ಎಸ್. ಹರಿಶಂಕರ್ ಅವರನ್ನು ಅಭಿನಂದಿಸಿದರು.

ಕನ್ನಡ ಚಳವಳಿಗಾರ ಮೂಗೂರು ನಂಜುಂಡಸ್ವಾಮಿ, ಡಾ.ಅನುಸೂಯ, ಡಾ.ಎಚ್.ಆರ್. ಶ್ರೀಪಾದ್ ಮೊದಲಾದವರು ಮಾತನಾಡಿದರು. ಮರಿಮಲ್ಲಪ್ಪ ಕಾಲೇಜಿನ ಶೈಕ್ಷಣಿಕ ಅಧಿಕಾರಿ ಮಂಗಳಾ ಮುದ್ದುಮಾದಪ್ಪ ಅವರು 'ಮೌನಮುಗಿಲು' ಕವನ ವಾಚಿಸಿದರು. ಗಾಯಕಿ ಗೌರಿ ಗೀತಗಾಯನ ಮಾಡಿದರು.

ನಮ್ಮ ಮೈಸೂರು, ನಮ್ಮ ಹೆಮ್ಮೆ

ಗಗನಯಾತ್ರಿಗಳಿಗೆ ಮೈಸೂರಿನ ಸಿಎಫ್‌ಟಿಆರ್‌ಐನಲ್ಲಿ ಆಹಾರ ತಯಾರು

- ಇಸ್ರೋ ಜೊತೆ ಶೀಘ್ರದಲ್ಲೆ ಒಪ್ಪಂದ
- 2027–28ಕ್ಕೆ ಮಾನವ ಸಹಿತ ಗಗನಯಾತ್ರೆ
- ಸಿಎಸ್‌ಐಆರ್‌ಗೆ ವಿಶೇಷ ಅನುದಾನ
- ಹೆಚ್ಚು ತೂಕವಿಲ್ಲದೆ, ಗರಿಷ್ಠ ಪೌಷ್ಟಿಕಾಂಶದ ಆಹಾರದ ಅಗತ್ಯ



ಮೈಸೂರು, ಡಿ.8(ಬಿಎಲ್‌ಯು)– ಗಗನಯಾತ್ರಿಗಳಿಗೆ ಪೌಷ್ಠಿಕಾಂಶಯುಕ್ತ ಗುಣಮಟ್ಟದ ಆಹಾರವನ್ನು ತಯಾರಿಸಲು ಮೈಸೂರಿನ ಸಿಎಫ್‌ಟಿಆರ್‌ಐ ಸಂಶೋಧನೆಯಲ್ಲಿ ತೊಡಗಿದೆ. ಈ ಸಂಶೋಧನೆಗಾಗಿ ಸಿಎಸ್‌ಐಆರ್ ವಿಶೇಷ ಅನುದಾನ ನೀಡುತ್ತಿದೆ.

ಬಾಹ್ಯಾಕಾಶ ವಿಜ್ಞಾನ, ತಂತ್ರಜ್ಞಾನ, ನೀತಿ ಹಾಗೂ ಅನ್ವೇಷಣೆಯಂತಹ ವಿಷಯಗಳ ಅಧ್ಯಯನಕ್ಕೆ ಸಾಹಸಿಗರರು ಬಾಹ್ಯಾಕಾಶಕ್ಕೆ ತೆರಳುತ್ತಾರೆ. ಹೀಗೆ ಬಾಹ್ಯಾಕಾಶಕ್ಕೆ ಪ್ರಯಾಣ ಮಾಡುವುದು, ಅಲ್ಲಿ ಕೆಲವು ದಿನಗಳು ನೆಲೆಸುವುದು ಹಾಗೂ ಸುರಕ್ಷಿತವಾಗಿ ಬಾಹ್ಯಾಕಾಶದಿಂದ ಭೂಮಿಗೆ ಬರುವುದು ದೊಡ್ಡ ಸವಾಲಾಗಿರುತ್ತದೆ.

ಈ ಅವಧಿಯಲ್ಲಿ ವಿಜ್ಞಾನಿಗಳು ತಮ್ಮ ಆರೋಗ್ಯ ಕಾಪಾಡಿಕೊಳ್ಳುವುದು ಕಷ್ಟದ ಸಂಗತಿ. ಇದಕ್ಕೆ ಅಗತ್ಯವಾದ ಪೌಷ್ಠಿಕಾಂಶವುಳ್ಳ, ಗುಣಮಟ್ಟದ ಆಹಾರ ಇದ್ದರೆ ಮಾತ್ರ ವಿಜ್ಞಾನಿಗಳ ಚುರುಮುಕಿಯಿಂದ ಸಂಶೋಧನಾ ಕಾರ್ಯದಲ್ಲಿ ತೊಡಗಲು ಸಾಧ್ಯವಾಗುತ್ತದೆ.

ಬಾಹ್ಯಾಕಾಶದಲ್ಲಿ ಅಧ್ಯಯನ ಮಾಡಲು ಅಮೇರಿಕಾ, ಚೀನಾ ಸೇರಿದಂತೆ ಇತರೆ ರಾಷ್ಟ್ರಗಳ ಜೊತೆ ಭಾರತದ ಇಸ್ರೋ ವಿಜ್ಞಾನಿಗಳು ತೀವ್ರ ಪೈಪೋಟಿ ನೀಡುತ್ತಿದ್ದಾರೆ. ಮಾನವಸಹಿತ ಗಗನಯಾನವು 2027–28 ಕ್ಕೆ ನಿಗದಿಯಾಗಿದ್ದು, ಭಾರತೀಯ ವಿಜ್ಞಾನಿಗಳನ್ನು ಬಾಹ್ಯಾಕಾಶಕ್ಕೆ ಕಳುಹಿಸಲು ಇಸ್ರೋದಲ್ಲಿ ಭರದ ಸಿದ್ಧತೆಗಳು ನಡೆಯುತ್ತಿವೆ. ಅಮೇರಿಕಾ, ಚೀನಾ ಹಾಗೂ ರಷ್ಯಾ ನಂತರ ಈ ಸಾಧನೆ ಮಾಡುತ್ತಿರುವ ವಿಶ್ವದ ನಾಲ್ಕನೆ ರಾಷ್ಟ್ರ ಎಂಬ ಹೆಗ್ಗಳಿಕೆಗೆ ಭಾರತ ಪಾತ್ರವಾಗಿದೆ.

ಮಾನವ ಸಹಿತ ಗಗನ ಯಾನದ ವೇಳೆ ಪೌಷ್ಠಿಕಾಂಶಯುಕ್ತ, ಗುಣಮಟ್ಟದ ಆಹಾರಕ್ಕೆ ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಮಂಡಳಿ (ಸಿಎಸ್‌ಐಆರ್) ಮೈಸೂರಿನ ಸಿಎಫ್‌ಟಿಆರ್‌ಐ (ಕೇಂದ್ರೀಯ ಆಹಾರ ತಂತ್ರಜ್ಞಾನ ಸಂಶೋಧನಾಲಯ (ಸಿಎಫ್‌ಟಿಆರ್‌ಐ)ಕ್ಕೆ ಪ್ರಸ್ತಾವನೆ ಸಲ್ಲಿಸಿದೆ.

ಇಸ್ರೋ ವಿಜ್ಞಾನಿಗಳು ಚಂದ್ರಯಾನ– 3, ಆದಿತ್ಯ– ಎಲ್ 1, ಸ್ಪೇಡೆಕ್ಸ್ ನಂತರ ಮಹತ್ವಾಕಾಂಕ್ಷಿ ಯೋಜನೆಗಳ ಮೂಲಕ ಬಾಹ್ಯಾಕಾಶ ಯಾನದಲ್ಲಿ ಭಾರತವನ್ನು ಮುಂಚೂಣಿಗೆ ತಂದಿದ್ದಾರೆ. ಮಾನವ ಸಹಿತ ಗಗನ ಯಾತ್ರೆ ವೇಳೆ ಅಮೇರಿಕಾ, ಚೀನಾ ಹಾಗೂ ರಷ್ಯಾ ವಿಜ್ಞಾನಿಗಳು ಸೇವಿಸುವ ಆಹಾರವನ್ನು ಭಾರತೀಯ ವಿಜ್ಞಾನಿಗಳಿಗೆ ನೀಡಲು ಸಾಧ್ಯವಿಲ್ಲ.

ಭಾರತದ ಜನರ ಹಾಗೂ ವಿದೇಶಿಗರ ಆಹಾರ ಶೈಲಿಗೆ ಅಜಗಜಾಂತರ ವ್ಯತ್ಯಾಸ ಇದೆ. ವಿದೇಶಿ ಶೈಲಿಯ ಆಹಾರವನ್ನು ನಮ್ಮ ವಿಜ್ಞಾನಿಗಳು ಸೇವಿಸಿದರೆ ಆರೋಗ್ಯ ವೈಪರೀತ್ಯ ಸಾಧ್ಯತೆ ಇದೆ.

ಈ ಹಿನ್ನೆಲೆಯಲ್ಲಿ ಭಾರತದ ವಿಜ್ಞಾನಿಗಳಿಗೆ ದೇಶಿ ಶೈಲಿಯ ಪೌಷ್ಟಿಕಾಂಶಯುಕ್ತ ಆಹಾರ ಕಲ್ಪಿಸಲು ಸಿಎಫ್‌ಟಿಆರ್‌ಐ ಸಂಶೋಧನೆಯಲ್ಲಿ ತೊಡಗಿದೆ. 2027–28 ರಂದು ಮಾನವ ಸಹಿತ ಗಗನ ಯಾತ್ರೆ ಕೈಗೊಳ್ಳುವ ವಿಜ್ಞಾನಿಗಳಿಗೆ ಭಾರತೀಯ ಶೈಲಿಯ ಪೌಷ್ಟಿಕಾಂಶದ ಆಹಾರ ನೀಡುವ ಗುರಿ ಹೊಂದಲಾಗಿದೆ.

ಇಸ್ರೋ ಹಿರಿಯ ವಿಜ್ಞಾನಿಗಳ ಜೊತೆ ಶೀಘ್ರದಲ್ಲೆ ಸಮಾಲೋಚನೆ

ಗಗನ ಯಾತ್ರಿಗಳಿಗೆ ಪೌಷ್ಠಿಕಾಂಶಯುಕ್ತ ಆಹಾರ ಸಂಬಂಧ ಇಸ್ರೋ ಹಿರಿಯ ವಿಜ್ಞಾನಿಗಳ ಜೊತೆ ಸಮಾಲೋಚನೆ ನಡೆಸಲಾಗುವುದು.

ಇಸ್ರೋ ಮೂಲಕ ವಿಜ್ಞಾನಿಗಳು ಬಾಹ್ಯಾಕಾಶಕ್ಕೆ ತೆರಳುವ ಹಿನ್ನೆಲೆಯಲ್ಲಿ ಅಲ್ಲಿನ ಹಿರಿಯ ವಿಜ್ಞಾನಿಗಳ ಜೊತೆ ಚರ್ಚಿಸಲಾಗುವುದು. ಭಾರತೀಯ ಶೈಲಿಯ ಯಾವ ರೀತಿಯ ಆಹಾರದ ಅವಶ್ಯಕತೆ ಇದೆ, ಅವುಗಳ ತೂಕ ಎಷ್ಟಿರಬೇಕು, ಎಷ್ಟು ಪ್ರಮಾಣದ ಪೌಷ್ಠಿಕಾಂಶ ಇರಬೇಕು ಎಂಬ ಹಲವು ವಿಚಾರಗಳ ಬಗ್ಗೆ ಇಸ್ರೋ ವಿಜ್ಞಾನಿಗಳ ಜೊತೆ ಸಮಗ್ರವಾಗಿ ಚರ್ಚೆ ನಡೆಸಲಾಗುವುದು.

ನಾವು ತಯಾರಿಸುವ ಆಹಾರ ಇಸ್ರೋ ವಿಜ್ಞಾನಿಗಳಿಗೆ ತೃಪ್ತಿದಾಯಕವಾದರೆ ಸಿಎಫ್‌ಟಿಆರ್‌ಐ ಹಾಗೂ ಇಸ್ರೋ ನಡುವೆ ಒಪ್ಪಂದ ಏರ್ಪಡಲಿದೆ. ಗಗನಯಾತ್ರಿಗಳಿಗೆ ಪೌಷ್ಠಿಕಾಂಶಯುಕ್ತ ಆಹಾರ ನೀಡುವ ಸಂಬಂಧ ಕೆಲವೇ ದಿನಗಳಲ್ಲಿ ಮಾಧ್ಯಮಗಳಿಗೆ ಸಮಗ್ರ ಮಾಹಿತಿ ನೀಡುತ್ತೇವೆ.

- ಗಿರಿಧರ್ ಪರ್ವತಂ, ನಿರ್ದೇಶಕರು, ಸಿಎಫ್‌ಟಿಆರ್‌ಐ, ಮೈಸೂರು

ವಿಜ್ಞಾನಿಗಳ ತಂಡದಿಂದ ಸಂಶೋಧನೆ

ಗಗನಯಾತ್ರಿಗಳಿಗೆ ಪೌಷ್ಟಿಕಾಂಶ ಹಾಗೂ ಗುಣಮಟ್ಟದ ಆಹಾರ ನೀಡಲು ಮೈಸೂರಿನ ಸಿಎಫ್‌ಟಿಆರ್‌ಐನಲ್ಲಿ ಹಿರಿಯ ವಿಜ್ಞಾನಿಗಳ ನಾಲ್ಕು ತಂಡ ರಚನೆ ಮಾಡಲಾಗಿದೆ. ಒಂದೊಂದು ತಂಡದಲ್ಲೂ ನಾಲ್ವರು ವಿಜ್ಞಾನಿಗಳಿದ್ದಾರೆ. ಈ ವಿಜ್ಞಾನಿಗಳು ಗಗನ ಯಾತ್ರಿಗಳಿಗೆ ಅಗತ್ಯ ಆಹಾರ ತಯಾರಿಸಲು ಸಂಶೋಧನೆಯಲ್ಲಿ ತೊಡಗಿದ್ದಾರೆ.

ಬಾಹ್ಯಾಕಾಶದಲ್ಲಿ ನೈಸರ್ಗಿಕ ಆಮ್ಲಜನಕವಿಲ್ಲ, ದ್ರವ ಪದಾರ್ಥ ನಿಲ್ಲುವುದಿಲ್ಲ, ಪ್ರತಿ ವಸ್ತು ತೂಕ ರಹಿತವಾಗಿರುತ್ತದೆ. ಇದರಿಂದ ಗಗನಯಾತ್ರಿಗಳಿಗೆ ಸೂಕ್ತ ಆಹಾರ ನೀಡುವುದು ಆಹಾರ ವಿಜ್ಞಾನಿಗಳಿಗೆ ದೊಡ್ಡ ಸವಾಲಿನ ಸಂಗಾತಿಯಾಗಿದೆ.

ಗಗನಯಾತ್ರಿಗಳಿಗೆ ನೀಡುವ ಆಹಾರ ಕಡಿಮೆ ಪ್ರಮಾಣದಲ್ಲಿರಬೇಕು. ಆದರೆ ಗರಿಷ್ಟ ಪೌಷ್ಟಿಕಾಂಶವಿರಬೇಕು. ಆಗ ಮಾತ್ರ ಬಾಹ್ಯಾಕಾಶದಲ್ಲಿ ಅವರ ಆರೋಗ್ಯ ಕಾಪಾಡಲು ಸಾಧ್ಯವಾಗುತ್ತದೆ.

ಬಾಹ್ಯಾಕಾಶ ನಿಲ್ದಾಣದಲ್ಲಿ ವಿಜ್ಞಾನಿಗಳು ಹಲವು ಸಂಕಷ್ಟ ಎದುರಿಸಬೇಕಾಗಿರುತ್ತದೆ. ಇಂತಹ ಸಮಯದಲ್ಲಿ ಅವರ ಆರೋಗ್ಯಕ್ಕೆ ಪೂರಕವಾದ ಪೌಷ್ಟಿಕಾಂಶಯುಕ್ತ ಆಹಾರ ನೀಡುವುದು ಅತ್ಯಗತ್ಯ. ಆಹಾರದಲ್ಲಿ ಸ್ವಲ್ಪ ವ್ಯತ್ಯಾಸವಾದರೂ ಅವರು ದೈಹಿಕ ಹಾಗೂ ಮಾನಸಿಕವಾಗಿ ಹಲವು ಸವಾಲು ಎದುರಿಸಬೇಕಾಗುತ್ತದೆ. ಒಬ್ಬ ವಿಜ್ಞಾನಿಗೆ ಅನಾರೋಗ್ಯ ಉಂಟಾದರೆ ಉಳಿದ ವಿಜ್ಞಾನಿಗಳ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತದೆ. ಈ ಹಿನ್ನೆಲೆಯಲ್ಲಿ ಬಾಹ್ಯಾಕಾಶ ವಿಜ್ಞಾನಿಗಳಿಗೆ ಸೂಕ್ತವಾದ ಆಹಾರ ತಯಾರಿಸಲು ಸಂಶೋಧನೆ ನಡೆಸಲಾಗುತ್ತಿದೆ.

ಮೈಸೂರಿನ ಸಿಎಫ್‌ಟಿಆರ್‌ಐ ನಡೆಸುತ್ತಿರುವ ಈ ಸಂಶೋಧನೆಗೆ ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಮಂಡಳಿ (ಸಿಎಸ್‌ಐಆರ್) ವಿಶೇಷ ಅನುದಾನ ನೀಡಲಿದೆ. ಹಾಗಾಗಿ ಸಂಶೋಧನ ಕಾರ್ಯಕ್ಕೆ ಹಣದ ಕೊರತೆ ಇಲ್ಲ.

ಬಾಹ್ಯಾಕಾಶ ಸಂಶೋಧನೆ ನಮ್ಮಿಂದ ಮಾತ್ರ ಸಾಧ್ಯ ಎಂದು ಅಮೇರಿಕಾ ಮೊದಲಿನಿಂದಲೂ ಬೀಗುತ್ತಿದೆ. ಅಲ್ಲದೆ ಗಗನಯಾತ್ರಿಗಳಿಗೆ ಎಷ್ಟು ಪ್ರಮಾಣದ, ಯಾವ ರೀತಿಯ ಪೌಷ್ಟಿಕಾಂಶವುಳ್ಳ ಆಹಾರ ನೀಡಬೇಕೆಂದು ನಮಗೆ ಮಾತ್ರ ಗೊತ್ತು. ಒಂದು ವೇಳೆ ಭಾರತ ಮಾನವ ಸಹಿತ ಗಗನ ಯಾತ್ರೆ ಕೈಗೊಂಡರೆ ಗಗನಯಾತ್ರಿಗಳಿಗೆ ಆಹಾರ ಸೇರಿದಂತೆ ಇತರೆ ವಿಚಾರಗಳಲ್ಲಿ ನಮ್ಮನ್ನೇ ಅವಲಂಬಿಸಬೇಕು ಎಂಬ ಭ್ರಮೆಯಲ್ಲಿದೆ. ಆದರೆ ಯಾವುದೇ ದೇಶದ ಸಹಾಯವಿಲ್ಲದೆ, ಗಗನಯಾತ್ರಿಗೆ ಅವಶ್ಯವಿರುವ ಉಪಕರಣ ಹಾಗೂ ಆಹಾರವನ್ನು ನಾವೇ ತಯಾರಿಸುತ್ತೇವೆ ಎಂದು ಇಸ್ರೋ ಹೇಳಿದೆ.

ಡಿಫೆನ್ಸ್ ಜರ್ನಲಿಸಂ ಕುರಿತು ವಿಶೇಷ ಕಾರ್ಯಾಗಾರ

ಮೈಸೂರು, ಡಿ. 8– ಮೈಸೂರಿನ ಡಿಫೆನ್ಸ್ ಪರೀಕ್ಷೆಯ ತರಬೇತಿ ಕೇಂದ್ರವಾದ ಆಲ್ಫಾ ಲೀಡ್ ಅಕಾಡೆಮಿಯು ಡಿ. 16 ರಂದು ಬೆಳಗ್ಗೆ 11 ಗಂಟೆಗೆ ಅಕಾಡೆಮಿಯಲ್ಲಿ ಡಿಫೆನ್ಸ್ ಅಂಕಣಗಳ ಕುರಿತು ವಿಶೇಷ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಾಗಾರದಲ್ಲಿ ಆಲ್ಫಾ ಲೀಡ್ ಅಕಾಡೆಮಿಯ ಸಂಸ್ಥಾಪಕರು ಹಾಗೂ ಏರ್ಫೋರ್ಸ್‌ನ ನಿವೃತ್ತ ಅಧಿಕಾರಿ ಗ್ರೂಪ್ ಕ್ಯಾಪ್ಟನ್ ಅಭಿನವ ಚತುರ್ವೇದಿಯವರು ಡಿಫೆನ್ಸ್ ವಿಷಯ ಕುರಿತು ಅಂಕಣಗಳನ್ನು ಹೇಗೆ ಬರೆಯಬೇಕು, ಯಾವುದಕ್ಕೆ ಕಟ್ಟುಪಾಡುಗಳಿವೆ, ಯಾವ ಅಂಶಗಳನ್ನು ಬರೆಯಬಹುದು, ಬರೆಯಬಾರದು ಎಂಬ ಸಂಪೂರ್ಣ ವಿಷಯಗಳ ಕುರಿತು ಚರ್ಚಿಸಲಿದ್ದಾರೆ.

ಈ ವಿಶೇಷ ಕಾರ್ಯಕ್ರಮಕ್ಕೆ ಪ್ರತಿ ಪತ್ರಿಕೆ, ಟಿವಿ ಮಾಧ್ಯಮ, ರೇಡಿಯೋ ಮಾಧ್ಯಮಗಳಿಂದ ಇಬ್ಬರು ಪತ್ರಕರ್ತರಿಗೆ ಪಾಲ್ಗೊಳ್ಳುವ ಅವಕಾಶವಿರುತ್ತದೆ. ಕಾರ್ಯಾಗಾರದ ನಂತರ ದಿನ ಪತ್ರಿಕೆಯಲ್ಲಿ ಅದ್ಭುತವಾಗಿ ಹಾಗೂ ಅಚ್ಚುಕಟ್ಟಾಗಿ ಪ್ರಕಟಗೊಳ್ಳುವ ಅಂಕಣವನ್ನು ಮತ್ತು ಬರೆದ ಪತ್ರಕರ್ತರಿಗೆ ಅಥವಾ ಅಂಕಣಕಾರರಿಗೆ 'ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಅತ್ಯುತ್ತಮ ಡಿಫೆನ್ಸ್ ಜರ್ನಲಿಸ್ಟ್' ಪ್ರಶಸ್ತಿಯನ್ನು ಹಾಗೂ ನಗದು ಬಹುಮಾನವನ್ನು ಜನವರಿ 26 ಗಣರಾಜ್ಯೋತ್ಸವ ದಿನಾಚರಣೆ ಹಾಗೂ ಆಗಸ್ಟ್ 15 ಸ್ವಾತಂತ್ರ್ಯ ದಿನಾಚರಣೆಯ ದಿನದಂದು ನೀಡಲಾಗುವುದು. ಅಂಕಣದ ಪ್ರತಿಯನ್ನು, ಹೆಸರು ಹಾಗೂ ದೂರವಾಣಿ ಸಂಖ್ಯೆಯನ್ನು ಅಕಾಡೆಮಿಯ ವಾಟ್ಸಾಪ್ ನಂಬರಿಗೆ (+919019353966) ಕಳುಹಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ಎಂಇಎಸ್, ಕೊಲ್ಹಾಪುರದಲ್ಲಿ ಶಿವಸೇನೆ ಪುಂಡಾಟಿಕೆ; ಮಹಾರಾಷ್ಟ್ರಕ್ಕೆ ಸಾರಿಗೆ ಬಸ್ ಸಂಚಾರ ಬಂದ್



ಬೆಳಗಾವಿ: ಕುಂದಾನಗರಿ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಸೋಮವಾರ ವಿಧಾನ ಮಂಡಲದ ಉಭಯ ಸದನಗಳ ಚಳಿಗಾಲದ ಅಧಿವೇಶನ ಆರಂಭವಾಗಿದ್ದು, ಮೊದಲ ದಿನವೇ ಮಹಾರಾಷ್ಟ್ರದ ಶಿವಸೇನೆ ಹಾಗೂ ಎಂಇಎಸ್ ಕಾರ್ಯ ಕರ್ತರು ಮತ್ತೆ ಪುಂಡಾಟಿಕೆ ಮೆರೆದಿದ್ದು, ಗಡಿಭಾಗದಲ್ಲಿ ಉದ್ವಿಗ್ನತೆ ಹೆಚ್ಚಿಸಿದೆ.

ಇಂದು ಬೆಳಗಾವಿಯಲ್ಲಿ ಎಂಇಎಸ್ ಕಾರ್ಯಕರ್ತರು ಮಹಾಮೇಳಾವ್ ನಡೆಸಲು ಮುಂದಾಗಿದ್ದರು. ಆದರೆ ಜಿಲ್ಲಾಡಳಿತ ಇದಕ್ಕೆ ಅನುಮತಿ ನೀಡಿಲ್ಲ. ಹೀಗಾಗಿ ಕೊಲ್ಲಾಪುರದಲ್ಲಿ ಶಿವಸೇನೆ ಕಾರ್ಯಕರ್ತರು ರಸ್ತೆಗಿಳಿದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ(ಕೆಎಸ್‌ಆರ್‌ಟಿಸಿ) ಬಸ್ಸು ಗಳನ್ನು ತಡೆದು ಪ್ರತಿಭಟನೆ ನಡೆಸಿದರು.

ಕೊಲ್ಲಾಪುರ ಸೆಂಟ್ರಲ್ ಬಸ್ ಸ್ಟ್ಯಾಂಡ್ ನಲ್ಲಿ ಶಿವಸೇನೆ ಕಾರ್ಯಕರ್ತರು ಉದ್ಧಟ ತನ ಪ್ರದರ್ಶಿಸಿದ್ದು, ಠಾಕ್ರೆ ಬಣದ ಶಿವ ಸೇನೆ ಜಿಲ್ಲಾಧ್ಯಕ್ಷ ವಿಜಯ ದೇವಣೆ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು. ಅಲ್ಲದೆ ಮಹಾರಾಷ್ಟ್ರದ ಕೆಲವು ನಾಯಕರು ಬೆಳಗಾವಿ ಜಿಲ್ಲೆ ಪ್ರವೇಶಿಸಲು ಯತ್ನಿಸುತ್ತಿರುವ ಹಿನ್ನೆಲೆಯಲ್ಲಿ ಪೊಲೀಸರು ಬೆಳಗಾವಿಯಲ್ಲಿ ಮತ್ತು ಗಡಿಯಲ್ಲಿ ತೀವ್ರ ಕಟ್ಟೆಚ್ಚರ ವಹಿಸಿದ್ದಾರೆ.

ಮುನ್ನೆಚ್ಚರಿಕೆ ಕ್ರಮವಾಗಿ ಬಸ್ ಸಂಚಾರ ತಡೆಯುವಂತೆ ಪೊಲೀಸರು ಸೂಚಿಸಿದ ಕಾರಣ ಸಾರಿಗೆ ಸಂಸ್ಥೆಯ ಅಧಿಕಾರಿಗಳು ಮಹಾರಾಷ್ಟ್ರಕ್ಕೆ KSRTC ಬಸ್ ಸಂಚಾರವನ್ನು ಬಂದ್ ಮಾಡಿದ್ದಾರೆ. ಈ ನಡುವೆ ಬೆಳಗಾವಿಯಲ್ಲಿ ಎಂಇಎಸ್ ಮಹಾಮೇಳಕ್ಕೆ ಸಂಬಂಧಿಸಿದ ಉದ್ವಿಗ್ನತೆ ಹೆಚ್ಚಿದ್ದು, ಎಂಇಎಸ್ ಮುಖಂಡ ಮಾಳೋಜಿ ಅಷ್ಟೇಕರ್ ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ವ್ಯಾಕ್ಸಿಡಿಪೋದ ಮೈದಾನಕ್ಕೆ ಆಗಮಿಸು ತ್ತಿದ್ದಂತೆಯೇ ಮಾಜಿ ಮೇಯರ್ ಅಷ್ಟೇಕರ್ ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಡಿ.10,11ಕ್ಕೆ ಕಲಾ ಪ್ರತಿಭೋತ್ಸವ



ಮೈಸೂರು,ಡಿ.8– ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಕಲಾ ಪ್ರತಿಭೋತ್ಸವ 2025–26 ಬಾಲ ಪ್ರತಿಭೆ, ಕಿಶೋರ ಪ್ರತಿಭೆ ಹಾಗೂ ಯುವ ಪ್ರತಿಭೆಗಳಿಗೆ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳನ್ನು ಡಿ.10 ಮತ್ತು 11 ರಂದು ಬೆಳಗ್ಗೆ 9.30 ರಿಂದ ಸಂಜೆ 5 ಗಂಟೆಯವರೆಗೆ ಕರ್ನಾಟಕ ಕಲಾಮಂದಿರ ಆವರಣದ ಕಿರುರಂಗ ಮಂದಿರದಲ್ಲಿ ಆಯೋಜಿಸಲಾಗಿದ್ದು, ಡಿ.10 ರಂದು ಬೆಳಗ್ಗೆ 9.30 ಗಂಟೆಗೆ ಕರ್ನಾಟಕ ಕಲಾಮಂದಿರ ಆವರಣದಲ್ಲಿರುವ ಕಿರುರಂಗಮಂದಿರದಲ್ಲಿ ಉದ್ಘಾಟನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ ಮಹದೇವಪ್ಪ ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದು, ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕ ಕೆ. ಹರೀಶ್ ಗೌಡ ಅಧ್ಯಕ್ಷತೆ ವಹಿಸಲಿದ್ದಾರೆ.

ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವ ಕೆ.ವೆಂಕಟೇಶ್, ಶಾಸಕ ಅನಿಲ್ ಕುಮಾರ್.ಸಿ., ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷ ಎ.ಬಿ. ರಮೇಶ್ ಬಂಡಿ ಸಿದ್ದೇಗೌಡ ಗೌರವ ಉಪಸ್ಥಿತರಿರಲಿದ್ದಾರೆ.


ಮುಖ್ಯ ಅತಿಥಿಗಳಾಗಿ ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಸುನೀಲ್ ಬೋಸ್, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ. ಪುಷ್ಪ ಅಮರನಾಥ್ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ. ಮಾನಸ ಆಗಮಿಸಲಿದ್ದಾರೆ.

ಶಾಸಕರಾದ ತನ್ವೀರ್ ಸೇಠ್, ಜಿ.ಟಿ. ದೇವೇಗೌಡ, ರವಿಶಂಕರ್ ಡಿ., ಟಿ.ಎಸ್. ಶ್ರೀವತ್ಸ, ಜಿ.ಡಿ. ಹರೀಶ್ ಗೌಡ, ದರ್ಶನ್ ಧ್ರುವನಾರಾಯಣ್, ವಿಧಾನ ಪರಿಷತ್ ಸದಸ್ಯರಾದ ಹೆಚ್. ವಿಶ್ವನಾಥ್, ಡಾ. ಡಿ. ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಧು ಜಿ. ಮಾದೇಗೌಡ, ಡಾ. ಯತಿಂದ್ರ ಎಸ್, ಕೆ. ವಿವೇಕಾನಂದ ಮತ್ತು ಕೆ. ಶಿವಕುಮಾರ್ ಸಮಾರಂಭದ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಹಾಗೂ ಕಾವೇರಿ ಜಲಾನಯನ ಯೋಜನೆಯ ಅಚ್ಚುಕಟ್ಟು ಪ್ರಾಧಿಕಾರದ ಅಧ್ಯಕ್ಷ ಮರಿಸ್ವಾಮಿ, ಮೈಸೂರು ಪೇಯಿಂಟ್ಸ್ ಅಂಡ್ ವಾರ್ನಿಷ್ ಲಿಮಿಟೆಡ್ ಅಧ್ಯಕ್ಷ ಎಚ್.ಡಿ ಗಣೇಶ್, ಕರ್ನಾಟಕ ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ರಂಗಸ್ವಾಮಿ, ಬೆಂಗಳೂರಿನ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ಅಧ್ಯಕ್ಷ ರಾಮಪ್ಪ. ಎಂ, ಕರ್ನಾಟಕ ರಾಜ್ಯ ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಉಪಾಧ್ಯಕ್ಷ ಪ್ಯಾರಿಜಾನ್ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಡೀಮ್ಡ್ ಫಾರೆಸ್ಟ್ ರಕ್ಷಣೆ; ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಮಹತ್ವದ ಸಭೆ

ತ್ವರಿತಗತಿಯಲ್ಲಿ ಜಂಟಿ ಸರ್ವೆ, ಪರಿಶೀಲನೆ ನಡೆಸಿ ವರದಿ ಸಲ್ಲಿಕೆಗೆ ಜಿಲ್ಲಾ, ತಾಲೂಕು ಸಮಿತಿಗಳಿಗೆ ಸೂಚನೆ



ಸಾಂದರ್ಭಿಕ ಚಿತ್ರ

ಮೈಸೂರು,ಡಿ.8(ಎಂಟಿವೈ)– ಮೈಸೂರು ಜಿಲ್ಲೆಯಲ್ಲಿರುವ ಡೀಮ್ಡ್ ಫಾರೆಸ್ಟ್ ಜಂಟಿ ಸರ್ವೆ ಪೂರ್ಣಗೊಳಿಸಿ ವರದಿ ನೀಡುವಂತೆ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ ಸೂಚಿಸಿದ್ದಾರೆ.

ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ಡೀಮ್ಡ್ ಫಾರೆಸ್ಟ್ ಸಮಿತಿ ಸಭೆ ನಡೆಸಿ, ಜಿಲ್ಲೆಯ ಯಾವ ಯಾವ ತಾಲೂಕಿನಲ್ಲಿ ಎಷ್ಟು ಡೀಮ್ಡ್ ಫಾರೆಸ್ಟ್ ಗುರುತಿಸಲಾಗಿದೆ ಎಂದು ಅರಣ್ಯಾಧಿಕಾರಿಗಳಿಂದ ಮಾಹಿತಿ ಪಡೆದು ತ್ವರಿತಗತಿಯಲ್ಲಿ ಜಂಟಿ ಸರ್ವೆ ಮತ್ತು ಜಂಟಿ ಪರಿಶೀಲನೆ ಮಾಡಿ, ತಾಲೂಕು ಸಮಿತಿ, ಜಿಲ್ಲಾ ಸಮಿತಿಗೆ ವರದಿ ನೀಡುವಂತೆ ಸೂಚಿಸಿದರು.

ಅರಣ್ಯ ಪ್ರದೇಶ ರಕ್ಷಣೆ ಮಾಡುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕು. ಮುಂದಿನ ದಿನಗಳಲ್ಲಿ ಹವಾಮಾನ ವೈಪರಿತ್ಯ ಸೇರಿದಂತೆ ವಿವಿಧ ಸಮಸ್ಯೆಗಳಿಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಅರಣ್ಯ ಹಾಗೂ ಡೀಮ್ಡ್ ಫಾರೆಸ್ಟ್ ರಕ್ಷಣೆ ಮಾಡಬೇಕಾಗಿದೆ. ಈ ನಿಟ್ಟಿನಲ್ಲಿ ಸರ್ವೆ ಮತ್ತು ಪರಿಶೀಲನೆ ಮಾಡಿ ವರದಿ ಸಲ್ಲಿಸುವಂತೆ ಸೂಚನೆ ನೀಡಿದರು.

3,812 ಹೆಕ್ಟೇರ್ ಡೀಮ್ಡ್ ಫಾರೆಸ್ಟ್ ಗುರುತಿಸಲಾಗಿದೆ: ಮೈಸೂರು ಪ್ರಾದೇಶಿಕ ಅರಣ್ಯ ವಿಭಾಗದ ಮೈಸೂರು ನಗರ, ಮೈಸೂರು ತಾಲೂಕು, ಟಿ.ನರಸೀಪುರ, ನಂಜನಗೂಡು, ಹೆಚ್.ಡಿ.ಕೋಟೆ, ಸರಗೂರು ತಾಲೂಕು ವ್ಯಾಪ್ತಿಯಲ್ಲಿ 3,812 ಹೆಕ್ಟೇರ್ ಡೀಮ್ಡ್ ಫಾರೆಸ್ಟ್ ಗುರುತಿಸಲಾಗಿದೆ.

ಸರ್ವೆ ಪ್ರಗತಿಯಲ್ಲಿದೆ: ಅರಣ್ಯ ಇಲಾಖೆ ವಲಯವಾರು ಗುರುತಿಸಿರುವ ಡೀಮ್ಡ್ ಫಾರೆಸ್ಟ್ ಜಂಟಿ ಸರ್ವೆ ಪ್ರಕ್ರಿಯೆ ಪ್ರಗತಿಯಲ್ಲಿದೆ. ಅರಣ್ಯ, ಕಂದಾಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಸಿಬ್ಬಂದಿಯುಳ್ಳ ಜಂಟಿ ಸರ್ವೆ ಸಮಿತಿ ಡೀಮ್ಡ್ ಫಾರೆಸ್ಟ್ ಸರ್ವೆ ಕಾರ್ಯದಲ್ಲಿ ತೊಡಗಿದೆ. ಸರ್ವೆ ಕಾರ್ಯ ಪೂರ್ಣಗೊಂಡ ಮೇಲೆ ತಾಲೂಕು ಜಂಟಿ ಪರಿಶೀಲನಾ ಸಮಿತಿ ಪರಿಶೀಲಿಸಿ ವರದಿ ಸಲ್ಲಿಸಲಿದೆ.

ಸುಪ್ರಿಂ ಕೋರ್ಟ್‌ಗೆ ಸಲ್ಲಿಕೆ: ತಾಲೂಕು ಸಮಿತಿ ವರದಿಯನ್ನು ಜಿಲ್ಲಾ ಜಂಟಿ ಪರಿಶೀಲನಾ ಸಮಿತಿಗೆ ಸಲ್ಲಿಸಲಿದೆ. ಜಿಲ್ಲಾಧಿಕಾರಿಗಳೇ ಅಧ್ಯಕ್ಷರಾಗಿರುವ ಜಿಲ್ಲಾ ಜಂಟಿ ಪರಿಶೀಲನಾ ಸಮಿತಿ ಡೀಮ್ಡ್ ಫಾರೆಸ್ಟ್ ವರದಿಯನ್ನು ರಾಜ್ಯ ಸಮಿತಿಗೆ ಸಲ್ಲಿಸಲಿದೆ. ರಾಜ್ಯ ಸಮಿತಿ ಪರಿಶೀಲಿಸಿದ ಬಳಿಕ ಆ ವರದಿಯಲ್ಲಿ ಸುಪ್ರಿಂಕೋರ್ಟ್‌ಗೆ ಸಲ್ಲಿಸುತ್ತದೆ. ಆ ನಂತರ ಸುಪ್ರಿಂಕೋರ್ಟ್ ನೀಡುವ ಆದೇಶದ ಮೇರೆಗೆ ಗುರುತಿಸಲ್ಪಟ್ಟ ಡೀಮ್ಡ್ ಫಾರೆಸ್ಟ್‌ನಲ್ಲಿ ಕೈಗೊಳ್ಳಬೇಕಾದ ಚಟುವಟಿಕೆ ನಿರ್ಧಾರವಾಗಲಿದೆ.

ಡೀಮ್ಡ್ ಫಾರೆಸ್ಟ್ ಎಂದರೇನು: ಅರಣ್ಯ ಪ್ರದೇಶ ಹೊರತುಪಡಿಸಿ, ಸರ್ಕಾರದ ವಿವಿಧ ಇಲಾಖಾ ವ್ಯಾಪ್ತಿಗೆ ಸೇರಿರುವ 2 ಹೆಕ್ಟೇರ್‌ಗಿಂತ ಹೆಚ್ಚಿನ ಪ್ರದೇಶದಲ್ಲಿ ನೈಸರ್ಗಿಕವಾಗಿ 50ಕ್ಕಿಂತ ಹೆಚ್ಚು ಮರ ಬೆಳೆದಿದ್ದರೆ, ಅವು ಎದೆಮಟ್ಟದಲ್ಲಿ 30 ಸೆಂಟಿ ಮೀಟರ್ ಸುತ್ತಳತೆ ಹೊಂದಿದ್ದರೆ ಆ ಪ್ರದೇಶವನ್ನು ಡೀಮ್ಡ್ ಫಾರೆಸ್ಟ್ ಎಂದು ಪರಿಗಣಿಸಲಾಗುತ್ತದೆ. ಖಾಸಗಿ ಒಡೆತನದ 5 ಹೆಕ್ಟೇರ್‌ಗಿಂತ ಹೆಚ್ಚಿನ ಪ್ರದೇಶದಲ್ಲಿ ನೈಸರ್ಗಿಕವಾಗಿ ಮರ ಬೆಳೆದಿದ್ದರೆ ಮಾತ್ರ ಖಾಸಗಿ ಡೀಮ್ಡ್ ಫಾರೆಸ್ಟ್ ಎನ್ನಲಾಗುತ್ತದೆ. ಆದರೆ, ಖಾಸಗಿ ನೆಡು ತೋಪುಗಳನ್ನು ಈ ವ್ಯಾಪ್ತಿಗೆ ಸೇರಿಸುವುದಿಲ್ಲ.

ಅರಣ್ಯೀಕರಣಕ್ಕೆ ನೆರವು: ರಾಜ್ಯ ಸಮಿತಿ ಸಲ್ಲಿಸಿದ ವರದಿ ಅನುಸಾರ ಸುಪ್ರಿಂ ಕೋರ್ಟ್ ಡೀಮ್ಡ್ ಫಾರೆಸ್ಟ್ ಎಂದು ಘೋಷಣೆ ಮಾಡಿದರೆ, ಆ ಭಾಗದಲ್ಲಿ ಯಾವುದೇ ಕಟ್ಟಡವಾಗಲಿ, ಇನ್ನಿತರ ನಿರ್ಮಾಣ ಮಾಡಲು ಸಾಧ್ಯವಾಗುವುದಿಲ್ಲ. ಅಲ್ಲದೆ, ಆ ಪ್ರದೇಶದಲ್ಲಿ ಇನ್ನಷ್ಟು ಗಿಡ ನೆಟ್ಟು ಮರವಾಗಿ ಪೋಷಿಸಬಹುದಾಗಿದೆ. ಇದರಿಂದ ಮುಂದಿನ ದಿನಗಳಲ್ಲಿ ಮತ್ತಷ್ಟು ಪ್ರಮಾಣದ ಅರಣ್ಯ ಪ್ರದೇಶ ತಲೆ ಎತ್ತುವುದರೊಂದಿಗೆ ಪರಿಸರ ಸಮತೋಲನಕ್ಕೆ ಸಹಕಾರಿಯಾಗಲಿದೆ. ಸಭೆಯಲ್ಲಿ ಮೈಸೂರು ಪ್ರಾದೇಶಿಕ ವಿಭಾಗದ ಡಿಸಿಎಫ್ ಕೆ.ಪರಮೇಶ್, ಹುಣಸೂರು ವಿಭಾಗದ ಡಿಸಿಎಫ್ ಮುಹಮ್ಮದ್ ಫಯಾಜುದ್ದೀನ್, ಅಂತರಸಂತೆ ಎಸಿಎಫ್ ಮಧು ಹಾಗೂ ವಿವಿಧ ವಲಯಗಳ ಆರ್‌ಎಫ್‌ಓ ಪಾಲ್ಗೊಂಡಿದ್ದರು.

ಒಳ ಮೀಸಲಾತಿ ಹೋರಾಟಗಾರರ ಬಂಧನ ಖಂಡನೀಯ

ಸಾಮಾಜಿಕ ನ್ಯಾಯಪರ ವೇದಿಕೆ ಅಧ್ಯಕ್ಷ ಮರಡೀಪುರ ಡಾ.ರವಿಕುಮಾರ್ ಆಕ್ರೋಶ

ತಿ.ನರಸೀಪುರ, ಡಿ.8– ಮಾದಿಗ ಸಮಾಜಕ್ಕೆ ಒಳ ಮೀಸಲಾತಿ ಜಾರಿಗೊಳಿಸಲು ಆಗುತ್ತಿರುವ ತೊಂದರೆಗಳ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಪ್ರಶ್ನಿಸಲು ತೆರಳುತ್ತಿದ್ದ ಒಳ ಮೀಸಲಾತಿ ಹೋರಾಟಗಾರರನ್ನು ಮೈಸೂರು ಹಾಗೂ ಬೆಂಗಳೂರಿನಲ್ಲಿ ಬಂಧಿಸಿರುವುದು ಖಂಡನೀಯ ಎಂದು ಸಾಮಾಜಿಕ ನ್ಯಾಯಪರ ವೇದಿಕೆ ಅಧ್ಯಕ್ಷ ಮರಡೀಪುರ ಡಾ.ರವಿಕುಮಾರ್ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಮೈತ್ರಿ ಜನಸೇವಾ ಕೇಂದ್ರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಒಳ ಮೀಸಲಾತಿ ಹೋರಾಟಗಾರರನ್ನು ಬಂಧಿಸಿರುವ ಸರ್ಕಾರದ ನಡೆ ಖಂಡಿಸಿದ ಅವರು ಹೋರಾಟಗಾರರನ್ನು ಬಂಧಿಸಿ, ನಿಷೇಧಾಜ್ಞೆ ಜಾರಿಗೊಳಿಸಿದರೆ ಹೋರಾಟ ಹತ್ತಿಕ್ಕಲು ಸಾಧ್ಯವಿಲ್ಲ. ಮತ್ತಷ್ಟು ತೀವ್ರ ಹೋರಾಟಕ್ಕೆ ಮಾದಿಗ ಸಮುದಾಯ ಮುಂದಾಗಲಿದೆ ಎಂದು ಎಚ್ಚರಿಸಿದರು.

ಮಾದಿಗ ಸಮುದಾಯಕ್ಕೆ ಒಳ ಮೀಸಲಾತಿ ಜಾರಿಗೊಳಿಸಲು ಆಗುತ್ತಿರುವ ವಿಳಂಬ ಪ್ರಶ್ನಿಸಲು ರಾಜ್ಯದ ವಿವಿದೆಡೆಯಿಂದ ಮುಖ್ಯಮಂತ್ರಿಗಳನ್ನು ಭೇಟಿಯಾಗಲು ತೆರಳುತ್ತಿದ್ದ ಮಾದಿಗ ಹೋರಾಟ ಸಮಿತಿ ಮುಖ್ಯಸ್ಥ ಭಾಸ್ಕರ್ ಪ್ರಸಾದ್ ಸೇರಿದಂತೆ ನೂರಾರು ಹೋರಾಟಗಾರರನ್ನು ಪೊಲೀಸರು ಬಂಧಿಸಿರುವುದು ಖಂಡನೀಯ. ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಹೋರಾಟಗಾರರು ಉಳಿದುಕೊಂಡಿದ್ದ ಲಾಡ್ಜ್‌ಗಳನ್ನು ಹುಡುಕಿ ಬಂಧಿಸಲಾಗಿದೆ. ಅಲ್ಲದೇ ಸಿಎಂ ಮನೆಗೆ ತೆರಳಿ ಮನವಿ ಸಲ್ಲಿಸಲು ಮುಂದಾಗಿದ್ದ ಹೋರಾಟಗಾರರಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅವರು ಅನುಮತಿ ನಿರಾಕರಿಸಿ ವರುಣ ಕ್ಷೇತ್ರದಲ್ಲಿ 144 ನಿಷೇಧಾಜ್ಞೆ ಹೇರಿರುವುದು ಖಂಡನೀಯ ಎಂದು ಕಿಡಿಕಾರಿದರು.



ಸುದ್ದಿಗೋಷ್ಠಿಯಲ್ಲಿ ಮರಡೀಪುರ ಡಾ.ರವಿಕುಮಾರ್ ಮಾತನಾಡಿದರು.

ಒಬ್ಬ ಮಾದಿಗನಿಗೂ ಪಿಎಚ್‌ಡಿ ಇಲ್ಲ

ಮುಖ್ಯಮಂತ್ರಿ ಸಿದ್ದರಾಮಯ್ಯ ಒಳ ಮೀಸಲಾತಿ ಮಾಡಿಯೂ ಅವರಿಗೆ ಕ್ರೆಡಿಟ್ ಸಿಗದಂತೆ ಸಚಿವ ಹೆಚ್.ಸಿ.ಮಹದೇವಪ್ಪ ಮಾಡುತ್ತಿದ್ದಾರೆ. ಇದರಿಂದಾಗಿ ರಾಜ್ಯದ 45 ಲಕ್ಷ ಮಾದಿಗ ಸಮುದಾಯ ನಿಮ್ಮನ್ನು ಅನುಮಾನದಿಂದ ನೋಡುವಂತಾಗಿದೆ. ಮಹದೇವಪ್ಪನವರು ಪದೇ ಪದೇ ಮಾದಿಗ ಮೀಸಲಾತಿಗೆ ಅಡ್ಡಗಾಲು ಹಾಕುತ್ತಿದ್ದಾರೆ. ಉದಾಹರಣೆಗೆ ಮೈಸೂರು ವಿವಿಯಲ್ಲಿ 40 ಮಂದಿ ಪಿಹೆಚ್‌ಡಿ ಪಡೆದಿದ್ದು, ಅದರಲ್ಲಿ ಒಬ್ಬ ಮಾದಿಗನಿಗೆ ಪದವಿ ದೊರಕಿಲ್ಲ. ಇದ್ಯಾವ ಸಾಮಾಜಿಕ ನ್ಯಾಯ? ಮಾದಿಗ ಸಮಾಜದ ಹೋರಾಟದ ಫಲವಾಗಿ ಕೆಸೆಟ್‌ನಲ್ಲಿ ನಮಗೆ ಒಳ ಮೀಸಲಾತಿ ಸಿಕ್ಕಿದೆ. ಜೊತೆಗೆ ಎಂಬಿಬಿಎಸ್ ಹಾಗೂ ಎಂಡಿಯಲ್ಲಿ ಭಾಸ್ಕರ್ ಪ್ರಸಾದ್ ಹೋರಾಟದ ಫಲವಾಗಿ 70 ಮಾದಿಗರಿಗೆ ಎಂಡಿ ಸೀಟ್ ಸಿಕ್ಕಿದೆ. ಹಾಗಾಗಿ ಮಹದೇವಪ್ಪ ಕುತಂತ್ರ ಮಾಡುವುದನ್ನು ಬಿಡಬೇಕು. ಸಂವಿಧಾನ, ಪ್ರಜಾಪ್ರಭುತ್ವದ ಬಗ್ಗೆ ಬಾಯಲ್ಲಿ ಹೇಳಿದರೆ ಸಾಲದು ಅದನ್ನು ಅನುಸರಿಸಬೇಕು. ಸಹೋದರ ಸಮುದಾಯಗಳು ಮುಖ್ಯವಾಹಿನಿಗೆ ಬರಲು ಅವಕಾಶ ಕಲ್ಪಿಸಿಕೊಡಬೇಕು. ಅವರ ಹಕ್ಕುಗಳು ಅವರಿಗೆ ಸಿಗಲಿ ಎಂಬುದನ್ನು ಸಚಿವ ಮಹದೇವಪ್ಪ ಅರಿಯಬೇಕು. ಇಲ್ಲವಾದಲ್ಲಿ ಒಬ್ಬರು ಮಾಡುವ ಎಡವಟ್ಟಿನಿಂದ ಮುಂಬರುವ ದಿನಗಳಲ್ಲಿ ಇಡೀ ಕಾಂಗ್ರೆಸ್ ಪಕ್ಷ ಅದರ ಪ್ರತಿಫಲ ಅನುಭವಿಸಬೇಕಾಗುತ್ತದೆ ಎಂದು ರವಿಕುಮಾರ್ ಎಚ್ಚರಿಸಿದರು.

ಸಚಿವ ಮಹದೇವಪ್ಪರಿಂದಲೇ ವಿರೋಧ: ಒಳ ಮೀಸಲಾತಿ ಜಾರಿ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆದಿದ್ದ ಸಭೆಯಲ್ಲಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ವಿರೋಧ ಮಾಡಿದ್ದು, ಇದಕ್ಕೆ ಮತ್ತಿಬ್ಬರು ಸಚಿವರು ಸಹಕಾರ ನೀಡಿದ್ದಾರೆ ಎಂಬ ವರದಿ ಪತ್ರಿಕೆಗಳಲ್ಲಿ ಪ್ರಕಟವಾಗಿದೆ. ಮುಖ್ಯಮಂತ್ರಿಗಳು ಸಮಸಮಾಜ ಕಟ್ಟುವ ನಿಟ್ಟಿನಲ್ಲಿ ಎಲ್ಲಾ ವರ್ಗಗಳಿಗೂ ನ್ಯಾಯ ಸಿಗಲೆಂಬ ಉದ್ದೇಶದಿಂದ ಐತಿಹಾಸಿಕ ನಿರ್ಧಾರ ತೆಗೆದುಕೊಂಡಿದ್ದಾರೆ. ಈ ನಿರ್ಧಾರಕ್ಕೆ ಸಚಿವ ಸಂಪುಟ ಸಹ ಅನುಮೋದನೆ ನೀಡಿದೆ. ಆದರೂ ಇದಕ್ಕೆ ಸಮಾಜ ಕಲ್ಯಾಣ ಇಲಾಖೆ ಅಭಿಪ್ರಾಯ ಮುಖ್ಯ. ಇದಕ್ಕೆ ಸಂಬಂಧಿಸಿದ ಕಡತವನ್ನು ಸಮಾಜ ಕಲ್ಯಾಣ ಇಲಾಖೆ ತಿಂಗಳಾನುಗಟ್ಟಲೆ ಇಟ್ಟುಕೊಂಡಿರುವ ಉದ್ದೇಶವಾದರೂ ಏನು ಎಂಬುದೇ ಪ್ರಶ್ನೆಯಾಗಿದೆ ಎಂದರು.

ಒಳ ಮೀಸಲಾತಿ ಜಾರಿಗೆ ವಿರೋಧಿಸುತ್ತಿರುವ ಸಚಿವ ಮಹದೇವಪ್ಪ ಅವರಿಗೆ ಸಿದ್ದರಾಮಯ್ಯನವರು ಬುದ್ದಿ ಹೇಳುವ ಮೂಲಕ ಸಾಮಾಜಿಕ ನ್ಯಾಯ ನೀಡಲು ಮುಂದಾಗಬೇಕಿದೆ. ಬೆಳಗಾವಿಯಲ್ಲಿ ಈ ಸಂಬಂಧ ಡಿ.12 ರಂದು ಬಿಲ್ ಮಂಡನೆ ಮಾಡಲಾ ಗುತ್ತಿದ್ದು, ಈ ವೇಳೆ ಮೀಸಲಾತಿ ಇರುವ ಕಡೆ ಒಳ ಮೀಸಲಾತಿ ಜಾರಿ ಮಾಡಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಗೋಪಾಲಪುರ ಮಂಜುನಾಥ್, ಕೆಬ್ಬೆ ಪ್ರಸಾದ್, ಒಳಮೀಸಲಾತಿ ಹೋರಾಟಗಾರರಾದ ಸಿದ್ದನಹುಂಡಿ ಮನು, ಮನೋಜ್, ಬಿಜೆಪಿ ಮುಖಂಡ ಮೂಗೂರು ಸುನೀಲ್ ಕುಮಾರ್, ಜೆಡಿಎಸ್ ಮುಖಂಡ ಮೋಹನ್ ಕುಮಾರ್ ಹಾಜರಿದ್ದರು.

ಸರ್ಕಾರಿ ಶಾಲೆ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಿ



ಕೋಗಿಲವಾಡಿ ಸರ್ಕಾರಿ ಶಾಲೆಗೆ ಯುಪಿಎಸ್ ಕೊಡುಗೆ ನೀಡಲಾಯಿತು.

ಪಿರಿಯಾಪಟ್ಟಣ, ಡಿ.8– ಗ್ರಾಮೀಣ ಸರ್ಕಾರಿ ಶಾಲೆ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಎಂದು ಮೈಸೂರು ಜಿಲ್ಲಾ ಕಾಂಗ್ರೆಸ್ ರಾಜೀವ್ ಗಾಂಧಿ ಪಂಚಾಯತ್ ರಾಜ್ ಸಮಿತಿ ಜಿಲ್ಲಾ ಉಪಾಧ್ಯಕ್ಷೆ ಎಲ್.ಅನುಪಮ ತಿಳಿಸಿದರು.

ತಾಲೂಕಿನ ಕೋಗಿಲವಾಡಿ ಸರ್ಕಾರಿ ಶಾಲೆಗೆ ಉಚಿತವಾಗಿ ಬ್ಯಾಟರಿ ಚಾಲಿತ ಯುಪಿಎಸ್ ಕೊಡುಗೆ ನೀಡಿ ಮಾತನಾಡಿದ ಅವರು, ಕಾಡಂಚಿನ ಹಲವು ಗ್ರಾಮಗಳಲ್ಲಿ ಸಮರ್ಪಕ ವಿದ್ಯುತ್ ಪೂರೈಕೆಯಾಗದ ಕಾರಣ ಶಾಲಾ ಮಕ್ಕಳ ಕಲಿಕೆಗೆ ತೊಂದರೆಯಾಗುತ್ತಿದೆ. ಅದೇ ರೀತಿ ಕೋಗಿಲವಾಡಿ ಗ್ರಾಮದ ಶಾಲೆಯಲ್ಲಿ ಕಂಪ್ಯೂಟರ್ ಸೌಲಭ್ಯವಿದ್ದರೂ ವಿದ್ಯುತ್ತಿನ ಅಸಮರ್ಪಕ ಪೂರೈಕೆಯಿಂದ ಇದರ ಸದುಪಯೋಗವಾಗುತ್ತಿಲ್ಲ. ಆದ್ದರಿಂದ ಯುಪಿಎಸ್ ಅನ್ನು ಕೊಡುಗೆ ನೀಡಿದ್ದು, ವಿದ್ಯಾರ್ಥಿಗಳು ಹಾಗೂ ಶಾಲಾ ಮುಖ್ಯಸ್ಥರು ಇದನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಪಟ್ಟಣದ ವಿದ್ಯಾರ್ಥಿಗಳಿಗೆ ಎಲ್ಲಾ ರೀತಿಯ ಸೌಲಭ್ಯಗಳಿರುತ್ತವೆ. ಆದರೆ ಗ್ರಾಮೀಣ ಮಕ್ಕಳು ಸೌಲಭ್ಯ ವಂಚಿತರಾಗಿರುತ್ತಾರೆ. ಅನೇಕ ಸಂದರ್ಭ ಪೋಷಕರು ಮಕ್ಕಳನ್ನು ಜಮೀನು ಕೆಲಸದಲ್ಲಿ ತೊಡಗಿಸಿಕೊಳ್ಳುತ್ತಾರೆ ಎಂದ ಅವರು, ಗ್ರಾಮೀಣ ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಯನ್ನು ಗುರ್ತಿಸಿ ಅವರನ್ನು ಮತ್ತಷ್ಟು ಪ್ರೋತ್ಸಾಹಿಸಬೇಕಾಗಿದೆ. ಇದಕ್ಕಾಗಿ ನಾನು ನನ್ನ ಕೈಲಾದ ಸಹಾಯ ಮಾಡುತ್ತಿದ್ದೇನೆ ಎಂದರು.

ಈ ವೇಳೆ ಶಾಲೆ ಮುಖ್ಯ ಶಿಕ್ಷಕ ರವಿಕುಮಾರ್, ಎಸ್‌ಡಿಎಂಸಿ ಅಧ್ಯಕ್ಷ ಎಂ.ಎಸ್.ಸ್ವಾಮಿ, ಗ್ರಾಪಂ ಸದಸ್ಯರಾದ ಲಕ್ಷ್ಮಣ್ ಪಟೇಲ್, ಮಹದೇವ್, ಶಿಕ್ಷಕರಾದ ಪುಷ್ಪ, ಗೀತಾ, ತ್ರಿವೇಣಿ ಇತರರಿದ್ದರು.

ಅಸಮಾನತೆ ನಿರ್ಮೂಲನೆಗೆ ಶ್ರಮಿಸಿದ ಅಂಬೇಡ್ಕರ್

ಮಹಾ ಪರಿನಿರ್ವಾಣ ದಿನಾಚರಣೆಯಲ್ಲಿ ತಹಸೀಲ್ದಾರ್ ಟಿ.ಜೆ.ಸುರೇಶಾಚಾರ್



ತಿ.ನರಸೀಪುರ ತಾಪಂ ಸಭಾಂಗಣದಲ್ಲಿ ಅಂಬೇಡ್ಕರ್ ಮಹಾ ನಿರ್ವಾಣ ದಿನ ಆಚರಿಸಲಾಯಿತು.

ತಿ.ನರಸೀಪುರ, ಡಿ.8– ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಪಟ್ಟಣದ ತಾಪಂನಲ್ಲಿ ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರ ಮಹಾ ಪರಿನಿರ್ವಾಣ ದಿನವನ್ನು ಆಚರಿಸಲಾಯಿತು.

ತಾಪಂ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಡಾ.ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ಸಲ್ಲಿಸಿದರು.

ತಹಸೀಲ್ದಾರ್ ಟಿ.ಜೆ.ಸುರೇಶಾಚಾರ್ ಮಾತನಾಡಿ, ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಒಬ್ಬ ನ್ಯಾಯಶಾಸ್ತ್ರಜ್ಞ, ಸಮಾಜ ಸುಧಾರಕ ಮತ್ತು ಭಾರತೀಯ ಸಂವಿಧಾನದ ಶಿಲ್ಪಿ. ಸಾಮಾಜಿಕ ಅಸಮಾನತೆ ನಿರ್ಮೂಲನೆ ಮಾಡಲು ಮತ್ತು ನ್ಯಾಯ ಉತ್ತೇಜಿಸಲು ಅವರ ಅವಿರತ ಪ್ರಯತ್ನಗಳು ರಾಷ್ಟ್ರದ ಮೇಲೆ ಅಳಿಸಲಾಗದ ಗುರುತು ಬಿಟ್ಟಿವೆ ಎಂದರು.

ಅಂಬೇಡ್ಕರ್ ಅವರು ಜಾತಿ ವ್ಯವಸ್ಥೆ ಮತ್ತು ಚಾಲ್ತಿಯಲ್ಲಿರುವ ಸಾಮಾಜಿಕ ಅಸಮಾನತೆಗಳ ಕಟು ವಿಮರ್ಶಕರಾಗಿದ್ದರು. ಅವರು ಅಸ್ಪೃಶ್ಯ ಸಮುದಾಯದ ಹಕ್ಕುಗಳಿಗಾಗಿ ಸಕ್ರಿಯವಾಗಿ ಪ್ರಚಾರ ಮಾಡಿದರು. ಅವರು ಸಾಮಾಜಿಕ ಮತ್ತು ಆರ್ಥಿಕ ಉನ್ನತಿಗಾಗಿ ಪ್ರತಿಪಾದಿಸಿದರು. ಧಮನಿತ ವರ್ಗಗಳನ್ನು ಸಂಘಟಿಸಲು ಮತ್ತು ಸಬಲೀಕರಣಗೊಳಿಸಲು ಅವರು ಬಹಿಷ್ಕೃತ ಹಿತಕಾರಿಣಿ ಸಭೆ ಮತ್ತು ಪರಿಶಿಷ್ಟ ಜಾತಿಗಳ ಒಕ್ಕೂಟ ಸ್ಥಾಪಿಸಿದರು ಎಂದರು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಎಸ್.ಎನ್.ಸಿದ್ದಾರ್ಥ, ಹೊನ್ನನಾಯಕ, ಅಂಬೇಡ್ಕರ್ ಅಭಿವೃದ್ಧಿ ಸಂಘದ ಅಧ್ಯಕ್ಷ ಕರೋಹಟ್ಟಿ ಮಹದೇವಯ್ಯ, ತಾಪಂ ಮಾಜಿ ಉಪಾಧ್ಯಕ್ಷ ಬಿ.ಮರಯ್ಯ, ಪ್ರಸನ್ನ, ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಕುಕ್ಕೂರು ಗಣೇಶ್, ರಾಮಲಿಂಗಯ್ಯ, ಕೆ.ಎನ್.ಪ್ರಭುಸ್ವಾಮಿ, ಕಾಂಗ್ರೆಸ್ ಮುಖಂಡ ಸೋಸಲೆ ಮಹದೇವಸ್ವಾಮಿ, ಸೋಮನಾಥಪುರ ಗಣೇಶ್, ಮೂಗೂರು ಸಿದ್ದರಾಜು, ಸೋಸಲೆ ರಾಜಶೇಖರ್, ನಂಜುಂಡಯ್ಯ, ತಲಕಾಡು ಶಿವಶಂಕರ್, ಆಲಗೂಡು ಶಿವಣ್ಣ, ನಾಗರಾಜು, ಮಿಥುನ್, ರಂಗಸ್ವಾಮಿ, ಶಿವಣ್ಣ, ಶ್ರೀಧರ್, ಅಧಿಕಾರಿಗಳಾದ ಸತೀಶ್ ಚಂದ್ರ, ಮಹೇಶ್, ಎಂ.ರೂಪ, ನಾಗವೇಣಿ, ಶಾಂತ, ಹೇಮಂತ್ ರಾಜು, ಡಾ.ರವಿ ಕುಮಾರ್ ಸೇರಿದಂತೆ ಮತ್ತಿತರರಿದ್ದರು.

ಶ್ರೀವೀರಾಂಜನೇಯ ದೇವಾಲಯ ನಿರ್ಮಾಣಕ್ಕೆ ಚಾಲನೆ



ದೇವಾಲಯ ನಿರ್ಮಾಣ ಕಾಮಗಾರಿಗೆ ಸಚಿವ ಕೆ.ವೆಂಕಟೇಶ್ ಚಾಲನೆ ನೀಡಿದರು.

ಬೆಟ್ಟದಪುರ, ಡಿ.8– ಇಲ್ಲಿಗೆ ಸಮೀಪದ ಚಿಕ್ಕನೇರಳೆ ಗ್ರಾಮದಲ್ಲಿ ಶ್ರೀವೀರಾಂಜನೇಯ ದೇವಾಲಯ ನಿರ್ಮಾಣ ಕಾಮಗಾರಿಗೆ ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ.ವೆಂಕಟೇಶ್ ಭೂಮಿ ಪೂಜೆ ನೆರವೇರಿಸಿದರು.

ನಂತರ ಸಾರ್ವಜನಿಕರ ಕುಂದು ಕೊರತೆ ಆಲಿಸಿ ಮಾತನಾಡಿದ ಸಚಿವರು, ಇಲ್ಲಿನ ದೇವಾಲಯ ನಿರ್ಮಾಣಕ್ಕೆ ನಾನು ಸಾಕಷ್ಟು ಅನುದಾನ ನೀಡುತ್ತೇನೆ. ಜೊತೆಗೆ ಸಂಸದ ಯದುವೀರ್ ಅವರ ಸಹ ಅನುದಾನ ನೀಡಿದರೆ ಸಹಾಯವಾಗುತ್ತದೆ. ಗ್ರಾಮಸ್ಥರು ಬರುವಂತಹ ಎಲ್ಲಾ ಅನುದಾನ ಬಳಸಿಕೊಂಡು ಒಗ್ಗಟ್ಟಿನಿಂದ ದೇವಾಲಯ ನಿರ್ಮಿಸುವಂತೆ ಗ್ರಾಮಸ್ಥರಿಗೆ ಸಲಹೆ ನೀಡಿದರು.

ಇದೇ ವೇಳೆ ಹಾರಂಗಿ ಅಚ್ಚುಕಟ್ಟು ಪ್ರದೇಶ ವ್ಯಾಪ್ತಿಯ ರೈತರ ಜಮೀನಿಗೆ ಹೋಗುವ ರಸ್ತೆಯನ್ನು ಕೂಡಲೇ ದುರಸ್ತಿಗೊಳಿಸುವಂತೆ ಸ್ಥಳದಲ್ಲಿದ್ದ ಹಾರಂಗಿ ಪುನರ್ವಸತಿ ಉಪವಿಭಾಗದ ಸಹಾಯಕ ಅಭಿಯಂತರ ಶಿವಕುಮಾರ್ ಅವರಿಗೆ ಸಚಿವರು ಸೂಚಿಸಿದರು. ಅಲ್ಲದೇ ಮುಂದಿನ ದಿನಗಳಲ್ಲಿ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದರು.

ಈ ವೇಳೆ ಆಶ್ರಯ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್, ಮೈಮುಲ್ ನಿರ್ದೇಶಕ ಪ್ರಕಾಶ್, ಜಿಲ್ಲಾ ಸಹಕಾರಿ ಬ್ಯಾಂಕ್ ನಿರ್ದೇಶಕ ಈ.ಪಿ.ಲೋಕೇಶ್, ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಭೀಮಣ್ಣ, ಡೈರಿ ಅಧ್ಯಕ್ಷ ವೆಂಕಟೇಶ್, ತಹಸೀಲ್ದಾರ್ ನಿಸರ್ಗ ಪ್ರಿಯ, ತಾಪಂ ಇಓ ಸುನೀಲ್ ಕುಮಾರ್, ಗ್ರಾಪಂ ಮಾಜಿ ಅಧ್ಯಕ್ಷ ಜ್ಯೋತಿ ಕುಮಾರ್, ಲೋಕೋಪಯೋಗಿ ಸಹಾಯಕ ಕಾರ್ಯಪಾಲಕ ಅಭಿಯಂತರ ವೆಂಕಟೇಶ್, ಸಹಾಯಕ ಅಭಿಯಂತರ ದಿನೇಶ್, ಪಂಚಾಯತ್ ರಾಜ್ ಉಪ ವಿಭಾಗದ ಎಇಇ ಮಲ್ಲಿಕಾರ್ಜುನ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಕೃಷ್ಣೇಗೌಡ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಚಂದ್ರಶೇಖರ್, ಮೈಸೂರು ನಿರ್ಮಿತಿ ಕೇಂದ್ರದ ಸಹಾಯಕ ಅಭಿಯಂತರ ಲವ, ಕಂದಾಯ ನಿರೀಕ್ಷಕ ಆನಂದ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಹಮತ್ ಜಾನ್ ಬಾಬು, ಡಿ.ಟಿ.ಸ್ವಾಮಿ, ಸಿ.ಎಂ.ಪುಟ್ಟರಾಜು, ನಾಗೇಂದ್ರ, ಸಿದ್ದರಾಮಯ್ಯ, ಜವರನಾಯಕ ಇದ್ದರು

ಹನಗೋಡು: ಲೈನ್‌ಮೆನ್ ಆತ್ಮಹತ್ಯೆ


ಹನಗೋಡು, ಡಿ.8– ಹೋಬಳಿಯ ಕರ್ಣಕುಪ್ಪೆ ಗ್ರಾಪಂ ವ್ಯಾಪ್ತಿಯ ಚೆಸ್ಕಾಂ ಜೂನಿಯರ್ ಪವರ್ ಮ್ಯಾನ್ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.



ಮೂಲತಃ ಬಾಗಲಕೋಟೆ ಜಿಲ್ಲೆ ಬಾದಾಮಿ ತಾಲೂಕಿನ ಕಂಕನಕೊಪ್ಪ ಗ್ರಾಮದ ನೇಕಾರ ಕಾಲೋನಿಯ ನಿವಾಸಿ ಗುರಪ್ಪ ಮಾಲೇಕೊಪ್ಪ ಅವರ ಪುತ್ರ, ಹನಗೋಡು ಉಪವಿಭಾಗದಲ್ಲಿ ಜೂನಿಯರ್ ಪವರ್‌ಮ್ಯಾನ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದ ಸಂಗಪ್ಪ ಮಾಲೇಕೊಪ್ಪ(32) ಆತ್ಮಹತ್ಯೆ ಮಾಡಿಕೊಂಡವರು. ಈತ ಹುಣಸೂರಿನ ಗೋಕುಲ ಬಡಾವಣೆಯೊಂದರ ಬಾಡಿಗೆ ಮನೆಯಲ್ಲಿ ವಾಸವಾಗಿದ್ದರು. ಭಾನುವಾರ ಎಂದಿನಂತೆ ಕರ್ತವ್ಯ ಮುಗಿಸಿಕೊಂಡು ಮನೆಗೆ ಹೋದ ಸಂಗಪ್ಪ ರಾತ್ರಿ ಮನೆಯಲ್ಲೇ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸೋಮವಾರ ಮುಂಜಾನೆ ಮೊಬೈಲ್ ಅಲರಾಂನಿಂದ ಎಚ್ಚರಗೊಳ್ಳದ ಪತಿಯನ್ನು ಎಬ್ಬಿಸಲು ಹೋದ ವೇಳೆ ಸಂಗಪ್ಪ ಆತ್ಮಹತ್ಯೆ ಮಾಡಿಕೊಂಡಿರುವುದು ಬೆಳಕಿಗೆ ಬಂದಿದೆ. ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ. ಈ ಸಂಬಂಧ ಮೃತರ ಪತ್ನಿ ಶ್ವೇತಾ ಪೊಲೀಸರಿಗೆ ಮಾಹಿತಿ ನೀಡಿದ್ದು, ಸಂಗಪ್ಪ ಮಾಲೇಕೊಪ್ಪ ಕುಟುಂಬದವರು ಬಾದಾಮಿಯಿಂದ ಬಂದ ನಂತರವಷ್ಟೇ ನಿಖರ ಕಾರಣ ತಿಳಿಯಲಿದೆ.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಪೊಲೀಸರು ಪರಿಶೀಲನೆ ನಡೆಸಿ ಶವವನ್ನು ಹುಣಸೂರು ಸಾರ್ವಜನಿಕ ಆಸ್ಪತ್ರೆ ಶವಾಗಾರಕ್ಕೆ ರವಾನಿಸಿದರು. ಹುಣಸೂರು ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಇಂದು ವಿದ್ಯುತ್ ವ್ಯತ್ಯಯ



ನಂಜನಗೂಡು, ಡಿ.8– ತಾಲೂಕಿನ ಮರಡಿಹುಂಡಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಕಾರಣ ಡಿ.9ರಂದು ಬೆಳಗ್ಗೆ 10ರಿಂದ ಸಂಜೆ 6ರವರೆಗೆ ತಾಲೂಕಿನ ಆಲತ್ತೂರು, ಮಾದಯ್ಯನಹುಂಡಿ, ತುಂನೇರಳೆ, ನಂದಿಗುಂದಪುರ, ಹೊಸಕೋಟೆ, ಮರಡಿಹುಂಡಿ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

ಹಗಿನವಾಳಲ್ಲಿ ಶ್ರೀಸಿದ್ದಪ್ಪಾಜಿ ದೇವಾಲಯ ಲೋಕಾರ್ಪಣೆ



ಹಗಿನವಾಳಲ್ಲಿ ನೂತನ ಶ್ರೀಸಿದ್ದಪ್ಪಾಜಿ ದೇವಾಲಯ ಲೋಕಾರ್ಪಣೆಗೊಳಿಸಲಾಯಿತು.

ನಂಜನಗೂಡು, ಡಿ.8– ತಾಲೂಕಿನ ಹಗಿನವಾಳು ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀಸಿದ್ದಪ್ಪಾಜಿ ದೇವಾಲಯವನ್ನು ಸೋಮವಾರ ಲೋಕಾರ್ಪಣೆಗೊಳಿಸಲಾಯಿತು.

ನೂತನ ಸಿದ್ದಪ್ಪಾಜಿ ದೇವಾಲಯ ಉದ್ಘಾಟನೆ ಹಾಗೂ ಕಂಡಾಯ ಸ್ಥಾಪನೆ ಮತ್ತು ಬಸವ ವಿಗ್ರಹ ಪ್ರತಿಷ್ಠಾಪನಾ ಮಹೋತ್ಸವದ ಅಂಗವಾಗಿ ಭಾನುವಾರ ರಾಜ ಬೊಪ್ಪೇಗೌಡನಪುರದ ಶ್ರೀವಿನಯ್ ಭಟ್ ಗುರೂಜೀ ಅವರ ನೇತೃತ್ವದಲ್ಲಿ ಗಣಪತಿ ಪೂಜೆ, ಯಾಗ ಶಾಲಾ ಪ್ರವೇಶ, ಪಂಚಗವ್ಯ, ದೇವನಂದಿ, ಅಗ್ನಿಪ್ರಕಾರ ಶುದ್ದಿ, ಕಳಸ ಸ್ಥಾಪನೆ, ವಾಸ್ತು ಪೂಜೆ, ನವಗ್ರಹ ಹೋಮ, ದಿಕ್ಪಾಲಕ ಬಲಿ ಕಾರ್ಯ ನೆರವೇರಿಸಲಾಯಿತು.

ಸೋಮವಾರ ಕುರುಬನಕಟ್ಟೆ ಹಾಗೂ ಕಪ್ಪಡಿ ರಾಚಪ್ಪಾಜಿ ಕ್ಷೇತ್ರದ ಪೀಠಾಧಿಪತಿ ಬಿ.ಎಸ್.ಜ್ಞಾನಾನಂದ ಚನ್ನರಾಜು ಅರಸ್ ಸ್ವಾಮೀಜಿ ಅವರ ನೇತೃತ್ವದಲ್ಲಿ ಬೆಳಗ್ಗೆ 6 ಗಂಟೆಗೆ ಹಾಲರವಿ ಉತ್ಸವ, ಸಿದ್ದಪ್ಪಾಜಿ ಕಂಡಾಯ ಹಾಗೂ ಕಳಸ ಮೆರವಣಿಗೆ ನಡೆಸಲಾಯಿತು. ಬೆಳಗ್ಗೆ 9.19 ರಿಂದ 11.30 ರವರೆಗೆ ಸಲ್ಲುವ ಶುಭ ಮಕರ ಲಗ್ನದಲ್ಲಿ ಸಿದ್ದಪ್ಪಾಜಿ ಅವರ ಶ್ರೀಕಂಡಾಯ ಪ್ರತಿಷ್ಠಾಪಿಸಿ, ಮೂಲ ಮಂತ್ರ ಹೋಮದೊಂದಿಗೆ ಬಸವ ವಿಗ್ರಹ ಪ್ರತಿಷ್ಠಾಪನೆ ಮಾಡಲಾಯಿತು. ನಂತರ ಪೂರ್ಣಾಹುತಿಯೊಂದಿಗೆ ದೇವತಾ ಕಾರ್ಯಗಳೊಂದಿಗೆ ರಾಜೋಪಾಚಾರ ಮಂತ್ರ ಪುಷ್ಪ ಇತ್ಯಾದಿ ಧಾರ್ಮಿಕ ಕಾರ್ಯಗಳನ್ನು ನಡೆಸಿದ ಬಳಿಕ ಭಕ್ತರಿಗೆ ಅನ್ನ ಸಂತರ್ಪಣೆ ನಡೆಸಲಾಯಿತು.

ಬಿ.ಎಸ್.ಜ್ಞಾನಾನಂದ ಚೆನ್ನರಾಜೇ ಅರಸ್ ಸ್ವಾಮೀಜಿ ಮಾತನಾಡಿ, ನೂತನ ದೇವಾಲಯ ನಿರ್ಮಾಣದಿಂದ ಸಾರ್ವಜನಿಕರಲ್ಲಿ ಧಾರ್ಮಿಕ ಶ್ರದ್ಧೆ ಬೆಳೆಯುವ ಜೊತೆಗೆ ಎಲ್ಲಾ ಸಮುದಾಯ ಒಟ್ಟಾಗಿ ಕಾರ್ಯಕ್ರಮದಲ್ಲಿ ಭಾಗಿಯಾಗುವ ಮೂಲಕ ಜಾತ್ಯಾತೀತ ಮನೋಭಾವ ಬೆಳೆಯಲು ಸಹಕಾರಿಯಾಗುತ್ತದೆ ಎಂದರು.

ತಾಪಂ ಮಾಜಿ ಸದಸ್ಯ ಹೆಚ್.ಎಸ್.ಮೂಗಶೆಟ್ಟಿ ಮಾತನಾಡಿ, ಗ್ರಾಮಸ್ಥರ ವಂತಿಕೆ ಮತ್ತು ದಾನಿಗಳ ಸಹಾಯದಿಂದ ದೇಗುಲ ನಿರ್ಮಿಸಲಾಗಿದೆ. ದೇವಾಲಯ ನಿರ್ಮಾಣದ ಮೂಲಕ ಗ್ರಾಮೀಣ ಜನರು ಧಾರ್ಮಿಕ ಶ್ರದ್ಧೆ, ಸಾಮರಸ್ಯದಿಂದ ಜೀವನ ನಡೆಸಲು ಸಾಧ್ಯವಾಗಲಿದೆ ಎಂದರು.

ಶಾಸಕ ದರ್ಶನ್, ಮಾಜಿ ಶಾಸಕ ಕೇಶವಮೂರ್ತಿ, ಬಿ.ಹರ್ಷವರ್ಧನ್ ಸೇರಿದಂತೆ ಸೇರಿದಂತೆ ಹಲವು ಗಣ್ಯರು ದೇವಾಲಯಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದು ಗ್ರಾಮಸ್ಥರಿಗೆ ಶುಭ ಹಾರೈಸಿದರು. ಈ ವೇಳೆ ಹಗಿನವಾಳು ಗ್ರಾಮಸ್ಥರು, ಗ್ರಾಮದ ಎಲ್ಲಾ ಬೀದಿ ಯಜಮಾನರು, ಮುಖಂಡರು ಮತ್ತು ಭಕ್ತರು ಉಪಸ್ಥಿತರಿದ್ದರು.

ಬಂಕವಾಡಿಯಲ್ಲಿ ಸಂಭ್ರಮದ ಹನುಮ ಜಯಂತಿ



ಬಂಕವಾಡಿಯಲ್ಲಿ ವೀರಾಂಜನೇಯಸ್ವಾಮಿ ಉತ್ಸವ ಮೂರ್ತಿ ಮೆರವಣಿಗೆ ಮಾಡಲಾಯಿತು.

ಸರಗೂರು, ಡಿ.8– ತಾಲೂಕಿನ ಬಂಕವಾಡಿಯಲ್ಲಿ ವೀರಾಂಜನೇಯಸ್ವಾಮಿ ದೇವಸ್ಥಾನ ಸೇವಾ ಸಮಿತಿಯಿಂದ ಹನುಮ ಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಹನುಮ ಜಯಂತಿ ಅಂಗವಾಗಿ ಗ್ರಾಮದ ವೀರಾಂಜನೇಯಸ್ವಾಮಿ ದೇವಾಲಯದಲ್ಲಿ ಮುಂಜಾನೆಯಿಂದಲೇ ವಾಯುಪುತ್ರನಿಗೆ ಮಹಾಭಿಷೇಕ, ರುದ್ರಾಭಿಷೇಕ ನೆರವೇರಿಸಿ ವಿವಿಧ ಹೂಗಳಿಂದ ಅಲಂಕರಿಸಲಾಗಿತ್ತು. ಹೋಮ ಹವನದ ಮೂಲಕ ಪ್ರಾರ್ಥನೆ ಸಲ್ಲಿಸಲಾಯಿತು. ಅಲ್ಲದೇ ತುಳಸಿ ಅರ್ಚನೆ ಹಾಗೂ ಮಹಾಮಂಗಳಾರತಿ ಬೆಳಗಿ ಇಷ್ಟಾರ್ಥದೊಂದಿಗೆ ನಾಡಿನ ಸಮೃದ್ಧಿಗೆ ದೇವರಲ್ಲಿ ಪ್ರಾರ್ಥಿಸಲಾಯಿತು. ಬಳಿಕ ಭಕ್ತರ ದರ್ಶನಕ್ಕೆ ಅನುವು ಮಾಡಿಕೊಡಲಾಯಿತು. ಬಳಿಕ ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದು ಪುನೀತರಾದರು.

ನಂತರ ವೀರಾಂಜನೇಯಸ್ವಾಮಿ ಉತ್ಸವ ಮೂರ್ತಿಯನ್ನು ಅಲಂಕೃತ ರಥದಲ್ಲಿ ಪ್ರತಿಷ್ಠಾಪಿಸಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮಂಗಳವಾದ್ಯ, ವೀರಗಾಸೆ, ಪೂಜಾ ಕುಣಿತ, ನಗಾರಿ, ಸತ್ತಿಗೆ ಸೇರಿದಂತೆ ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಮೆರವಣಿಗೆ ಮಾಡಲಾಯಿತು. ಈ ವೇಳೆ ಮೆರವಣಿಗೆಯಲ್ಲಿದ್ದ ಹನುಮ ಭಕ್ತರು ಜೈ ಶ್ರೀರಾಮ್, ಜೈ ಮಾರುತಿ ಎಂದು ಜೈಕಾರ ಕೂಗಿದರು. ಇನ್ನು ಆಗಮಿಸಿದ್ದ ಭಕ್ತರಿಗೆ ಅನ್ನಸಂತರ್ಪಣೆ ಹಮ್ಮಿಕೊಳ್ಳಲಾಗಿತ್ತು. ರಾಕೇಶ್ ಅರ್ಪಿಸುವ ಶೃತಿ ಪ್ರಿಯಾ ಮೆಲೋಡಿಸ್ ಅವರಿಂದ ರಸಮಂಜರಿ ಕಾರ್ಯಕ್ರಮ ನಡೆಯಿತು.

ಈ ವೇಳೆ ಗುಡಿಗೌಡರಾದ ಚಿಕ್ಕಸ್ವಾಮಿ, ಪದ್ಮರಾಜ್, ಸುರೇಶ್ ಸೇರಿದಂತೆ ಗ್ರಾಮಸ್ಥರು, ಜೈ ಶ್ರೀರಾಮ ಯುವಕರ ಸಂಘದ ಪದಾಧಿಕಾರಿಗಳು ಹಾಜರಿದ್ದರು.

ಹಗಲು ವೇಳೆ ವಿದ್ಯುತ್‌ಗೆ ಒತ್ತಾಯಿಸಿ ಪ್ರತಿಭಟನೆ

ಹೆಚ್.ಡಿ.ಕೋಟೆ, ಡಿ.8– ತಾಲೂಕಿನಲ್ಲಿ ಕಾಡು ಪ್ರಾಣಿಗಳ ಹಾವಳಿ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಪಂಪ್ ಸೆಟ್‌ಗಳಿಗೆ ಹಗಲು ವೇಳೆ ವಿದ್ಯುತ್ ನೀಡಬೇಕೆಂದು ಒತ್ತಾಯಿಸಿ ಪಟ್ಟಣದಲ್ಲಿ ಸೋಮವಾರ ರೈತ ಸಂಘದಿಂದ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ಚೆಸ್ಕಾಂ ಸಹಾಯಕ ಕಾರ್ಯಪಾಲಕ ಅಭಿಯಂತರ ಕಚೇರಿ ಎದುರು ಜಮಾಯಿಸಿದ ರೈತ ಸಂಘದ ಕಾರ್ಯಕರ್ತರು ಪ್ರತಿಭಟನೆ ನಡೆಸಿ, ಹಗಲು ವೇಳೆ ವಿದ್ಯುತ್ ನೀಡುವಂತೆ ಆಗ್ರಹಿಸಿದರು.

ತಾಲೂಕು ರೈತ ಸಂಘದ ಪ್ರಧಾನ ಕಾರ್ಯದರ್ಶಿ ವಡ್ಡರಗುಡಿ ಬಸವರಾಜ್ ಮಾತನಾಡಿ, ಪ್ರಸ್ತುತ ಪಂಪ್ ಸೆಟ್‌ಗಳಿಗೆ ರಾತ್ರಿ ವೇಳೆ ವಿದ್ಯುತ್ ನೀಡಲಾಗುತ್ತಿದೆ. ಆದರೆ ತಾಲೂಕಿನಲ್ಲಿ ಆನೆ, ಹುಲಿ, ಚಿರತೆ ಸೇರಿದಂತೆ ಕಾಡು ಪ್ರಾಣಿಗಳ ಹಾವಳಿ ಹೆಚ್ಚಾಗಿದ್ದು, ಮೂವರು ಮೃತಪಟ್ಟಿದ್ದಾರೆ. ಇದರಿಂದಾಗಿ ರೈತರು ರಾತ್ರಿ ವೇಳೆ ಜಮೀನಿಗೆ ತೆರಳಲು ಭಯಪಡುವಂತಾಗಿದೆ. ಹೀಗಾಗಿ ಹಗಲು ವೇಳೆಯಲ್ಲಿ ವಿದ್ಯುತ್ ನೀಡಬೇಕು ಎಂದು ಒತ್ತಾಯಿಸಿದರು.



ಹಗಲು ವೇಳೆ ವಿದ್ಯುತ್‌ಗೆ ಒತ್ತಾಯಿಸಿ ಪ್ರತಿಭಟನೆ ನಡೆಸಲಾಯಿತು.

ಅಲ್ಲದೇ ತಾಲೂಕಿನ ವಿವಿದೆಡೆ ಕೆಟ್ಟು ಹೋದ ಟಿಸಿಗಳನ್ನು ದುರಸ್ತಿಗೊಳಿಸಬೇಕು. ಜೋತು ಬಿದ್ದಿರುವ ವಿದ್ಯುತ್ ತಂತಿಗಳನ್ನು ಸರಿಪಡಿಸಬೇಕು. ಅಕ್ರಮ ಸಕ್ರಮ ಪಂಪ್ ಸೆಟ್‌ಗಳಿಗೆ ಮುಂಗಡ ಹಣ ಕಟ್ಟಲು ಇಂದಿನ ಆದೇಶದಂತೆ ಅವಕಾಶ ನೀಡುವುದು. 25 ಕೆವಿಟಿಸಿ ಸಂಪರ್ಕದಲ್ಲಿ ಪಂಪ್ ಸೆಟ್‌ಗಳು ಹೆಚ್ಚಾಗಿರುವುದರಿಂದ, 63 ಕೆವಿಟಿಸಿ ಅಳವಡಸುವಂತೆ ಆಗ್ರಹಿಸಿದರು.

ರೈತರ ಮನವಿ ಸ್ವೀಕರಿಸಿ ಮಾತನಾಡಿದ ಚೆಸ್ಕಾಂ ಕಾರ್ಯನಿರ್ವಾಹಕ ಇಂಜಿನಿಯರ್ ಚಂದುಕುಮಾರ್ ಮಾತನಾಡಿ, ನಿಮ್ಮ ಬೇಡಿಕೆಯಂತೆ ರಾತ್ರಿ ಬದಲಿಗೆ ಪಂಪ್‌ಸೆಟ್‌ಗಳಿಗೆ ಹಗಲು ವೇಳೆ ವಿದ್ಯುತ್ ನೀಡಲು ಸಾಕಷ್ಟು ತೊಂದರೆಗಳಿವೆ. ಹೀಗಾಗಿ ರೈತರು ಅನುಸರಿಸಿಕೊಂಡು ರಾತ್ರಿ ನೀಡುವ ವಿದ್ಯುತ್ ಅನ್ನು ಸದುಪಯೋಗಪಡಿಸಿಕೊಂಡು ತಮ್ಮ ಬೆಳೆಗೆ ನೀರು ಹಾಯಿಸಿಕೊಳ್ಳಬೇಕು. ಮುಂದಿನ ದಿನಗಳಲ್ಲಿ ನೂತನ ಟಿಸಿಗಳನ್ನು ಅಳವಡಿಸಿ ಹಗಲು ವೇಳೆ ವಿದ್ಯುತ್ ನೀಡಲಾಗುವುದು. ರೈತರು ಸಹಕರಿಸಬೇಕು ಎಂದರು.

ಚೆಸ್ಕಾಂ ಅಧಿಕಾರಿಗಳಾದ ಅರುಣ್ ಕುಮಾರ್, ವಾದಿರಾಜ್, ಜಿಲ್ಲಾ ರೈತ ಸಂಘದ ಉಪಾಧ್ಯಕ್ಷ ಪಳನಿಸ್ವಾಮಿ, ತಾಪಂ ಮಾಜಿ ಅಧ್ಯಕ್ಷ ರವಿಕುಮಾರ್, ಮಹದೇವ, ಮಂಜು, ಗೋವಿಂದೇಗೌಡ, ದೇವಮ್ಮ, ಶಿವಲಿಂಗೇಗೌಡ, ಮಾದೇವ ಶೆಟ್ಟಿ, ಶಿವಣ್ಣ ಶೆಟ್ಟಿ ಪುಟ್ಟರಾಜು, ರವಿ, ವೆಂಕಟೇಗೌಡ, ಪ್ರಸಾದ್, ಕುಮಾರಸ್ವಾಮಿ ಇತರರಿದ್ದರು.

ನಾಳೆ ನಮ್ಮೂರ ಹನುಮೋತ್ಸವ: ಬಿಗಿಭದ್ರತೆ

ಶಾಂತಿ ಸಭೆಯಲ್ಲಿ ಇನ್ಸ್‌ಪೆಕ್ಟರ್ ಶಿವಪ್ರಕಾಶ್

ಕೆ.ಆರ್.ನಗರ, ಡಿ.8– ಪಟ್ಟಣದಲ್ಲಿ ಡಿ.10 ರಂದು ಶ್ರೀಮಾರುತಿ ಯುವಕರ ಸಂಘದಿಂದ ನಡೆಯುವ ನಮ್ಮೂರ ಹನುಮೋತ್ಸವ ಹಾಗೂ ಶೋಭಾಯಾತ್ರೆ ಹಿನ್ನೆಲೆಯಲ್ಲಿ ಅಗತ್ಯ ಮುನ್ನೆಚ್ಚರಿಕೆ ವಹಿಸಿ, ಬಿಗಿ ಪೊಲೀಸ್ ಭದ್ರತೆ ಕೈಗೊಳ್ಳಲಾಗಿದೆ ಎಂದು ಕೆ.ಆರ್.ನಗರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಶಿವಪ್ರಕಾಶ್ ತಿಳಿಸಿದರು.

ಸೋಮವಾರ ಪಟ್ಟಣದ ಪೊಲೀಸ್ ಠಾಣೆಯಲ್ಲಿ ವಿವಿಧ ಸಂಘಟನೆಗಳ ಮುಖ್ಯಸ್ಥರೊಂದಿಗೆ ಶಾಂತಿ ಸಭೆ ನಡೆಸಿ ಮಾತನಾಡಿದ ಅವರು, ನಮ್ಮೂರ ಹನುಮೋತ್ಸವ ಹಿನ್ನೆಲೆಯಲ್ಲಿ ಮಂಗಳವಾರದಿಂದಲೇ ಪಟ್ಟಣದಲ್ಲಿ ಬಿಗಿ ಬಂದೋಬಸ್ತ್ ಕೈಗೊಳ್ಳಲಾಗಿದೆ. ಕೆ.ಆರ್.ನಗರ ಪಟ್ಟಣ ಹಾಗೂ ಹಂಪಾಪುರ, ದೊಡ್ಡೇಕೊಪ್ಪಲು ವ್ಯಾಪ್ತಿ ಬುಧವಾರ ಮದ್ಯ ಮಾರಾಟ ನಿಷೇಧಿಸಲಾಗಿದೆ ಎಂದರು.

ಈಗಾಗಲೇ ನಮ್ಮೂರ ಹನುಮೋತ್ಸವ ಶೋಭಾಯಾತ್ರೆ ಸಾಗಲಿರುವ ಮಾರ್ಗಗಳನ್ನು ಪರಿಶೀಲಿಸಲಾಗಿದೆ. ಅಲ್ಲದೇ ಶಾಂತಿಯುತವಾಗಿ ಹನುಮ ಜಯಂತಿ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದರು.



ಶಾಂತಿಸಭೆಯಲ್ಲಿ ಕೆ.ಆರ್.ನಗರ ಇನ್ಸ್‌ಪೆಕ್ಟರ್ ಶಿವಪ್ರಕಾಶ್ ಮಾತನಾಡಿದರು.

ಪಟ್ಟಣದ ಶ್ರೀ ಆಂಜನೇಯಸ್ವಾಮಿ ದೇವಾಲಯದಿಂದ ಡಿ.10ರಂದು ಬೆಳಗ್ಗೆ 10 ಗಂಟೆಗೆ ಶೋಭಾಯಾತ್ರೆ ಆರಂಭವಾಗಲಿದ್ದು, ಬೆಳಗ್ಗೆ 10ರಿಂದ ಸಂಜೆ 5ರವರೆಗೆ ಮಾತ್ರ ಮೆರವಣಿಗೆಗೆ ಅವಕಾಶ ನೀಡಲಾಗಿದೆ. ಈ ವೇಳೆ ಶಾಂತಿ ಸುವ್ಯವಸ್ಥೆ ಕಾಪಾಡಲು ಮೂವರು ಡಿವೈಎಸ್ಪಿ, 7 ಮಂದಿ ಸಿಪಿಐ, 26 ಎಸ್‌ಐ, 40 ಎಎಸ್‌ಐ, 285 ಮುಖ್ಯಪೇದೆ, 3 ಕೆಎಸ್‌ಆರ್‌ಪಿ, ಡಿ.ಆರ್ ತುಕಡಿಯನ್ನು ಭದ್ರತೆಗಾಗಿ ನಿಯೋಜಿಸಲಾಗಿದೆ. ಅಲ್ಲದೇ ಪಟ್ಟಣದ ಕೆಲವೆಡೆ ಸಿಸಿ ಟಿವಿಗಳನ್ನು ಅಳವಡಿಸಲಾಗಿದೆ ಎಂದರು.

ಶೋಭಾಯಾತ್ರೆ ಬಜಾರ್ ರಸ್ತೆ ಮೂಲಕ ಗರುಡ ಗಂಭ ವೃತ್ತದಲ್ಲಿ ಸಾಗಿ ಹಾಸನ–ಮೈಸೂರು ರಸ್ತೆ ಮಾರ್ಗವಾಗಿ ಪುರಸಭೆ ವೃತ್ತದ ಮೂಲಕ ಸಿ.ಎಂ.ರಸ್ತೆ ಮುಖಾಂತರ ಗರಡಿ ಮನೆ ರಸ್ತೆ ಕಡೆಯಿಂದ ದೇವಸ್ಥಾನ ತಲುಪಲಿದೆ ಎಂದರು.

ಶೋಭಾ ಯಾತ್ರೆಯಲ್ಲಿ 10 ಕಲಾ ತಂಡಗಳಿಗೆ ಅವಕಾಶ ನೀಡಲಾಗಿದ್ದು, ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆಯಾಗಿ ಕ್ರಿಮಿನಲ್ ಪ್ರಕರಣದಲ್ಲಿ ಭಾಗಿಯಾಗಿರುವವರ ಮೇಲೆ ತೀವ್ರ ನಿಗಾ ವಹಿಸಲಾಗಿದೆ ಎಂದರು.

ಈ ವೇಳೆ ಎಸ್‌ಐ ಸ್ವಾಮಿಗೌಡ, ಮುಖ್ಯಪೇದೆ ಪರಶುರಾಮ್, ಗುರು, ಸಾರ್ವಜನಿಕ ಹನುಮ ಜಯಂತಿ ಆಚರಣಾ ಸಮಿತಿ ಅಧ್ಯಕ್ಷ ಕೃಷ್ಣಭಟ್, ಸದಸ್ಯ, ನಂಜುಂಡ, ರಮೇಶ್ ಸೇಠ್, ಜಾಮಿಯಾ ಮಸೀದಿ ಕಮಿಟಿ ಅಧ್ಯಕ್ಷ ಅಪ್ಸರ್ ಬಾಬು, ಶ್ರೀ ಮಾರುತಿ ಯುವಕರ ಸಂಘದ ಕಾರ್ಯದರ್ಶಿ ವಿನಯ್, ಪ್ರಚಾರ ಸಮಿತಿ ಅಧ್ಯಕ್ಷ ದರ್ಶನ್, ಪೂಜಾ ಸಮಿತಿ ಅಧ್ಯಕ್ಷ ಲೋಕಿ, ಖಜಾಂಚಿ ಮಂಜು, ಪದಾಧಿಕಾರಿಗಳಾದ ಧನುಷ್, ನವೀನ್, ಸುಹಾಸ್, ತೇಜಸ್, ಮಹೇಂದ್ರ, ಕನಕ, ಕರುಣಾ, ಪುನೀತ್, ಉಜ್ವಲ್, ಹೇಮಂತ್, ಗಿರೀಶ್ ಇತರರಿದ್ದರು.

ಮಾದಕ ವ್ಯಸನ ಮನುಷ್ಯನ ಮಾತ್ರ ಹಾಳು ಮಾಡುತ್ತಿಲ್ಲ; ದೇಶದ ಭವಿಷ್ಯವನ್ನೇ ನಾಶ ಮಾಡುತ್ತಿದೆ

● ವೈದ್ಯಕೀಯ ಸಲಹೆಗಾರ ಡಾ.ಸಚಿನ್ ಪರಬ್ ಆತಂಕ ● 'ಧನಾತ್ಮಕ ಚಿಂತನೆ ಮತ್ತು ವ್ಯಸನ ಮುಕ್ತರಾಗಲು ದಾರಿ' ವಿಶೇಷ ಉಪನ್ಯಾಸ ● ಈಗಂತೂ ಶಾಲಾ-ಕಾಲೇಜು, ವಿಶ್ವವಿದ್ಯಾನಿಲಯಗಳೇ ಮಾದಕ ವಸ್ತು ಮಾರಾಟಗಾರರ ಗುರಿಯಾಗಿವೆ

ಮೈಸೂರು, ಡಿ.8(ಎಂಕೆ)- ಮಾದಕ ವ್ಯಸನ ಕೇವಲ ವೈಯಕ್ತಿಕ ಸಮಸ್ಯೆಯಾಗಿ ಉಳಿದಿಲ್ಲ. ದೇಶದ ಭವಿಷ್ಯವನ್ನೇ ಹಾಳುಮಾಡುತ್ತಿದೆ ಎಂದು ಕಾರ್ಪೊರೇಟ್ ತರಬೇತುದಾರ ಹಾಗೂ ವೈದ್ಯಕೀಯ ಸಲಹೆಗಾರ ಡಾ.ಸಚಿನ್ ಪರಬ್ ಆತಂಕ ವ್ಯಕ್ತಪಡಿಸಿದರು.

ಮೈಸೂರು ವಿಶ್ವವಿದ್ಯಾನಿಲಯ ಮಾನಸಗಂಗೋತ್ರಿಯಲ್ಲಿರುವ ಸ್ಕೂಲ್ ಆಫ್ ಪ್ಲಾನಿಂಗ್ ಅಂಡ್ ಆರ್ಕಿಟೆಕ್ಚರ್ ವಿಭಾಗದ ಪ್ರೊ.ಕೆ.ಎಸ್.ರಂಗಪ್ಪ ಸಭಾಂಗಣದಲ್ಲಿ ಪ್ರಜಾಪಿತ ಬ್ರಹ್ಮ ಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದ ಸಹಕಾರದೊಂದಿಗೆ ಆಯೋಜಿಸಿದ್ದ 'ಧನಾತ್ಮಕ ಚಿಂತನೆ ಮತ್ತು ವ್ಯಸನ ಮುಕ್ತರಾಗಲು ದಾರಿ' ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶಾಲೆ, ಕಾಲೇಜು ಮತ್ತು ವಿಶ್ವವಿದ್ಯಾನಿಲಯಗಳೇ ಮಾದಕ ವಸ್ತು ಮಾರಾಟಗಾರರ ಗುರಿಯಾಗಿವೆ ಎಂದರು.

ದೇಶದ ಆರ್ಥಿಕತೆ ಹಾಗೂ ಸಾಮಾಜಿಕ ವ್ಯವಸ್ಥೆಯನ್ನು ಹಾಳುಮಾಡುವ ಸಂಚು ಹಿಂದಿನಿಂದಲೂ ನಡೆಯುತ್ತಿದ್ದು, ಅದರಲ್ಲಿ ಯುವ ಸಮೂಹವನ್ನು ವ್ಯಸನಿಗಳನ್ನಾಗಿ ಮಾಡುವುದು ಒಂದು ಭಾಗವಾಗಿದೆ. 30 ವರ್ಷದ ಹಿಂದೆ ಅತ್ಯಂತ ಸದೃಢರನ್ನು ಹೊಂದಿದ್ದ ಪಂಜಾಬ್ ರಾಜ್ಯವಿಂದು ಮಾದಕ ವ್ಯಸನದಿಂದ ಹಾಳಾಗುತ್ತಿದೆ. ಅಮೃತಸರದ ಗ್ರಾಮವೊಂದರಲ್ಲಿನ ಗಂಡಸರೆಲ್ಲರೂ ಮಾದಕ ವ್ಯಸನಕ್ಕೆ ಬಲಿಯಾಗುತ್ತಿರುವ ಕಾರಣದಿಂದಾಗಿಯೇ ಆ ಗ್ರಾಮವನ್ನು ವಿಧವೆಯರ ಗ್ರಾಮ ಎಂದು ಕರೆಯಲಾಗುತ್ತದೆ ಎಂದು ಎಚ್ಚರಿಸಿದರು.

ಯುವ ಸಮೂಹ ಮಾದಕ ವಸ್ತುಗಳ ವ್ಯಸನದ ಜೊತೆಗೆ ಮೊಬೈಲ್ ಬಳಕೆಯಿಂದ ಏಕಾಗ್ರತೆ ಕಳೆದುಕೊಳ್ಳುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಆದ್ದರಿಂದ ಅವರನ್ನು ಎಚ್ಚರಿಸುವ, ಅವರಲ್ಲಿ ಅರಿವು ಮೂಡಿಸುವ ಕಾರ್ಯಗಳು ಪರಿಣಾಮಕಾರಿಯಾಗಿ ಆಗಬೇಕು. ವಿಪರ್ಯಾಸವೆಂದರೆ ದೇಶದಲ್ಲಿ ಯುವ ಸಮೂಹವನ್ನು ಎಚ್ಚರಿಸಬೇಕಾದ ಸಾಧಕರೇ ಜೂಜಾಟದ ಜಾಹೀರಾತು ನೀಡುತ್ತಿರುವುದು ವಿಷಾದನೀಯ ಎಂದರು.

ದುರಂತ: ಕಾರ್ಯಕ್ರಮ ಉದ್ಘಾಟಿಸಿದ ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಮಾತನಾಡಿ, ವಿದ್ಯಾವಂತರೇ ಮಾದಕ ವಸ್ತುಗಳ ಸೇವನೆ ಮಾಡುತ್ತಿರುವುದು ದುರಂತ. ಇದರಿಂದ ತಮ್ಮ ಆರೋಗ್ಯ ಮತ್ತು ಭವಿಷ್ಯವನ್ನೇ ಹಾಳು ಮಾಡಿಕೊಳ್ಳುತ್ತಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು.

ಬಹುತೇಕ ವಿದ್ಯಾರ್ಥಿಗಳು ಅಂಕಪಟ್ಟಿಗಾಗಿ ಕಾಲೇಜಿಗೆ ಬರುತ್ತಾರೆ. ಆದರೆ, ಜೀವನದಲ್ಲಿ ಅಂಕಪಟ್ಟಿಗಿಂತ ಅವರ ಮಾನಸಿಕ ಆರೋಗ್ಯ ಮುಖ್ಯವೆಂಬುದನ್ನು ಅರಿತುಕೊಳ್ಳಬೇಕು. ತಮ್ಮ ಜವಾಬ್ದಾರಿ ಏನೆಂಬುದನ್ನು ಅರ್ಥ ಮಾಡಿಕೊಂಡು, ತಮ್ಮ ಪೋಷಕರ ಪರಿಶ್ರಮವನ್ನು ವ್ಯರ್ಥ ಮಾಡದೆ ಜೀವನ ರೂಪಿಸಿಕೊಳ್ಳಬೇಕು. ಇದಕ್ಕಾಗಿ ಉತ್ತಮ ಆಲೋಚನೆ, ಉತ್ತಮ ಹವ್ಯಾಸ ಹಾಗೂ ಉತ್ತಮ ಆಹಾರ ಸೇವನೆ ಮಾಡಬೇಕು ಎಂದು ಕಿವಿಮಾತು ಹೇಳಿದರು.

ಪ್ರಜಾಪಿತ ಬ್ರಹ್ಮ ಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದ ರಾಜಯೋಗಿನಿ ಬಿ.ಕೆ.ಲಕ್ಷ್ಮಿ ಜಿ, ಮೈಸೂರು ವಿವಿ ಕುಲಸಚಿವರಾದ ಎಂ.ಕೆ.ಸವಿತಾ, ಸ್ಕೂಲ್ ಆಫ್ ಪ್ಲಾನಿಂಗ್ ಅಂಡ್ ಆರ್ಕಿಟೆಕ್ಚರ್ ವಿಭಾಗದ ಮುಖ್ಯಸ್ಥ ಪ್ರೊ.ಹೆಚ್.ಎನ್.ನಾಗೇಂದ್ರ, ಸಂಯೋಜಕ ಪ್ರೊ.ಹೆಚ್.ಎಸ್.ಕುಮಾರ್, ಪ್ರೊ.ಪ್ರಮೋದ್ ಎಂ.ಗವಾರಿ ಮತ್ತಿತರರಿದ್ದರು.



ಮೈಸೂರು ವಿವಿ ಮಾನಸಗಂಗೋತ್ರಿಯ ಸ್ಕೂಲ್ ಆಫ್ ಪ್ಲಾನಿಂಗ್ ಅಂಡ್ ಆರ್ಕಿಟೆಕ್ಚರ್ ವಿಭಾಗದಲ್ಲಿ ಸೋಮವಾರ ನಡೆದ 'ಧನಾತ್ಮಕ ಚಿಂತನೆ ಮತ್ತು ವ್ಯಸನ ಮುಕ್ತರಾಗಲು ದಾರಿ' ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಉದ್ಘಾಟಿಸಿದರು. ವೈದ್ಯಕೀಯ ಸಲಹೆಗಾರ ಡಾ.ಸಚಿನ್ ಪರಬ್, ಪ್ರಜಾಪಿತ ಬ್ರಹ್ಮ ಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದ ರಾಜಯೋಗಿನಿ ಬಿ.ಕೆ.ಲಕ್ಷ್ಮಿ ಜಿ, ಮೈಸೂರು ವಿವಿ ಕುಲಸಚಿವರಾದ ಎಂ.ಕೆ.ಸವಿತಾ ಮತ್ತಿತರರಿದ್ದರು.

ನಮ್ಮ ನಗರದ ಪರಿಸ್ಥಿತಿಯೂ ಇದಕ್ಕೆ ಹೊರತಾಗಿಲ್ಲ...!

ಮಾದಕ ವ್ಯಸನ ವಿಚಾರದಲ್ಲಿ ಉತ್ತರ ಭಾರತ, ಅದರಲ್ಲೂ ಲೇ ಲಡಾಕ್ ಸ್ಥಿತಿ ಗಂಭೀರವಾಗಿದೆ. ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳನ್ನೇ ಡ್ರಗ್ ಪೆಡ್ಲರ್‌ಗಳನ್ನಾಗಿ ಬಳಸಿಕೊಳ್ಳಲಾಗುತ್ತಿದ್ದು, ನಮ್ಮ ನಗರದ ಪರಿಸ್ಥಿತಿಯೂ ಇದಕ್ಕೆ ಹೊರತಾಗಿಲ್ಲ. ವಿದ್ಯಾರ್ಥಿಯಲ್ಲಿನ ಕುತೂಹಲವು ಮಾದಕ ವಸ್ತುವನ್ನು ಸೇವನೆ ಮಾಡುವಂತೆ ಮಾಡುತ್ತದೆ. ನಂತರ ಅದು ಚಟವಾಗಿ ಮಾರ್ಪಡುತ್ತದೆ ಮತ್ತು ಶಿಕ್ಷಣದ ಉದ್ದೇಶ ಮರೆತುಹೋಗುತ್ತದೆ.

- ಡಾ.ಸಚಿನ್ ಪರಬ್, ವೈದ್ಯಕೀಯ ಸಲಹೆಗಾರ

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಆಂಧ್ರ ಕಿಂಗ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಐ ಆ್ಯಮ್ ಗಾಡ್ (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಧುರಂದರ್ (ಹಿ)	4 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಮಸ್ತಿ ಪೊಲೀಸ್ (ತ)	4 ಪ್ರದರ್ಶನಗಳು
ಗಾಯಿತ್ರಿ	
---	---
ರಾಜಕಮಲ್	
ತೇರೇ ಇಷ್ಕ್ ಮೇ (ತ)	4 ಪ್ರದರ್ಶನಗಳು
ಸಂಗಂ	
ಧುರಂದರ್ (ಹಿ)	3 ಪ್ರದರ್ಶನಗಳು
ಲಿಡೋ	
ಮಾಸ್ ಯಾತ್ರಾ (ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
-	-
ಪ್ರಭಾ	
ಧರ್ಮಂ (ಕ)	4 ಪ್ರದರ್ಶನಗಳು

ಶ್ರೀರಾಮನ ನಿಜ ಭಕ್ತ ಆಂಜನೇಯ



ಪಡುವಾರಹಳ್ಳಿಯಲ್ಲಿ ಆದಿಚುಂಚನಗಿರಿ ಶ್ರೀಗಳನ್ನು ಸನ್ಮಾನಿಸಲಾಯಿತು.

ಮೈಸೂರು, ಡಿ. 8- ಕರ್ನಾಟಕದ ಕಿಷ್ಕಿಂಧೆಯಲ್ಲಿ ಹುಟ್ಟಿದ ಕನ್ನಡಿಗ ಆಂಜನೇಯ, ಶ್ರೀರಾಮನ ನಿಜ ಭಕ್ತ ಎಂದು ಶ್ರೀ ಆದಿಚುಂಚನಗಿರಿ ಕ್ಷೇತ್ರದ ಪೀಠಾಧಿಪತಿಗಳಾದ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮಿಗಳು ತಿಳಿಸಿದರು.

ಮೈಸೂರಿನ ಪಡುವಾರಹಳ್ಳಿಯ ಶ್ರೀ ವಿದ್ಯಾಗಣಪತಿ ಮತ್ತು ಮಾರುತಿ ಯುವಕರ ಸಂಘದ ವತಿಯಿಂದ 58ನೇ ವರ್ಷದ ಶ್ರೀ ಹನುಮ ಜಯಂತಿ ಪೂಜಾ ಮಹೋತ್ಸವದಲ್ಲಿ ಮಾತನಾಡಿದ ಅವರು, ಶ್ರೀ ರಾಮನ ಮೇಲೆ ಇಟ್ಟಿರುವ ಆಂಜನೇಯನ ಭಕ್ತಿ, ಶ್ರದ್ಧೆ ತ್ಯಾಗ, ಜ್ಞಾನ ಎಲ್ಲವೂ ಅಮೂಲ್ಯವಾದದ್ದು. ಇದನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಂಡು ಹೋಗಬೇಕೆಂದು ಕರೆ ನೀಡಿದರು.

ಇಡೀ ವಿಶ್ವದಲ್ಲೇ ಹೆಚ್ಚು ಪೂಜಿಸಲ್ಪಡುವ ದೇವರೆಂದರೆ ಅದು ಆಂಜನೇಯ ಮಾತ್ರ ಆಂಜನೇಯಸ್ವಾಮಿಯ ಶಕ್ತಿ ಮತ್ತು ಯುಕ್ತಿಗಳು ಅಪಾರವಾದದ್ದು. ಆಂಜನೇಯನನ್ನು ನೆನೆದರೆ ಮನದಲ್ಲಿ ಒಂದು ರೀತಿಯ ಶಕ್ತಿ ಬಂದಂತಾಗುತ್ತದೆ ಎಂದು ಹೇಳಿದರು.

ನಾನು ಕಳೆದ 35 ವರ್ಷದ ಹಿಂದೆ ಇದೆ ಪಡುವಾರಹಳ್ಳಿಯಲ್ಲಿರುವ ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ ವಿದ್ಯಾರ್ಥಿ ನಿಲಯದಲ್ಲಿ ಓದುತ್ತಿದ್ದೆ. ಇಂದು ಈ ಪಡುವಾರಹಳ್ಳಿಗೆ ಆಗಮಿಸಿದ್ದು ನನಗೆ ತುಂಬಾ ಸಂತೋಷವನ್ನುಂಟು ಮಾಡಿದೆ ಎಂದು ಹೇಳಿದರು. ನಂತರ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ ಹಾಗೂ ಮೈಸೂರು ಶಾಖಾ ಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ ಅವರನ್ನು ಸನ್ಮಾನಿಸಲಾಯಿತು.

ಮಾಜಿ ಸಂಸದ ಪ್ರತಾಪ್ ಸಿಂಹ, ಪಡುವಾರಹಳ್ಳಿ ಗ್ರಾಮಾಭ್ಯುದಯ ಟ್ರಸ್ಟ್‌ನ ಅಧ್ಯಕ್ಷ ಮಹದೇವಸ್ವಾಮಿ, ಕಾರ್ಯದರ್ಶಿ ಎಂ.ಭೈರಪ್ಪ, ಉಪಾಧ್ಯಕ್ಷ ರಾಮಣ್ಣ, ಅಖಿಲ ಕರ್ನಾಟಕ ಒಕ್ಕಲಿಗರ ಮಹಾಸಭಾದ ಅಧ್ಯಕ್ಷ ಎನ್. ಬೆಟ್ಟೇಗೌಡ, ಸಿ. ಮರಿಸ್ವಾಮಿ, ಎನ್ ಮಂಜುನಾಥ್, ಜೆ ಯೋಗೇಶ್, ಸಿ.ಡಿ. ಕುಮಾರ್, ಈ ಬಸವರಾಜು, ನಿಂಗಪ್ಪ, ಬಿ.ಕುಮಾರ್, ಶ್ರೀ ವಿನಾಯಕ ಮಾರುತಿ ಯುವಕರ ಸಂಘದ ಅಧ್ಯಕ್ಷ ಕೃಷ್ಣಪ್ಪ ಹಾಗೂ ಗ್ರಾಮದ ಇನ್ನಿತರರು ಉಪಸ್ಥಿತರಿದ್ದರು.

ಶ್ರೀ ಶಾರದಾ ಪಬ್ಲಿಕ್ ಶಾಲೆಯ ವಾರ್ಷಿಕ ಕ್ರೀಡಾ ದಿನಾಚರಣೆ



ಕ್ರೀಡಾಕೂಟಕ್ಕೆ ಮೈಸೂರು ನಗರ ಸಹಾಯಕ ಪೊಲೀಸ್ ಆಯುಕ್ತ ಸತೀಶ್ ಚಾಲನೆ ನೀಡಿದರು

ಮೈಸೂರು, ಡಿ. 8 - ಮೈಸೂರಿನ ಶ್ರೀ ಶಾರದಾ ಪಬ್ಲಿಕ್ ಶಾಲೆಯು ವಾರ್ಷಿಕ ಕ್ರೀಡಾ ದಿನಾಚರಣೆಯನ್ನು ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಆಚರಿಸಿತು.

ಮುಖ್ಯ ಅತಿಥಿಗಳಾಗಿದ್ದ ಮೈಸೂರು ನಗರ ಸಹಾಯಕ ಪೊಲೀಸ್ ಆಯುಕ್ತ (ಎಸಿಪಿ)ಎಚ್.ಪಿ. ಸತೀಶ್ ಕ್ರೀಡಾ ಜ್ಯೋತಿಯನ್ನು ಬೆಳಗಿಸುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಅವರು ಮಾತನಾಡಿ, ಮಕ್ಕಳು ಕ್ರೀಡೆಯಲ್ಲಿ ನಿರಂತರ ಶಿಸ್ತು ಮತ್ತು ಅಭ್ಯಾಸವನ್ನು ರೂಢಿಸಿಕೊಳ್ಳಬೇಕು. ಇದು ಮಾನಸಿಕ ಮತ್ತು ದೈಹಿಕ ಸಾಮರ್ಥ್ಯ ಹಾಗೂ ಉತ್ತಮ ಆರೋಗ್ಯವನ್ನು ಸುಧಾರಿಸಿಕೊಳ್ಳಲು ಅತ್ಯಂತ ಸಹಕಾರಿಯಾಗಿದೆ ಎಂದು ವಿದ್ಯಾರ್ಥಿಗಳಿಗೆ ಹಿತನುಡಿ ಹೇಳಿದರು.

ಕ್ರೀಡಾ ದಿನಾಚರಣೆ ಅಂಗವಾಗಿ ವಿದ್ಯಾರ್ಥಿಗಳಿಗೆ ಹಲವು ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು ರಿಲೇ ಓಟ, ಗುಂಡು ಎಸೆತ, ಉದ್ದ ಜಿಗಿತ ಹಾಗೂ ವಿವಿಧ ಓಟದ ಸ್ಪರ್ಧೆಗಳು ಪ್ರಮುಖ ಆಕರ್ಷಣೆಯಾಗಿದ್ದವು.

ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಶಾಲೆ ಕಾರ್ಯದರ್ಶಿ ಮಂಜುನಾಥ ರಾಮನಾಥನ್, ಪ್ರಾಂಶುಪಾಲೆ ಶ್ರೀಮತಿ ಶಾಲಿನಿ ಎಂ.ವಿ., ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿ, ಪೋಷಕರು ಉಪಸ್ಥಿತರಿದ್ದರು.

ದಸರಾ ವಸ್ತುಪ್ರದರ್ಶನ ಆವರಣದಲ್ಲಿ ಡಾ.ಅಂಬೇಡ್ಕರ್ ಪರಿನಿಬ್ಬಾಣ ದಿನ ಆಚರಣೆ



ಮೈಸೂರು ದಸರಾ ವಸ್ತುಪ್ರದರ್ಶನ ಆವರಣದ ಪಿ.ಕಾಳಿಂಗರಾವ್ ಸಭಾಂಗಣದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ 69ನೇ ವರ್ಷದ ಮಹಾಪರಿನಿಬ್ಬಾಣ ದಿನ ಆಚರಿಸಲಾಯಿತು.

ಮೈಸೂರು, ಡಿ.8(ಎಂಕೆ)- ಮೈಸೂರು ದಸರಾ ವಸ್ತುಪ್ರದರ್ಶನ ಆವರಣದ ಪಿ.ಕಾಳಿಂಗರಾವ್ ಸಭಾಂಗಣದಲ್ಲಿ ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 69ನೇ ವರ್ಷದ ಮಹಾಪರಿನಿಬ್ಬಾಣ ದಿನ ಆಚರಿಸಲಾಯಿತು.

ಡಾ.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ಸಂವಿಧಾನ ಪೀಠಿಕೆ ಬೋಧಿಸಿದ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಗೌರವ ನಮನ ಸಲ್ಲಿಸಿದರು. ಬಳಿಕ ಮಾತನಾಡಿದ ಅವರು, ದೇಶದ ಕಟ್ಟಕಡೆಯ ವ್ಯಕ್ತಿಗೂ ಸಂವಿಧಾನದ ಮೂಲಕ ಸ್ವಾತಂತ್ರ್ಯ, ಸಮಾನತೆಯನ್ನು ಕಲ್ಪಿಸಿಕೊಟ್ಟ ಬಾಬಾ ಸಾಹೇಬ್ ಡಾ.ಅಂಬೇಡ್ಕರ್ ಅವರು ಪ್ರತಿಯೊಬ್ಬ ಭಾರತೀಯನ ಹೆಮ್ಮೆಯಾಗಿದ್ದಾರೆ ಎಂದು ಸ್ಮರಿಸಿದರು.

ಡಾ.ಅಂಬೇಡ್ಕರ್ ಅವರು ಕಂಡ ಕನಸುಗಳನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ನಡೆದುಕೊಂಡರೆ ಅದೇ ನಾವೆಲ್ಲರೂ ಅಂಬೇಡ್ಕರ್ ಅವರಿಗೆ ಕೊಡುವ ಗೌರವವಾಗಿದೆ. ಸಾಮಾಜಿಕ ಬದ್ಧತೆಯೊಂದಿಗೆ ಎಲ್ಲರೂ ಸಮಾನತೆಯಿಂದ ಜೀವನ ನಡೆಸಬೇಕು. ದೇಶಕ್ಕಾಗಿ ಏನಾದರೂ ಕೊಡುಗೆ ನೀಡುವ ನಿಟ್ಟಿನಲ್ಲಿ ಮುನ್ನಡೆಯಬೇಕು ಎಂದು ತಿಳಿಸಿದರು.

ವಸ್ತುಪ್ರದರ್ಶನ ಪ್ರಾಧಿಕಾರದ ಸಿಇಓ ಕೆ.ರುದ್ರೇಶ್, ದಸರಾ ವಸ್ತುಪ್ರದರ್ಶನ ಸಾಂಸ್ಕೃತಿಕ ಸಮಿತಿಯ ಎಸ್.ಪ್ರಕಾಶ್, ರಂಗಸ್ವಾಮಿ ಪಾಪು, ಶಿವಲಿಂಗಯ್ಯ, ರಾಜೇಶ್ ಸಿ.ಗೌಡ, ರಘುರಾಜೇ ಅರಸ್, ಪದ್ಮನಾಬ್ ಗುಂಡಣ್ಣ, ನಿರೂಪಕ ಅಜಯ್ ಶಾಸ್ತ್ರಿ, ಭವ್ಯ, ಜಯಲಕ್ಷ್ಮಿ, ಚಂದ್ರಕಲಾ, ಸರಸ್ವತಿ, ಗೌರಮ್ಮ, ವರುಣಾ ಪ್ರಶಾಂತ್, ಉಮೇಶ್, ಸೈಯದ್ ಇಸ್ಮಾಯಿಲ್, ಸಮಿ ಸನ್ವರ್, ಮನ್ಸೂರ್ ಅಲಿ ಮತ್ತಿತರರಿದ್ದರು.

ಹಿರಿಯ ವಿದ್ಯಾರ್ಥಿಗಳ ಸಂಘದ ಸಭೆ

ಮೈಸೂರು, ಡಿ. 8 - ವಿಶ್ವಪ್ರಜ್ಞ ವಿದ್ಯಾಸಂಸ್ಥೆಯ ಹಿರಿಯ ವಿದ್ಯಾರ್ಥಿಗಳ ಸಭೆಯನ್ನು ಡಿ.21 ರಂದು ಬೆಳಿಗ್ಗೆ 10.30ಕ್ಕೆ ಶಾಲೆಯ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ. ಈ ಸಭೆಯಲ್ಲಿ ಹಿರಿಯ ವಿದ್ಯಾರ್ಥಿಗಳೆಲ್ಲರೂ ತಪ್ಪದೆ ಭಾಗವಹಿಸಬೇಕೆಂದು ಕೋರಲಾಗಿದೆ. ಸಭೆಯಲ್ಲಿ ಭಾಗವಹಿಸುವ ಬಗ್ಗೆ ತಮ್ಮ ಒಪ್ಪಿಗೆ ಹಾಗೂ ಹೆಚ್ಚಿನ ವಿವರಗಳಿಗಾಗಿ ಶ್ರೀಮತಿ ಉಷಾ, ದೂರವಾಣಿ ಸಂಖ್ಯೆ 9108896871 ಅವರನ್ನು ಸಂಪರ್ಕಿಸಲು ಕೋರಲಾಗಿದೆ.

ದೇವಸ್ಥಾನದ ಕಾಮಗಾರಿ ಆರಂಭ



ಮೈಸೂರಿನ ಗಾಂಧಿನಗರದ ಶ್ರೀ ಕೊಲ್ಲಾಪುರದಮ್ಮ ದೇವಸ್ಥಾನದ ಅಭಿವೃದ್ಧಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಅವರ ಆದೇಶದ ಮೇರೆಗೆ 20 ಲಕ್ಷ ರೂ. ಅನುದಾನ ಬಿಡುಗಡೆಯಾಗಿದೆ. ದೇವಸ್ಥಾನದ ಅಭಿವೃದ್ಧಿಗೆ ಸಂಬಂಧಿಸಿ ಆವರಣದಲ್ಲಿ ಗುದ್ದಲಿಪೂಜೆ ನೆರವೇರಿಸಲಾಯಿತು. ಮೈಸೂರು ನಗರ ಕಾಂಗ್ರೆಸ್ ವಕ್ತಾರ ಎಸ್.ರಾಜೇಶ್, ಪುಟ್ಟನಂಜು, ಶ್ಯಾಮ್, ಆರ್. ಜಯರಾಮ್, ನಾಗರಾಜು, ರವಿ, ವಿಜೇಂದ್ರ ಕುಮಾರ್ ಇತರರು ಈ ವೇಳೆ ಉಪಸ್ಥಿತರಿದ್ದರು.

ಐಸಿರಿ ಪ್ರಕಾಶನದ ಡಾ.ಸುರೇಶ್ ಪಾಟೀಲ್ ಕಾದಂಬರಿ 'ಸನ್ನಿಧಿ' ಲೋಕಾರ್ಪಣೆ



ಕಾದಂಬರಿ 'ಸನ್ನಿಧಿ'ಯನ್ನು ಕಸಾಪ ಮಾಜಿ ಅಧ್ಯಕ್ಷ ಡಾ. ಮನು ಬಳಿಗಾರ್ ಬಿಡುಗಡೆ ಮಾಡಿದರು.

ಮೈಸೂರು: ಶೇಷಾದ್ರಿಪುರಂ ಕಾಲೇಜಿನ ಆವರಣದಲ್ಲಿ ಸುಮೇರು ಟ್ರಸ್ಟ್ ಮತ್ತು ಗೋಧೂಳಿ ಕನ್ನಡ ಸಂಘದ ಸಹಭಾಗಿತ್ವದಲ್ಲಿ ಡಾ. ಸುರೇಶ್ ಪಾಟೀಲರು ರಚಿಸಿದ 'ಸನ್ನಿಧಿ' ಅಲೌಕಿಕ ಕಾದಂಬರಿ ಲೋಕಾರ್ಪಣೆಗೊಂಡಿತು.

ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷರಾದ ಡಾ. ಮನು ಬಳಿಗಾರ್ ಕಾದಂಬರಿ ಲೋಕಾರ್ಪಣೆ ಮಾಡಿ ಮಾತನಾಡಿ, ಕೃತಾರ್ಥಭಾವದಿಂದ ಪುಸ್ತಕದ ಬಿಡುಗಡೆ ಮಾಡಿದ್ದೇನೆ. ತಮ್ಮ ಮತ್ತು ಇಸ್ಕಾನ್ ಗುರುಗಳಾದ ಶ್ರೀಲ ಪ್ರಭುಪಾದರ ಕುರಿತಾಗಿ ತಾವು ಬರೆದ ಪುಸ್ತಕವನ್ನು ಸ್ಮರಿಸಿಕೊಳ್ಳುತ್ತಾ ಇದೇ ನಂಟು ಈ ಕಾದಂಬರಿ ಲೋಕಾರ್ಪಣೆ ಮಾಡುವ ಪುಣ್ಯ ದೊರೆತಿರ ಬಹುದೇನೋ ಎಂದರು.

ಡಾ. ಸುರೇಶ ಪಾಟೀಲ ದಂಪತಿಯನ್ನು ಇದೇ ವೇಳೆ ಸನ್ಮಾನಿಸಲಾಯಿತು. ತಮ್ಮ ಕೃತಿಯ ಬಗೆಗೆ ಹೇಳುತ್ತಾ ಡಾ. ಸುರೇಶ ಪಾಟೀಲರು ಸತತ ಎರಡು ವರ್ಷಗಳ ಪರಿಶ್ರಮದಿಂದ ಬರೆದಿರುವ ಕಾದಂಬರಿಯನ್ನು ಆರಂಭಿಸಿದಾಗ ಎದುರಾದ ಹಿಂಜರಿಕೆ ಮತ್ತು ಅಡೆತಡೆಗಳ ಬಗೆಗೆ ಹೇಳಿದರು.

ಅಧ್ಯಕ್ಷೀಯ ಭಾಷಣ ಮಾಡಿದ ಡಾ. ಕೃಷ್ಣ ಕಟ್ಟಿ ಅವರ ಅನ್ಯ ಧಾರ್ಮಿಯರನ್ನು ಕೇಳುವಂತೆ ಮಾಡದೇ ಇರುವುದಕ್ಕೆ ಕಾರಣ ಮಧ್ವಾಚಾರ್ಯರ ತತ್ವ ಹಾಗೂ ಸಿದ್ಧಾಂತವನ್ನು ವಿಶಾಲ ಮನೋಭಾವದಿಂದ ನೋಡದೇ ಇರಲು ಕಾರಣ ಇರಬಹುದು. ಎಂದು ಹೇಳುತ್ತಾ ಸನ್ನಿಧಿ ಕಾದಂಬರಿಯು ಮನೋರಂಜನೆಗಾಗಿ ಅಲ್ಲ ಮನುಷ್ಯನ ಅರಿವಿನ ಹೊತ್ತು ಎನ್ನಬಹುದಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಐಸಿರಿ ಪ್ರಕಾಶನದ ಡಾ. ರೂಪಾ ಮಂಜುನಾಥ್ ಹಾಗೂ ತಂಡದವರು ದೂರದರ್ಶನದ ಸುದ್ದಿ ಸಂಪಾದಕ ರಾಗಿದ್ದ ಡಾ. ಮೈಸಿ. ಪಾಟೀಲ ಹಾಗೂ ಖ್ಯಾತ ಲೇಖಕರು ಮತ್ತು ಪ್ರಸಿದ್ಧ ಜ್ಯೋತಿಷಿಗಳಾದ ಮಹಾಬಲ ಮೂರ್ತಿ ಕೊಡ್ಲೆಕೆರೆ ಉಪಸ್ಥಿತರಿದ್ದರು.

ಮೈಸೂರಲ್ಲಿ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ ಪೊಲೀಸ್ ಠಾಣೆ ಉದ್ಘಾಟನೆ

ಇದರೊಂದಿಗೆ ಸಂಬಂಧಿಸಿದ ಅಧೀಕ್ಷಕರು, ಉಪಾಧೀಕ್ಷಕರ ಕಚೇರಿಗಳಿಗೂ ಚಾಲನೆ ನೀಡಿದ ಡಿಐಜಿಪಿ ಡಾ.ಬೋರಲಿಂಗಯ್ಯ

ಮೈಸೂರು, ಡಿ.8(ಎಂಕೆ)- ಮೈಸೂರಿನ ನಜರ್‌ಬಾದ್‌ನ ಕುಪ್ಪಣ್ಣ ಪಾರ್ಕ್ ಎದುರಿನ ಬಿಎಸ್‌ಎನ್‌ಎಲ್ ಕಚೇರಿ ಕಟ್ಟಡ (ಹೋಟೆಲ್ ಸಿದ್ದಾರ್ಥ ಬಳಿ ಹಾಗೂ ಹಾರ್ಡಿಂಜ್ ವೃತ್ತದ ಸಮೀಪ)ದ ಮೊದಲ ಮತ್ತು ಎರಡನೇ ಮಹಡಿಯಲ್ಲಿ ತೆರೆದಿರುವ 'ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ ಪೊಲೀಸ್ ಠಾಣೆ' ಹಾಗೂ ಇದಕ್ಕೆ ಸಂಬಂಧಿಸಿದ 'ಪೊಲೀಸ್ ಅಧೀಕ್ಷಕರ ನೂತನ ಕಚೇರಿ'ಯನ್ನು ಸೋಮವಾರ ಉದ್ಘಾಟಿಸಲಾಯಿತು.

ಮೈಸೂರು ನಗರ ಸೇರಿದಂತೆ ದಕ್ಷಿಣ ವಲಯ ವ್ಯಾಪ್ತಿಯನ್ನೊಳಗೊಂಡ 'ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಪೊಲೀಸ್ ಅಧೀಕ್ಷಕರು ಹಾಗೂ ಉಪಾಧೀಕ್ಷಕರ ಕಚೇರಿಯನ್ನು ದಕ್ಷಿಣ ವಲಯ ಡಿಐಜಿಪಿ ಡಾ.ಬೋರಲಿಂಗಯ್ಯ ಉದ್ಘಾಟಿಸಿ, ಅಧಿಕಾರಿ ಮತ್ತು ಸಿಬ್ಬಂದಿಗೆ ಶುಭಕೋರಿದರು.

ಬಳಿಕ ಮಾತನಾಡಿದ ಅವರು, ಸಿದ್ದಾರ್ಥ ನಗರದಲ್ಲಿ ಕಾರ್ಯನಿರ್ವಹಿಸುತ್ತಿದ್ದ 'ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ ಪೊಲೀಸ್ ಠಾಣೆ'ಯನ್ನು ನಗರದ ಕೇಂದ್ರ ಭಾಗಕ್ಕೆ ಸ್ಥಳಾಂತರಿಸಲಾಗಿದೆ. ಮುಂದಿನ ದಿನಗಳಲ್ಲಿ ಸ್ವಂತ ಕಟ್ಟಡ ಒದಗಿಸುವ ಪ್ರಯತ್ನ ಮಾಡಲಾಗುವುದು. ಪೊಲೀಸ್ ಅಧೀಕ್ಷಕರು, ಉಪಾಧೀಕ್ಷಕರು, ಇನ್ಸ್‌ಪೆಕ್ಟರ್ ಮತ್ತು ಸಬ್ ಇನ್ಸ್‌ಪೆಕ್ಟರ್ ಸೇರಿದಂತೆ ಹಲವು ಮಂದಿ ಈ ಠಾಣೆಯಲ್ಲಿ ಕಾರ್ಯನಿರ್ವಹಿಸಲಿದ್ದಾರೆ ಎಂದರು.

8 ಪ್ರಕರಣ ದಾಖಲು: ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಪ್ರಭಾರ ಪೊಲೀಸ್ ಅಧೀಕ್ಷಕರೂ ಆದ ಎಎಸ್‌ಪಿ ಎಲ್.ನಾಗೇಶ್ ಮಾತನಾಡಿ, ಮೈಸೂರಲ್ಲಿ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ ಆರಂಭವಾದಾಗಿನಿಂದ ಸುಮಾರು 8 ಪ್ರಕರಣಗಳು ದಾಖಲಾಗಿವೆ. ಮುಖ್ಯವಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಕ್ಕೆ ಸಂಬಂಧಿಸಿದ ಪ್ರಕರಣಗಳು, ನಕಲಿ ಜಾತಿ ಪ್ರಮಾಣ ಪತ್ರ ಕುರಿತು ತನಿಖೆಯನ್ನು ಇಲ್ಲಿ ನಡೆಸಲಾಗುವುದು ಎಂದು ತಿಳಿಸಿದರು.

ದೂರು ದಾಖಲಿಸಲು ಅವಕಾಶ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಸಮುದಾಯದವರ ಮೇಲೆ ಜಾತಿ ನಿಂದನೆ, ಹಲ್ಲೆ ಇನ್ನಿತರ ಪ್ರಕರಣಗಳು ನಡೆದಲ್ಲಿ ಸ್ಥಳಿಯ ಪೊಲೀಸ್ ಠಾಣೆ ಜೊತೆಗೆ ಇಲ್ಲಿಯೂ ನೇರವಾಗಿ ದೂರು ದಾಖಲು ಮಾಡಬಹುದಾಗಿದೆ. ಕಚೇರಿ ದೂ.ಸಂ. 0821-2344912 ಆಗಿದ್ದು, ಈ ಮೂಲಕವೂ ಸಂಪರ್ಕಿಸಬಹುದಾಗಿದೆ ಎಂದು ಮಾಹಿತಿ ನೀಡಿದರು. ಉಪಾಧೀಕ್ಷಕರಾದ ಅನುಷಾ ರಾಣಿ, ಸಿಬ್ಬಂದಿ ಉಪಸ್ಥಿತರಿದ್ದರು.



ಮೈಸೂರು ನಜರ್‌ಬಾದ್ ಕುಪ್ಪಣ್ಣ ಪಾರ್ಕ್ ಎದುರಿನ ಬಿಎಸ್‌ಎನ್‌ಎಲ್ ಕಚೇರಿ ಕಟ್ಟಡದಲ್ಲಿರುವ 'ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ ಪೊಲೀಸ್ ಠಾಣೆ' ಹಾಗೂ ಇದಕ್ಕೆ ಸಂಬಂಧಿಸಿದ 'ಪೊಲೀಸ್ ಅಧೀಕ್ಷಕರ ನೂತನ ಕಚೇರಿ'ಯನ್ನು ದಕ್ಷಿಣ ವಲಯ ಡಿಐಜಿಪಿ ಡಾ.ಬೋರಲಿಂಗಯ್ಯ ಸೋಮವಾರ ಉದ್ಘಾಟಿಸಿದರು. ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಪ್ರಭಾರ ಪೊಲೀಸ್ ಅಧೀಕ್ಷಕರೂ ಆದ ಎಎಸ್‌ಪಿ ಎಲ್.ನಾಗೇಶ್, ಉಪ ಅಧೀಕ್ಷಕರಾದ ಅನುಷಾ ರಾಣಿ ಮತ್ತಿತರರಿದ್ದರು.

ಮಾನವ-ವನ್ಯಜೀವಿ ಸಂಘರ್ಷಕ್ಕೆ ಕಾಡಂಚಿನ ರೆಸಾರ್ಟ್, ಹೋಮ್‌ಸ್ಟೇಗಳೇ ಕಾರಣ

● ರಾಜ್ಯ ರೈತ ಸಂಘದ ರೈತ ಪರ್ವ ಸಂಸ್ಥಾಪಕ ಅರುಣ್‌ಕುಮಾರ್ ವಾದ
● ಸಫಾರಿ ನಿರ್ಬಂಧ ಮುಂದುವರೆಸುವಂತೆ ಆಗ್ರಹ
● ಸ್ಥಳೀಯರಿಗೆ ರೆಸಾರ್ಟ್‌ಗಳಿಂದ ಏನು ಪ್ರಯೋಜನವಾಗಿಲ್ಲ

ಮೈಸೂರು,ಡಿ.8(ಎಂಟಿವೈ)- ಮಾನವ-ವನ್ಯಜೀವಿ ಸಂಘರ್ಷಕ್ಕೆ ರೆಸಾರ್ಟ್‌ಗಳೇ ಕಾರಣವಾಗಿದ್ದು, ಕಾಡಂಚಿನಲ್ಲಿ ನಿರ್ಮಿಸಿರುವ ಅಕ್ರಮ ರೆಸಾರ್ಟ್ ಮತ್ತು ಹೋಮ್‌ಸ್ಟೇ ನಿರ್ದಾಕ್ಷಿಣ್ಯವಾಗಿ ತೆರವುಗೊಳಿಸಿ, ಸಫಾರಿ ನಿರ್ಬಂಧ ಮುಂದುವರೆಸುವಂತೆ ಕರ್ನಾಟಕ ರಾಜ್ಯ ರೈತ ಸಂಘ ರೈತ ಪರ್ವದ ಸಂಸ್ಥಾಪಕ ಅರುಣ್‌ಕುಮಾರ್ ಮನವಿ ಮಾಡಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಡಂಚಿನ ಗ್ರಾಮಗಳಲ್ಲಿ ವನ್ಯಜೀವಿಗಳ ಉಪಟಳ, ಹಾವಳಿ ಹಾಗೂ ದಾಳಿ ಹೆಚ್ಚಾಗಲು ರೆಸಾರ್ಟ್ ಹಾಗೂ ಹೋಮ್‌ಸ್ಟೇಗಳೇ ಕಾರಣ. ರೆಸಾರ್ಟ್‌ಗಳಲ್ಲಿ ಡಿಜೆ ಬಳಕೆ, ವಿದ್ಯುತ್ ದೀಪಗಳನ್ನು ಹಾಕುವುದರಿಂದ ವನ್ಯಜೀವಿಗಳು ಘಾಸಿಗೊಳ್ಳುತ್ತಿವೆ. ಹಾಗಾಗಿ ಅವುಗಳು ಗ್ರಾಮಗಳತ್ತ ಬರುತ್ತಿವೆ. ಈ ಹಿನ್ನೆಲೆಯಲ್ಲಿ ಚಾಮರಾಜನಗರದಿಂದ ಕೊಡಗು ಜಿಲ್ಲೆಯವರೆಗೂ ಅರಣ್ಯ ಪ್ರದೇಶದ ಅಂಚಿನಲ್ಲಿರುವ 550ಕ್ಕೂ ಅಧಿಕ ಅಕ್ರಮ ರೆಸಾರ್ಟ್ ಹಾಗೂ ಹೋಮ್‌ಸ್ಟೇಗಳಿವೆ. ಇದರಲ್ಲಿ ಪ್ರಭಾವಿಗಳಿಗೆ ಸೇರಿದ ರೆಸಾರ್ಟ್‌ಗಳೂ ಇವೆ. ಈ ಹಿನ್ನೆಲೆಯಲ್ಲಿ ಕಾಡಂಚಿನ ಗ್ರಾಮಗಳ ಜನರ ಹಿತದೊಂದಿಗೆ ವನ್ಯಜೀವಿಗಳ ಹಿತ ಕಾಯಲು ಅಕ್ರಮ ರೆಸಾರ್ಟ್‌ಗಳನ್ನು ತೆರವು ಮಾಡಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದರು.

ರೆಸಾರ್ಟ್, ಹೋಮ್ ಸ್ಟೇ ತೆರವು ಮಾಡಿ ಸಫಾರಿ ಬಂದ್ ಮಾಡುವುದರಿಂದ ಸ್ಥಳೀಯರಿಗೆ ಯಾವುದೇ ನಷ್ಟವಾಗುವುದಿಲ್ಲ. ಇವುಗಳನ್ನು ನಂಬಿ ಸ್ಥಳೀಯರು ಜೀವನ ನಡೆಸುತ್ತಿಲ್ಲ. ಸಂಘದ ಮುಖಂಡರೊಂದಿಗೆ ಕಾಡಂಚಿನ ಗ್ರಾಮಗಳ ಜನರನ್ನು ಭೇಟಿ ಮಾಡಿ ಚರ್ಚಿಸಲಾಗಿದ್ದು, ಯಾರಿಗೂ ಸಫಾರಿ ಹಾಗೂ ರೆಸಾರ್ಟ್ ಬೇಡವಾಗಿದೆ. ಇವುಗಳಿಂದ ಸ್ಥಳೀಯರಿಗೆ ಯಾವುದೇ ದೊಡ್ಡ ಉದ್ಯೋಗಾವಕಾಶ ಸಿಕ್ಕಿಲ್ಲ. ಆ ಕಾರಣದಿಂದ ವನ್ಯಜೀವಿಗಳ ದಾಳಿಗೆ ರೈತರು ಬಲಿಯಾಗುತ್ತಿರುವುದನ್ನು ತಡೆಗಟ್ಟಲು ರೆಸಾರ್ಟ್, ಹೋಮ್ ಸ್ಟೇ ತೆರವು ಮಾಡಿ ಸಫಾರಿ ಬಂದ್ ಮುಂದುವರೆಸುವಂತೆ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಡಾ.ಉಮಾಪತಿ, ಪದಾಧಿಕಾರಿಗಳಾದ ಚಾಮರಾಜು, ಸತೀಶ್ ಕುಮಾರ್, ಮಲ್ಲೇಶ್, ರಾಜಣ್ಣ ಇದ್ದರು.

ಮೈಸೂರು ಅಜಯ್ ಪೃಥ್ವಿರಾಜ್ ರಾಷ್ಟ್ರಮಟ್ಟಕ್ಕೆ ಆಯ್ಕೆ



ಮೈಸೂರು, ಡಿ. 8- ಶಾಲಾ ಶಿಕ್ಷಣ ಇಲಾಖೆ (ಕರ್ನಾಟಕ) ವತಿಯಿಂದ ಶನಿವಾರ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ ರಾಜ್ಯ ಮಟ್ಟದ ಶಾಲಾ ಮಕ್ಕಳ ಆಟೋಟಗಳ ಸ್ಪರ್ಧೆ 2025-26ರ ವಿವಿಧ ಓಟದ ವಿಭಾಗಗಳಲ್ಲಿ ಸ್ಪರ್ಧಿಸಿದ್ದ ಮೈಸೂರಿನ ಅಜಯ್ ಪೃಥ್ವಿರಾಜ್ ಎಂ.ಎಲ್ ಜಯಗಳಿಸಿ, ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗುವ ಮೂಲಕ ಸಾಧನೆಗೈದಿದ್ದಾನೆ.

14 ರಿಂದ 17 ವರ್ಷ ವಯೋಮಿತಿಯ 400 ಮೀಟರ್ ವಿಭಾಗದಲ್ಲಿ ದ್ವಿತೀಯ ಸ್ಥಾನ ಪಡೆದಿದ್ದು, 800 ಮೀಟರ್ ಓಟದಲ್ಲಿ ತೃತೀಯ ಸ್ಥಾನ ಪಡೆದು, ಪಾರಿತೋಷಕ ಮತ್ತು ಬಹುಮಾನವನ್ನು ತನ್ನದಾಗಿಸಿಕೊಂಡಿದ್ದಾನೆ.

ಇದರಲ್ಲಿ 400 ಮೀಟರ್ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನಗಳಿಸಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದಾನೆ. ಈತ ಮೈಸೂರಿನ ಐಡಿಎಲ್ ಜಾವಾ ರೊಟರಿ ಶಾಲೆಯ ವಿದ್ಯಾರ್ಥಿ ಹಾಗೂ ನಗರದ ಎಂ.ಎಲ್.ರಾಜು (ರಾಜ್ ಬ್ಯಾಗ್ಸ್) ಮತ್ತು ಸಂಗೀತ ದಂಪತಿ ಪುತ್ರ.

ಅನ್ನಭಾಗ್ಯ ಅಕ್ಕಿ ಅಕ್ರಮ ಸಂಗ್ರಹ, ಮಾರಾಟ; 570 ಜನರ ಬಂಧನ

ಪರಿಷತ್‌ನಲ್ಲಿ ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ಮಾಹಿತಿ

ಬೆಳಗಾವಿ, ಡಿ.8– ರಾಜ್ಯದಲ್ಲಿ ಅನ್ನಭಾಗ್ಯ ಅಕ್ಕಿ ಅಕ್ರಮ ಸಂಗ್ರಹ ಮತ್ತು ಮಾರಾಟಕ್ಕೆ ಸಂಬಂಧಿಸಿದಂತೆ ರಾಜ್ಯಾದ್ಯಂತ 570 ಜನರನ್ನು ಬಂಧಿಸಲಾಗಿದೆ ಎಂದು ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ತಿಳಿಸಿದ್ದಾರೆ.


ಕೆ.ಹೆಚ್.ಮುನಿಯಪ್ಪ

ಸುವರ್ಣಸೌಧದ ವಿಧಾನ ಪರಿಷತ್‌ನಲ್ಲಿ ಸದಸ್ಯ ಸಿ.ಟಿ.ರವಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿ ಅವರು ಮಾತನಾಡಿದರು. ಅನ್ನಭಾಗ್ಯ ಅಕ್ಕಿ ಅಕ್ರಮ ಸಂಗ್ರಹ ಮತ್ತು ಮಾರಾಟಕ್ಕೆ ಸಂಬಂಧಿಸಿದಂತೆ ಒಟ್ಟು 29,603.15 ಕ್ವಿಂಟಾಲ್ ಅಕ್ಕಿಯನ್ನು ವಶಪಡಿಸಿಕೊಂಡಿದ್ದು, 314 ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದರು.

ಯಾದಗಿರಿ ಜಿಲ್ಲೆಯಲ್ಲಿ ಆಹಾರ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅನ್ಯ ಇಲಾಖೆಯ ಅಧಿಕಾರಿಗಳನ್ನು ಇಲಾಖೆ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿದೆ ಹಾಗೂ ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಕೆಎಫ್‌ಸಿಎಸ್‌ಸಿ ಗೋದಾಮು ಅಮಾನತ್ತುಗೊಳಿಸಲಾಗಿದೆ. ಅಕ್ರಮವಾಗಿ ಪಡಿತರ ಅಕ್ಕಿ ಸಂಗ್ರಹಣೆ ಮತ್ತು ಮಾರಾಟಕ್ಕೆ ಕಡಿವಾಣ ಹಾಕಲು ಇಲಾಖೆಯ ಅಧಿಕಾರಿಗಳು ಹಾಗೂ ಕಾರ್ಯ ನಿರ್ವಾಹಕ ಸಿಬ್ಬಂದಿಗೆ ಕಾಲ ಕಾಲಕ್ಕೆ ಮೇಲ್ವಿಚಾರಣೆ ಮಾಡುವಂತೆ ನಿರ್ದೇಶನ ನೀಡಿ ಅಗತ್ಯ ವಸ್ತುಗಳ ಕಾಯ್ದೆ 1955ರಡಿ ಕ್ರಿಮಿನಲ್ ಪ್ರಕರಣ ದಾಖಲಿಸಲಾಗುತ್ತದೆ ಎಂದು ಹೇಳಿದರು.

ಪಡಿತರ ಚೀಟಿದಾರರು ಪಡಿತರ ಅಕ್ಕಿಯನ್ನು ದುರ್ಬಳಕೆ ಮಾಡಿಕೊಂಡ ಪ್ರಕರಣಗಳು ಕಂಡುಬಂದಲ್ಲಿ ಸದರಿ ಪಡಿತರ ಚೀಟಿಗಳನ್ನು ರದ್ದುಪಡಿಸಿ, ಅಂತಹವರ ವಿರುದ್ಧ ನಿಯಾಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲು ನಿರ್ದೇಶಿಸಲಾಗಿದೆ. ನ್ಯಾಯಬೆಲೆ ಅಂಗಡಿ, ತಾಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಜಾಗೃತಿ ಸಮಿತಿಗಳನ್ನು ರಚಿಸಿ ಪಡಿತರ ವಿತರಣೆಯನ್ನು ಪರಿಶೀಲಿಸಲಾಗುತ್ತಿದೆ ಎಂದರು.

ಪ್ರತಿ ತಿಂಗಳು ನ್ಯಾಯಬೆಲೆ ಅಂಗಡಿ ಮಟ್ಟದಲ್ಲಿ ಆಹಾರ ಅದಾಲತ್‌ಗಳನ್ನು ನಡೆಸಿ, ಪಡಿತರ ಚೀಟಿದಾರರಿಗೆ ಪಡಿತರ ವಿತರಣೆ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ರಾಜ್ಯ ಮಟ್ಟದಲ್ಲಿ ಆಹಾರ ಜಾಗೃತ ದಳ ರಚಿಸಿ ಅಕ್ರಮಗಳ ಬಗ್ಗೆ ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ ಎಂದು ತಿಳಿಸಿದರು.

ಕಾಳಸಂತೆಯಲ್ಲಿ ಮಾರಾಟಕ್ಕೆ ಸಾಗಿಸುತ್ತಿದ್ದ

53 ಕ್ವಿಂಟಾಲ್ ಅನ್ನಭಾಗ್ಯ ಅಕ್ಕಿ ಜಪ್ತಿ

ಮೈಸೂರು, ಡಿ.8– ಪಡಿತರದಾರರಿಂದ ಖರೀದಿಸಿ, ಕಾಳಸಂತೆಯಲ್ಲಿ ಮಾರಾಟ ಮಾಡಲು ಸಾಗಿಸುತ್ತಿದ್ದ ಸುಮಾರು 53 ಕ್ವಿಂಟಾಲ್ ಅನ್ನಭಾಗ್ಯ ಅಕ್ಕಿಯನ್ನು ಪೊಲೀಸ್ ಹಾಗೂ ಆಹಾರ ಇಲಾಖೆ ಅಧಿಕಾರಿಗಳು ಜಂಟಿ ಕಾರ್ಯಾಚರಣೆ ನಡೆಸಿ, ವಶಪಡಿಸಿಕೊಂಡಿದ್ದಾರೆ.

ಗೂಡ್ಸ್ ಕ್ಯಾರಿಯರ್ ವಾಹನ ಹಾಗೂ ಸುಮಾರು 110 ಚೀಲಗಳಲ್ಲಿದ್ದ ಪಡಿತರ ಅಕ್ಕಿಯನ್ನು ವಶಪಡಿಸಿಕೊಂಡು, ಚಾಲಕ ಅಥಿಕ್‌ನನ್ನು ಬಂಧಿಸಲಾಗಿದೆ. ಈ ಬಗ್ಗೆ ದೇವರಾಜ ಮೊಹಲ್ಲಾ ಪಡಿತರ ಕಚೇರಿಯ ಆಹಾರ ನಿರೀಕ್ಷಕ ಎಂ.ಎಸ್. ವಿನೋದ್ ಕುಮಾರ್ ನೀಡಿದ ದೂರಿನನ್ವಯ, ಎನ್.ಆರ್. ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಭಾನುವಾರ ಮಧ್ಯಾಹ್ನ ಎನ್.ಆರ್.ಠಾಣೆಯ ಗುಪ್ತ ಮಾಹಿತಿ ಸಿಬ್ಬಂದಿ ಕೆ.ಬಿ.ಮಂಜು, ಕೆಸರೆ ರೆವಿನ್ಯೂ ಬಡಾವಣೆಯ ಮಣ್ಣಿನ ರಸ್ತೆಯಲ್ಲಿ ಅಕ್ಕಿ ತುಂಬಿದ ಟಾಟಾ ಗೂಡ್ಸ್ ಕ್ಯಾರಿಯರ್ ವಾಹನ ನಿಂತಿರುವುದರ ಬಗ್ಗೆ ಆಹಾರ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ಕೂಡಲೇ ಇಲಾಖೆಯ ಸಹಾಯಕ ನಿರ್ದೇಶಕರು, ಆಹಾರ ನಿರೀಕ್ಷಕ ವಿನೋದ್‌ಕುಮಾರ್‌ಗೆ ಕರೆ ಮಾಡಿ ವಿಷಯ ತಿಳಿಸಿದ್ದಾರೆ.

ಬಳಿಕ ವಿನೋದ್ ಕುಮಾರ್ ಇನ್ನಿತರ ಅಧಿಕಾರಿಗಳು ಸ್ಥಳಕ್ಕೆ ದೌಡಾಯಿಸಿ, ಪೊಲೀಸರ ಸಹಕಾರದೊಂದಿಗೆ ಕಾರ್ಯಾಚರಣೆ ನಡೆಸಿದ್ದಾರೆ. ಕಾಳಸಂತೆಯಲ್ಲಿ ಹೆಚ್ಚಿನ ಬೆಲೆಗೆ ಮಾರಾಟ ಮಾಡಲು ಹಳೆ ಕೆಸರೆ, ಕಾಮನಕೆರೆಹುಂಡಿ ಗ್ರಾಮಗಳಲ್ಲಿ ಸಾರ್ವಜನಿಕರಿಂದ ಕಡಿಮೆ ಬೆಲೆಗೆ ಅಕ್ಕಿ ಖರೀದಿಸಿ, ಸಾಗಿಸಲಾಗುತ್ತಿತ್ತು ಎಂಬುದು ವಿಚಾರಣೆಯಲ್ಲಿ ತಿಳಿದುಬಂದಿದೆ.

ಇಂದು ಬೆಳಗೊಳ ವ್ಯಾಪ್ತಿ ವಿದ್ಯುತ್ ವ್ಯತ್ಯಯ

ಮೈಸೂರಲ್ಲಿ ಕೆಲವೆಡೆ ನೀರು ನಿಲುಗಡೆ

ಮೈಸೂರು, ಡಿ.8– ಬೆಳಗೊಳ ವಿದ್ಯುತ್ ಉಪ–ವಿತರಣಾ ಕೇಂದ್ರಗಳ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ನಿಮಿತ್ತ ಡಿ.9 ಬೆಳಗ್ಗೆ 9.30ರಿಂದ ಸಂಜೆ 6 ಗಂಟೆವರೆಗೆ ಬೆಳಗೊಳ, ಕೆ.ಆರ್.ಸಾಗರ, ಹೊಸ ಆನಂದೂರು, ಮೊಗರಹಳ್ಳಿ, ಕಾರೆಕುರ, ಕುಪ್ಪೆದಡ, ಬಸ್ತೀಪುರ, ಕೆಐಡಿಬಿ ಕೈಗಾರಿಕಾ ಪ್ರದೇಶ, ಹೊಂಗಳ್ಳಿ ವಾಟರ್ ಸಪ್ಲೈ, ಅನಗನಹಳ್ಳಿ, ಹೊಸ ಉಂಡುವಾಡಿ, ಮಜ್ಜಿಗೆಪುರ, ಎಂಎಂಜಿ ಲೇಔಟ್, ಹುಲಿಕೆರೆ ಹೊಸಹಳ್ಳಿ, ಪಾಲಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಎಂ.ಮಂಜುನಾಥ್ ಪ್ರಸಾದ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರಲ್ಲಿ ನೀರು ವ್ಯತ್ಯಯ: ಹೊಂಗಳ್ಳಿ ವಾಟರ್ ಸಪ್ಲೈ ಘಟಕದಲ್ಲೂ ವಿದ್ಯುತ್ ವ್ಯತ್ಯಯವಾಗುವುದರಿಂದ ಮೈಸೂರು ನಗರದ ವಿವಿಧ ಪ್ರದೇಶಗಳ ನೀರು ಸರಬರಾಜಿನಲ್ಲೂ ವ್ಯತ್ಯಯ ಉಂಟಾಗುವ ಸಾಧ್ಯತೆ ಇದೆ.

ದಿ ಮೈಸೂರು ಕೋ-ಆಪರೇಟಿವ್ ಬ್ಯಾಂಕ್ ನಿ.,
ಗಾಂಧಿಚೌಕ, ಮೈಸೂರು. ಶಾಖೆ: 0821–2563851
ಮುಖ್ಯ ಕಛೇರಿ: 0821–2521631

ಪ್ರಕಟಣೆ

ಗೌರವಾನ್ವಿತ ಸದಸ್ಯರುಗಳಿಗೆ ಅಂತಿಮ ಕಾಲಾವಕಾಶ

ತಾ: 14.09.2025 ರಂದು ನಡೆದ 119ನೇ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯ ತೀರ್ಮಾನದ ರೀತ್ಯಾ ತಹಲ್‌ವರೆವಿಗೂ ಬ್ಯಾಂಕಿನಲ್ಲಿ "ಮರಣ ನಿಧಿ ವಂತಿಗೆ" ರೂ.500/– ಗಳನ್ನು ಪಾವತಿಸದೆ ಇರುವ ಸದಸ್ಯರುಗಳಿಗೆ ಅಂತಿಮವಾಗಿ ತಾ: 31.12.2025 ರೊಳಗೆ ಪಾವತಿಸಲು ಈ ಮೂಲಕ ಕೋರಲಾಗಿದೆ (ಜೀವಿತಾವಧಿಯಲ್ಲಿ ಒಮ್ಮೆ ಮಾತ್ರ). ತಪ್ಪಿದಲ್ಲಿ ಸದಸ್ಯರುಗಳು ಮರಣ ಹೊಂದಿದಾಗ (ಪಾವತಿಸದೆ ಉಳಿದ ಸದಸ್ಯರುಗಳು) ನಾಮಿನಿ ಅಥವಾ ವಾರಸುದಾರರಿಗೆ ಬ್ಯಾಂಕಿನಿಂದ ನೀಡುವ ಮರಣ ಪರಿಹಾರ ನಿಧಿಯ ರೂ.10,000/–ಗಳನ್ನು ಕಡ್ಡಾಯವಾಗಿ ನಿಲ್ಲಿಸಲಾಗುವುದು.

ಸೂಚನೆ:– ಈಗಾಗಲೇ ಪಾವತಿಸಿರುವವರಿಗೆ ಹಾಗೂ 2022ರಿಂದ ಈಚೆಗೆ ಸದಸ್ಯರಾಗಿರುವವರಿಗೆ ಅನ್ವಯಿಸುವುದಿಲ್ಲ.

ಆಡಳಿತ ಮಂಡಳಿಯ ಅಪ್ಪಣೆ ಮೇರೆಗೆ
ಸಹಿ/– ಮುಖ್ಯ ಕಾರ್ಯನಿರ್ವಾಹಕ
ಮೊ.9148037007

Jayachamaraja Wadiyar Golf Club
Maharana Prathap Singhji Road, Nazarbad, Mysore – 570 010
Mob : 80737 35322
Date : 9.12.2025

FOR IMMEDIATE APPOINTMENT

1. **FRONT OFFICE RECEPTIONIST**
   Qualification / Experience: Graduate, Male / Female Candidate with experience of 2-3 years & with Computer skills required. Fluency in English and Good Communication skills are a must. Must be ready to work in shifts.
2. **HOUSE KEEPING SUPERVISOR**
   Qualification/Experience:- Graduate / Hotel Management, with minimum 1-2 years of experience in relevant hospitality Industry. Must be ready to work in shifts.
3. **ACCOUNTS EXECUTIVE**
   Qualification/Experience:- B.com Graduate, with minimum 2-3 years of experience in accounts, articleship, or CA intermediate. Must be ready to work in shifts.

Note : kindly post your resumes before 14.12.2025 by e-mail : secretary@jwgcmysore.in

Sd/-
Hon. Secretary

ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್
ಸಹಕಾರ ಭವನ, ಚಾಮರಾಜ ಜೋಡಿ ರಸ್ತೆ, ಮೈಸೂರು –04
kicmsahakarabhavana@gmail.com Ph: 0821-2520563

ನಂ:ಕೆ.ಐ.ಸಿ.ಎಂ.ಮೈ/ /2025–26 ದಿನಾಂಕ: 08–12–2025

ಡಿಪ್ಲೋಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ (ಡಿ.ಸಿ.ಎಂ) ಕೋರ್ಸ್ ಕೋರ್ಸ್ ಸಹಕಾರ ತರಬೇತಿಗೆ ಅರ್ಜಿ ಆಹ್ವಾನ

ಕೋರ್ಸ್ ಅವಧಿ: 6 ತಿಂಗಳು

- ದಿನಾಂಕ: 01–01–2026 ರಿಂದ ತರಬೇತಿ ಪ್ರಾರಂಭವಾಗುವುದು
- ಕನಿಷ್ಠ ವಿದ್ಯಾಹರ್ತೆ ಎಸ್.ಎಸ್.ಎಲ್.ಸಿ ಮೇಲ್ಪಟ್ಟು
- ಪ್ರವೇಶ ಪಡೆದ ಎಸ್.ಸಿ/ಎಸ್.ಟಿ ಅಭ್ಯರ್ಥಿಗಳಿಗೆ ಪ್ರತಿ ಮಾಹೆ ರೂ.600/– ಹಾಗೂ ಇತರೆ ಎಲ್ಲಾ ಅಭ್ಯರ್ಥಿಗಳಿಗೆ ರೂ. 500/– ಶಿಷ್ಯವೇತನ ನೀಡಲಾಗುವುದು.
- ಈ ತರಬೇತಿಯು ಸಹಕಾರ ಬ್ಯಾಂಕ್/ ಸಹಕಾರ ಸಂಘ– ಸಂಸ್ಥೆಯಲ್ಲಿನ ಉದ್ಯೋಗ ನೇಮಕಾತಿಯಲ್ಲಿ ಈ ತರಬೇತಿ ಪಡೆದವರಿಗೆ ಆದ್ಯತೆ ಇರುತ್ತದೆ.
- ಉದ್ಯೋಗ ನೇಮಕಾತಿಯ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅನುಕೂಲಕರ
- ಅರ್ಜಿ ಸಲ್ಲಿಸಿ ಪ್ರವೇಶ ಪಡೆಯಲು 31–12–2025 ಕೊನೆಯ ದಿನಾಂಕವಾಗಿರುತ್ತದೆ
- ಆನ್‌ಲೈನ್ ಪ್ರವೇಶಾತಿಯ ಲಿಂಕ್: www.kscfdcm.co.in

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ
0821-2520563, 9902189872, 9845918519
9535250704, 7353655908, 9845695487

ಸಹಿ/– ಪ್ರಾಂಶುಪಾಲರು
ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್, ಮೈಸೂರು

ಕರ್ನಾಟಕ ಸರ್ಕಾರ

ಜಿಲ್ಲಾ ರಾಷ್ಟ್ರೀಯ ಕಾರ್ಯಕ್ರಮಾಧಿಕಾರಗಳ ಕಚೇರಿ ಚಾಮರಾಜನಗರ ಜಿಲ್ಲೆ, ಚಾಮರಾಜನಗರ.
ರಾಷ್ಟ್ರೀಯ ಅಂಧತ್ವ ನಿಯಂತ್ರಣಾ ಕಾರ್ಯಕ್ರಮ
ಕೊಠಡಿ ಸಂಖ್ಯೆ 342, ಜಿಲ್ಲಾ ಆಡಳಿತ ಭವನ, ಫೋ : 08226–224889
Email id: npcdcschamarajanagar@gmail.com

DLO/NPCB/CHN/NGO-EOI/09/2025-26 ದಿನಾಂಕ: 06.12.2025

ಇ–ಟೆಂಡರ್ ಅಧಿಸೂಚನೆ

2025–26 ನೇ ಸಾಲಿನ ರಾಷ್ಟ್ರೀಯ ಆರೋಗ್ಯ ಅಭಿಯಾನ ಕಾರ್ಯಕ್ರಮದ ಅನುದಾನದಲ್ಲಿ ರಾಷ್ಟ್ರೀಯ ಅಂಧತ್ವ ನಿವಾರಣಾ ಕಾರ್ಯಕ್ರಮದ ಅಡಿಯಲ್ಲಿ ಚಾಮರಾಜನಗರ ಜಿಲ್ಲೆಯಲ್ಲಿ **Prevelence of Blinders** ನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಉಚಿತ ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ ನಡೆಸಲು ಸೂಕ್ತವಾದ ಮಾನವ ಸಂಪನ್ಮೂಲ **(Man Power)** ಹಾಗೂ **Hospital Infrastructure** ವ್ಯವಸ್ಥೆ ಇರುವ **NGO** ಸಂಸ್ಥೆಗಳ **Expression of Interest (EOI)** ಅನ್ನು **KPPP Portal** ಮುಖಾಂತರ ಆಹ್ವಾನಿಸಲಾಗಿದೆ. ಆಸಕ್ತಿ ಇರುವ ಸರ್ಕಾರೇತರ ಸಂಸ್ಥೆ **(NGO)** ಗಳು **KPPP Portal** ಮುಖಾಂತರ **Expression of Interest (EOI)** ಅನ್ನು ವ್ಯಕ್ತಪಡಿಸಲು ಪತ್ರಿಕಾ ಪ್ರಕಟಣೆ ನೀಡಲಾಗಿದೆ. ವೇಳಾಪಟ್ಟಿ ಕೆಳಕಂಡಂತಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಧತ್ವ ನಿಯಂತ್ರಣ ಕಾರ್ಯಕ್ರಮಾಧಿಕಾರಿಗಳ ಕಛೇರಿ, #342 ಜಿಲ್ಲಾ ಆಡಳಿತ ಭವನ ಚಾಮರಾಜನಗರ ಜಿಲ್ಲೆ, ಚಾಮರಾಜನಗರ, ಕಛೇರಿ ವೇಳೆಯಲ್ಲಿ ಸಂಪರ್ಕಿಸುವುದು.

1	ಟೆಂಡರ್‌ಗಳ ಪ್ರಾರಂಭದ ದಿನಾಂಕ	07.12.2025
2	ಪ್ರೀ ಬಿಡ್ ಸಭೆ ದಿನಾಂಕ	10.12.2025 ಬೆ.11.00 ಗಂಟೆಗೆ
3	ಟೆಂಡರ್ ಸಲ್ಲಿಸಲು ಅಂತಿಮ ದಿನಾಂಕ	15.12.2025 ಸಂ. 5.30
4	ತಾಂತ್ರಿಕ ಬಿಡ್ ತೆರೆಯುವ ದಿನಾಂಕ	17.12.2025 ಬೆ.11:00

ಹೆಚ್ಚಿನ ವಿವರಗಳನ್ನು http://kppp.karnataka.gov.in ಹಾಗೂ ಈ ಕಛೇರಿಯ ವೇಳೆಯಲ್ಲಿ ಸಂಪರ್ಕಿಸಿ ಪಡೆಯಬಹುದು.

ಟೆಂಡರ್ ಸಂಖ್ಯೆ : DHFWS/2025-26/PREQUAL TENDER NUMBER_84

ಸಹಿ/–ಜಿಲ್ಲಾ ಅಂಧತ್ವ ನಿವಾರಣಾಧಿಕಾರಿಗಳು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ.
ಸಂ:ವಾಸಾಸಂಇ:ಚಾ.ನಗರ:540:2025–26

ಮೈಸೂರು ಮಿತ್ರ

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು